# ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 3 ಮಂಗಳವಾರ 2023

ಸಂಪುಟ: 43 | ಸಂಚಿಕೆ: 257 | ಪುಟಗಳು: 12

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

43

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4




## ಒಳಪುಟಗಳಲ್ಲಿ



ರಾತ್ರಿಯಿಡೀ ಭಕ್ತರು ಆಶ್ರಮಕ್ಕೆ ಸಾಗಾರೋಪಾದಿಯಲ್ಲಿ ಹರಿದು ಬರುತ್ತಿದ್ದು, ಸ್ವಾಮೀಜಿಯವರ ಅಂತಿಮ ದರ್ಶನ ಮಾಡುತ್ತಿದ್ದಾರೆ.

## ನಾಡಿನ ಸಂತ, ನಡೆದಾಡುವ ದೇವರು, ಜ್ಞಾನಯೋಗಿ...

# ಸಿದ್ದೇಶ್ವರ ಸ್ವಾಮೀಜಿ ಅಸ್ತಂಗತ




1941 - 2023

**ವಿಜಯಪುರ, ಜ.2– ಕನ್ನಡನಾಡು ಕಂಡ ಅಪರೂಪದ ಸಂತ, ಭಕ್ತರ ಪಾಲಿನ 'ನಡೆದಾಡುವ ದೇವರು' ಎಂದೇ ಪ್ರಸಿದ್ಧವಾಗಿದ್ದ ಆಧ್ಯಾತ್ಮಿಕ ಚಿಂತಕ, ಪ್ರವಚನಕಾರ ವಿಜಯಪುರದ ಜ್ಞಾನ ಯೋಗಾಶ್ರಮದ ಸಿದ್ಧೇಶ್ವರ ಸ್ವಾಮೀಜಿ(82) ಸೋಮವಾರ ಸಂಜೆ 6.05ಕ್ಕೆ ಅಸ್ತಂಗತರಾದರು.**

ಕಳೆದ ಒಂದು ವಾರದಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಸಿದ್ದೇಶ್ವರ ಶ್ರೀಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲು ನಡೆಸಿದ ಮನವೊಲಿಕೆ ಪ್ರಯತ್ನಕ್ಕೆ ಶ್ರೀಗಳು ಒಪ್ಪದ ಕಾರಣ ಆಶ್ರಮದಲ್ಲೇ ಬಿಎಲ್‌ಡಿಇ ಆಸ್ಪತ್ರೆಯ ತಜ್ಞ ವೈದ್ಯರು ಅಗತ್ಯ ಚಿಕಿತ್ಸೆ ನೀಡುತ್ತಿದ್ದರು. ಎರಡು ದಿನಗಳಿಂದ ಉಸಿರಾಟಕ್ಕೆ ಆಮ್ಲಜನಕದ ವ್ಯವಸ್ಥೆ ಕಲ್ಪಿಸಲಾಗಿತ್ತು. ಸುಮಾರು 20 ದಿನಗಳಿಂದ ಆಹಾರ ತ್ಯಜಿಸಿದ್ದ ಶ್ರೀಗಳು ಸೋಮವಾರ ಬೆಳಗ್ಗೆ ಸ್ವಲ್ಪ ಗಂಜಿ ಸೇವಿಸಿದ್ದರು. ಬಳಿಕ ಕ್ಷಣ, ಕ್ಷಣಕ್ಕೆ ಉಸಿರಾಟ, ನಾಡಿ ಬಡಿತ ಕ್ಷೀಣವಾಯಿತು. ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿಸಲು ವೈದ್ಯರು, ನಾಡಿನ ವಿವಿಧ ಮಠಾಧೀಶರು, ಮಠದ ಶಿಷ್ಯರು, ಗಣ್ಯರು ಅವರ ಮನವೊಲಿಸಿದರೂ ಆಸ್ಪತ್ರೆಗೆ ಹೋಗಲು ಶ್ರೀಗಳು ನಿರಾಕರಿಸಿದ್ದರು.

ಆಶ್ರಮಕ್ಕೆ ಭಾನುವಾರ ರಾತ್ರಿ ಭೇಟಿ ನೀಡಿದ್ದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಸಚಿವ ಗೋವಿಂದ ಕಾರಜೋಳ ಅವರು ಸಹ ಉನ್ನತಮಟ್ಟದ ಚಿಕಿತ್ಸೆಗೆ ವ್ಯವಸ್ಥೆ ಮಾಡುವುದಾಗಿ ಮನವಿ ಮಾಡಿದರೂ ಶ್ರೀಗಳು ಒಪ್ಪಲಿಲ್ಲ. ಕೇಂದ್ರ ಸಚಿವ ▶ 7ನೇ ಪುಟಕ್ಕೆ



ಶ್ರೀಗಳ ಅಂತಿಮ ದರ್ಶನಕ್ಕೆ ವ್ಯವಸ್ಥೆ

## ಸಕಲ ಸರ್ಕಾರಿ ಗೌರವದೊಂದಿಗೆ ಜ್ಞಾನಯೋಗಾಶ್ರಮದಲ್ಲಿ ಶ್ರೀಗಳ ಆಶಯ 'ಗುಡಿ ಕಟ್ಟಬಾರದು, ಸಮಾಧಿ ಮಾಡಬಾರದು' ಅನುಸಾರ ಅಂತ್ಯಕ್ರಿಯೆ

ವಿಜಯಪುರ, ಜ.2– ಜ್ಞಾನ ಯೋಗಾಶ್ರಮದ ಶ್ರೀಸಿದ್ದೇಶ್ವರ ಸ್ವಾಮೀಜಿ ಅವರ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಗುವುದು ಎಂದು ತಿಳಿಸಿರುವ ವಿಜಯಪುರ ಜಿಲ್ಲಾಧಿಕಾರಿಗಳು ಪೂಜ್ಯರ ಅಂತಿಮ ದರ್ಶನಕ್ಕೆ ಎಲ್ಲಾ ವ್ಯವಸ್ಥೆಗಳನ್ನು ಜಿಲ್ಲಾಡಳಿತ ಕೈಗೊಂಡಿದೆ ಎಂದಿದ್ದಾರೆ. ಪೂಜ್ಯರ ಅಂತಿಮ ದರ್ಶನಕ್ಕೆ ಅನುಕೂಲವಾಗುವಂತೆ ವಿಜಯಪುರ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳಿಗೂ ಮಂಗಳವಾರ ರಜೆ ಘೋಷಿಸಲಾಗಿದೆ. ನಾಳೆ ಬೆಳಗ್ಗೆ 4.30ರವರೆಗೆ

### ಬೆಳಗ್ಗೆ 6ರಿಂದ ಮಧ್ಯಾಹ್ನ 3ರವರೆಗೆ ಸೈನಿಕ ಶಾಲೆಯ ಆವರಣದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ

ಜ್ಞಾನ ಯೋಗಾಶ್ರಮದಲ್ಲಿ ಶ್ರೀಗಳ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ನಂತರ ಅವರ ಪಾರ್ಥಿವ ಶರೀರವನ್ನು ತೆರೆದ ವಾಹನದಲ್ಲಿ ಆಶ್ರಮದಿಂದ ಸೈನಿಕ ಶಾಲೆಗೆ ತಂದು, ಸೈನಿಕ ಶಾಲೆ ಆವರಣದಲ್ಲಿ ಮಂಗಳವಾರ ಬೆಳಗ್ಗೆ 6 ರಿಂದ ಮಧ್ಯಾಹ್ನ 3ರವರೆಗೆ ಅಂತಿಮ ದರ್ಶನಕ್ಕೆ ▶ 7ನೇ ಪುಟಕ್ಕೆ





# ರಾಜ್ಯದಲ್ಲಿ ಬಿಜೆಪಿ ಕೊನೆಯ ದಿನಗಳನ್ನು ಎಣಿಸುತ್ತಿದೆ

- ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಆಕ್ರೋಶ
- ಅಸ್ತಿತ್ವ ಉಳಿಸಿಕೊಳ್ಳಲು ಚುನಾವಣೆ ಮುನ್ನವೇ 'ಆಪರೇಷನ್ ಕಮಲ'ಕ್ಕೆ ಕೈಹಾಕಿದೆ
- ಜೆಡಿಎಸ್ ಸ್ವಂತಬಲದ ಮೇಲೆ ಅಧಿಕಾರಕ್ಕೆ ಬರುವುದು ಶತಸಿದ್ಧ

ಮೈಸೂರು, ಜ.2(ಆರ್‌ಕೆಬಿ)– ರಾಜ್ಯದಲ್ಲಿ ಆಡಳಿತಾರೂಢ ಬಿಜೆಪಿ ತನ್ನ ಕೊನೆಯ ದಿನಗಳನ್ನು ಎಣಿಸುತ್ತಿದೆ. ಜೆಡಿಎಸ್ ವಿರುದ್ಧ ಆಧಾರರಹಿತ ಮತ್ತು ಬೇಜವಾಬ್ದಾರಿ ಹೇಳಿಕೆಗಳನ್ನು ನೀಡುವ ಮೂಲಕ ಬಿಜೆಪಿ ತನ್ನ ಸಮಾಧಿಯನ್ನು ತಾನೇ ತೋಡಿಕೊಳ್ಳುತ್ತಿದೆ ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ, ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಇಂದಿಲ್ಲಿ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಮೈಸೂರಿನ ಲಕ್ಷ್ಮೀಪುರಂನಲ್ಲಿರುವ ನೇರಂಬಳ್ಳಿ ಕನ್ವೆನ್ಷನ್ ಹಾಲ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯದ ಸಭೆಯಲ್ಲಿ ಅಮಿತ್ ಶಾ ಜೆಡಿಎಸ್ ಬಗ್ಗೆ ಸಾರ್ವಜನಿಕವಾಗಿ ಟೀಕೆ ಮಾಡಿದ್ದಾರೆ. ಜೆಡಿಎಸ್ ಪಕ್ಷವನ್ನು ಭ್ರಷ್ಟ, ಜಾತಿ ವಾದಿ, ಕುಟುಂಬ ಪಕ್ಷ ಎಂದೆಲ್ಲಾ ಜರಿದಿದ್ದಾರೆ. ರಾಜ್ಯ ನಮ್ಮ ಕುಟುಂಬದ ಎಟಿಎಂ ಎಂದಿದ್ದಾರೆ. ಯಾವುದಾದರೂ ಪ್ರಕರಣ ದಲ್ಲಿ ದೇವೇಗೌಡ ಪ್ರಧಾನಿ ಆಗಿದ್ದಾಗ, ನಾನು ಮುಖ್ಯಮಂತ್ರಿ ಆಗಿದ್ದಾಗ ಸರ್ಕಾರ ಖಜಾನೆ ಲೂಟಿ ಮಾಡಿದ್ದರೆ ಒಂದೇ ಒಂದು ಪ್ರಕರಣ ತೋರಿಸಲಿ. ಇಂದು ಬಿಜೆಪಿ ಲೂಟಿ ಮಾಡುತ್ತಿರುವುದು ಎಲ್ಲರಿಗೂ ಗೊತ್ತಿದೆ ಎಂದು ಅಮಿತ್ ಶಾ ವಿರುದ್ಧ ಗುಡುಗಿದರು. ಮಂಡ್ಯಕ್ಕೆ ಅವರು 10 ಬಾರಿ ಅಲ್ಲ, ನೂರು ಬಾರಿ ಬಂದರೂ ಏನೂ ಆಗುವುದಿಲ್ಲ. ಮಂಡ್ಯಕ್ಕೆ ಅವರ ಕೊಡುಗೆ ಏನು, ಏರ್‌ಪೋರ್ಟ್ ಕೊಟ್ಟಿದ್ದಾರಾ, ಬಹಿರಂಗ ಚರ್ಚೆಗೆ ಬರಲಿ ಎಂದು ಅಮಿತ್ ಶಾಗೆ ಸವಾಲು ಹಾಕಿದರು.

**ನಾವೇನೂ ನಿಮ್ಮ ಮನೆ ಬಾಗಿಲಿಗೆ ಬಂದಿಲ್ಲ:** ಅಮಿತ್ ಶಾ ಅವರು ದೇವೇಗೌಡರ ಉಗುರಿಗೂ ಸಮವಲ್ಲ. ದೇವೇಗೌಡರಾಗಲೀ, ನಾನಾಗಲೀ ▶ 10ನೇ ಪುಟಕ್ಕೆ



### ಈ ಬಾರಿ ಜೆಡಿಎಸ್ ಸ್ವಂತ ಬಲದಿಂದ ಅಧಿಕಾರಕ್ಕೆ

ಈ ಬಾರಿ ಜೆಡಿಎಸ್ ಸ್ವಂತ ಬಲದಿಂದ ಅಧಿಕಾರಕ್ಕೆ ಬರಲಿದೆ. 135 ಸ್ಥಾನಗನ್ನು ಜೆಡಿಎಸ್ ಗೆಲ್ಲಲಿದೆ. ರಾಜ್ಯದಲ್ಲಿ ರೈತರು, ಕನ್ನಡಿಗರು ಮತ್ತು ಕಾರ್ಮಿಕ ಸ್ನೇಹಿ ಜೆಡಿಎಸ್ ಅಧಿಕಾರಕ್ಕೆ ಬರುವುದು ಖಚಿತ ಎಂದು ಹೆಚ್.ಡಿ.ಕುಮಾರಸ್ವಾಮಿ ಭವಿಷ್ಯ ನುಡಿದರು. ಕಾಂಗ್ರೆಸ್ ಮತ್ತು ಬಿಜೆಪಿಯಿಂದ ರಾಜ್ಯಕ್ಕೆ ಏನೂ ಆಗಿಲ್ಲ. ಹೀಗಾಗಿಯೇ ನಾನು ಪಂಚರತ್ನ ಯೋಜನೆಯೊಂದಿಗೆ ಪ್ರವಾಸ ಮಾಡುತ್ತಿದ್ದೇನೆ. ಮುಂದಿನ ಸಂಕ್ರಾಂತಿ ನಂತರ ಎರಡನೇ ಪಟ್ಟಿ ಬಿಡುಗಡೆ ಮಾಡಲಾಗುವುದು. ಮೈಸೂರಿನ 4–5 ಕ್ಷೇತ್ರಗಳ ಪಟ್ಟಿ ಬಿಡುಗಡೆ ಸಂಬಂಧ ಪ್ರಮುಖರ ಸಭೆ ಕರೆದು ತೀರ್ಮಾನಿಸುವುದಾಗಿ ತಿಳಿಸಿದರು. ನಮ್ಮ ಪಕ್ಷದ ಜನಪ್ರಿಯತೆ ಕಂಡು ಬಿಜೆಪಿಗೆ ಆತಂಕ ಶುರುವಾಗಿದೆ. ಚುನಾವಣೆಗೂ ಮುನ್ನವೇ ಆಪರೇಷನ್ ಕಮಲ ಶುರು ಮಾಡಿದ್ದಾರೆ. ಬಿಜೆಪಿಯನ್ನು ರಾಜ್ಯದಿಂದ ಹೊರಗೆ ಕಳುಹಿಸಲು ಜೆಡಿಎಸ್ ತೀರ್ಮಾನ ಮಾಡಿದೆ. ಅದಕ್ಕೆ ರಾಜ್ಯದ ಜನರ ಸಹಕಾರ ಬೇಕು ಎಂದು ಮನವಿ ಮಾಡಿದ ಅವರು, ಸಹಕಾರ ನೀಡಲು ಜನರು ಸಿದ್ಧರಾಗಿದ್ದು, ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಶಾಸಕರಾದ ಜಿ.ಟಿ.ದೇವೇಗೌಡ, ಸಾ.ರಾ.ಮಹೇಶ್, ಅಶ್ವಿನ್ ಕುಮಾರ್, ಎಂಎಲ್‌ಸಿ ಸಿ.ಎಂ.ಮಂಜೇಗೌಡ ಇನ್ನಿತರರು ಉಪಸ್ಥಿತರಿದ್ದರು.

## ಕೇಂದ್ರ ಸರ್ಕಾರದ ನೋಟು ನಿಷೇಧ ನಿರ್ಧಾರ ನ್ಯಾಯಸಮ್ಮತವಾಗಿದೆ



**ನವದೆಹಲಿ:** ನೋಟುಗಳ ರದ್ದು ತಪ್ಪಲ್ಲ ಎಂದು ಸುಪ್ರೀಂ ಕೋರ್ಟ್ ಸೋಮವಾರ ಹೇಳಿದ್ದು, ಈ ಸಂಬಂಧ ಕೇಂದ್ರ ಸರ್ಕಾರದ ನಿರ್ಧಾರವನ್ನು ಎತ್ತಿ ಹಿಡಿದಿದೆ.

2016ರಲ್ಲಿ ಕೇಂದ್ರ ಸರ್ಕಾರ 500 ರೂ. ಮತ್ತು 1000 ರೂ. ಮುಖಬೆಲೆಯ ನೋಟುಗಳನ್ನು ರದ್ದುಗೊಳಿಸಿ ಘೋಷಿಸಿದ ಕ್ರಮ ಪ್ರಶ್ನಿಸಿ ಸಲ್ಲಿಕೆಯಾಗಿದ್ದ 58 ಅರ್ಜಿಗಳ ಕುರಿತು ಸುಪ್ರೀಂಕೋರ್ಟ್‌ನ ಸಾಂವಿಧಾನಿಕ ಪೀಠ ಈ ತೀರ್ಪು ನೀಡಿದೆ.

ನ್ಯಾಯಮೂರ್ತಿ ಎಸ್.ಎ. ನಜೀರ್ ನೇತೃತ್ವದ ಐವರು ನ್ಯಾಯಮೂರ್ತಿಗಳಿರುವ ಸಾಂವಿಧಾನಿಕ ಪೀಠವು ತೀರ್ಪು ಪ್ರಕಟಿಸಿದೆ. ಕೇಂದ್ರದ ನೋಟ್ ಬ್ಯಾನ್ ನಿರ್ಧಾರಕ್ಕೆ ಪೀಠ 4:1 ಅನುಪಾತದಲ್ಲಿ ತೀರ್ಪು ಪ್ರಕಟಿಸಿದೆ. ನೋಟು ಅಮಾನ್ಯೀಕರಣ ಮಾಡಿರುವ ಕೇಂದ್ರದ ನಿರ್ಧಾರ ಸಮ್ಮತವಾಗಿದೆ. ಆರ್‌ಬಿಐ ಒಪ್ಪಿಗೆ ಪಡೆದೇ ಕೇಂದ್ರ ಸರ್ಕಾರ ಈ ನಿರ್ಧಾರ ತೆಗೆದುಕೊಂಡಿದೆ. ತಜ್ಞರ ಸಲಹೆ ಪಡೆದು ಕೇಂದ್ರ ಸರ್ಕಾರ ನಿರ್ಧಾರ ಕೈಗೊಳ್ಳಬಹುದಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ನ್ಯಾಯಮೂರ್ತಿ ಬಿ.ವಿ.ನಾಗರತ್ನ ಅವರು ಭಿನ್ನಾಭಿಪ್ರಾಯದ ತೀರ್ಪು ನೀಡಿ, ನೋಟು ರದ್ದತಿಯನ್ನು ಸಂಸತ್ತಿನ ಕಾಯಿದೆಯ ಮೂಲಕ ಕಾರ್ಯಗತಗೊಳಿಸಬಹುದಿತ್ತು, ಇದು ಸರ್ಕಾರದಿಂದ ಅಲ್ಲ ▶ 10ನೇ ಪುಟಕ್ಕೆ

### ನೋಟುಗಳ ನಿಷೇಧ ಆದೇಶ ಕಾನೂನುಬಾಹಿರ



**ನವದೆಹಲಿ:** ಕೇಂದ್ರ ಸರ್ಕಾರದ ನೋಟು ನಿಷೇಧ ನಿರ್ಧಾರ ಕಾನೂನು ಬಾಹಿರವಾಗಿದ್ದು, ನೋಟು ನಿಷೇಧ ಪ್ರಕ್ರಿಯೆಯನ್ನು ಆರಂಭಿಸಬಾರದಿತ್ತು ಎಂದು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಹೇಳಿದ್ದಾರೆ.

ಸುಪ್ರೀಂಕೋರ್ಟ್ ಸಾಂವಿಧಾನಿಕ ಪೀಠವು 4:1 ಬಹುಮತದೊಂದಿಗೆ ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರಕಾರದ ನೋಟು ನಿಷೇಧ ನಿರ್ಧಾರ ಎತ್ತಿಹಿಡಿದ ಸಂದರ್ಭದಲ್ಲಿ ಜಸ್ಟಿಸ್ ನಾಗರತ್ನ ತೀವ್ರ ಭಿನ್ನಾಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ನವೆಂಬರ್ 8, 2016ರ ಕೇಂದ್ರದ ಅಧಿಸೂಚನೆಯನ್ನು "ಕಾನೂನುಬಾಹಿರ' ಎಂದು ಕರೆದಿರುವ ನಾಗರತ್ನ ಅವರು, ನನ್ನ ಅಭಿಪ್ರಾಯದಲ್ಲಿ ನವೆಂಬರ್ 8ರ ಅಧಿಸೂಚನೆಯ ಮೂಲಕ ನೋಟು ಅಮಾನ್ಯೀಕರಣದ ಕ್ರಮವು ಕಾನೂನುಬಾಹಿರವಾಗಿದೆ. ಆದರೆ 2016 ರಲ್ಲಿದ್ದ ಯಥಾಸ್ಥಿತಿಯನ್ನು ಈಗ ಪುನಃಸ್ಥಾಪಿಸಲು ಸಾಧ್ಯವಿಲ್ಲ. ನೋಟು ನಿಷೇಧ ಕಾನೂನು ▶ 10ನೇ ಪುಟಕ್ಕೆ




## ಕಾಂಗ್ರೆಸ್ 100 ಅಭ್ಯರ್ಥಿಗಳ ಮೊದಲ ಪಟ್ಟಿ

# ಜ.20ರೊಳಗೆ ಪ್ರಕಟ

- ಯಾವುದೇ ಸಮಸ್ಯೆ ಇಲ್ಲದ ಕ್ಷೇತ್ರಗಳ ಅಭ್ಯರ್ಥಿ ಪ್ರಕಟಿಸಲು ಸಿದ್ಧತೆ
- ಹಾಲಿ 57 ಶಾಸಕರು ಸೇರಿ ಅಲ್ಪ ಮತಗಳಿಂದ ಸೋತವರು ಈ ಪಟ್ಟಿಯಲ್ಲಿದ್ದಾರೆ
- ಸಿದ್ದರಾಮಯ್ಯ ಮೊದಲ ಪಟ್ಟಿಯಲ್ಲಿ ಇರುವುದಿಲ್ಲ; ಉಸ್ತುವಾರಿಗಳ ಶಿಫಾರಸು ಆಧರಿಸಿ ಅಭ್ಯರ್ಥಿಗಳ ಅಯ್ಕೆ

**ಬೆಂಗಳೂರು, ಜ. 2 (ಕೆಎಂಶಿ)– ಮುಂಬರುವ ವಿಧಾನಸಭಾ ಚುನಾವಣೆಗೆ ಕಣಕ್ಕಿಳಿಯುವ 100 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಕಾಂಗ್ರೆಸ್ ಜನವರಿ 18 ಇಲ್ಲವೇ 20ರಂದು ಅಧಿಕೃತವಾಗಿ ಬಿಡುಗಡೆ ಮಾಡಲಿದೆ.**

ಚುನಾವಣಾ ಪೂರ್ವ ಸಮೀಕ್ಷಾ ಹಾಗೂ ಅಭ್ಯರ್ಥಿಗಳ ಆಯ್ಕೆಗಾಗಿ ನೇಮಕಗೊಂಡಿರುವ ಜಿಲ್ಲಾ ಉಸ್ತುವಾರಿಯ ಶಿಫಾರಸನ್ನು ಆಧಾರವಾಗಿಟ್ಟುಕೊಂಡು ವಿವಾದಾತ್ಮಕವಲ್ಲದ ಅಭ್ಯರ್ಥಿಗಳ ಹೆಸರನ್ನು ಮೊದಲೇ ಬಹಿರಂಗಪಡಿಸಲು ಕಾಂಗ್ರೆಸ್ ತೀರ್ಮಾನಿಸಿದೆ. ವಿಧಾನಸಭೆಯ ಪ್ರತಿಪಕ್ಷದ ನಾಯಕ



ಸಿದ್ದರಾಮಯ್ಯ, ಮೊದಲ ಪಟ್ಟಿಯಲ್ಲಿ ತಮ್ಮ ಹೆಸರನ್ನು ಬಹಿರಂಗಪಡಿಸಿಕೊಳ್ಳಲು ಆಸಕ್ತಿ ತೋರಿಲ್ಲವಂತೆ. ಉಳಿದಂತೆ 62 ಶಾಸಕರ ಪೈಕಿ 57 ಶಾಸಕರೂ ಸೇರಿದಂತೆ ಕಳೆದ 2018ರ ಚುನಾವಣೆಯಲ್ಲಿ ಅಲ್ಪ ಅಂತರದಿಂದ ಪರಾಭವಗೊಂಡವರು ಹಾಗೂ ಪಕ್ಷಕ್ಕಾಗಿ ದುಡಿದಿರುವ ವರ್ಚಸ್ವಿ ನಾಯಕರಿಗೆ ಮೊದಲ ಪಟ್ಟಿಯಲ್ಲೇ ಅವಕಾಶ ಮಾಡಿಕೊಡಲಾಗಿದೆ. ಏಪ್ರಿಲ್–ಮೇ ತಿಂಗಳಲ್ಲಿ ರಾಜ್ಯವಿಧಾನಸಭೆಗೆ ನಡೆಯಲಿರುವ ಚುನಾವಣೆಗೆ ನಾಲ್ಕು ತಿಂಗಳ ಮುನ್ನವೇ ಕಾಂಗ್ರೆಸ್ ಪಟ್ಟಿ ಬಿಡುಗಡೆ ಮಾಡಿ, ಅಭ್ಯರ್ಥಿಗಳು ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಡುತ್ತಿದೆ. ಪ್ರತಿ ಚುನಾವಣೆಯಲ್ಲೂ ಕಡೇ ಗಳಿಗೆಯಲ್ಲಿ ಅಭ್ಯರ್ಥಿಗಳ ಆಯ್ಕೆ ಮಾಡಿ, ಬಿ–ಫಾರಂ ನೀಡುತ್ತಿದ್ದ ಕಾಂಗ್ರೆಸ್ ಇದೇ ಮೊದಲ ಬಾರಿಗೆ ಇಂತಹ ನಿಲುವನ್ನು ತೆಗೆದುಕೊಂಡಿದೆ. ಸಂಕ್ರಾಂತಿ ಹಬ್ಬಕ್ಕೂ ಮುನ್ನವೇ ಪಟ್ಟಿ ಬಿಡುಗಡೆ ಮಾಡಲು ಕೆಪಿಸಿಸಿ ನಿರ್ಧರಿಸಿತ್ತು. ಆದರೆ ಅಭ್ಯರ್ಥಿಗಳ ಆಯ್ಕೆಗೆ ನೇಮಕಗೊಂಡಿರುವ ಜಿಲ್ಲಾ ಉಸ್ತುವಾರಿಗಳು ವರದಿ ನೀಡಲು ಜನವರಿ 5 ರವರೆಗೂ ಅವಕಾಶ ಕೋರಿದ ಹಿನ್ನೆಲೆಯಲ್ಲಿ ವಿಳಂಬವಾಗಿದೆ. ಜನವರಿ 15ರ ನಂತರ ▶ 10ನೇ ಪುಟಕ್ಕೆ

## ಮುರುಘಾ ಮಠಕ್ಕೆ ಆಡಳಿತಾಧಿಕಾರಿ ಪ್ರಶ್ನಿಸಿದ ಅರ್ಜಿ: ಜ.12ಕ್ಕೆ ವಿಚಾರಣೆ ಮುಂದೂಡಿಕೆ

**ಬೆಂಗಳೂರು:** ನಿವೃತ್ತ ಐಎಎಸ್‌ಅಧಿಕಾರಿ ಪಿ.ಎಸ್.ವಸ್ತ್ರದ ಅವರನ್ನು ಶ್ರೀ ಜಗದ್ಗುರು ಮುರುಘರಾಜೇಂದ್ರ (ಎಸ್‌ಜೆಎಂ) ಬೃಹನ್ಮಠಕ್ಕೆ ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಿ ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶವನ್ನು ಪ್ರಶ್ನಿಸಿದ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಜ.12ಕ್ಕೆ ಮುಂದೂಡಿದೆ. ಈ ಸಂಬಂಧ ಎಸ್‌ಜೆಎಂ ವಿದ್ಯಾಪೀಠದ ಅಧ್ಯಕ್ಷ, ಮಠದ ಉಸ್ತುವಾರಿ ಬಸವಪ್ರಭು ಸ್ವಾಮೀಜಿ ಮತ್ತು ಭಕ್ತರು ಸಲ್ಲಿಸಿರುವ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಅರ್ಜಿದಾರರ ಪರ ಹಿರಿಯ ವಕೀಲ ಜಯಕುಮಾರ್ ಎಸ್.ಪಾಟೀಲ್, ರಿಟ್ ಅರ್ಜಿ ತಿದ್ದುಪಡಿಗೆ ಮನವಿ ಮಾಡಿದರು. ಸರ್ಕಾರದ ಪರ ವಕೀಲರು, ಅಡ್ವೊಕೇಟ್ ಜನರಲ್ ಹಾಜರಿಲ್ಲದ ಕಾರಣ ಸಮಯಾವಕಾಶ ನೀಡುವಂತೆ ಕೋರಿದರು. ಇದೇ ವೇಳೆ ಪ್ರತಿವಾದಿ ಆಡಳಿತಾಧಿಕಾರಿ ಪಿ.ಎಸ್.ವಸ್ತ್ರದ ಪರ ಎಚ್.ಸುನಿಲ್ ಕುಮಾರ್ ವಕಾಲತ್ತು ಸಲ್ಲಿಸಿದರು. ಇದನ್ನು ಮಾನ್ಯ ಮಾಡಿದ ನ್ಯಾಯಪೀಠ ವಿಚಾರಣೆ ಮುಂದೂಡಿತು.



ಸರ್.ಎಂ.ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮುಡಾ ನೂತನ ಅಧ್ಯಕ್ಷ ಯಶಸ್ವಿ ಎಸ್. ಸೋಮಶೇಖರ್ ಅವರನ್ನು ಅಭಿನಂದಿಸಲಾಯಿತು. ಸಂಘದ ಅಧ್ಯಕ್ಷ ಜಯನಗರ ಮಹೇಶ್, ಉಪಾಧ್ಯಕ್ಷ ಸುರೇಶ್ ಕುಮಾರ್, ಕಾರ್ಯದರ್ಶಿ ರವಿಕುಮಾರ್, ನಿರ್ದೇಶಕರಾದ ರುದ್ರಸ್ವಾಮಿ, ಕುಮಾರ್, ಸಂತೋಷ್‌ಕುಮಾರ್ ಬೆಹರ, ಯೋಗೇಶ್, ಶಿವರಾಜ್ ಉಪಸ್ಥಿತರಿದ್ದರು.

## ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ



ಮೈಸೂರು,ಜ.2– ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷ ಎಂ.ಶಿವಣ್ಣ ಜ.5ರಂದು ಮೈಸೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಅಂದು ಬೆಳಗ್ಗೆ 10 ಗಂಟೆಗೆ ಹೂಟಗಳ್ಳಿ ನಗರಸಭೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಚ್ಛತಾ ಕಾರ್ಮಿಕರೊಂದಿಗೆ ಹಾಗೂ ಮುಖಂಡರೊಂದಿಗೆ ಚರ್ಚೆ ನಡೆಸುವರು. ಬೆಳಗ್ಗೆ 11 ಗಂಟೆಗೆ ಹೂಟಗಳ್ಳಿ ನಗರಸಭೆಯಲ್ಲಿ ಪೌರಕಾರ್ಮಿಕರ ಸಮಸ್ಯೆಗಳ ಬಗ್ಗೆ ಅಧಿಕಾರಿಗಳೊಡನೆ ಸಭೆ ನಡೆಸುವರು. ಮಧ್ಯಾಹ್ನ 12 ಗಂಟೆಗೆ ಜಲದರ್ಶಿನಿ ಅತಿಥಿ ಗೃಹದಲ್ಲಿ ಮೈಸೂರು ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸ್ಲಂಬೋರ್ಡ್ ವತಿಯಿಂದ ನಿರ್ಮಿಸಲಾಗಿರುವ ವಸತಿ ಗೃಹಗಳ ಹಂಚಿಕೆಯ ಬಗ್ಗೆ ಚರ್ಚೆ ಹಾಗೂ ಮಧ್ಯಾಹ್ನ 3 ಗಂಟೆಗೆ ಮುಖಂಡರೊಂದಿಗೆ ಚರ್ಚಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.



ಮೈಸೂರಿನ ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕಿನ ಶಾಖಾ ಕಚೇರಿಯಲ್ಲಿ ATM ಆರಂಭಿಸಲಾಯಿತು. ಈ ವೇಳೆ ಬ್ಯಾಂಕಿನ ಅಧ್ಯಕ್ಷ ಸಿ.ರೇವಣ್ಣ, ಉಪಾಧ್ಯಕ್ಷ ಜೆ.ಯೋಗೇಶ್, ನಿರ್ದೇಶಕರಾದ ಆರ್.ರವಿಕುಮಾರ್ (ರಾಜಕೀಯ), ಎಸ್‌ಬಿಎಂ ಮಂಜು, ಹೆಚ್.ಹರೀಶಕುಮಾರ್, ಕೆ.ಉಮಾಶಂಕರ್, ಎಸ್.ಅರವಿಂದ, ಎಂ.ರಾಮಕೃಷ್ಣ, ಆರ್.ರವಿಕುಮಾರ್, ಪಿ.ರಾಜೇಶ್ವರಿ, ಪಿ.ಸವಿತಾ ಮತ್ತು ಬ್ಯಾಂಕಿನ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಕೆ.ಹರ್ಷಿತ್‌ಗೌಡ, ವ್ಯವಸ್ಥಾಪಕರಾದ ಮುಕ್ತ ಉಪಸ್ಥಿತರಿದ್ದರು.

## ಯುವತಿಗೆ ಚಾಕುವಿನಿಂದ ಇರಿದು ಕೊಂದು, ತಾನೂ ಇರಿದುಕೊಂಡ ಭಗ್ನ ಪ್ರೇಮಿ!



ಬೆಂಗಳೂರು, ಜ.2– ಪ್ರೀತಿ ವಿಚಾರಕ್ಕೆ 'ಭಗ್ನ ಪ್ರೇಮಿ'ಯೋರ್ವ ಕಾಲೇಜಿನಲ್ಲೇ ಯುವತಿಗೆ ಚಾಕುವಿನಿಂದ ಇರಿದು ಕೊಂದು ಹಾಕಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಬೆಂಗಳೂರಿನ ರಾಜಾನುಕುಂಟೆಯಲ್ಲಿರುವ ಪ್ರೆಸಿಡೆನ್ಸಿ ಕಾಲೇಜಿನಲ್ಲಿ ಇಂದು ಮಧ್ಯಾಹ್ನ 1 ಗಂಟೆ ಸುಮಾರಿನಲ್ಲಿ ಈ ಘಟನೆ ನಡೆದಿದ್ದು, ಚಾಕುವಿನೊಂದಿಗೆ ಕಾಲೇಜು ಪ್ರವೇಶಿಸಿದ ಕೋಲಾರ ಮೂಲದ ಯುವಕ, ಕಾಲೇಜು ಆವರಣದಲ್ಲೇ ಯುವತಿಗೆ ಇರಿದಿದ್ದಾನೆ. ಬಳಿಕ ತಾನೂ ಚಾಕುವಿನಿಂದ ಇರಿದುಕೊಂಡಿದ್ದು, ಕೂಡಲೇ ಇತರೆ ವಿದ್ಯಾರ್ಥಿಗಳು ಮತ್ತು ಭದ್ರತಾ ಸಿಬ್ಬಂದಿ ಇಬ್ಬರನ್ನೂ ಆಸ್ಪತ್ರೆಗೆ ದಾಖಲಿಸಲು ಮುಂದಾಗಿದ್ದು, ಈ ವೇಳೆ ಮಾರ್ಗ ಮಧ್ಯೆ ಯುವತಿ ಸಾವನ್ನಪ್ಪಿದ್ದಾಳೆ.

ಮೃತ ಯುವತಿಯನ್ನು ಪ್ರೆಸಿಡೆನ್ಸಿ ಕಾಲೇಜಿನ ಬಿಟೆಕ್ ವಿದ್ಯಾರ್ಥಿನಿ ಲಯಸ್ಮಿತಾ ಎಂದು ಗುರುತಿಸಲಾಗಿದ್ದು, ಭಗ್ನ ಪ್ರೇಮಿಯನ್ನು ನೃಪತುಂಗ ವಿವಿ ವಿದ್ಯಾರ್ಥಿ ಪವನ್ ಕಲ್ಯಾಣ್ ಎಂದು ಗುರುತಿಸಲಾಗಿದೆ. ಇಬ್ಬರೂ ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಕಾಚಿಪುರ ಗ್ರಾಮದ ನಿವಾಸಿಗಳು ಎಂದು ತಿಳಿದು ಬಂದಿದೆ.

ಚಾಕುವಿನಿಂದ ಇರಿದುಕೊಂಡಿದ್ದ ಯುವಕನನ್ನು ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ಕೊಡಿಸಲಾಗುತ್ತಿದೆ. ಕಾಲೇಜಿನಲ್ಲಿ ಪ್ರಕ್ಷುಬ್ಧ ವಾತಾವರಣ ನಿರ್ಮಾಣವಾಗಿದೆ. ಮೂಲಗಳ ಪ್ರಕಾರ ಪ್ರೀತಿ ಪ್ರೇಮದ ವಿಚಾರಕ್ಕೆ ಹತ್ಯೆಗೈದು ಆತ್ಮಹತ್ಯೆಗೆ ಯತ್ನಿಸಿರುವ ಶಂಕೆ ವ್ಯಕ್ತವಾಗಿದೆ. ಯುವತಿಗೆ ಇರಿದ ಯುವಕ ಕಾಲೇಜಿನ ವಿದ್ಯಾರ್ಥಿಯಲ್ಲ. ಬದಲಿಗೆ ಹೊರಗಿನವನಾಗಿದ್ದು ನಿತ್ಯ ಆಕೆಯನ್ನು ಹಿಂಬಾಲಿಸಿ ಪ್ರೀತಿಸುವಂತೆ ಪೀಡಿಸುತ್ತಿದ್ದ. ಆದರೆ ಇಂದು ಏಕಾಏಕಿ ಚಾಕುವಿನೊಂದಿಗೆ ಕಾಲೇಜು ಪ್ರವೇಶಿಸಿದ ಯುವಕ ನೋಡ ನೋಡುತ್ತಲೇ ಯುವತಿಗೆ ಇರಿದಿದ್ದಾನೆ. ಸ್ಥಳಕ್ಕೆ ರಾಜಾನುಕುಂಟೆ ಠಾಣೆ ಪೊಲೀಸರ ಭೇಟಿ ನೀಡಿ ಪರಿಶೀಲಿಸಿದ್ದಾರೆ.

## ನಿಧನ



**ಶ್ರೀಮತಿ ಗೋಪಮ್ಮ**

ಕೆ.ಆರ್.ಪೇಟೆ,ಜ2– ಕೆ.ಆರ್.ಪೇಟೆ ತಾಲೂಕಿನ ಶೀಳನೆರೆ ಗ್ರಾಮದ ನಿವಾಸಿ ಶ್ರೀಮತಿ ಗೋಪಮ್ಮ (86) ಭಾನುವಾರ ಮೈಸೂರಿನಲ್ಲಿ ನಿಧನರಾದರು. ಇವರು ಕೆಎಸ್‌ಆರ್‌ಟಿಸಿ ನೌಕರ ಟಿ.ಸಿ.ನಾರಾಯಣ ಸೇರಿದಂತೆ ನಾಲ್ವರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಸೋಮವಾರ ಸ್ವಗ್ರಾಮ ಶೀಳನೆರೆ ಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಿತು.

**ಗೋವಿಂದ ಕುಲಕರ್ಣಿ**



ಮೈಸೂರಿನ ಸಿದ್ದಾರ್ಥನಗರದ ನಿವಾಸಿ ಹಾಗೂ ವರುಣಾ ಪದವಿ ಪೂರ್ವ ಕಾಲೇಜಿನಲ್ಲಿ ಇತಿಹಾಸ ಉಪನ್ಯಾಸಕರಾದ ಗೋವಿಂದ ಕುಲಕರ್ಣಿ (55) ಭಾನುವಾರ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಸಿದ್ದಾರ್ಥನಗರದ ಶ್ರೀ ಗಾಯತ್ರಿ ಎಜುಕೇಶನಲ್ ಕಲ್ಚರಲ್ ಮತ್ತು ಅಂಡ್ ಚಾರಿಟಬಲ್ ಟ್ರಸ್ಟಿನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಭಾನುವಾರ ಸಂಜೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬ ವರ್ಗ ತಿಳಿಸಿದೆ.



**ಸಿ.ರಾಜಣ್ಣ**

ಮೈಸೂರಿನ ಶ್ರೀರಾಂಪುರ ಎರಡನೇ ಹಂತದ ನಿವಾಸಿ, ಕುಂಚಿಟಿಗರ ಸಂಘದ ಮಾಜಿ ಉಪಾಧ್ಯಕ್ಷರೂ ಆದ ಮರ್ಚೆಂಟ್ ಕೋ–ಆಪರೇಟಿವ್ ಬ್ಯಾಂಕ್ ಮಾಜಿ ಅಧ್ಯಕ್ಷ ಸಿ.ರಾಜಣ್ಣ(80) ಸೋಮವಾರ ನಿಧನರಾದರು. ಮೃತರು ಪತ್ನಿ ಜಯಮ್ಮ, ಪುತ್ರರಾದ ರವಿಕುಮಾರ್, ಮಧುಕುಮಾರ್, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಬಿಎಸ್‌ವೈ, ಬೊಮ್ಮಾಯಿ ಅವರನ್ನು ಬಿಜೆಪಿ ಹೇಗೆ ನಡೆಸಿಕೊಳ್ಳುತ್ತಿದೆ ಎಂಬುದನ್ನು ವೀರಶೈವ ಸಮುದಾಯ ಅರ್ಥ ಮಾಡಿಕೊಳ್ಳಬೇಕು

### ಕೆ.ಆರ್.ಕ್ಷೇತ್ರದ 'ಶರಣರೊಂದಿಗೆ ಕುಮಾರಣ್ಣ' ವೀರಶೈವ ಮುಖಂಡರ ಸಭೆಯಲ್ಲಿ ಮಾಜಿ ಸಿಎಂ ಹೆಚ್‌ಡಿಕೆ ಮನವಿ

ಮೈಸೂರು, ಜ.2(ಆರ್‌ಕೆಬಿ)– ಬಿಜೆಪಿ ಬೆಂಬಲದ ಮೂಲವಾಗಿರುವ ವೀರಶೈವ ಲಿಂಗಾಯಿತ ಸಮುದಾಯದ ಮುಖಂಡರನ್ನು ಬಿಜೆಪಿ ಹೈಕಮಾಂಡ್ ನಿಯಂತ್ರಿಸುತ್ತಿದೆ. ಇಂದು ಬಿಜೆಪಿಯಲ್ಲಿ ಬಿ.ಎಸ್.ಯಡಿಯೂರಪ್ಪ ಮತ್ತು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಸ್ಥಿತಿ ಏನಾಗಿದೆ ಎಂಬುದನ್ನು ವೀರಶೈವ ಲಿಂಗಾಯತ ಮುಖಂಡರು ಅರ್ಥ ಮಾಡಿಕೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಮೈಸೂರಿನ ನೇರಂಬಳ್ಳಿ ಕನ್ವೆನ್ಷನ್ ಹಾಲ್‌ನಲ್ಲಿ ಸೋಮವಾರ ಕೃಷ್ಣರಾಜ ಕ್ಷೇತ್ರದ ಘೋಷಿತ ಜೆಡಿಎಸ್ ಅಭ್ಯರ್ಥಿ ಕೆ.ವಿ.ಮಲ್ಲೇಶ್ ಆಯೋಜಿಸಿದ್ದ 'ಶರಣರೊಂದಿಗೆ ಕುಮಾರಣ್ಣ' ವೀರಶೈವ ಮುಖಂಡರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಬಿ.ಎಸ್.ಯಡಿಯೂರಪ್ಪ ವೀರಶೈವ ಸಮಾಜದ ಶಕ್ತಿ. ಆದರೆ ಇಂದು ಯಡಿಯೂರಪ್ಪ ಅವರನ್ನು ಬಿಜೆಪಿ ಎಲ್ಲಿಟ್ಟಿದೆ. ಅವರು ಹೇಗೆ ಕಡೆಗಣಿಸಲ್ಪಟ್ಟಿದ್ದಾರೆ ಎಂಬುದು ಮೇಲ್ನೋಟಕ್ಕೆ ಕಾಣುತ್ತಿದೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಯಾವುದೇ ಸ್ವಂತ ತೀರ್ಮಾನ ಕೈಗೊಳ್ಳದ ಹಾಗೆ ಹೆಸರಿಗೆ ಮಾತ್ರ ಮುಖ್ಯಮಂತ್ರಿಯಾಗಿ ಇಟ್ಟುಕೊಂಡಿದ್ದಾರೆ. ಬಿಜೆಪಿಯ ಬೆಂಬಲದ ಮೂಲವಾದ ವೀರಶೈವರ ಬಗ್ಗೆ, ವೀರಶೈವ ಮುಖಂಡರ ಬಗ್ಗೆ ಬಿಜೆಪಿಯ ಕೇಂದ್ರ ನಾಯಕರು ತೀರಾ ಅಸಡ್ಡೆಯಿಂದ ಕಾಣುತ್ತಿದ್ದಾರೆ. ವೀರಶೈವ ಲಿಂಗಾಯತ ಸಮುದಾಯವು ಬಿಜೆಪಿಯ ವಿಶ್ವಾಸಘಾತುಕತನವನ್ನು ನಿಧಾನವಾಗಿ ಅರಿತುಕೊಳ್ಳಲು ಪ್ರಾರಂಭಿಸಿದೆ. ಇದು ಜೆಡಿಎಸ್‌ಗೆ ಉತ್ತಮ ಸಂಕೇತವಾಗಿದೆ ಎಂದು ಹೇಳಿದರು.

ಹೀಗಾಗಿ ಕೃಷ್ಣರಾಜ ಕ್ಷೇತ್ರದಲ್ಲಿ ಪಕ್ಷದ ನಿಷ್ಠಾವಂತರಾದ ಕೆ.ವಿ.ಮಲ್ಲೇಶ್ ಅವರಿಗೆ ಟಿಕೆಟ್ ಘೋಷಿಸಿದ್ದೇವೆ. ಅವರಿಗೆ ಎಲ್ಲಾ ಶಕ್ತಿಯನ್ನು ತುಂಬಲು ಪಕ್ಷ ಸಿದ್ಧವಿದೆ. ಕ್ಷೇತ್ರದ ಮತದಾರರು ಅವರನ್ನು ಗೆಲ್ಲಿಸಿಕೊಡುತ್ತೇನೆಂಬ ಮಾತು ನೀಡಿ. ಜಿ.ಟಿ.ದೇವೇಗೌಡ, ಸಾ.ರಾ.ಮಹೇಶ್ ಸೇರಿದಂತೆ ನಾವೆಲ್ಲರೂ ಒಗ್ಗಟ್ಟಿನಿಂದ ಅವರನ್ನು ಗೆಲ್ಲಿಸಿಕೊಂಡು ಬರುತ್ತೇವೆ ಎಂದು ಕುಮಾರಸ್ವಾಮಿ ತಿಳಿಸಿದರು.

ಸಭೆಯಲ್ಲಿ ಶಾಸಕರಾದ ಜಿ.ಟಿ.ದೇವೇಗೌಡ, ಸಾ.ರಾ.ಮಹೇಶ್, ಅಶ್ವಿನ್ ಕುಮಾರ್, ಎಂಎಲ್‌ಸಿ ಸಿ.ಎನ್.ಮಂಜೇಗೌಡ, ಕೃಷ್ಣರಾಜ ಕ್ಷೇತ್ರದ ಅಭ್ಯರ್ಥಿ ಕೆ.ವಿ.ಮಲ್ಲೇಶ್, ಜೆಡಿಎಸ್ ನಗರಾಧ್ಯಕ್ಷ ಕೆ.ಟಿ.ಚೆಲುವೇಗೌಡ, ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನಲ್ಲಿ ಕೃಷ್ಣರಾಜ ಕ್ಷೇತ್ರದ 'ಶರಣರೊಂದಿಗೆ ಕುಮಾರಣ್ಣ' ವೀರಶೈವ ಮುಖಂಡರ ಸಭೆಯಲ್ಲಿ ಶಕ್ತಿ ಪ್ರದರ್ಶಿಸಿದ ಜೆಡಿಎಸ್ ನಾಯಕರು. ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಶಾಸಕರಾದ ಜಿ.ಟಿ.ದೇವೇಗೌಡ, ಸಾ.ರಾ.ಮಹೇಶ್, ಅಶ್ವಿನ್‌ಕುಮಾರ್, ಸಿ.ಎನ್.ಮಂಜೇಗೌಡ, ಕೆ.ಆರ್.ಕ್ಷೇತ್ರದ ಘೋಷಿತ ಅಭ್ಯರ್ಥಿ ಕೆ.ವಿ.ಮಲ್ಲೇಶ್ ಇನ್ನಿತರರು ಚಿತ್ರದಲ್ಲಿದ್ದಾರೆ.

> “ಈಗಾಗಲೇ 6 ಜಿಲ್ಲೆಗಳಲ್ಲಿ 34 ಕ್ಷೇತ್ರಗಳಲ್ಲಿ ಪಂಚರತ್ನ ಯಾತ್ರೆ ಮಾಡಿದ್ದೇವೆ. ಈ ಪೈಕಿ 32–33 ಸ್ಥಾನಗಳಲ್ಲಿ ಜೆಡಿಎಸ್ ವಾತಾವರಣ ಕಾಣುತ್ತಿದೆ. ಹೊಸ ಬದಲಾವಣೆ ತರಲು ರಾಜ್ಯದ ಜನತೆ ತೀರ್ಮಾನಿಸಿದ್ದಾರೆ. ಎರಡು ರಾಷ್ಟ್ರೀಯ ಪಕ್ಷಗಳ ಬಗ್ಗೆ ವೀರಶೈವ ಲಿಂಗಾಯತ ಸಮುದಾಯದವರು ಸ್ವಲ್ಪ ಸೂಕ್ಷ್ಮವಾಗಿ ಗಮನಿಸಬೇಕು. ಈ ನಿಟ್ಟಿನಲ್ಲಿ ಕೃಷ್ಣರಾಜ ಕ್ಷೇತ್ರದಲ್ಲೂ ನಿಮ್ಮ ಅಭ್ಯರ್ಥಿಯ ಗೆಲುವಿಗೆ ಸಂಪೂರ್ಣ ಸಹಕಾರ ನೀಡುವಂತೆ ವೀರಶೈವ ಲಿಂಗಾಯತ ಮುಖಂಡರಲ್ಲಿ ಮನವಿ ಮಾಡಿದ್ದೇನೆ.
> –ಕುಮಾರಸ್ವಾಮಿ, ಮಾಜಿ ಸಿಎಂ

## ಜ.20ರಿಂದ ಎರಡು ದಿನಗಳ ಕಾಲ ಅಂತರರಾಷ್ಟ್ರೀಯ ವಾಣಿಜ್ಯ ಮೇಳ

ಮೈಸೂರು,ಜ.2– ಜಂಟಿ ಕೃಷಿ ನಿರ್ದೇಶಕರ ಕಚೇರಿ, ಸಾರ್ವಜನಿಕ ಕಚೇರಿಗಳ ಕಟ್ಟಡ, ಮೈಸೂರು ಜಿಲ್ಲೆ ವತಿಯಿಂದ ಬೆಂಗಳೂರಿನ ತ್ರಿಪುರ ವಾಸಿನಿ ಅರಮನೆ ಆವರಣದಲ್ಲಿ ಜನವರಿ 20ರಿಂದ ಜ.22ರವರೆಗೆ ಸಿರಿಧಾನ್ಯ ಮತ್ತು ಸಾವಯವ ಅಂತರರಾಷ್ಟ್ರೀಯ ವಾಣಿಜ್ಯ ಮೇಳವನ್ನು ಹಮ್ಮಿಕೊಳ್ಳಲಾಗಿದೆ.

ರಾಜ್ಯದ ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಹಾಗೂ ಗ್ರಾಹಕರಲ್ಲಿ ಅರಿವು ಮೂಡಿಸುವ ಮುಖ್ಯ ಉದ್ದೇಶದಿಂದ ರೈತರ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ಸದರಿ ಮೇಳವು ಗುಣಮಟ್ಟದ ವಸ್ತು ಪ್ರದರ್ಶನಗಳು, ಕಾರ್ಯಾಗಾರ, ಸಾವಯವ ಆಹಾರ ಮಳಿಗೆಗಳು, ಬಳಕೆದಾರರೊಂದಿಗೆ ಸಂಪರ್ಕ ಸರಪಳಿ ಹಾಗೂ ಮುಂತಾದ ಕಾರ್ಯಕ್ರಮಗಳನ್ನು ಒಳಗೊಂಡಿದ್ದು, ರಾಜ್ಯದ ಸಿರಿಧಾನ್ಯ ಮತ್ತು ಸಾವಯವ ಕೃಷಿಕರ ಒಟ್ಟಾರೆ ಅಭಿವೃದ್ಧಿಗೆ ಪೂರಕವಾಗಿರುತ್ತದೆ.

ಕಾರ್ಯಾಗಾರದಲ್ಲಿ ತಮ್ಮ ಸಿರಿಧಾನ್ಯ ಹಾಗೂ ಸಿರಿಧಾನ್ಯದಿಂದ ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು ಅಥವಾ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳೊಂದಿಗೆ ಮಾರುಕಟ್ಟೆ ಒಡಂಬಡಿಕೆ ಮಾಡಿಕೊಳ್ಳಲು ಇದು ಸದಾವಕಾಶವಾಗಿರುತ್ತದೆ. ಜಿಲ್ಲೆಯ ರೈತರು, ಬಳಕೆದಾರರು ಹಾಗೂ ಮಾರಾಟಗಾರರು ಸದರಿ ಸಮ್ಮೇಳನದಲ್ಲಿ ಭಾಗವಹಿಸಬೇಕೆಂದು ಹಾಗೂ ಹೆಚ್ಚಿನ ಮಾಹಿತಿಗಾಗಿ ತಾಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಡಿಐಜಿ ಆಗಿ ಪದೋನ್ನತಿ ಪಡೆದ ಮೈಸೂರು ಪೊಲೀಸ್ ಕಮಿಷನರ್ ರಮೇಶ್ ಬಾನೋತ್ ಅವರನ್ನು ಅವರ ಕಚೇರಿಯಲ್ಲಿ ಹೂಗುಚ್ಛ ನೀಡಿ, ಲಾಗೈಡ್ ಕನ್ನಡ ಕಾನೂನು ಮಾಸಪತ್ರಿಕೆ ಗೌರವ ಸಂಪಾದಕ ಎಚ್.ಎನ್.ವೆಂಕಟೇಶ್ ಅವರು ಅಭಿನಂದಿಸಿದರು.



**ಪಿಹೆಚ್.ಡಿ ಪದವಿ**

**ಮೈಸೂರು:** ಡಾ. ಶಶಿಧರ್ ಎಲ್. ಗುಡಿಗೇನವರ್ ಅವರ ಮಾರ್ಗದರ್ಶನದಲ್ಲಿ ಅನ್ಸರ್ ಪಾಷಾ ಅವರು ಹಿಂದಿ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

## ಜಲ್ಲಿಕಲ್ಲು ಕೊರತೆಯಿಂದ ರಸ್ತೆ ಅಭಿವೃದ್ಧಿ ಕಾಮಗಾರಿ ಕುಂಠಿತ

ಮೈಸೂರು,ಜ.2–(ಆರ್‌ಕೆ)–ಕೆಲ ಕಲ್ಲಿನ ಕ್ವಾರಿಗಳ ಕಾರ್ಯ ಸ್ಥಗಿತಗೊಂಡಿರುವುದರಿಂದ ಉಂಟಾಗಿರುವ ಜಲ್ಲಿಕಲ್ಲಿನ ಅಭಾವದಿಂದಾಗಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಹಿನ್ನಡೆಯಾಗಿದೆ ಎಂದು ಮೇಯರ್ ಶಿವಕುಮಾರ್ ತಿಳಿಸಿದ್ದಾರೆ.

ಮೈಸೂರಿನ ಅಶೋಕಪುರಂ ಜಂಕ್ಷನ್‌ನಿಂದ ರೈಲ್ವೆ ಅಂಡರ್‌ಬ್ರಿಡ್ಜ್‌ವರೆಗೆ ಲೋಕೋಪಯೋಗಿ ಇಲಾಖೆ ಜಲ್ಲಿಕಲ್ಲು ಸಿಗದ ಕಾರಣ ಕೆಲ ದಿನಗಳಿಂದ ಕಾಮಗಾರಿ ಸ್ಥಗಿತಗೊಂಡಿರುವುದರಿಂದ ನಾಗರಿಕರ ದೂರಿನನ್ವಯ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದರು. ಅಧಿಕಾರಿಗಳು, ಗುತ್ತಿಗೆದಾರರನ್ನು ಕರೆಸಿ ವಿಚಾರಿಸಿದಾಗ, ಈಗಾಗಲೇ ರಸ್ತೆಯ ಇಕ್ಕೆಲಗಳಲ್ಲಿ ಸಿಮೆಂಟ್ ಕಾಂಕ್ರಿಟ್ ಕೆಲಸ ಪೂರ್ಣಗೊಳಿಸಿದ್ದು, ದಪ್ಪ ಜಲ್ಲಿಕಲ್ಲು ಕೊರತೆಯಿಂದಾಗಿ ಮೆಟ್ಲಿಂಗ್ ಕಾಮಗಾರಿ ಸ್ಥಗಿತಗೊಂಡಿದೆ ಎಂದು ಹೇಳಿದ್ದಾರೆ. ಬೇರೆ ಎಲ್ಲಿಂದಾದರೂ ತಂದು ಆದಷ್ಟು ಬೇಗ ರಸ್ತೆ ಕಾಮಗಾರಿ ಆರಂಭಿಸಿ, ವಾಹನ ಸಂಚಾರಕ್ಕೆ ಅನುವುಮಾಡಿಕೊಡಬೇಕು. ಜಲ್ಲಿಕಲ್ಲು ಸಿಗುತ್ತಿಲ್ಲ ಎಂಬ ನೆಪವೊಡ್ಡಿ ಅರೆಬರೆ ಕೆಲಸ ಮಾಡಿ ಸಾರ್ವಜನಿಕರಿಗೆ ತೊಂದರೆ ಕೊಡುವುದು ಸರಿಯಲ್ಲ ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು. ಈಗಾಗಲೇ ತಮ್ಮ ಜಾಗದಲ್ಲಿ ಜಲ್ಲಿ, ಮರಳು ಶೇಖರಿಸಿಕೊಂಡಿರುವ ಗುತ್ತಿಗೆದಾರರು ಕೆಲಸ ಮಾಡುತ್ತಾರೆ. ಮೆಟೀರಿಯಲ್ ಹೊರಗಿನಿಂದ ತಂದು ಕೆಲಸ ಮಾಡುವವರಿಗೆ ತೊಂದರೆಯಾಗುತ್ತಿದ್ದು, ಮೈಸೂರಿನ ಬಹುತೇಕ ರೋಡ್ ಮೆಟ್ಲಿಂಗ್ ಕೆಲಸಗಳು ಸ್ಥಗಿತಗೊಂಡಿವೆ ಎಂದು.




## ಕೋಟ್ಯಾಂತರ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ

ಮೈಸೂರು, ಜ.2–(ಆರ್‌ಕೆ)– ಮೈಸೂರಿನ ಚಾಮರಾಜ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸರಸ್ವತಿಪುರಂ, ಗಂಗೋತ್ರಿ ಬಡಾವಣೆ ಹಾಗೂ ಕುದುರೆ ಮಾಳದಲ್ಲಿ ಕೈಗೊಂಡಿರುವ 1.9 ಕೋಟಿ ರೂ. ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಎಲ್. ನಾಗೇಂದ್ರ ಸೋಮವಾರ ಭೂಮಿಪೂಜೆ ನೆರವೇರಿಸಿದರು.

ಮಹಾತ್ಮಗಾಂಧಿ ನಗರ ವಿಕಾಸ ಯೋಜನೆ ಪ್ಯಾಕೇಜ್, ಮಹಾನಗರ ಪಾಲಿಕೆಯ 15ನೇ ಹಣಕಾಸು ಯೋಜನೆ ಹಾಗೂ ಎಸ್‌ಎಫ್‌ಸಿ ವಿಶೇಷ ಅನುದಾನದಡಿ ಸರಸ್ವತಿಪುರಂನ ಶ್ರೀರಾಮ ಉದ್ಯಾನವನದ ಅಭಿವೃದ್ಧಿಯ ಮುಂದುವರೆದ 50 ಲಕ್ಷ ರೂ. ಕಾಮಗಾರಿ, ವಿವಿಧ ರಸ್ತೆಗಳ 65 ಲಕ್ಷ ರೂ. ಕಾಮಗಾರಿಗಳಿಗೆ ಶಾಸಕ ಎಲ್.ನಾಗೇಂದ್ರ ಗುದ್ದಲಿ ಪೂಜೆ ನೆರವೇರಿಸಿದರು. ಕುದುರೆಮಾಳದ ಉದ್ಯಾನವನ ಮತ್ತು ಮುಖ್ಯರಸ್ತೆ ಅಭಿವೃದ್ಧಿ ಕಾಮಗಾರಿ (35 ಲಕ್ಷ ರೂ.) ಮತ್ತು 40 ಲಕ್ಷ ರೂ.ಗಳ ಲಾಳ ಮುಖ್ಯರಸ್ತೆ ಅಭಿವೃದ್ಧಿ ಕಾಮಗಾರಿಗೂ ಚಾಲನೆ ನೀಡಿರುವ ಅವರು, ನಿಗದಿತ ಅವಧಿಯೊಳಗೆ ಗುಣಮಟ್ಟದಲ್ಲಿ ಕೆಲಸ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರಪಾಲಿಕೆ ಸದಸ್ಯೆ ವೇದಾವತಿ, ಮೈಸೂರು ಮಹಾನಗರಪಾಲಿಕೆ ಅಭಿವೃದ್ಧಿ ಅಧಿಕಾರಿ ಹೇಗಾನಂದ, ಗುತ್ತಿಗೆದಾರ ಕಾರ್ತಿಕ್, ಮುಖಂಡರಾದ ರಮೇಶ್, ಶಿವಶಂಕರ್, ನವೀನ್, ಬೋಗಾದಿ ನಂದೀಶ್, ಮಹದೇವ, ಪಳನಿ, ಸುಬ್ರಮಣಿ ಹಾಗೂ ಇತರರು ಈ ಸಂದರ್ಭ ಉಪಸ್ಥಿತರಿದ್ದರು.



## ಮೈಸೂರು ಹಾಗೂ ಸುತ್ತಮುತ್ತ ಇಂದು...



### ಇಂದಿನ ಪಂಚಾಂಗ

3.1.2023 ಮಂಗಳವಾರ, ಮಳೆ ನಕ್ಷತ್ರ: ಪೂಷಾ, 30.12.2022ರಿಂದ 10.01.2023
ಶ್ರೀ ಶುಭಕೃತ ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ,
ಶುಕ್ಲ ಪಕ್ಷ, ತಿಥಿ: ದ್ವಾದಶಿ, ನಕ್ಷತ್ರ: ಕೃತ್ತಿಕ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

### ಮೈಸೂರು ಆಕಾಶವಾಣಿ



**ಬೆಳಗ್ಗೆ:** 6.10 ಚಿಂತನ, 6.15 ಗೀತಾರಾಧನ, 6.35 ಶ್ರದ್ಧೆಯ ಶಿಲ್ಪ–ಮೈಸೂರು ಸುತ್ತಲಿನ ದೇಗುಲಗಳ ಪರಿಚಯ, ಪ್ರಸ್ತುತಿ– ಡಾ. ಟಿ.ಎಸ್. ಗೋಪಾಲ್, 6.40 ಅರಿವಿನ ಶಿಖರ– ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ ಸರಣಿ, ಗಾಯನ– ಮತ್ತೂರು ಕುಮಾರಸ್ವಾಮಿ, ಎನ್. ಹೇಮಾ, ಅಂಬಯ್ಯನುಲಿ, ವ್ಯಾಖ್ಯಾನ– ಕೆ.ಎಲ್. ಪದ್ಮಿನಿ ಹೆಗಡೆ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ–ದೂರ ಸರಿದರು ಕಾದಂಬರಿಯ ಪ್ರಸ್ತುತಿ– ಉಮೇಶ್.ಎಸ್., 8.30 “ಉಲಿ ಉಯ್ಯಾಲೆ” ಸರಣಿ ಪ್ರಸ್ತುತಿ– ಡಾ.ಮೈಸೂರು ಉಮೇಶ್, 10.00 ಅವಧರಿಸು ಬಾ ಅಮರನಾರೇಯಣ–ಕಾರ್ಯಕ್ರಮ ಸರಣಿ, ಸಂಶೋಧನೆ, ಆಲೇಖ ಮತ್ತು ಸಂಗೀತ ನಿರ್ದೇಶನ– ಟಿ.ಎಸ್. ವಸಂತಮಾಧವಿ, ಪರಿಕಲ್ಪನೆ ಮತ್ತು ನಿರೂಪಣೆ–ಡಾ. ಎನ್. ರಘು

**ಮಧ್ಯಾಹ್ನ:** 12.30ದೇವರನಾಮ–ಶ್ರೀ ರಕ್ಷಾ, ಆರ್.ಕೆ.ಶ್ರೀಕಂಠನ್, 1.20 ಭಾವಗೀತೆ ಗಳು–ಸಿ. ಶಶಿಕಲಾ ಚಂದ್ರಶೇಖರ್, 3.00 ವಿ.ವಿ.ಸುಬ್ರಮಣ್ಯಂ–ಹಾಡುಗಾರಿಕೆ, 4.00 ಕಥಾ ಕಲಕ್ಷೇಪ “ಬಾಲಕಾಂಡ”, ಪ್ರಸ್ತುತಿ– ವಿದ್ವಾನ್ ಆರ್. ಗುರುರಾಜುಲು ನಾಯ್ಡು, 6.50ಕೃಷಿರಂಗ–ಕಿಸಾನ್ ವಾಣಿ– ಸಮಗ್ರ ಕೃಷಿಯಲ್ಲಿನ ಅನುಭವ ಕುರಿತು ಸಿದ್ದೇಗೌಡ ಅವರೊಡನೆ ಸಂದರ್ಶನ, 9.15 ಯಕ್ಷಗಾನದ ಹಾಡುಗಳು–ಕೆ.ಜೆ. ಗಣೇಶ್ ಮತ್ತು ಸಂಗಡಿಗರು, 9.30 ಎಂ.ಜಿ. ಶ್ರೀಧರ–ನಾಗಸ್ವರ ವಾದನ, 10.00 ಗಮಕ ವ್ಯಾಖ್ಯಾನ, ವಾಚನ– ಧನ್ಯಾಪಡ್ಯಾಣ, ವ್ಯಾಖ್ಯಾನ– ಮುಳಿಯ ಶಂಕರ್ ಭಟ್

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ ಅಭಯುದಾಯಕ ಶ್ರೀ ಐಯ್ಯಪ್ಪ ಸ್ವಾಮಿ ದೇವಸ್ಥಾನಂ** : ಧನುರ್ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಲಕ್ಷಾರ್ಚನೆ ಮತ್ತು ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾ ನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನಂ, ರಾಘವೇಂದ್ರನಗರ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ** : ಆರೋಗ್ಯ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9.30 ರಿಂದ.

■ **ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಬಾಲಕಿಯರ ಪದವಿಪೂರ್ವ ಕಾಲೇಜು, ಮೈಸೂರು ಮಕ್ಕಳ ಕೂಟ:** ಕಾಲೇಜು ವಾರ್ಷಿಕೋತ್ಸವ, ಮುಖ್ಯ ಅತಿಥಿಗಳು : ಲೇಖಕರಾದ ಶ್ರೀಮತಿ ನೇಮಿಚಂದ್ರ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ನಾಗಮಲ್ಲೇಶ್, ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ ಪ್ರಾಂಶುಪಾಲ ಪ್ರೊ. ಸಾಯಿನಾಥ್ ಮಲ್ಲಿಗೆಮಾಡು, ಅಧ್ಯಕ್ಷತೆ: ಎಂಎಂಕೆ ಮತ್ತು ಎಸ್‌ಡಿಎಂ ಬಾಲಕಿಯರ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಶ್ರೀಮತಿ ನಯನಕುಮಾರಿ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.

■ **ಶ್ರೀರಂಗ ಆಯುರ್ವೇದ ಚಿಕಿತ್ಸಾ ಮಂದಿರ** : ಫಿಸ್ತುಲಾ ಮತ್ತು ಪೈಲ್ಸ್ ಆರೋಗ್ಯ ತಪಾಸಣಾ ಶಿಬಿರ, ಸ್ಥಳ: ಮಂದಿರದ ಆವರಣ, ದಟ್ಟಗಳ್ಳಿ 3ನೇ ಹಂತ, ನೇತಾಜಿ ಸರ್ಕಲ್ ಹತ್ತಿರ, ಬೆಳಗ್ಗೆ 10.30 ರಿಂದ.

■ **ಶ್ರೀ ಕಲಾನಿಕೇತನ ದೃಶ್ಯಕಲಾ ಕಾಲೇಜು** : ಮೈಸೂರು ಸಾಂಪ್ರದಾಯಿಕ ಚಿತ್ರಕಲೆಗಳ ಪ್ರದರ್ಶನ, ಉದ್ಘಾಟನೆ : ಸಂಸದ ಪ್ರತಾಪ್ ಸಿಂಹ, ಅಧ್ಯಕ್ಷತೆ : ಕರ್ನಾಟಕ ಲಲಿತಕಲಾ ಅಕಾಡೆಮಿ ನಿವೃತ್ತ ಅಧ್ಯಕ್ಷ ಡಾ. ಎಂ.ಎಸ್. ಮೂರ್ತಿ, ಮುಖ್ಯ ಅತಿಥಿಗಳು : ಕಲಾವಿದ ಕೆ.ಎಸ್. ಶ್ರೀಹರಿ, ಹಿರಿಯ ಕಲಾವಿದ ಜಿ.ಆರ್. ನೀದವಾಣಿ, ಸ್ಥಳ: ಶ್ರೀ ಕಲಾನಿಕೇತನ ಸ್ಕೂಲ್ ಆಫ್ ಆರ್ಟ್, ವಿಜಯನಗರ, ಬೆಳಗ್ಗೆ 11.30ಕ್ಕೆ.

■ **ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನ** : ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಪ್ರತಿಷ್ಠಾನದ ವಾರ್ಷಿಕೋತ್ಸವ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್, ಪ್ರತಿಭಾ ಪುರಸ್ಕಾರ ವಿತರಣೆ : ನ್ಯಾಯಮೂರ್ತಿ ಎನ್. ಸಂತೋಷ್ ಹೆಗಡೆ, ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಚನೆ : ಕೆಂಪೇಗೌಡ ಪ್ರಾಧಿಕಾರ ಆಯುಕ್ತ ಆರ್. ವಿನಯ್ ದೀಪ್, ಮುಖ್ಯ ಅತಿಥಿಗಳು : ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ, ಅಪರ ನಿಬಂಧಕ ಹೆಚ್. ಜಯದೇವ, ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಟಿ.ಜಿ. ಆದಿಶೇಷ್‌ಗೌಡ, ಅಧ್ಯಕ್ಷತೆ : ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನ ಅಧ್ಯಕ್ಷ ಮರಿಮಲ್ಲಯ್ಯ, ಸ್ಥಳ: ಕನ್ನಡ ಸಾಹಿತ್ಯ ಭವನ, ವಿಜಯನಗರ 1ನೇ ಹಂತ, ಸಂಜೆ 4ಕ್ಕೆ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ** : ವಿದುಷಿ ಬಿ.ಕೆ. ಸೀತಾಲಕ್ಷ್ಮಿ ಅವರಿಂದ ತಿರುಪ್ಪಾವೈ ಪ್ರವಚನ, ಸ್ಥಳ: ದೇವಸ್ಥಾನ ಆವರಣ, ಸಂಜೆ 6 ಗಂಟೆಗೆ.

■ **ಶ್ರೀ ಮಹಾಜನ ಸಭಾ** : ಪ್ರವಚನ ಪ್ರವೀಣ ವಿದ್ವಾನ್ ಮುಡುಂಬೈ ರಾಮಾನುಜ ಶರ್ಮ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಕೃಷ್ಣಮೂರ್ತಿಪುರಂ, ಕಾಂತರಾಜ ಅರಸು ರಸ್ತೆ, ಸಂಜೆ 6.15 ರಿಂದ.

■ **ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ, ಕೆ.ಆರ್. ವನಂ** : ಡಾ. ಎನ್.ಕೆ. ರಾಮಶೇಷನ್ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಡಾ. ಕಮಲಾ ರಾಮನ್ ಅವರ ಮಂದಿರ, ಅಂಬೇಡ್ಕರ್ ರಸ್ತೆ, ಸಂಜೆ 6.15 ರಿಂದ.

■ **ಶ್ರೀ ಆಂಡಾಳ್ ಮಂದಿರಂ** : ಧನುರ್ಮಾಸ ಪೂಜೆ, ವಿದ್ವಾನ್ ಎಂ.ಕೆ. ಶೆಲ್ವನಾರಾಯಣ ಅವರಿಂದ ತಿರುಪ್ಪಾವೈ ಪ್ರವಚನ, ಸ್ಥಳ: ಆಂಡಾಳ್ ಮಂದಿರಂ ಆವರಣ, ವಿವಿ ಮೊಹಲ್ಲಾ, ಸಂಜೆ 6ರಿಂದ 7.30 ರವರೆಗೆ.

ಮೈಸೂರು ಮಿತ್ರ



# ಮೈಸೂರು–ಬೆಂಗಳೂರು ಹೆದ್ದಾರಿಗೆ ನಾಲ್ವಡಿ ಹೆಸರಿಡುವಂತೆ ಕೇಂದ್ರ ಸಚಿವರಿಗೆ ಎಸ್.ಎಂ.ಕೃಷ್ಣ ಪತ್ರ




ಎಸ್.ಎಂ. ಕೃಷ್ಣ

**ಬೆಂಗಳೂರು:** ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇಗೆ 2ನೇ ಹೆಸರು ಮುನ್ನೆಲೆಗೆ ಬಂದಿದ್ದು, ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಹೆಸರು ಇಡುವಂತೆ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರು, ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರಿಗೆ ಪತ್ರ ಬರೆದಿದ್ದಾರೆ.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೂ ಎಸ್.ಎಂ. ಕೃಷ್ಣ ಅವರು ಪತ್ರ ಬರೆದಿದ್ದು, ಎಕ್ಸ್‌ಪ್ರೆಸ್ ವೇಗೆ ಒಡೆಯರ್ ಹೆಸರು ಇಡುವಂತೆ ಒತ್ತಾಯಿಸಿದ್ದಾರೆ. ಈ ಹಿಂದೆ ಸಂಸದ ಪ್ರತಾಪ್ ಸಿಂಹ ಅವರು ಇದೇ ಹೆದ್ದಾರಿಗೆ ಕಾವೇರಿ ನದಿ ಹೆಸರು ಇಡುವಂತೆ ನಿತಿನ್ ಗಡ್ಕರಿ ಅವರಿಗೆ ಮನವಿ ಮಾಡಿದ್ದರು. ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇಗೆ ಕಾವೇರಿ ನದಿಯ ಹೆಸರು ಇಡಬೇಕೆಂದು ಸಂಸದ ಪ್ರತಾಪ ಸಿಂಹ್ ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರಿಗೆ ಮನವಿ ಮಾಡಿದ್ದರು.

10 ಲೇನ್ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇ ಅನ್ನು ಭಾರತಮಾಲಾ ಪರಿಯೋಜನಾ ಹಂತ–ಎಲ್ ಅಡಿಯಲ್ಲಿ ನಿರ್ಮಿಸಲಾಗುತ್ತಿದೆ. ಈ ಎಕ್ಸ್‌ಪ್ರೆಸ್ ವೇ ಪ್ರಯೋಜನವು ಬಹು ಆಯಾಮಗಳಾಗಿದ್ದು, ಆರ್ಥಿಕ ಬೆಳವಣಿಗೆ, ಸಾಮಾಜಿಕ ಒಳಗೊಳ್ಳುವಿಕೆ ಮತ್ತು ಸಬಲೀಕರಣ, ಪರಿಸರ ಸಂರಕ್ಷಣೆ ಮತ್ತು ಮುಂತಾದವು ಪ್ರಮುಖ ಪ್ರಯೋಜನಗಳಿವೆ ಎಂದು ಹೇಳಿದ್ದರು.

ಅಲ್ಲದೇ ಉತ್ತರ ಪ್ರದೇಶದ ಯಮುನಾ ಎಕ್ಸ್‌ಪ್ರೆಸ್‌ವೇ, ಗಂಗಾ ಎಕ್ಸ್‌ಪ್ರೆಸ್ ವೇ, ಮಧ್ಯ ಪ್ರದೇಶದ ನರ್ಮದಾ ಎಕ್ಸ್‌ಪ್ರೆಸ್ ವೇನಂತೆಯೇ ಮೈಸೂರು–ಬೆಂಗಳೂರು ಹೈವೇಗೆ ಕಾವೇರಿ ಎಕ್ಸ್‌ಪ್ರೆಸ್ ವೇ ಎಂದು ಹೆಸರಿಡುವಂತೆ ಪ್ರತಾಪ್ ಸಿಂಹ ಮನವಿ ಮಾಡಿಕೊಂಡಿದ್ದರು. ದಶಪಥ ಹೆದ್ದಾರಿಯಿಂದಾಗಿ ಮೈಸೂರು–ಬೆಂಗಳೂರು ಮಧ್ಯದ ಸುಮಾರು 140 ಕಿ.ಮೀ. ದೂರದ ಪ್ರಯಾಣ ವ್ಯಾಪ್ತಿಯನ್ನು ಕೇವಲ 90 ನಿಮಿಷದಲ್ಲಿ ಕ್ರಮಿಸಬಹುದಾಗಿದೆ. ಸದ್ಯ ಇವೆರಡು ನಗರದ ನಡುವಿನ ಸಂಚಾರ ಸಮಯ ಮೂರು ಗಂಟೆ ಹಿಡಿಯುತ್ತಿದೆ. ಕಾಮಗಾರಿ ಬಳಿಕ ಪ್ರಯಾಣ ಸಮಯ ಅರ್ಧದಷ್ಟು ಕಡಿಮೆ ಆಗಲಿದೆ ಎಂದು ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಈ ಹಿಂದೆ ತಿಳಿಸಿದ್ದರು.



ನಾಲ್ವಡಿ ಕೃಷ್ಣರಾಜ ಒಡೆಯರ್



ಮೈಸೂರು–ಬೆಂಗಳೂರು ದಶಪಥ ಹೆದ್ದಾರಿಯ ನೋಟ.

## 'ನಾಲ್ವಡಿ' ನಾಮಕರಣಕ್ಕೆ ಪ್ರಸಾದ್ ಸಹಮತ



ಮೈಸೂರು,ಜ.2(ಎಂಟಿವೈ)–ಮೈಸೂರು–ಬೆಂಗಳೂರು ನಡುವಿನ ದಶಪಥ ರಸ್ತೆಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಹೆಸರು ಇಡುವುದಕ್ಕೆ ನನ್ನ ಸಹಮತವಿದೆ ಎಂದು ಸಂಸದ ವಿ.ಶ್ರೀನಿವಾಸ್‌ಪ್ರಸಾದ್ ತಿಳಿಸಿದ್ದಾರೆ

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಹಳೇ ಮೈಸೂರು ಭಾಗಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ನೀಡಿರುವ ಕೊಡುಗೆ ಅಪಾರ. ಯಾರು ಕೊಡುಗೆ, ನೆರವು ನೀಡಿದ್ದಾರೋ ಅವರನ್ನು ಸ್ಮರಿಸಬೇಕಾದದ್ದು ನಮ್ಮ ಧರ್ಮ. ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರು ದಶಪಥ ರಸ್ತೆಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಹೆಸರು ಇಡುವಂತೆ ಸಲಹೆ ನೀಡಿರುವುದು ಸಮಂಜಸವಾಗಿದೆ. ಅದಕ್ಕೆ ನನ್ನ ಸಹಮತವೂ ಇದೆ. ಇದಕ್ಕೆ ಯಾರೂ ಕೂಡ ವಿರೋಧಿಸಲ್ಲ ಎಂದರು.

ಮೀಸಲಾತಿ ಹೆಚ್ಚಳ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಈಗಾಗಲೇ ಮುಖ್ಯಮಂತ್ರಿಗಳು ಹೇಳಿಕೆ ನೀಡಿ ಯಾವುದೇ ಸಮುದಾಯಕ್ಕೆ ಅನ್ಯಾಯ ಮಾಡದಂತೆ ಮೀಸಲಾತಿ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಪಂಚಮಸಾಲಿ ಹಾಗೂ ಒಕ್ಕಲಿಗರು ಮೀಸಲಾತಿ ಹೆಚ್ಚಳ ಬೇಡಿಕೆ ಇಟ್ಟಿದ್ದಾರೆ. ಆದರೆ, ಓಬಿಸಿಗೆ ತೊಂದರೆಯಾಗದಂತೆ ಮೀಸಲಾತಿ ಹೆಚ್ಚಳ ಮಾಡಿದ್ದಾರೆ. ಮೀಸಲಾತಿ ಎಂಬುದು ಹಿಂದುಳಿದ ವರ್ಗಕ್ಕೆ ನೀಡಲಾಗುತ್ತಿದ್ದು, ಹಿಂದುಳಿದ ವರ್ಗಗಳ ಆಯೋಗದ ಶಿಫಾರಸ್ಸು ತೆಗೆದುಕೊಂಡು ಬೇಡಿಕೆಗೆ ಅನುಗುಣವಾಗಿ ಕ್ರಮ ಕೈಗೊಂಡಿದ್ದಾರೆ ಎಂದು ತಿಳಿಸಿದರು.

# ಅರಬ್ಬಿತಿಟ್ಟಲ್ಲಿ ಮತ್ತೊಂದು ಸಲಗ ಸೆರೆ

● ರೇಡಿಯೋ ಕಾಲರ್ ಅಳವಡಿಸಿ ನಾಗರಹೊಳೆಯಲ್ಲಿ ಬಿಡುಗಡೆ ● ನಾಲ್ಕು ದಿನದಲ್ಲಿ ಮೂರು ಆನೆ ಸೆರೆ ಹಿಡಿದ ಅರಣ್ಯ ಸಿಬ್ಬಂದಿ ● ತಿಂಗಳಿಂದ ಕಾಡುತ್ತಿದ್ದ ಆನೆ ಸೆರೆಯಿಂದ ನಿಟ್ಟುಸಿರು ಬಿಟ್ಟ ಜನತೆ



ಬಿಳಿಕೆರೆ ಸಮೀಪದ ಅರಬ್ಬಿತಿಟ್ಟು ಪ್ರದೇಶದಲ್ಲಿ ಸೆರೆ ಹಿಡಿದ ಕಾಡಾನೆ.



ಸೆರೆ ಹಿಡಿದ ಬಳಿಕ ರೇಡಿಯೋ ಕಾಲರ್ ಅಳವಡಿಸುತ್ತಿರುವುದು.

ಮೈಸೂರು,ಜ.2(ಎಂಟಿವೈ)– ಮೈಸೂರು, ಹುಣಸೂರು, ಕೆ.ಆರ್.ನಗರ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಭೀತಿ ಹುಟ್ಟಿಸಿ, ಕೊನೆಗೆ ಅರಬ್ಬಿತಿಟ್ಟು ಪ್ರದೇಶ ಹೊಕ್ಕಿದ್ದ ಮತ್ತೊಂದು ಸಲಗನನ್ನು ಸುರಕ್ಷಿತವಾಗಿ ಸೆರೆ ಹಿಡಿದು, ರೇಡಿಯೋ ಕಾಲರ್ ಅಳವಡಿಸಿ ನಾಗರಹೊಳೆ ಅಭಯಾರಣ್ಯದಲ್ಲಿ ಬಿಡುಗಡೆ ಮಾಡಿದ್ದಾರೆ.

ಹುಣಸೂರು ತಾಲೂಕಿನ ಅರಬ್ಬಿತಿಟ್ಟು ಪ್ರದೇಶ ಸೇರಿ ಸುತ್ತಮುತ್ತಲ ರೈತರು ಹೊಲಗಳಲ್ಲಿ ಬೆಳೆದಿದ್ದ ಫಸಲನ್ನು ತಿಂದು, ಹಾಳು ಮಾಡಿ ನಾನಾ ರೀತಿ ಉಪಟಳ ನೀಡುವುದರೊಂದಿಗೆ ಸ್ಥಳೀಯರಲ್ಲಿ ಭಯದ ವಾತಾವರಣ ಉಂಟು ಮಾಡಿದ್ದ ಎರಡು ಗಂಡಾನೆಗಳನ್ನು ಕೊನೆಗೂ ಅರಣ್ಯ ಇಲಾಖೆ ಸೆರೆ ಹಿಡಿದು, ಸ್ಥಳಾಂತರ ಮಾಡಿರುವುದರಿಂದ ಸ್ಥಳೀಯರು ನಿಟ್ಟುಸಿರು ಬಿಟ್ಟಿದ್ದಾರೆ. ಅರಬ್ಬಿತಿಟ್ಟು ಸೇರಿದ್ದ ಎರಡು ಗಂಡಾನೆಗಳಲ್ಲಿ ಒಂದನ್ನು ಡಿ.31ರಂದು ಸಂಜೆ ಸೆರೆ ಹಿಡಿಯಲಾಗಿತ್ತು, ಮತ್ತೊಂದು ಆನೆ ಸೆರೆಗೆ ಸೋಮವಾರ ಬೆಳಗ್ಗೆ ಕಾರ್ಯಾಚರಣೆ ಆರಂಭಿಸಿ, ಮಧ್ಯಾಹ್ನದ ವೇಳೆ 30 ವರ್ಷದ ಸಲಗನನ್ನು ಸೆರೆ ಹಿಡಿದು, ಸಂಜೆ ಬಿಡುಗಡೆ ಮಾಡಲಾಯಿತು.

ಕಳೆದ ಒಂದೂವರೆ ತಿಂಗಳ ಹಿಂದೆಯೇ ಅರಣ್ಯ ಪ್ರದೇಶದಿಂದ ಹೊರ ಬಂದಿದ್ದ ಈ ಎರಡು ಗಂಡಾನೆ, ಮೈಸೂರು ತಾಲೂಕಿನ ಜಯಪುರ, ಶೀಳನಕೆರೆ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕಾಣಿಸಿಕೊಂಡು ರೈತರ ಬೆಳೆ ಹಾನಿಯುಂಟು ಮಾಡಿದ್ದವು. ಅರಣ್ಯ ಪ್ರದೇಶಕ್ಕೆ ಅಟ್ಟಲು ಅರಣ್ಯ ಇಲಾಖೆ ಕೂಂಬಿಂಗ್ ಕಾರ್ಯಾಚರಣೆ ನಡೆಸಿತ್ತು. ಆದರೆ, ಆ ಆನೆಗಳು ಅರಣ್ಯ ಸಿಬ್ಬಂದಿ ಕಣ್ತಪ್ಪಿಸಿ ಹುಣಸೂರು ವಿಭಾಗದ ಅರಬ್ಬಿತಿಟ್ಟು ಅರಣ್ಯ ಪ್ರದೇಶಕ್ಕೆ ಹೊಕ್ಕಿದ್ದವು. ಬಳಿಕ ಅಲ್ಲಿಂದ ಕೆ.ಆರ್.ನಗರದ ಸುತ್ತಮುತ್ತ ಕಾಣಿಸಿಕೊಂಡಿದ್ದವು. ಆದರೆ, ಮತ್ತೆ ಕೆ.ಆರ್.ನಗರದಿಂದ ಅರಬ್ಬಿತಿಟ್ಟು ಪ್ರದೇಶಕ್ಕೆ ವಾಪಸ್ಸಾಗಿ ಸುತ್ತಮುತ್ತಲಿನ ಗ್ರಾಮಸ್ಥರಲ್ಲಿ ಭಯದ ವಾತಾವರಣ ನಿರ್ಮಿಸಿತ್ತು. ಒಂದೂವರೆ ತಿಂಗಳಿಂದಲೂ ಮೂರು ತಾಲೂಕುಗಳ 30ಕ್ಕೂ ಹೆಚ್ಚು ಗ್ರಾಮಗಳಿಗೆ ಸೇರಿದ ಜಮೀನುಗಳಲ್ಲಿ ಅಡ್ಡಾಡಿದ್ದರೂ, ಜನರ ಮೇಲೆ ಎಲ್ಲಿಯೂ ದಾಳಿ ನಡೆಸಿರಲಿಲ್ಲ.

ಮುಂಜಾಗ್ರತಾ ಕ್ರಮವಾಗಿ ಎರಡು ಆನೆಗಳನ್ನು ಸೆರೆ ಹಿಡಿದು ಸ್ಥಳಾಂತರ ಮಾಡುವಂತೆ ಹಿರಿಯ ಅಧಿಕಾರಿಗಳು ಸೂಚನೆ ನೀಡಿದ್ದರಿಂದ ಅಂತಿಮವಾಗಿ ಅರವಳಿಕೆ ಮದ್ದು ನೀಡಿ ಸೆರೆ ಹಿಡಿಯಲು ನಿರ್ಧರಿಸಿ ಡಿ.29ರಂದು ಕೂಂಬಿಂಗ್ ಸ್ಪೆಷಲಿಸ್ಟ್ ಅಭಿಮನ್ಯು ನೇತೃತ್ವದಲ್ಲಿ ದಸರಾ ಆನೆಗಳಾದ ಭೀಮಾ, ಮಹೇಂದ್ರ, ಪ್ರಶಾಂತ್ ಹಾಗೂ ಗಣೇಶ ಸಾಕಾನೆಗಳನ್ನು ಅರಬ್ಬಿತಿಟ್ಟು ಅರಣ್ಯಕ್ಕೆ ಕರೆಸಲಾಗಿತ್ತು. ಮರು ದಿನ (ಡಿ.30) ವಕ್ರ ದಂತವುಳ್ಳ ಒಂಟಿ ಸಲಗ ಅನಿರೀಕ್ಷಿತ ದಾಳಿ ನಡೆಸಿ ಮಹಿಳೆಯನ್ನು ಬಲಿ ಪಡೆದ ಹಿನ್ನೆಲೆಯಲ್ಲಿ ಪುಂಡಾಟ ಮೆರೆದಿದ್ದ ಒಂಟಿ ಸಲಗನನ್ನು ಸೆರೆ ಕಾರ್ಯಾಚರಣೆ ನಡೆಸಿ, ಯಶಸ್ವಿಯಾಗಿದ್ದರು. ಮರುದಿನ(ಡಿ.31) ಅರಬ್ಬಿತಿಟ್ಟಲಿದ್ದ 30 ವರ್ಷದ ಗಂಡಾನೆಯನ್ನು ಸೆರೆ ಹಿಡಿದು, ಸ್ಥಳಾಂತರಿಸಲಾಗಿತ್ತು. ಜ.1ರಂದು ಸಿಬ್ಬಂದಿಗೆ ವಿಶ್ರಾಂತಿ ನೀಡಲಾಗಿತ್ತು. ಇಂದು ಬೆಳಗ್ಗೆ ಕಾರ್ಯಾಚರಣೆ ಆರಂಭಿಸಿ, ಆನೆ ಪತ್ತೆ ಮಾಡಿ, ಮಧ್ಯಾಹ್ನ 12 ಗಂಟೆಗೆ ಅರವಳಿಕೆ ಮದ್ದನ್ನು ಡಾಟ್ ಮಾಡಿ, ನಿದ್ರಾ ಮಂಪರಿಗೆ ಜಾರಿದ ಬಳಿಕ ಹಗ್ಗ ಬಿಗಿದು, ಸಾಕಾನೆಗಳ ನೆರವಿನಿಂದ ಅರಣ್ಯ ಪ್ರದೇಶದಿಂದ ಹೊರಗೆ ಎಳೆದು ತಂದು ರೇಡಿಯೋ ಕಾಲರ್ ಅಳವಡಿಸಲಾಯಿತು. ಕ್ರೇನ್ ಸಹಾಯದಿಂದ ಲಾರಿಯಲ್ಲಿ ತುಂಬಿ, ಸಾಗಿಸಿ ಸಂಜೆ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಬಿಡುಗಡೆ ಮಾಡಲಾಯಿತು. ಈ ವೇಳೆ ಹುಣಸೂರು ವಿಭಾಗದ ಡಿಸಿಎಫ್ ಹಾಗೂ ಎಲಿಫ್ಯಾಂಟ್ ಟಾಸ್ಕ್‌ಫೋರ್ಸ್ ಇಂಚಾರ್ಜ್ ಪಿ.ಎ.ಸೀಮಾ, ಎಸಿಎಫ್ ಅನುಷಾ, ಆರ್‌ಎಫ್‌ಓ ನಂದಕುಮಾರ್, ಪಶು ವೈದ್ಯರಾದ ಡಾ.ರಮೇಶ್, ಡಾ.ಮುಜೀಬ್, ಗುರಿಕಾರ ಅಕ್ರಮ್ ಹಾಗೂ ಡಿಆರ್‌ಎಫ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

### 2 ಆನೆ ಸೆರೆ, ಸ್ಥಳಾಂತರ

"ಅರಬ್ಬಿತಿಟ್ಟಲ್ಲಿ ಬೀಡು ಬಿಟ್ಟಿದ್ದ 2 ಆನೆಗಳ ಸುರಕ್ಷಿತವಾಗಿ ಸೆರೆ ಹಿಡಿದು, ನಾಗರಹೊಳೆ ಅರಣ್ಯ ಪ್ರದೇಶದಲ್ಲಿ ಬಿಡುಗಡೆ ಮಾಡಲಾಗಿದೆ. ಸ್ಥಳೀಯ ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದರಿಂದ ಆನೆಗಳನ್ನು ಸೆರೆ ಹಿಡಿದು ರೈತರ ಹಿತ ಕಾಪಾಡಲಾಗಿದೆ. ಸತತವಾಗಿ ಮೂರು ಆನೆಗಳನ್ನು ಸೆರೆ ಹಿಡಿಯುವಲ್ಲಿ ತಮ್ಮ ತಂಡ ಯಶಸ್ವಿಯಾಗಿದೆ. –ಪಿ.ಎ.ಸೀಮಾ, ಡಿಸಿಎಫ್



ಡಿ.30ರಂದು ದೈವಾಧೀನರಾದ ಶತಾಯುಷಿ ಶ್ರೀಮತಿ ಹೀರಾ ಬೆನ್ ಅವರ ಅಂತ್ಯ ಸಂಸ್ಕಾರದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳು ಭಾಗವಹಿಸಿ, ಅಂತಿಮ ಗೌರವ ಸಲ್ಲಿಸಿ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರಲ್ಲದೆ ಅವರ ಸಹೋದರರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ರಾಷ್ಟ್ರಕವಿ ಕುವೆಂಪು ಜನ್ಮ ದಿನಾಚರಣೆ



ಮೈಸೂರು,ಜ.2–ಕರ್ನಾಟಕ ರತ್ನ ಕುವೆಂಪು ಜನ್ಮ ದಿನಾಚರಣೆ ಅಂಗವಾಗಿ ಶಕ್ತಿನಗರ ಬಡಾವಣೆಯ ವಿಜಯಕುಮಾರ್ ಪಾರ್ಕ್ ಮುಂಭಾಗ ಶಕ್ತಿನಗರ ಬಡಾವಣೆ ನಿವಾಸಿಗಳ ವೇದಿಕೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಅರ್ಥಪೂರ್ಣವಾಗಿ ಆಚರಿಸಿದರು.

ಸರಳವಾಗಿ ನಡೆದ ಕಾರ್ಯಕ್ರಮದಲ್ಲಿ ಬಡಾವಣೆ ನಿವಾಸಿಗಳು ಕುವೆಂಪು ರಚಿತ ಕವಿತೆಗಳನ್ನು ಹಾಡಿದರು. ನಂತರ ಕಾರ್ಯಕ್ರಮಕ್ಕೆ ಬಂದಿದ್ದ ನಿವಾಸಿಗಳಿಗೆ ಮೈಕ್ ಪ್ರಕಾಶ್ ಅವರು ಕನ್ನಡ ಪುಸ್ತಕಗಳನ್ನು ವಿತರಿಸಿದರು. ವಿದ್ಯಾರ್ಥಿಗಳಿಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಈ ವೇಳೆ ಮಹಾಬಲರಾಜ್, ವೆಂಕಟೇಶ್, ಬೆಮೆಲ್ ಬಸವರಾಜ್, ಉಮಾ ಪ್ರಕಾಶ್, ಪಾರ್ವತಿ ಒಟ್ಟಂ, ರಾಜೇಶ್ವರಿ, ವಿನೋಧ್, ತುಳಸಿ ಅಂಕಯ್ಯ, ರುಕ್ಮಿಣಿ ಇನ್ನಿತರರು ಉಪಸ್ಥಿತರಿದ್ದರು.

## ಡಾ.ಪೂರ್ಣಿಮಾ ಉಮೇಶ್‌ಗೆ 'ಕವಿ ವಿಭೂಷಣ' ಪ್ರಶಸ್ತಿ



ಮೈಸೂರು, ಜ.2– ಬೆಳಗಾವಿ ಸಿರಿಗನ್ನಡ ವೇದಿಕೆ ವತಿಯಿಂದ ರಾಷ್ಟ್ರಮಟ್ಟದ 'ಕವಿ ವಿಭೂಷಣ' ಪ್ರಶಸ್ತಿಗೆ ಆಯೋಜಿಸಿದ್ದ ಆನ್‌ಲೈನ್ ಕವಿತೆ ವಾಚನ ಸ್ಪರ್ಧೆಯಲ್ಲಿ ಮೈಸೂರು ಸಂತ ಫಿಲೋಮಿನಾ ಕಾಲೇಜು ಕನ್ನಡ ವಿಭಾಗ ಸಹಾಯಕ ಪ್ರಾಧ್ಯಾಪಕಿ ಡಾ.ಪೂರ್ಣಿಮಾ ಉಮೇಶ್, ಭಾಗವಹಿಸಿ, 'ಸ್ವಾತಂತ್ರ್ಯತೆಯ ಮೌಲ್ಯ' ಸ್ವ ರಚಿತ ಕವನ ವಾಚಿಸಿ ರಾಷ್ಟ್ರಮಟ್ಟದ 'ಕವಿ ವಿಭೂಷಣ' ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಈಗಾಗಲೇ ವಿವಿಧ ವೇದಿಕೆಗಳಲ್ಲಿ ಕವಿತೆಗಳನ್ನು ವಾಚನ ಮಾಡಿರುವ ಪೂರ್ಣಿಮಾ ಅವರು, 10ಕ್ಕೂ ಹೆಚ್ಚು ರಾಷ್ಟ್ರ ಪ್ರಶಸ್ತಿಗಳು ಸಂದಿವೆ. 10ಕ್ಕೂ ಕವನ ಸಂಕಲನಗಳನ್ನು ಹೊರ ತಂದಿದ್ದಾರೆ. 30ಕ್ಕೂ ಹೆಚ್ಚು ಪ್ರಬಂಧ ಮಂಡನೆಗೆ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಪ್ರಶಸ್ತಿಯನ್ನು ಪಡೆದಿರುವುದಾಗಿ ಡಾ.ಪೂರ್ಣಿಮಾ ಉಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ವಾರಿ ಮಾಲೀಕರ ಮುಷ್ಕರ: ಏರೋ ಇಂಡಿಯಾ ಕಾಮಗಾರಿ ಮೇಲೆ ಪರಿಣಾಮ

**ಬೆಂಗಳೂರು:** ಫೆಬ್ರವರಿ 13ರಂದು ಆರಂಭವಾಗಲಿರುವ ಏರೋ ಇಂಡಿಯಾದ ಸಿದ್ಧತೆಗಳು ಭರದಿಂದ ಸಾಗುತ್ತಿದ್ದು, ನಿಗದಿತ ಅವಧಿಗೂ ಮುನ್ನವೇ ಕಾಮಗಾರಿಗಳನ್ನು ಮುಗಿಸಲು ಯತ್ನಗಳು ಮುಂದುವರೆದಿರುವ ನಡುವಲ್ಲೇ, ಕಾಮಗಾರಿಗೆ ನಿರ್ಮಾಣ ಸಾಮಗ್ರಿಗಳ ಕೊರತೆ ಎದುರಾಗಿದೆ. ಕ್ವಾರಿ ಮತ್ತು ಕಲ್ಲು ಪುಡಿ ಮಾಡುವ ಘಟಕಗಳ ಮಾಲೀಕರು ಕೆಲವು ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಿ ಮುಷ್ಕರ ನಡೆಸುತ್ತಿದ್ದು, ಇದರಿಂದ ಕಾಮಗಾರಿ ಕಾರ್ಯಕ್ಕೆ ತೀವ್ರ ಹಿನ್ನಡೆಯುಂಟಾದಂತಾಗಿದೆ. ಏರೋ ಇಂಡಿಯಾ ಸ್ಥಳವಾದ ಯಲಹಂಕ ಏರ್ ಫೋರ್ಸ್ ಸ್ಟೇಷನ್‌ನಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ನೂರಾರು ಲೋಡ್ ಜೆಲ್ಲಿ ಕಲ್ಲು, ಎಂ–ಸ್ಯಾಂಡ್ ಮತ್ತು ಇತರ ನಿರ್ಮಾಣ ಸಾಮಗ್ರಿಗಳ ಅಗತ್ಯವಿದೆ ಎಂದು ಮೂಲಗಳು ತಿಳಿಸಿವೆ.

# ಚಾಮರಾಜ ಕ್ಷೇತ್ರದಲ್ಲಿ ಬೂತ್ ವಿಜಯ ಅಭಿಯಾನಕ್ಕೆ ಶ್ರೀನಿವಾಸಪ್ರಸಾದ್ ಚಾಲನೆ



ಮೈಸೂರು,ಜ.2(ಎಂಟಿವೈ)–ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಮತದಾರರನ್ನು ಸೆಳೆಯಲು ಬೂತ್ ಮಟ್ಟದ ಸಮಿತಿ ರಚಿಸುವುದರೊಂದಿಗೆ ಪ್ರತಿಯೊಬ್ಬ ಕಾರ್ಯಕರ್ತರು ತಮ್ಮ ಮನೆ ಮೇಲೆ ಕಡ್ಡಾಯವಾಗಿ ಪಕ್ಷದ ಬಾವುಟ ಹಾರಿಸಬೇಕು ಎಂದು ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಸಲಹೆ ನೀಡಿದ್ದಾರೆ.

ಚಾಮರಾಜ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಕಾಳಿದಾಸ ರಸ್ತೆಯ ರಾಘವೇಂದ್ರಸ್ವಾಮಿ ಮಠದ ಬಳಿ ಇರುವ ವಾರ್ಡ್ ನಂ.19ರ ಬೂತ್ ನಂ.119ರ ಮನೆಯಲ್ಲಿ ಬಾವುಟ ಕಟ್ಟುವ ಮೂಲಕ ಬೂತ್ ವಿಜಯ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ 58,185 ಬೂತ್‌ಗಳಿದ್ದು, ಪ್ರತಿ ಬೂತ್‌ಗಳಲ್ಲಿ ಮನೆ ಮನೆ ಸಂಪರ್ಕ ಮಾಡಲು ಬೂತ್ ಸಮಿತಿ ರಚಿಸಿ, ಸದಸ್ಯರ ಮೂಲಕ ಪರಿಶೀಲನೆ ಮಾಡಬೇಕು. ಮತದಾರರ ಪಟ್ಟಿಯಲ್ಲಿ ಪ್ರತಿ ಪೇಜ್‌ಗಳನ್ನು ಗಮನಿಸಲು ಒಬ್ಬರನ್ನು ನಿಯೋಜಿಸಬೇಕು. ಪೇಜ್ ಪ್ರಮುಖರ ಜವಾಬ್ದಾರಿ ಹೆಚ್ಚಾಗಿರುತ್ತದೆ. ಪ್ರತಿ ಮತಗಟ್ಟೆ ವ್ಯಾಪ್ತಿಯಲ್ಲಿ ಜನರ ಸಮಸ್ಯೆ ಆಲಿಸಲು ವಾಟ್ಸಾಪ್ ಗ್ರೂಪ್ ರಚಿಸಬೇಕು. ಪ್ರತಿ ಕಾರ್ಯಕರ್ತರ ಮನೆಯ ಮೇಲೆ ಕಡ್ಡಾಯವಾಗಿ ಬಿಜೆಪಿ ಬಾವುಟ ಹಾರಿಸಬೇಕು. ತಿಂಗಳ ಕೊನೆ ಭಾನುವಾರ ಕಡ್ಡಾಯವಾಗಿ ಬೂತ್‌ನ ಎಲ್ಲಾ ಸದಸ್ಯರು ಒಟ್ಟಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮನದಾಳದ ಮಾತಾದ ಮನ್ ಕೀ ಬಾತ್ ಕೇಳಬೇಕು ಎಂದು ಸಲಹೆ ನೀಡಿದರು.

ಶಾಸಕ ಎಲ್.ನಾಗೇಂದ್ರ ಮಾತನಾಡಿ, ರಾಜ್ಯದ 224 ಕ್ಷೇತ್ರಗಳಲ್ಲಿ ನಡೆಸುತ್ತಿರು ವಂತೆ ಚಾಮರಾಜ ಕ್ಷೇತ್ರದಲ್ಲೂ 245 ಬೂತ್‌ಗಳಲ್ಲೂ ಬೂತ್ ವಿಜಯ ಅಭಿಯಾನ ನಡೆಸಲಾಗುತ್ತಿದೆ. ಕ್ಷೇತ್ರದ ಎಲ್ಲಾ ಬೂತ್ ವ್ಯಾಪ್ತಿಯಲ್ಲಿ ಬರುವ ಕಾರ್ಯಕರ್ತರ ಮನೆಯಲ್ಲಿ ಕಡ್ಡಾಯವಾಗಿ ಬಾವುಟವನ್ನು ಹಾರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಕ್ಷೇತ್ರದ ಅಧ್ಯಕ್ಷ ಸೋಮಶೇಖರ ರಾಜು, ಮುಡಾ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಮುಖಂಡರಾದ ಜಯಪ್ರಕಾಶ್, ಪಾಲಿಕೆ ಸದಸ್ಯರಾದ ಸುಬ್ಬಣ್ಣ, ವೇದಾವತಿ, ಪ್ರಮೀಳಾ ಭರತ್, ರಂಗಸ್ವಾಮಿ, ಸತೀಶ್, ರವೀಂದ್ರ, ಚಿಕ್ಕ ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ರಮೇಶ್, ಪುನೀತ್, ಮಾಧ್ಯಮ ಸಂಚಾಲಕ ಮಹೇಶ್‌ರಾಜ್ ಅರಸ್, ಸೋಮಸುಂದರ್, ಬೂತ್ ಅಧ್ಯಕ್ಷ ಶಿವಪ್ರಕಾಶ್, ಹೇಮಾ ನಂದೀಶ್, ಸೂರಜ್, ತನುಜಾ, ಸಚ್ಚಿನ್, ಸಂಜೀವ್, ದಿನೇಶ್, ಅನೂಜ್, ಉಮೇಶ್, ಬಾಬು, ಜೀವಧಾರ ಗಿರೀಶ್ ಇನ್ನಿತರರು ಪಾಲ್ಗೊಂಡಿದ್ದರು.

## ನಕ್ಕರೆ ಅದೇ ಸ್ವರ್ಗ

ಮಾಸ್ಟರ್ : 6 ರೂ. ರವೆ, 8 ರೂ. ಸಕ್ಕರೆ, 10 ರೂ. ತುಪ್ಪ ಎಲ್ಲಾ ಸೇರಿದರೆ ಆಗುವ ಮೊತ್ತವೆಷ್ಟು?

ವಿದ್ಯಾರ್ಥಿ : ರವೆ ಉಂಡೆ ಸಾರ್!

ಮೈಸೂರು ಮಿತ್ರ

ಮಂಗಳವಾರ, 3 ಜನವರಿ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

**ಅಮೃತವಾಹಿನಿ.........**

ಬೇರೆಯವರ ಗಟ್ಟಿ ಧ್ವನಿಗಳು ನಿಮ್ಮ ಒಳದನಿಯನ್ನು ಅಡಗಿಸಲು ಬಿಡಬೇಡಿ. ನಿಮ್ಮ ಹೃದಯ ಮತ್ತು ಸ್ಫೂರ್ತಿಯ ಮಾತುಗಳನ್ನು ಅನುಸರಿಸಿ. –ಬಿಲ್ ಗೇಟ್ಸ್

**ವೇದ ಸುಳ್ಳಾದರೂ ಗಾದೆ ಸುಳ್ಳಾಗದು** { ಮಣದಷ್ಟು ಮಾತಿಗಿಂತ ಕಣದಷ್ಟು ಕೆಲಸ ಲೇಸು

## ನಿಮ್ಮ ಪತ್ರಗಳು

### ಮಹಾದಾಯಿಗೆ ಕೇಂದ್ರದ ಹಸಿರು ನಿಶಾನೆ

ಮಾನ್ಯರೆ,

ಕಳಸಾ ಬಂಡೂರಿ ವಿಸ್ತೃತ ಯೋಜನಾ ವರದಿಗೆ ಕೇಂದ್ರ ಜಲ ಆಯೋಗ ಹಸಿರು ನಿಶಾನೆ ತೋರಿಸಿರುವುದು ಮತ್ತು ಉತ್ತರ ಕರ್ನಾಟಕ ಭಾಗದ ಜನರ ಬಹು ಕಾಲದ ಬೇಡಿಕೆಯನ್ನು ನೆರವೇರಿಸಿರುವುದು ಸ್ವಾಗತಾರ್ಹ. ಇದು ರೈತರ, ಕಾರ್ಮಿಕರ, ಕನ್ನಡಪರ, ಎಲ್ಲಾ ಸಂಘಟನೆಗಳ ಸಮಸ್ತ ಕನ್ನಡಿಗರ ಹೋರಾಟಕ್ಕೆ ದೊರೆತ ಜಯ. ತಕ್ಷಣವೇ ಟೆಂಡರ್ ಪ್ರಕ್ರಿಯೆ ಆರಂಭಿಸಿ ನಾನೇ ಅಡಿಗಲ್ಲು ಹಾಕಿ ಕಾಮಗಾರಿ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜು ಬೊಮ್ಮಾಯಿ ಅವರು ಬೆಳಗಾವಿಯ ಅಧಿವೇಶನದಲ್ಲಿ ತಿಳಿಸಿರುವುದು ಖುಷಿಯ ಸಂಗತಿ. ಜಲ ಆಯೋಗವು ಹೇಳಿರುವ ಕೆಲವು ಷರತ್ತುಗಳನ್ನು ಕಟ್ಟು ನಿಟ್ಟಾಗಿ ಪಾಲಿಸಬೇಕು ಎಂದು ಹೇಳಿರುವ ವಿಷಯವನ್ನು ಯಥಾವತ್ತಾಗಿ ಪಾಲಿಸಿ ಕಾಮಗಾರಿಗೆ ಯಾವುದೇ ತೆರನಾದ ಅಡೆ ತಡೆಗಳು ಬರದಂತೆ ಸೂಕ್ತ ಕ್ರಮ ಕೈಗೊಂಡು ಉತ್ತರ ಕರ್ನಾಟಕದ ಜನರು ಆದಷ್ಟು ಬೇಗ ಅದರ ಸದುಪಯೋಗ ಪಡಿಸಿಕೊಳ್ಳಲು ವಿಳಂಬ ಮಾಡದೆ ತ್ವರಿತವಾಗಿ ಕ್ರಮಕೈಗೊಳ್ಳಬೇಕು.

–ಬೆಸಗರಹಳ್ಳಿ ರವಿಪ್ರಸಾದ್, ಕೆ.ಸಿ.ನಗರ, ಮೈಸೂರು

### ನಾಗೇಂದ್ರರವರೇ ಸದ್ಯಕ್ಕೆ ಗುದ್ದಲಿಪೂಜೆ ನಿಲ್ಲಿಸಿ, ನಿಂತಿರುವ ಕಾಮಗಾರಿ ಮುಗಿಸಿ...!


ಮಾನ್ಯರೇ,

ಚಾಮರಾಜ ಕ್ಷೇತ್ರದ ಶಾಸಕರಾದ ಎಲ್. ನಾಗೇಂದ್ರ ಅವರು ಕ್ಷೇತ್ರದ ಹಲವೆಡೆ ಕಳೆದ ಆರು ತಿಂಗಳಿಂದ ಸರದಿಯಂತೆ ಗುದ್ದಲಿಪೂಜೆ, ಶಂಕುಸ್ಥಾಪನೆ ಮಾಡುತ್ತಾ ಬಂದಿದ್ದಾರೆ. ಆದರೆ ಇಂತಹ ಕಾಮಗಾರಿಗಳು ಕೆಲವು ಆರಂಭವೇ ಆಗಿಲ್ಲ. ಮತ್ತೆ ಕೆಲವು ಅರೆಬರೆಯಾಗಿವೆ. ಕೆಲವಂತೂ ನಿಂತು ಹೋಗಿವೆ. ಇಂತಹ ಕಾಮಗಾರಿಯ ಕರ್ಮಕಾಂಡವನ್ನು ಅಲ್ಲಿನ ಜನ ಅನುಭವಿಸುತ್ತಿದ್ದಾರೆ. ಇವರ ಒಳ ಚರಂಡಿ, ರಸ್ತೆ, ಮಳೆ ನೀರು ಚರಂಡಿ ಕಾಮಗಾರಿಯಿಂದ ನಾನಾ ಕಷ್ಟವನ್ನು ಜನ ಅನುಭವಿಸುವಂತಾಗಿದೆ. ಮೊದಲು ತಾವು ಎಲ್ಲೆಲ್ಲಿ ಇಂತಹ ಕಾಮಗಾರಿಗೆ ಚಾಲನೆ ನೀಡಿದ್ದಿರೋ ಅಲ್ಲಿಗೆಲ್ಲಾ ಒಮ್ಮೆ ಹೋಗಿ ನೋಡಿ. ಇದನ್ನು ವಹಿಸಿಕೊಂಡ ಕಂಟ್ರಾಕ್ಟರ್, ನಿರ್ವಹಣೆ ಉಸ್ತುವಾರಿ ಹೊತ್ತಂತಹ ಇಂಜಿನಿಯರ್, ಅಧಿಕಾರಿಗಳನ್ನು ಹುಡುಕಿಕೊಂಡು ಬಂದು ನಿಲ್ಲಿಸಿಕೊಂಡು ಮೊದಲು ಈ ಕೆಲಸ ಮಾಡಿ ಎಂದು ಹೇಳಿ. ಇಂತಹ ಕರ್ಮಕಾಂಡದ ಕಾಮಗಾರಿಯಿಂದ ಕಷ್ಟ ಅನುಭವಿಸುತ್ತಿರುವ ಜನರಿಗೆ ನೆಮ್ಮದಿ ನೀಡಿ. ಆ ಮೇಲೆ ಉಳಿದ ಕಾಮಗಾರಿಗೆ ಚಾಲನೆ ನೀಡಿ, ಬೇಡ ಅನ್ನುವುದಿಲ್ಲ.

–ರಾಮಕೃಷ್ಣ, ಹೆಬ್ಬಾಳು ಬಡಾವಣೆ, ಮೈಸೂರು.

### ಪ್ರೀಪೇಡ್ ಆಟೋ ಸೇವೆಯಿಂದ ಹಗಲು ದರೋಡೆ

ಮಾನ್ಯರೆ,




ಇತ್ತೀಚೆಗೆ (18.12.2022) ಒಡೆಯರ್ ಎಕ್ಸ್‌ಪ್ರೆಸ್ ಟ್ರೈನ್‌ನಲ್ಲಿ ಬೆಂಗಳೂರಿನಿಂದ ಬಂದು ಮೈಸೂರು ರೈಲ್ವೆ ನಿಲ್ದಾಣದ ಬ್ಯಾಕ್ ಗೇಟ್‌ನಲ್ಲಿ ಇಳಿದು ಆಟೋ ಹತ್ತಲು ಹೊರಟರೆ ದಟ್ಟಗಳ್ಳಿಗೆ 150 ರೂ. ಎಂದು ಆಟೋ ಡ್ರೈವರ್ ಹೇಳಿದ. ಅಲ್ಲೇ ಇದ್ದ ಪೊಲೀಸರನ್ನು ಕರೆದೆ ಅವರು ಮೀಟರ್ ಹಾಕಲು ಹೇಳಿದರೆ ಅದು ಸರಿಯಿಲ್ಲ ಎಂದು ಧೈರ್ಯವಾಗಿಯೇ ಹೇಳಿದ. ಕೊನೆಗೆ ಪೊಲೀಸ್ 120 ರೂ.ಗೆ settle ಮಾಡಿ ನಮ್ಮನ್ನು ಕಳಿಸಿದರು. (ಡ್ರೈವರ್ details attach ಮಾಡಿದ್ದೇನೆ)

ಮನೆ ಹತ್ತಿರ ಬಂದು ಆತ ಗಲಾಟೆ ಶುರು ಮಾಡಿ 150 ಕೇಳಿದ ಹಾಗೂ ಪೊಲೀಸರಿಗೆ ಲಂಚ ತಿನ್ನುತ್ತಾರೆಂದು, ಬೇಕಾಬಿಟ್ಟಿ ಪೊಲೀಸರನ್ನು ನಿಂದಿಸಿ, ನಮಗೆ ತೊಂದರೆ ಕೊಡುತ್ತಾರೆ ಎಂದು:, ಅವರಿಗೆ ಬಾಯಿಗೆ ಬಂದಂತೆ ಬೈಯ್ದು ಹಣ ಜೋರಾಗಿಯೇ ಕೇಳಿದ. ನಾನೂ ಬಗ್ಗಲಿಲ್ಲ ರೂ. 120 ಕೊಟ್ಟು ಹೋಗಲು ಹೇಳಿದ್ದಕ್ಕೆ ಕೊಡೋ ನೂರಿಪ್ಪತ್ತು ರುಪಾಯಿಗೆ ಎಷ್ಟು ಮಾತಾಡ್ತೀರಿ ಎಂದು ಗೊಣಗುತ್ತಲೇ ಹೋದ.

ಮೇಲಿನ ಪ್ರಕರಣದಲ್ಲಿ ನನಗೆ ಆಟೋದವನಿಗೆ ಪೊಲೀಸ್ ಇಲಾಖೆ ಬಗ್ಗೆ ಆ ರೀತಿ ಭಾವನೆ ಬರಲು ಕಾರಣ ತಿಳಿಯಲಿಲ್ಲ. ನೂತನ ಪೊಲೀಸ್ ಕಮಿಷನರ್ ಅವರು ಮೈಸೂರು ರೈಲ್ವೆ ನಿಲ್ದಾಣದ ಹಿಂಬಾಗಿಲ ದ್ವಾರದಲ್ಲಿ pre-paid ಆಟೋ ಸೇವೆ ಕೂಡಲೇ ಪ್ರಾರಂಭಿಸಿ ಹಗಲು ದರೋಡೆ (ಯಾರಿಂದ ಆಗುತ್ತಿದ್ದರೂ) ನಿಲ್ಲಿಸಬೇಕೆಂದು ಮನವಿ. ಮೈಸೂರಿನಂತಹ ಪ್ರೇಕ್ಷಣೀಯ ಸ್ಥಳದ ಮರ್ಯಾದೆಗೆ ಕುತ್ತು ಭಾರದಂತೆ ಎಚ್ಚರ ವಹಿಸಿಯಾರೇ ನಮ್ಮ ಪೊಲೀಸ್ ಇಲಾಖೆ.

–ಶಿವಮೊಗ್ಗ ನಾ. ದಿನೇಶ ಅಡಿಗ, ಮೈಸೂರು

### ಮಲತ್ರಮ!

ಮಾನ್ಯರೆ,

ಡಾ. ವಿ. ರಂಗನಾಥ್ ಅವರ 'ಬದುಕಿನ ಸಿದ್ಧ ಸೂತ್ರ – ಮೂರು ಮಲ, ಆರು ಜಲ' ಎಂಬ ಅಂಕಣ ಬರಹದ (ಡಿ.18) ಬಗೆಗೆ.

'ಜಲ'ದ ವಿಷಯ ಹಾಗಿರಲಿ, 'ಮಲ'ದ ಸೂತ್ರ ತಪ್ಪು ಎನ್ನಬೇಕು (ಹಾಗೆ ಹೇಳಿದ 'ವೃದ್ಧ'ರಿಗೆ ಬುದ್ಧಿಯಿಲ್ಲ!) ಮೂರು ಸಲ ಮಲ ಎನ್ನುವುದಾದರೆ, ಎಷ್ಟು ತಿನ್ನಬೇಕು!? (ವ್ಯಂಗ್ಯಾರ್ಥದಲ್ಲಿ ಗಾದೆಯೇನೋ ಉಂಟು: "ಮಡಕೆಯಲ್ಲಿ ಬಾಯಿ, ತಿಪ್ಪೆಯಲ್ಲಿ...!").

ಇನ್ನೂ, ತಾತ್ತ್ವಿಕವಾಗಿ, ಶೈವಮತದ ಪಾಶುಪತ ಪಂಥದ ಪ್ರಕಾರ, ಮೂರು ಮಲಗಳಿವೆ. ಆಣವ ಮಲ, ಮಾಯಾಮಲ ಮತ್ತು ಕಾರ್ಮ (ಕಾರ್ಮಿಕ) ಮಲ. ಯೋಗ ಬಲದಿಂದ ಜೀವ ಅಥವಾ ಪಶು ಈ ಮಲಗಳನ್ನು ದೂರೀಕರಿಸಬಹುದು.

ಬ(ಕ)ಳೆ!

"ನಾನೇ (ವೇ)ನೂ ಬಳೆ ತೊಟ್ಟಿಲ್ಲ!"
ಎಂಬ ಪುರುಷೋಕ್ತಿ
ಸಾಮಾನ್ಯ; ಆದರೆ
ಅರ್ಥಹೀನ : ಬಹುಮಂದಿ ಮಹಿಳೆಯರು
ಈಗ ತೊಡುವುದಿಲ್ಲ ಬಳೆ:
ಆದರೂ ಅವರಿಗೆ ಉಂಟೇ ಉಂಟು
ಕಳೆ (ಕಲೆಯ ಬಲೆ!?)

–ಸಿಪಿಕೆ, ದತ್ತಪೀಠ ಆಸ್ಥಾನ ವಿದ್ವಾನ್, ಮೈಸೂರು.

## ದೀಪ ಸಾಲು




ಡಾ. ಗುಬ್ಬಿಗೂಡು ರಮೇಶ್
ಮೊ : 97429–34512

# ಜೀವಪರವಾದ ಕಾಳಜಿಗೆ ತಾರುಣ್ಯದ ಕಸುವು ಒಲಿದು ಬರಲಿ!

ಹೊಸ ವರುಷ ಬಂದಿದೆ, ಮಕ್ಕಳಾಗಿದ್ದವರು ಯುವಕರಾದರು, ಯುವಕರಾಗಿದ್ದವರು ಹಿರಿಯರಾಗಿ ಹೋದರು. ದೊಡ್ಡ ದೊಡ್ಡ ಕನಸು ಕಂಡು ಅದನ್ನು ಸಾಧಿಸಿ ತಮ್ಮ ವೈಯಕ್ತಿಕ ದಾಖಲೆಯನ್ನು ಬರೆದು ಮನೆಯ ಆಸ್ತಿಯಾಗಿ ಮಾತ್ರ ಉಳಿದವರು ಕೆಲವರು. ಅದರ ಆಚೆಗೂ ತಲೆಕೆಡಿಸಿಕೊಂಡು ಏನೋ ಮಾಡಲು ಹೋಗಿ ಏನೂ ಮಾಡಲಾಗದೆ ತತ್ತರಿಸಿದವರು ಹಲವರು. ಎಲ್ಲವನ್ನು ಮಾಡುವ ಅವಕಾಶವಿದ್ದಾಗ್ಯೂ ಏನೂ ಮಾಡದೇ ಹೋದವರು ಸುಮಾರು. ಯಾವ ಪ್ರಯತ್ನವನ್ನೂ ಮಾಡದೇ ಕೆರೆಯ ದಂಡೆ ಮೇಲೆ ನಿಂತು ಸುಮ್ಮನೆ ಎಲ್ಲವನ್ನೂ ಟೀಕಿಸುತ್ತಾ ನಿಂತವರು ಯುವಕರು. ಇವರಲ್ಲಿ ಕನಸಿನ ಕಸುವಿರುವ ಹುಡುಗರು ಎಲ್ಲಿದ್ದಾರೆ? ಏನು ಮಾಡುತ್ತಿದ್ದಾರೆಂದು ನೋಡಿದರೆ ನಿಮಗೆ ಆಶ್ಚರ್ಯವಾಗುತ್ತದೆ. ಕ್ಲಾಸಿಗೆ ಚಕ್ಕರ್ ಹೊಡೆದು ಮಲ್ಟಿಪ್ಲೆಕ್ಸ್‌ಗಳಲ್ಲಿ ಸಿನಿಮಾ ನೋಡುತ್ತಾ ಪಾಪ್‌ಕಾರನ್ ತಿಂತಿದ್ದಾರಾ! ಸಿನಿಮಾ ಹೀರೋಗಳಂತೆ ಕೂದಲು ಕತ್ತರಿಸಿಕೊಳ್ಳದೆ ಜುಟ್ಟು ಅಲ್ಲಾಡಿಸುತ್ತಾ ಸುತ್ತಾ ನಿಂತಿರುವವರೆಲ್ಲ ನನ್ನನ್ನು ನೋಡುತ್ತಿದ್ದಾರ ಅಂತ ಕಳ್ಳ ನೋಟದಲ್ಲಿ ಗಮನಿಸುತ್ತಾ ಕ್ಯಾಂಟೀನಿನ ಸರ್ಕಲ್ಲಿನಲ್ಲಿ ಪಟ್ಟಾಂಗ ಹೊಡೆಯುತ್ತಾ ಸಿಗರೇಟಿನ ಸುರುಳಿಗಳಲ್ಲಿ ಮೈಮರೆತು ಬಿಟ್ಟಿದ್ದಾರ, ಚೆನ್ನಾಗಿ ಓದಿ ಮುಂದೆ ಸಾಫ್ಟ್‌ವೇರ್ ಇಂಜಿನಿಯರೋ, ಡಾಕ್ಟರೋ ಆಗುವ ಎಲ್ಲ ಲಕ್ಷಣಗಳುಳ್ಳ ದಪ್ಪ ಕನ್ನಡಕದ ಹುಡುಗರನ್ನ 'ಗಾಂಧಿ' ಅಂತ ಕರೆದು ತಮಾಷೆ ಮಾಡಿ ತಾವು ಮಾತ್ರ ಅಲ್ಟ್ರಾ ಮಾಡರ್ನ್ ಶೋಪೀಸ್‌ಗಳಂತೆ ಟೂ ಸ್ಟ್ರೋಕ್ ಗಾಡಿಗಳ ಸೌಂಡ್ ಜಾಸ್ತಿ ಮಾಡಿ ವೀಲಿಂಗ್ ಶುರು ಮಾಡಿಬಿಟ್ಟಿದ್ದಾರ? ದುರಂತವೆಂದರೆ ಇನ್ನೊಂದು ಕಡೆ ಚಿಕ್ಕ ವಯಸ್ಸಿಗೆ ದುಡಿದು ಬದುಕುವ ಯುವಕರು ಕನ್ನಡ ರಾಜ್ಯೋತ್ಸವ, ಗಣೇಶ ಚತುರ್ಥಿ, ರಾಮನವಮಿ ಆಚರಣೆಗಳಲ್ಲಿ ಬ್ಯುಸಿಯಾಗಿ ಬಿಟ್ಟಿದ್ದಾರ!

ಈ ಎಲ್ಲ ಗುಂಪಿನ ಹುಡುಗರನ್ನು ಕರೆದುಕೇಳಿ ನೋಡಿ, ಇವರೆಲ್ಲರಿಗೂ ಒಂದೊಂದು ಕನಸಿದೆ. ಆಂತರ್ಯದಲ್ಲಿ ಒಂದು ಗುರಿಯಿದೆ. ಒಬ್ಬೊಬ್ಬರೇ ಇದ್ದಾಗ ಏಕಾಂತದಲ್ಲಿ ಅವರು ಕನಸು ಕಾಣುತ್ತಾರೆ. ಇಷ್ಟೆಲ್ಲಾ ಜಾಲಿತನ – ಪೋಲಿತನದ ನಡುವೆಯೂ ರಸ್ತೆಯಲ್ಲಿ ಸಣ್ಣಪುಟ್ಟ ಅಪಘಾತಗಳಾದರೂ ಓಡಿ ಹೋಗಿ ಬಿದ್ದವರಿಗೆ ಉಪಚಾರ ಮಾಡುತ್ತಾರೆ, ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸುತ್ತಾರೆ, ಅಮಾಯಕರ ಪರ ನಿಲ್ಲುತ್ತಾರೆ. ಎದುರಿಗಿದ್ದವರನ್ನು, ಬಲಿಷ್ಠರಾದರೂ ವಿನಾ ಕಾರಣ ಎದುರು ಹಾಕಿಕೊಳ್ಳುತ್ತಾರೆ. 'ಅನಾಥ ಶವ'ಕ್ಕೆ ಆಟೋಸ್ಟ್ಯಾಂಡಿನ ಹುಡುಗರೆಲ್ಲಾ ಕಾಸು ಹಾಕಿ ಸಂಸ್ಕಾರ ಮಾಡಿಸುತ್ತಾರೆ. ಆಟೋ ಸಿಗದ ಜಾಗಗಳಲ್ಲಿ ಯಾರಾದರೂ ಕೈ ಬೀಸಿದರೆ ಈ ಹುಡುಗರು ತಮ್ಮ ಬೈಕ್‌ಗಳಲ್ಲಿ ಡ್ರಾಪ್ ಮಾಡುತ್ತಾರೆ.

ಮನೆಗೆ ತರಕಾರಿ ತೆಗೆದುಕೊಂಡು ಹೊರಟ ಹೆಣ್ಣು ಮಗಳ ಕೈಯ್ಯಲ್ಲಿದ್ದ ಪ್ಲಾಸ್ಟಿಕ್ ಕವರು ಒಡೆದು ಹೋಗಿ ಟೊಮೆಟೊಗಳೆಲ್ಲಾ ರಸ್ತೆಯಲ್ಲಿ ಚೆಲ್ಲಾಡಿ ಹೋದರೆ ಒಂದೊಂದಾಗಿ ಆಯ್ದು ಕೊಡುತ್ತಿರುತ್ತಾರೆ. ಬಸ್ಸಿನ ಡ್ರೈವರು ವಯಸ್ಸಾದವರು ಇಳಿಯುತ್ತಿದ್ದಂತೆಯೇ ಚಲಿಸಿ ಬಿಟ್ಟರೆ 'ಏ ನಿಲ್ಲಯ್ಯ ಅವರಿನ್ನೂ ಇಳೀತಿದಾರೆ' ಅಂತ ಏರು ದನಿಯಲ್ಲಿ ಮಾತಾಡಿ, ಆ ಡ್ರೈವರ್‌ನ ಮೇಲೆ ಜಗಳಕ್ಕೇ ನಿಂತು ಬಿಡುತ್ತಾರೆ, ಇಂಥಾ ಇನ್ನೂ ಅನೇಕಾನೇಕ ಪ್ರಸಂಗಗಳನ್ನು ನೀವು ನೋಡಿದ್ದೀರಿ. ಎಲ್ಲೋ ಒಂದು ಕಡೆ ನೀವು ಇದನ್ನೆಲ್ಲಾ ಮಾಡಿಯೇ ಇರುತ್ತೀರಿ. ನನ್ನ ಪ್ರಶ್ನೆ ಇಷ್ಟೆ! ಅವರೆಲ್ಲಾ ಯಾರು, ಅವರಿಗೂ ನಿಮಗೂ ಏನು ಸಂಬಂಧ, ನಿಮ್ಮ ಮನಸ್ಸೇಕೆ ಅಮಾಯಕರ ಪರ ನಿಂತಿದೆ. ನಿಮ್ಮದಲ್ಲದ ವಿಷಯಕ್ಕೆ ನೀವೇಕೆ ಮುನಿಸಿಕೊಂಡಿರಿ, ಆ ಘಟನೆ ಮುಗಿದ ಮೇಲೆ ಅವರ್‍ಯಾರೋ, ನೀವ್ಯಾರೋ. ಅವರಿಗೂ ನಿಮಗೂ ಸಂಬಂಧವಿದೆ ಎನ್ನುವುದೇ ಆದರೆ, ಅದು ಯಾವ ಸಂಬಂಧ ಅದೇ 'ಮನುಷ್ಯ ಸಂಬಂಧ'. ನಿಮ್ಮ ಮನಸ್ಸು ಅಮಾಯಕರ ಪರ ನಿಂತಿದೆ. ಅದು ನ್ಯಾಯದ ಪರ ಇದೆ. ನಿಮಗೆ ಗೊತ್ತಿದ್ದೋ ಗೊತ್ತಿಲ್ಲದೆಯೋ ಕಾರುಣ್ಯ ನಿಮ್ಮ ಆಂತರ್ಯದಲ್ಲೇ ಇದೆ. ಹಾಗಾಗಿಯೇ ನೀವು ಹಾಗೆ ನಡೆದುಕೊಂಡಿದ್ದೀರಿ ಅಂದ ಮೇಲೆ ನಿಮ್ಮಲ್ಲೊಂದು ಕನಸಿದೆ ಅಂತ ಆಯ್ತಲ್ಲ! ನಿಮ್ಮ ದೇಹದಲ್ಲಿ ಕಸುವಿದ್ದರೆ ನಿಮ್ಮ ಕನಸಿಗೆ ಒಂದು ರೂಪ ಕೊಡಿ. ಅದಕ್ಕೆ ಕಸುಬುದಾರಿಕೆ ಕಲಿಸಿ. ನೀವು ರಾಜಕಾರಣಕ್ಕೆ ಬನ್ನಿ ನಿಮಗೊಂದು ಅಧಿಕಾರ ಬೇಕು. ಅಧಿಕಾರವಿದ್ದರೇನೆ ನಿಮ್ಮ ಕಲ್ಪನೆಗಳಿಗೊಂದು ಕಾನೂನು ಮಾಡಲು ಸಾಧ್ಯ! ವಾಯಿದೆ ಕೊಟ್ಟು ಕಾಯಿದೆ ಮಾಡಲು ಸಾಧ್ಯ. ನಿಮ್ಮೊಳಗಿರುವ ಜೀವಪರವಾದ ಕಾಳಜಿಗೆ ಒಂದು ಅಧಿಕಾರ ಕೊಡಿಸಿ ನೋಡಿ ಅದು ಚಿಕ್ಕದಿರಲಿ ದೊಡ್ಡದಿರಲಿ ನಿಮ್ಮ ಬೀದಿಗೆ, ನಿಮ್ಮ ಏರಿಯಾಕ್ಕೆ, ನಿಮ್ಮ ಊರು, ತಾಲೂಕು, ಜಿಲ್ಲೆ, ರಾಜ್ಯ, ದೇಶ, ನಿಮ್ಮ ಸಾಮರ್ಥ್ಯಕ್ಕೆ ತಕ್ಕಷ್ಟು ದುಡಿದು ಬಿಡುವ ಅವಕಾಶವಿರುವ ಸೇವಾಕ್ಷೇತ್ರಕ್ಕೆ ಬರಲು ಮನಸ್ಸು ಮಾಡಿಬಿಡಿ. ಅದಕ್ಕೊಂದು ಡಿಟರ್ಮಿನೇಷನ್ ಬೇಕು. ಮಾಯಾ ಮೃಗದಂತೆ ಓಡುವ ಅವಕಾಶಗಳನ್ನು ಬೆನ್ನಟ್ಟಲಿಕ್ಕೆ ತಾರುಣ್ಯದ ಕಸುವು ಬೇಕು. ಇದು ಜನ್ಮತಃ ಬರುವಂಥದಲ್ಲ ಅಭ್ಯಾಸ ಮಾಡಿಕೊಳ್ಳಬೇಕು. ಯುವಕರಾಗಿದ್ದಾಗಲೇ ಇಂಥ ಪ್ರಯತ್ನಕ್ಕೆ ಕೈಹಚ್ಚದೆ, ಸುಖಾ ಸುಮ್ಮನೆ ಅದು ಸರಿಯಲ್ಲ, ಇದು ಸರಿಯಲ್ಲ, ಅವರು ಮಾಡಲಿಲ್ಲ, ಇವರು ಮಾಡಲಿಲ್ಲ ನಾನು ಕಾರ್ಪೋರೇಟರ್ ಆಗಿದ್ದರೆ, ನಾನು ಎಂ.ಎಲ್.ಎ. ಆಗಿದ್ದರೆ, ಎಂ.ಪಿ. ಆಗಿದ್ದರೇ ಇತ್ಯಾದಿ ಮಾತುಗಳನ್ನು ದೂರದಲ್ಲಿ ನಿಂತು ಮಾತಾಡಬೇಡಿ. ಅಂಕದ ಪರದೆಯ ಹಿಂದೆ ನಿಂತು ಕೊಂಕು ಮಾತಾಡುವುದಕ್ಕಿಂತ ಟೊಂಕ ಕಟ್ಟಿ ನಿಂತು ನಿಮ್ಮನ್ನೊಮ್ಮೆ ಪರೀಕ್ಷೆಗೆ ಒಡ್ಡಿಕೊಳ್ಳುವ ಡಿಟರ್ಮಿನೇಷನ್ನಿಗೆ ಬಂದು ಬಿಡಿ. 'this life is a great chance, seek for the highest aim at the highest and you shall reach the highest' ಎಂದು ಹೇಳಿದ ಸ್ವಾಮಿ ವಿವೇಕಾನಂದ ಕೂಡ ಇಂಥದೇ ಮಾತನ್ನು ಹೇಳಿ ಚಿಕಾಗೋ ಧರ್ಮಸಮ್ಮೇಳನ



ಮುಗಿಸಿ ಇಲ್ಲಿಗೆ ಬಂದ ಮೇಲೆಯೇ ಅವರಿಗೆ ಹೊಸ ಇಮೇಜು ಸೃಷ್ಟಿಯಾದದ್ದು. ಬೇರೆಯವರು ಇವರ ಮಾತು ಕೇಳಿಸಿಕೊಂಡ ಮೇಲೆಯೇ ನಮ್ಮವರು ನರೇಂದ್ರನ ಮಾತು ಕೇಳಿಸಿಕೊಂಡು ಪುಳಕಿತರಾಗಿದ್ದು! ಯುವಕರಿಂದ ದೇಶ ಕಟ್ಟುತ್ತೇನೆಂದು ಹೊರಟ ನರೇಂದ್ರನ ಡಿಟರ್ಮಿನೇಷನ್ನು ಅವರನ್ನು ಸ್ವಾಮಿ ವಿವೇಕಾನಂದರಾಗಿ ಪರಿವರ್ತಿಸಿ ಚಿಕಾಗೋದಿಂದ ಕನ್ಯಾಕುಮಾರಿಯವರೆಗೆ ತಂದು ನಿಲ್ಲಿಸಿತ್ತು. ಉಕ್ಕಿನ ತೋಳಿನ ಯುವಕರು ನೀವು ಹುಡುಕುವ ದಾರಿ! ಸೇರುವ ಗುರಿ! ಎರಡನ್ನೂ ನಿರ್ಧರಿಸಿ ಸಂಕಲ್ಪ ಮಾಡಿ, ಪಾರ್ಲಿಮೆಂಟಿನ ಕನಸು ಕಂಡರೆ ಕಡೇ ಪಕ್ಷ ವಿಧಾನಸೌಧ, ವಿಧಾನಸೌಧದ ಕನಸು ಕಂಡರೆ ಕಡೇಪಕ್ಷ ಕಾರ್ಪೊರೇಷನ್ನು, ಕಾರ್ಪೊರೇಷನ್ನಿನ ಕನಸು ಕಂಡರೆ ಕಡೇ ಪಕ್ಷ ಗ್ರಾಮ ಪಂಚಾಯ್ತಿ, ಪಂಚಾಯ್ತಿ ಕನಸು ಕಂಡರೆ ಕಡೇ ಪಕ್ಷ ಹಳ್ಳಿಯ ಅರಳೀಕಟ್ಟೆಯ ಪಂಚಾಯ್ತಿ ಕಟ್ಟೆ ಸದಸ್ಯನಾದರೂ ಆಗಿ ಅಮಾಯಕರ ಪರ ನಿಲ್ಲುವ ನ್ಯಾಯದ ಧ್ವನಿಯಾಗಿ ಬಿಡುತ್ತೀರಿ! ಅದಕ್ಕಾಗಿ ನಿಮಗೆ ಬೇಕಾಗಿರುವುದು ಸಂಕಲ್ಪ ಮಾತ್ರ ಅಂದರೆ ಡಿಟರ್ಮಿನೇಷನ್.

ಈ ಡಿಟರ್ಮಿನೇಷನ್ ಇದ್ದಿದ್ದರಿಂದಲೇ ಐವತ್ತು ದಾಟುವ ಮುನ್ನವೇ ನಲ್ವತ್ತರ ಆಸುಪಾಸಿನ ಯುವಕರು ಇಲ್ಲಿ ಏನೇನೆಲ್ಲಾ ಆಗಿಹೋದರು ನೋಡಿದ್ದೀರಾ? ಪ್ರಫುಲ್ಲ ಕುಮಾರ್ ಮಹಂತ ಎಂಬ ವಿದ್ಯಾರ್ಥಿ ನಾಯಕ ಸ್ಟೂಡೆಂಟ್ ಯೂನಿಯನ್‌ನಿಂದ ಬಂದು 1979–1985ರ ತನಕ ಅಸ್ಸಾಂನಲ್ಲಿ ಅಸ್ಸಾಂ ಗಣ ಪರಿಷತ್ ಕಟ್ಟಿ ಬೆಳೆಸಿ 1985ರ ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ಮುಖ್ಯಮಂತ್ರಿಯಾದಾಗ ಮಹಂತರ ವಯಸ್ಸು 33. ಆಮೇಲೆ 1985–1990, 1996–2001ರವರೆಗೆ ಎರಡು ಅವಧಿಗೆ ಮುಖ್ಯಮಂತ್ರಿಯಾದ ಮಹಂತಗೆ ಮಾಗಿದ ವಯಸ್ಸಿರಲಿಲ್ಲ. ಡಿಟರ್ಮಿನೇಷನ್ನಿನ ಕನಸು ಇತ್ತು ತಾರುಣ್ಯದ ವಯಸ್ಸಿತ್ತು. ಇದು ಈ ದೇಶದಲ್ಲಿ ಯುವಕರು ಮನಸ್ಸು ಮಾಡಿದರೆ ಏನನ್ನಾದರೂ ಮಾಡಬಹುದೆಂಬುದಕ್ಕೆ ಒಂದು ಪ್ರಯೋಗಶೀಲತೆಯ ಮಾದರಿಯಂತೆ ಕಾಣುತ್ತಿತ್ತು. ಆಮೇಲೆ ಅವರ ವಯಸ್ಸು ಮಾಗಿದಂತೆಲ್ಲಾ ಬೇರೆ ಬೇರೆ ಕಾರಣಕ್ಕೆ ಜನ ತಿರಸ್ಕರಿಸಿದರು. 2014ರ ಚುನಾವಣೆಯ ಹೀನಾಯ ಸೋಲು ಅಸ್ಸಾಂ ಗಣ ಪರಿಷತ್‌ಗೆ ರಾಜೀನಾಮೆ ಸಲ್ಲಿಸುವಂತೆ ಮಾಡಿತ್ತು. ಮಾಗಿದ ಮನಸ್ಸಿಗಿಂತ ಉಕ್ಕುವ ವಯಸ್ಸು ಗೆಲುವು ತಂದುಕೊಟ್ಟಿತ್ತು.

ಕರ್ನಾಟಕದ ಜೆಡಿಎಸ್‌ನ ಎಚ್.ಡಿ. ಕುಮಾರಸ್ವಾಮಿ 18ನೇ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದಾಗ ಅವರ ವಯಸ್ಸು 49. 2006ರ ಫೆಬ್ರವರಿ 3 ರಿಂದ 2007ರ ಅಕ್ಟೋಬರ್ 9ರ ತನಕ ಮುಖ್ಯಮಂತ್ರಿಯಾಗಿ ಕರ್ನಾಟಕದ ರಾಜಕಾರಣದಲ್ಲಿ ತನ್ನದೇ 'ಗ್ರಾಮ ವಾಸ್ತವ್ಯ'ದ ಕನಸನ್ನು ನನಸಾಗಿಸಿಕೊಂಡು ನಂತರ ಬಿಜೆಪಿಯೊಂದಿಗಿನ ಮೈತ್ರಿ ಕಡಿದುಕೊಂಡು ಸ್ವತಂತ್ರ ರಾಜಕಾರಣಕ್ಕೆ ಮರಳಿದರು. ನಂತರದ ಸೋಲು–ಗೆಲುವುಗಳ ಮಧ್ಯೆ ಅವರ ರಾಜಕಾರಣ ಮುಂದುವರಿದಿದೆ.

15.03.2012ರಲ್ಲಿ ಉತ್ತರ ಪ್ರದೇಶದ ಮುಖ್ಯಮಂತ್ರಿಯಾಗಿ ಅಧಿಕಾರ ಹಿಡಿದಾಗ ಅಖಿಲೇಶ್ ಯಾದವ್‌ಗೆ ವಯಸ್ಸು ಕೇವಲ 38. ಆಗ ಮೈಸೂರಿನಲ್ಲಿ ಎಂಜಿನಿಯರಿಂಗ್ ಪದವಿ ಓದುತ್ತಾ ವಿದ್ಯಾರ್ಥಿಗಳೊಂದಿಗೆ ಮೈಸೂರಿನ ಬೀದಿ ಬೀದಿಸುತ್ತಿದ ಹುಡುಗ ರಾಜಕಾರಣದ ಮೊಗಸಾಲೆಗೆ ಬಂದಾಗ ಮೈಸೂರಿನ ಗೆಳೆಯರಿಗೂ ಸಂತೋಷವಾಗಿತ್ತು. 224 ಸ್ಥಾನಗಳನ್ನು ಗೆದ್ದು ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೇರುವ ಮೊದಲೇ ಮಾಗಿದ ವಯಸ್ಸಿನ ಮುಲಾಯಂ ಸಿಂಗ್ ಯಾದವ್ ಇದ್ದರೂ, ಚುನಾವಣೆಗೆ ಮುನ್ನವೇ ಅಖಿಲೇಶ್‌ನನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಫೋಕಸ್ ಮಾಡಲಾಗಿತ್ತು. ಯುವಕನನ್ನು ಜನ ಒಪ್ಪಿದರು. ಅಖಿಲೇಶ್ ಮುಖ್ಯಮಂತ್ರಿಯಾದ ಮೇಲೆ ಭಾರೀ ನಿರೀಕ್ಷೆಯಿಟ್ಟುಕೊಂಡಿದ್ದ ಯು.ಪಿ.ಯಲ್ಲಿ ಅತ್ಯಾಚಾರಗಳು, ಕೋಮು ಗಲಭೆಗಳು, ಮಹಿಳಾ ದೌರ್ಜನ್ಯಗಳು ನಡೆದವು. ಸರ್ಕಾರದ ಇಮೇಜ್ ಕುಸಿಯಿತು. ತಂದೆಯೇ ಮಗನ ಸರ್ಕಾರವನ್ನು ಒಂದೆರಡು ಬಾರಿ ಸಾರ್ವಜನಿಕವಾಗಿ ಟೀಕಿಸುವಂತಾಯ್ತು. ಮತ್ತೆ ಅಖಿಲೇಶ್ ತನ್ನ ಸರ್ಕಾರದ ಇಮೇಜನ್ನು ವಾಪಸ್ಸು ತರಲು ಹೆಣಗಾಡಿದ ಹೊತ್ತಿಗೆ ತಾರುಣ್ಯದ ಕಸುವು ಮಾಯವಾಗಿ ಮಾಗಿದ ವಯಸ್ಸು ಚಲಿಸುತ್ತಿತ್ತು.

31.10.2014ರಲ್ಲಿ ಮಹಾರಾಷ್ಟ್ರದ ಮುಖ್ಯಮಂತ್ರಿಯಾಗಿ ಅಧಿಕಾರದ ಚುಕ್ಕಾಣಿ ಹಿಡಿದ ದೇವೇಂದ್ರ ಫಡ್ನವಿಸ್ ವಯಸ್ಸು ಅಧಿಕಾರ ಹಿಡಿದಾಗ ಕೇವಲ 44. ಅಖಿಲ ಭಾರತ ವಿದ್ಯಾರ್ಥಿ ಪರಿಷತ್‌ನಿಂದ ಬಂದ ಫಡ್ನವಿಸ್ 22ನೇ ವಯಸ್ಸಿಗೆ ನಾಗಪುರ ನಗರ ಪಾಲಿಕೆಯ ರಾಮನಗರ ವಾರ್ಡಿನ ಕಾರ್ಪೋರೇಟರ್. 44ನೇ ಹರೆಯಕ್ಕೆ ಮಹಾರಾಷ್ಟ್ರದ ಮುಖ್ಯಮಂತ್ರಿ ಘಟಾನುಘಟಿ ರಾಜಕೀಯ ಮುತ್ಸದ್ದಿಗಳಿರುವ ಮಹಾರಾಷ್ಟ್ರ ರಾಜಕಾರಣದಲ್ಲಿ ಆಗ ತಾರುಣ್ಯದ ಕಸುವು ಗೆದ್ದಿತ್ತು.

05.01.2009ರಲ್ಲಿ ಮುಖ್ಯಮಂತ್ರಿಯಾದ ಒಮರ್ ಅಬ್ದುಲ್ಲಾ ಮುಖ್ಯಮಂತ್ರಿಯಾದಾಗ ವಯಸ್ಸು ಕೇವಲ 44. ಜಮ್ಮು ಕಾಶ್ಮೀರದ 11ನೇ ಮುಖ್ಯಮಂತ್ರಿಯಾಗಿ ಹೊರಹೊಮ್ಮಿದ ಒಮರ್ ಅಬ್ದುಲ್ಲಾ 2009ರಲ್ಲಿ ಗೆದ್ದು ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡು ಸರ್ಕಾರ ರಚಿಸಿದ ಒಮರ್ ಅಬ್ದುಲ್ಲಾಗೆ ವಯಸ್ಸು ಆಗ ಮಾಗಿತ್ತು.

ತನ್ನ 39ನೇ ವಯಸ್ಸಿಗೆ ಮುಖ್ಯಮಂತ್ರಿಯಾದ ಹೇಮಂತ್ ಸೊರೇನ್ ಜಾರ್ಖಂಡ್ ಮುಕ್ತಿ ಮೋರ್ಚಾದ ಹಿನ್ನೆಲೆಯಿಂದ ಬಂದು 13.07.2013ರಲ್ಲಿ ಜಾರ್ಖಂಡ್‌ನ ಐದನೇ ಸಿ.ಎಂ. ಆಗಿ ಅಧಿಕಾರ ಹಿಡಿದವರು. ತನ್ನ 47ನೇ ವಯಸ್ಸಿಗೆ ಮುಖ್ಯಮಂತ್ರಿಯಾದ ಅರುಣಾಚಲ ಪ್ರದೇಶದ ಎಂಟನೇ ಮುಖ್ಯಮಂತ್ರಿ ನಬಮ್‌ಟುಕಿ 1.11.2011ರಲ್ಲಿ ಅಧಿಕಾರ ಹಿಡಿಯಲು ಅವರಿಗಿದ್ದ ಹಿನ್ನೆಲೆ ವಿದ್ಯಾರ್ಥಿ ಕಾಂಗ್ರೆಸ್‌ನ ಎನ್.ಎಸ್.ಯು.ಐ. 20.04.2010ರಲ್ಲಿ ಮೇಘಾಲಯದ ಮುಖ್ಯಮಂತ್ರಿಗಾದಿ ಹಿಡಿದ ಡಾ. ಮುಕುಲ್ ಸಂಗ್ಮಾ ವಯಸ್ಸು ಆಗ ಕೇವಲ 45. ವೃತ್ತಿಯಲ್ಲಿ ವೈದ್ಯರಾಗಿದ್ದ ಮುಕುಲ್ ಮೇಘಾಲಯ ಯುನೈಟೆಡ್ ಅಲಯನ್ಸ್‌ನ ಮುಖ್ಯಮಂತ್ರಿ.

36 ವರ್ಷಕ್ಕೆ ಮುಖ್ಯಮಂತ್ರಿಯಾದ ಎ.ಕೆ. ಆಂಟನಿ ಕೇರಳ ಸ್ಟೂಡೆಂಟ್ ಯೂನಿಯನ್‌ನ ಮೂಲಕ ರಾಜಕಾರಣಕ್ಕೆ ಬಂದವರು. ಮೂರು ಬಾರಿ ಮುಖ್ಯಮಂತ್ರಿಯಾಗಿದ್ದ ಆಂಟನಿಗೆ ತಾರುಣ್ಯದ ವಯಸ್ಸು, ಮಾಗಿದ ಮನಸ್ಸು ಎರಡೂ ಕೈ ಕೊಡಲಿಲ್ಲವೆಂಬುದನ್ನು ಗಮನಿಸಬೇಕು. 2006ರ ಸೆಪ್ಟೆಂಬರ್ 14 ರಿಂದ 2008ರ ಆಗಸ್ಟ್ 23ರ ತನಕ ಜಾರ್ಖಂಡ್‌ನ ಮುಖ್ಯಮಂತ್ರಿಯಾಗಿದ್ದ ಮಧುಕೋಡ ಪಕ್ಷೇತರ ಶಾಸಕನಾಗಿದ್ದುಕೊಂಡೇ ಮುಖ್ಯಮಂತ್ರಿಯಾದರು. ಆಗ ಅವರ ವಯಸ್ಸು ಕೇವಲ 35. ಆನಂತರದಲ್ಲಿ ಗಣಿಧೂಳಿನಲ್ಲಿ ಸಿಲುಕಿ ಅಧಿಕಾರ ಕಳೆದುಕೊಂಡರು.

1980ರಲ್ಲಿ ಅರುಣಾಚಲ ಪ್ರದೇಶದ ಮುಖ್ಯಮಂತ್ರಿಯಾಗಿ ಅಧಿಕಾರಕ್ಕೇರಿದ ಕಾಂಗ್ರೆಸ್ಸಿನ ಗೆಗೂಂಗ್ ಅಪಾಂಗ್ ಅಧಿಕಾರಕ್ಕೇರಿದಾಗ ವಯಸ್ಸು 30. ದೇಶದ ಮೊದಲ ದಲಿತ ಮಹಿಳಾ ಮುಖ್ಯಮಂತ್ರಿ, ಯು.ಪಿ.ಯ ಬೆಹೆನ್‌ಜೀ ಎಂದೇ ಕರೆಸಿಕೊಂಡು ನಾಲ್ಕು ಅವಧಿಗೆ ಮುಖ್ಯಮಂತ್ರಿಯಾದ ಮಾಯಾವತಿ ಅಧಿಕಾರ ಹಿಡಿದಾಗ ವಯಸ್ಸು 30. ಭಾರೀ ನಿರೀಕ್ಷೆಗಳು ತಾರುಣ್ಯದ ಹುಮ್ಮಸ್ಸು ಅಧಿಕಾರದ ಸಮೀಪ ತಂದು ನಿಲ್ಲಿಸಿದ್ದವು. ಆದಾಯಕ್ಕೆ ಮೀರಿದ ಆಸ್ತಿ, ತಾಜ್ ಕಾರಿಡಾರ್ ಯೋಜನೆ, ತನ್ನದೇ ಪ್ರತಿಮೆ ನಿರ್ಮಾಣ, ದುಂದುವೆಚ್ಚಗಳು ಅಧಿಕಾರಕ್ಕೆ ಅಡ್ಡಗಾಲು ಹಾಕಿದವು. ತಮಿಳುನಾಡಿನ ಮುಖ್ಯಮಂತ್ರಿ ಜಯಲಲಿತ ಕೂಡ 43 ವರ್ಷಕ್ಕೆ ಮುಖ್ಯಮಂತ್ರಿ ಆದವರು. ಅವರಿಗೆ ಅಕ್ರಮ ಆಸ್ತಿ ಉರುಳಾದದ್ದು ಎಲ್ಲರಿಗೂ ಗೊತ್ತಿರುವ ವಿಷಯ. ಕ್ರಿಕೆಟ್ ಆಸಕ್ತಿಯ ಶರದ್ ಪವಾರ್ ಮುಖ್ಯಮಂತ್ರಿಯಾದಾಗ ಅವರ ವಯಸ್ಸು ಕೇವಲ 38. ಐತಿಹಾಸಿಕ ದಾಖಲೆ ಬರೆದ ಎಂ.ಒ.ಎಚ್. ಫಾರುಕ್ ಮರಿಕರ್ ತಮ್ಮ 29ನೇ ವಯಸ್ಸಿಗೆ ಪುದುಚೇರಿಯ ಮುಖ್ಯಮಂತ್ರಿಯಾದ ದಾಖಲೆ ಇದೆ. ಆಮ್ ಆದ್ಮಿಯ ಅರವಿಂದ್ ಕೇಜ್ರಿವಾಲ್ ಶೀಲಾದೀಕ್ಷಿತ್‌ರನ್ನು ಸೋಲಿಸಿ ದೆಹಲಿಯ ಮುಖ್ಯಮಂತ್ರಿಯಾದ ಕಥೆ ನಿಮಗೆ ಗೊತ್ತು. ಆಗ ಕೇಜ್ರಿವಾಲ್ ವಯಸ್ಸು 45. ಇವರಲ್ಲಿ ಕೆಲವರಿಗೆ ಕುಟುಂಬ ರಾಜಕಾರಣದ ಹಿನ್ನೆಲೆ ಇತ್ತು ಎಂದು ಹೇಳಿ ಮೂಗು ಮುರಿಯುವ ಅವಕಾಶವೂ ಇದೆ. ಅದಿಲ್ಲದೆ ಇದ್ದರೂ ಮುಂಚೂಣಿಗೆ ಬರುವವರಿಗಾಗಿ ಯಾವತ್ತಿಗೂ ಅವಕಾಶಗಳ ದಾರಿ ತೆರೆದಿದೆ.

ವಯಸ್ಸಾದಂತೆ ಮನುಷ್ಯ ಮಾಗುತ್ತಾನೆ. ಪಕ್ವತೆ ಬರುತ್ತೆ. ಅನುಭವ ತೀವ್ರತೆ ಜಾಸ್ತಿಯಾಗುತ್ತೆ ಅಂತೆಲ್ಲಾ ಮಾತಾಡಿದ ವಿಷಯಗಳು ನಮಗೆ ಗೊತ್ತು. ಆದರೆ ಆ ಮಾಗಿದ ಜೀವದಲ್ಲಿ ಎಲ್ಲವೂ ಇದೆ ಆದರೆ ಅಂದುಕೊಂಡದ್ದನ್ನೆಲ್ಲಾ ಒಂದೇ ಗುಕ್ಕಿಗೆ ಮಾಡಿಬಿಡಬಲ್ಲ ಕಸುವಿಲ್ಲವಲ್ಲ! ಕಸುಬುದಾರಿಕೆಯಲ್ಲಿ ಕಸುವಿಲ್ಲದಿದ್ದರೆ ಯಾವುದೂ ಕೈಗೂಡುವುದಿಲ್ಲ. ದೇಹದಲ್ಲಿ ಕಸುವಿದ್ದೂ ಕೆಲಸ ಮಾಡುತ್ತಾ ಮಾಡುತ್ತಾ ಹೋದಂತೆ ಕಸುಬುದಾರಿಕೆಯೂ ಕೈಗೂಡುತ್ತದೆ. ಅಷ್ಟೊತ್ತಿಗಾಗಲೇ ಅಂದುಕೊಂಡ ಒಂದಷ್ಟು ಕಲ್ಪನೆಗಳಾದರೂ ಕೈಗೂಡಿ ಸಾಕಾರಗೊಂಡಿರುತ್ತವೆ. ಅದಕ್ಕೊಂದು ಶಕ್ತಿಬೇಕಲ್ಲ. ಆ ಶಕ್ತಿ ವಯಸ್ಸು, ಯೌವ್ವನ ಇರುವ ಯುವಕರು, ಇವತ್ತು ಸೋತು ಹೋದವರಂತೆ, ಸುಸ್ತಾದವರಂತೆ, ಸ್ಫೋಟಕ ಸಾಮಗ್ರಿಗಳಂತೆ ಕಾಣುತ್ತಿದ್ದಾರೆ!

ಅತೀ ಹೆಚ್ಚು ಯುವ ಜನರನ್ನು ಹೊಂದಿರುವ ದೇಶ ಇದು. 30–50ರ ಆಸುಪಾಸಿನ ವಯಸ್ಸು ಏನನ್ನೆಲ್ಲಾ ಮಾಡಿಸಿದೆ. ತಾರುಣ್ಯದ ವಯಸ್ಸಿಗೆ ಹಿನ್ನೆಲೆಯಾಗಿ ಮಾಗಿದ ಮನಸುಗಳ ಮಾರ್ಗದರ್ಶನ ಪಡೆದರೆ ನಮ್ಮ ಯುವಕರ ಪಡೆ ರಾಜಕಾರಣದ ಎಲ್ಲಾ ಲೆಕ್ಕಾಚಾರಗಳನ್ನು ಚುಕ್ತಾ ಮಾಡಿ ಅಧಿಕಾರದ ಅಂಗಳದಲ್ಲಿ ಠಿಕಾಣಿ ಹೂಡುತ್ತದೆ. ಆದಷ್ಟೂ ಬೇಗ ನಮ್ಮ ಊರಿನ ಹುಡುಗರಲ್ಲಿ ಇಂಥಾ ಮ್ಯಾಜಿಕ್ ನಡೆಯಲಿ ಅವರು ಯಾರಾದರಾಗಲಿ ರಾಜಕಾರಣದ ಮೊಗಸಾಲೆಗೆ ಬರಲಿ. ನಮ್ಮ ಬವಣೆಗಳಿಗೆ ಬೆಳಕಾಗಲಿ. ಕಟ್ಟುವೆವು ನಾವು ಹೊಸನಾಡೊಂದನ್ನು ರಸದ ಬೀಡೊಂದನ್ನು ಎಂದು ಬರೆದ ನಮ್ಮ ಗೋಪಾಲಕೃಷ್ಣ ಅಡಿಗರ ಮಾತಿಗೆ ಅನ್ವರ್ಥವಾಗಿ ನಮ್ಮ ತರುಣರು ಎದ್ದೇಳಲಿ, ಏನಂತೀರಿ?

# ಆಡಳಿತ ಬದಿಗಿಟ್ಟು ಚುನಾವಣೆಗೆ ಸಿಎಂ ಸೇರಿದಂತೆ ಸಚಿವರ ಸಿದ್ಧತೆ

- ಅಮಿತ್ ಷಾ ಭೇಟಿ ನಂತರ 'ಜನತಾ ಜನಾರ್ಧನ'ನತ್ತ ಮರಳಿದ ಶಾಸಕರು, ಸಚಿವರು
- ಬೂತ್ ಮಟ್ಟದಲ್ಲಿ ಬಲಗೊಳ್ಳಲು ಅಭಿಯಾನ ಆರಂಭ

ಬೆಂಗಳೂರು, ಜ.2(ಕೆಎಂಶಿ)– ಆಡಳಿತವನ್ನು ಬದಿಗಿಟ್ಟು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ಅವರ ಪಕ್ಷದ ಬಹುತೇಕ ಸಚಿವರು ಚುನಾವಣಾ ತಯಾರಿಗಾಗಿ ಪಕ್ಷ ಸಂಘಟನೆಗೆ ಧುಮುಕಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಷಾ 3 ದಿನಗಳ ರಾಜ್ಯ ಪ್ರವಾಸ ಕೈಗೊಂಡು ಬೂತ್ ಮಟ್ಟದಲ್ಲಿ ಪಕ್ಷವನ್ನು ಸಂಘಟಿಸುವಂತೆ ಆದೇಶ ನೀಡಿದ ಬೆನ್ನಲ್ಲೆ ಆ ಕಾರ್ಯಕ್ಕೆ ಮುಖ್ಯಮಂತ್ರಿ ಗಳು ಹಾಗೂ ಸಚಿವರು ಇಂದು ಇಡೀ ದಿನ ನಗರದಲ್ಲಿ ಸಂಚರಿಸಿ, ಕಾರ್ಯಕರ್ತರನ್ನು ಸಂಘಟಿಸುವ ಕೆಲಸ ಮಾಡಿದರು.

ಬೂತ್ ವಿಜಯ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಮುಖ್ಯಮಂತ್ರಿಯವರು, ಪ್ರತಿ ಯೊಂದು ಬೂತ್ ಅನ್ನು ಸಶಕ್ತಗೊಳಿಸಲು ಎಲ್ಲಾ ಪ್ರಮುಖ ಮುಖಂಡರುಗಳಿಗೆ ಕರೆ ನೀಡಿದರು.



100 ಸಕ್ರಿಯವಾಗಿ ಕೆಲಸ ಮಾಡುವ ಕೀ ಮತದಾರರನ್ನು ಒಳಗೊಂಡ ಬೂತ್ ಮಟ್ಟದ ಸಮಿತಿಯನ್ನು ರಚಿಸಿ ಪ್ರತಿಯೊಂದು ಬೂತಿನಲ್ಲಿ ಎಸ್.ಸಿ, ಎಸ್.ಟಿ, ಹಿಂದುಳಿದ ವರ್ಗಗಳು, ಮಹಿಳೆಯರು ಮತ್ತು ಯುವಕರ ಮೋರ್ಚಾಗಳನ್ನು ಸ್ಥಾಪಿಸಿ. ಸಕ್ರಿಯವಾಗಿ ಕೆಲಸ ಮಾಡಿ. ಪೇಜ್ ಸಮಿತಿಗಳಲ್ಲಿ ಪೇಜ್ ಪ್ರಮುಖರಿದ್ದಾರೆ. ಇಲ್ಲಿ ಬರುವ ಸಮಿತಿಯನ್ನು ರಚಿಸಿ ನಿರಂತರವಾಗಿ ಮೂರು ತಿಂಗಳು ಕೆಲಸ ಮಾಡಬೇಕು. ಪ್ರತಿ ಮನೆಗೂ ಭೇಟಿ ನೀಡಿ 4 ಬಾರಿ ಭೇಟಿ ನೀಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಾಧನೆ ಹಾಗೂ ಕಾಂಗ್ರೆಸ್ಸಿನ ಜನವಿರೋಧಿ ನೀತಿಯನ್ನು ತಿಳಿಸುವ ಕೆಲಸ ಮಾಡಬೇಕು. ಈ ಬಾರಿ ಚುನಾವಣೆಗೆ ಮುನ್ನ ಮತ ಕೇಳಲು ಹೋಗಬೇಕು. ನಾವು ಎಲ್ಲಿ ಅಧಿಕಾರ ಹಿಡಿದಿಲ್ಲವೋ ಅಂತಹ ಕ್ಷೇತ್ರಗಳಲ್ಲಿ ಈ ಬಾರಿ ಬಿಜೆಪಿ ಬಾವುಟ ಹಾರಿಸಬೇಕು.

ಬಿಜೆಪಿ ಕಾರ್ಯಕರ್ತರಾಗಿ ಹೆಮ್ಮೆಯಿಂದ ಜನರ ಬಳಿಗೆ ಹೋಗಲು ಸಾಧ್ಯವಿದೆ ಎಂದರು. ವಿಶ್ವದಲ್ಲಿಯೇ ಬಿಜೆಪಿ ಅತೀ ದೊಡ್ಡ ಪಕ್ಷ. ಅತೀ ಹೆಚ್ಚು ಜನ ನಮ್ಮ ತತ್ವ, ಸಿದ್ಧಾಂತ ಮತ್ತು ಕಾರ್ಯ ಕ್ರಮಗಳನ್ನು ಒಪ್ಪಿರುವುದರಿಂದ ಇಷ್ಟು ದೊಡ್ಡ ಸಂಖ್ಯೆಯಲ್ಲಿ ಸದಸ್ಯರಾಗಿದ್ದಾರೆ. ಭಾರತದ ಭದ್ರತೆಯ ಜೊತೆಗೆ ಭಾರತದ ಪ್ರಗತಿ, ಆರ್ಥಿಕ, ಸಾಮಾಜಿಕ, ಪ್ರಗತಿಯ ಜೊತೆಗೆ ವಿಶ್ವಮಾನ್ಯ ಭಾರತವನ್ನು ರೂಪಿಸಿರುವ ನಾಯಕರು ಎಂದರು. ಅತ್ಯಂತ ಸಂಘಟಿತರಾದ ಕಾರ್ಯಕರ್ತರ ಪಡೆಯನ್ನು ಪಕ್ಷ ಹೊಂದಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜನಪರವಾದ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಠಾನಕ್ಕೆ ತಂದಿದೆ. ಸ್ಮಾರ್ಟ್ ಸಿಟಿ ಯೋಜನೆಯನ್ನು ಮೋದಿಯವರು ಜಾರಿಗೆ ತಂದರು. ಕಾಂಗ್ರೆಸ್ ಕೇಂದ್ರದಲ್ಲಿ ಆಡಳಿತ ಮಾಡಿ ಒಂದು ನಯಾ ಪೈಸೆಯನ್ನೂ ನೀಡಿಲ್ಲ. ಬೂತ್ ಮಟ್ಟದ ಸಂಘಟನೆ ಎಂದರೆ ಎರಡೂ ಕಡೆಯ ಸಂವಹನವಿದ್ದಂತೆ. ಪಕ್ಷದ ಕೆಲಸಗಳನ್ನು ತಿಳಿಸುವುದು ಒಂದೆಡೆಯಾದರೆ. ಸ್ಥಳೀಯ ಮಟ್ಟದ ಸಮಸ್ಯೆಗಳನ್ನು ತಿಳಿದು ಪರಿಹಾರ ಒದಗಿಸುವುದು ಒಂದು ಕಡೆ. ಈ ರೀತಿ ಕೆಲಸ ಮಾಡುವ ಧೈರ್ಯವನ್ನೂ ಯಾವ ಪಕ್ಷವೂ ಮಾಡು ವುದಿಲ್ಲ. ಪ್ರಜಾಪ್ರಭುತ್ವದಲ್ಲಿ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಲಾಭ ದೊರೆಯ ಬೇಕು. ಜನರ ಸುತ್ತಲೂ ಅಭಿವೃದ್ಧಿಯಾಗಬೇಕು. ಸರ್ಕಾರ ಮನೆ ಬಾಗಿಲಿಗೆ ಹೋಗಿ ಕೆಲಸ ಮಾಡಿ ಕೊಡಲು, ಸೇವಾ ಮನೋಭಾವದಿಂದ ಕೆಲಸ ನಿರ್ವಹಿಸುವ ತತ್ವ ಪಾಲಿಸುವುದು ಭಾರತೀಯ ಜನತಾ ಪಕ್ಷದ್ದಾಗಿದೆ ಎಂದರು. ರಾಜಕಾರಣದಲ್ಲಿ ಅಧಿಕಾರಕ್ಕೆ ರಾಜಕಾರಣ ಹಾಗೂ ಜನರಿಗಾಗಿ ರಾಜಕಾರಣವಿದೆ. ಕಾಂಗ್ರೆಸ್ ಪಕ್ಷ ಅಧಿಕಾರದ ರಾಜಕಾರಣ ಮಾಡಿದೆ. ಜನರನ್ನು ಜಾತಿಮತ ಪಂಥದಿಂದ ಒಡೆಯುವ ನೀತಿಯನ್ನು ಪಾಲಿಸುತ್ತದೆ. ಭಾಜಪ ಪಕ್ಷದ್ದು ಜನರಿಂದ, ಜನರಿಗಾಗಿ ಜನರ ರಾಜಕಾರಣ ಮಾಡುತ್ತದೆ. ಭಾರತೀಯ ಜನತಾ ಪಕ್ಷದ ಕಾರ್ಯಕರ್ತ ಜನರೊಂದಿಗಿದ್ದು, ಜನರಿಗಾಗಿ ಕೆಲಸ ಮಾಡುವವನು. ದೇಶಾ ಭಿಮಾನಿಯಾಗಿದ್ದು, ದೇಶಕ್ಕಾಗಿ ಸದಾ ಶ್ರಮಿಸು ವವನಾಗಿರುತ್ತಾನೆ. ಪಕ್ಷದ ಸಿದ್ಧಾಂತಗಳಿಗಾಗಿ ಕಟಿಬದ್ಧವಾಗಿ ದುಡಿಯುತ್ತಾನೆ ಎಂದರು.

> ಕಾಂಗ್ರೆಸ್‌ನವರು ಮೊಸರಿನಲ್ಲಿ ಕಲ್ಲನ್ನು ಹುಡುಕುವ ಕೆಲಸವನ್ನು ಮಾಡುತ್ತಾರೆ. ಅವರು ಜನಕಲ್ಯಾಣ ಕಾರ್ಯಕ್ರಮಗಳನ್ನು ಮಾಡದಿರುವ ಕಾರಣ ಜನರು ಕಳೆದ ಬಾರಿ ತಿರಸ್ಕಾರ ಮಾಡಿದ್ದಾರೆ. ಈ ಬಾರಿಯೂ ಜನರು ಕಾಂಗ್ರೆಸ್ ಅನ್ನು ತಿರಸ್ಕರಿಸಲಿದ್ದಾರೆ. ದೇಶ ಹಾಗೂ ನಾಡಿನ ಸಮಗ್ರ ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿದ್ದೇವೆ. ಬೂತ್ ಮಟ್ಟದ ಸಂಘಟನೆ ಮಾಡುವಾಗ ಸ್ಥಳೀಯ ಸಮಸ್ಯೆಗಳೇನು ಎಂಬುದರ ಅರಿವಿರಬೇಕು. ಆಯಾ ವಾರ್ಡಿನಲ್ಲಿರುವ ರಸ್ತೆ, ನೀರಿನ ಸಮಸ್ಯೆ ಬಗ್ಗೆ ತಿಳಿದುಕೊಳ್ಳಬೇಕು. –ಬಸವರಾಜ ಬೊಮ್ಮಾಯಿ, ಮುಖ್ಯಮಂತ್ರಿ

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

## ಸ್ಕೂಟರ್ ಕಲಿಯಲು ಬಂದವರ ಮನೆಗೆ ಕನ್ನ ಹಾಕಿದ ಟ್ರೈನರ್ ಸೇರಿ ಮೂವರು ಕಳ್ಳಿಯರ ವಶ



ಮೈಸೂರು, ಜ.2(ಎಸ್‌ಬಿಡಿ)– ಸ್ಕೂಟರ್ ಕಲಿಯಲು ಬಂದವರ ಮನೆಗೆ ನುಗ್ಗಿ ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಹಾಗೂ ಹಣ ದೋಚಿದ್ದ ಟ್ರೈನರ್ ಸೇರಿ ಮೂವರು ಖತರ್ನಾಕ್ ಮಹಿಳೆಯರನ್ನು ಮೈಸೂರಿನ ಕುವೆಂಪುನಗರ ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಕುವೆಂಪುನಗರದ ನಿವಾಸಿ, ಸ್ಕೂಟರ್ ಟ್ರೈನರ್ ಅಮೃತ(38), ಆಕೆಯ ಗೆಳತಿಯರಾದ ಚಾಮುಂಡಿಪುರಂನ ಅಶ್ವಿನಿ(28) ಹಾಗೂ ಶ್ರುತಿ(26) ಆರೋಪಿಗಳಾಗಿದ್ದು, ಇವರು ರಾಮಕೃಷ್ಣನಗರದ ಪೂರ್ಣಿಮಾ ಅವರ ಮನೆಯಿಂದ ದೋಚಿದ್ದ ಸುಮಾರು 7.50 ಲಕ್ಷ ರೂ. ಮೌಲ್ಯದ 160 ಗ್ರಾಂ ಚಿನ್ನಾಭರಣ, 12 ಸಾವಿರ ರೂ. ಹಣ, ಕೃತ್ಯಕ್ಕೆ ಬಳಸಿದ್ದ ಸ್ಕೂಟರ್ ಹಾಗೂ 3 ಮೊಬೈಲ್‌ಗಳನ್ನೂ ವಶಪಡಿಸಿಕೊಳ್ಳಲಾಗಿದೆ.

ಪೂರ್ಣಿಮಾ ಅವರು ರಾಮಕೃಷ್ಣನಗರ ಎ ಅಂಡ್ ಬಿ ಬ್ಲಾಕ್‌ನಲ್ಲಿ ಒಬ್ಬರೇ ವಾಸವಿದ್ದು, ವಿದೇಶದಲ್ಲಿ ಶಿಕ್ಷಣ ಪಡೆಯುತ್ತಿರುವ ಪುತ್ರಿಯ ವಿವಾಹಕ್ಕೆಂದು ಚಿನ್ನಾಭರಣ ಮಾಡಿಸಿ ಮನೆಯಲ್ಲಿಟ್ಟಿದ್ದರು. ಸ್ಕೂಟರ್ ಓಡಿಸುವುದನ್ನು ಕಲಿತುಕೊಳ್ಳಲೆಂದು ಟ್ರೈನರ್ ಅಮೃತ ಅವರೊಂದಿಗೆ ಎಂದಿನಂತೆ ಡಿ.31ರಂದು ಹೋಗಿದ್ದ ಅವರು ವಾಪಸ್ಸು ಮನೆಗೆ ಬಂದು ನೋಡಿದಾಗ ಬೀರುವಿನಲ್ಲಿದ್ದ ಚಿನ್ನಾಭರಣ ಹಾಗೂ 20 ಸಾವಿರ ರೂ. ಹಣ ಕಳುವಾಗಿತ್ತು. ಈ ಬಗ್ಗೆ ಕುವೆಂಪುನಗರ ಠಾಣೆ ಪೊಲೀಸರಿಗೆ ದೂರು ನೀಡಿದರು.

ಕೂಡಲೇ ಕಾರ್ಯಪ್ರವೃತ್ತರಾದ ಪೊಲೀಸರು, ಪರಿಶೀಲನೆ ನಡೆಸಿ ತಾಂತ್ರಿಕ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ, ಆರೋಪಿಗಳಿಗೆ ಶೋಧ ನಡೆಸಿದ್ದರು. ಸ್ಕೂಟರ್ ಟ್ರೈನರ್ ಅಮೃತಾಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಪೂರ್ಣಿಮಾ ಅವರ ಮನೆಯ ನಕಲೀ ಕೀ ಮಾಡಿಸಿಕೊಂಡು ಗೆಳತಿಯರಾದ ಬ್ಯೂಟಿಷಿಯನ್ ಅಶ್ವಿನಿ ಹಾಗೂ ಮನೆ ಕೆಲಸ ಮಾಡಿಕೊಂಡಿರುವ ಶ್ರುತಿ ಜೊತೆಗೂಡಿ ಚಿನ್ನಾಭರಣ ಹಾಗೂ ಹಣ ದೋಚಿದ್ದಾಗಿ ಹೇಳಿದ್ದಾಗಿ ಪೊಲೀಸರು ತಿಳಿಸಿದ್ದಾರೆ.

ನಿತ್ಯ ಪೂರ್ಣಿಮಾ ಅವರ ಮನೆಗೆ ಬಂದು ಸ್ಕೂಟರ್ ಕಲಿಯಲು ಕರೆದುಕೊಂಡು ಹೋಗಿ ವಾಪಸ್ ಕರೆತಂದು ಬಿಡುತ್ತಿದ್ದ ಅಮೃತಾ ಮನೆಯನ್ನೆಲ್ಲಾ ಗಮನಿಸಿದ್ದಳು. ಪೂರ್ಣಿಮಾ ಅವರು ಮನೆಯ ಕೀಯನ್ನು ಸ್ಕೂಟರ್‌ನ ಡಿಕ್ಕಿಯಲ್ಲಿಡುತ್ತಿದ್ದರು. ಯಾವಾಗಲೋ ಬೇರೊಂದು ವಾಹನವನ್ನು ಕಲಿಯಲು ನೀಡಿ, ಕೀ ಇಟ್ಟಿದ್ದ ವಾಹನವನ್ನು ತಾನು ತೆಗೆದುಕೊಂಡು ಹೋಗಿ ನಕಲಿ ಕೀ ಮಾಡಿಸಿಕೊಂಡಿರಬಹುದು. ಪೂರ್ಣಿಮಾ ಅವರು ಚಿನ್ನಾಭರಣ ತಂದಿರುವುದನ್ನು ತಿಳಿದು, ತಾನು ಮಾಡಿಸಿಟ್ಟುಕೊಂಡಿದ್ದ ನಕಲಿ ಕೀ ಮೂಲಕ ಮನೆಯೊಳಗೆ ನುಗ್ಗಿ ಕಳ್ಳತನ ಮಾಡಿದ್ದಾಳೆ ಎಂದು ತಿಳಿದುಬಂದಿದೆ.

ಡಿಸಿಪಿ ಎಂ.ಎಸ್.ಗೀತಾಪ್ರಸನ್ನ ಮಾರ್ಗದರ್ಶನದಲ್ಲಿ ಕೆಆರ್.ಉಪವಿಭಾಗದ ಎಸಿಪಿ ಎಸ್.ಇ. ಗಂಗಾಧರಸ್ವಾಮಿ ನೇತೃತ್ವದಲ್ಲಿ ಕುವೆಂಪುನಗರ ಪಿಐ ಎಲ್.ಅರುಣ್, ಪಿಎಸ್‌ಐ ಎಂ.ರಾಧಾ, ಮಹದೇವ, ಎಎಸ್‌ಐ ಎಂ.ಪಿ.ಮಂಜುನಾಥ, ಎನ್.ಕೆ.ಪುಟ್ಟಪ್ಪ, ನಾಗೇಶ, ಎಂ.ಸಿ.ಯೋಗೇಶ, ಹಜರತ್, ಸುರೇಶ್, ಮಾದೇಶ್, ಮಂಜುಳಾ, ಅಭಿಲಾಷ, ಅಶ್ವಿನಿ, ಕೃಷ್ಣವೇಣಿ, ಸೌಭಾಗ್ಯ ಕಾರ್ಯಾಚರಣೆ ನಡೆಸಿ, ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಅಶ್ಲೀಲ ವಿಡಿಯೋ ವಾಟ್ಸಾಪ್: ಸೂಪರಿಂಟೆಂಡೆಂಟ್ ವಿರುದ್ಧ ಪ್ರಕರಣ

ಮೈಸೂರು, ಜ. 2– ಸಹೋದ್ಯೋಗಿಗೆ ವಾಟ್ಸಾಪ್ ಮೂಲಕ ಅಶ್ಲೀಲ ವಿಡಿಯೋ ಹಾಗೂ ಫೋಟೋ ರವಾನಿಸಿದ ಆರೋಪದ ಮೇರೆಗೆ ಮೈಸೂರಿನ ನೀರಾವರಿ ಇಲಾಖೆ ದಕ್ಷಿಣ ವಲಯದ ಮುಖ್ಯ ಇಂಜಿನಿಯರ್ ಕಚೇರಿಯ ಸೂಪರಿಂಟೆಂಡೆಂಟ್ ವಿರುದ್ಧ ಪ್ರಕರಣ ದಾಖಲಾಗಿದೆ. ಕಚೇರಿಯ ಸೂಪರಿಂಟೆಂಡೆಂಟ್ ಕೆ. ವಸಂತ ಆರೋಪಕ್ಕೆ ಗುರಿಯಾದವರಾಗಿದ್ದು, ಇವರು ತಮ್ಮ ಕಚೇರಿಯ ಪ್ರಥಮ ದರ್ಜೆ ಸಹಾಯಕಿಗೆ ಡಿಸೆಂಬರ್ 28ರಂದು ಬೆಳಗಿನಜಾವ 3.26ರಿಂದ 11.46ರವರೆಗೆ ವಾಟ್ಸಾಪ್ ಮೂಲಕ ಅಶ್ಲೀಲ ವಿಡಿಯೋ ಹಾಗೂ ಫೋಟೋ ಮತ್ತು ಸಂದೇಶಗಳನ್ನು ರವಾನಿಸಿದ್ದಲ್ಲದೇ ಡಿಸೆಂಬರ್ 30ರಂದು ಕಚೇರಿಯ ಸಿಬ್ಬಂದಿಗಳೊಂದಿಗೆ ಈ ವಿಚಾರವನ್ನು ಪ್ರಸ್ತಾಪಿಸಿ ಅವಮಾನ ಮಾಡಿದ್ದಲ್ಲದೇ, ಮಾನಸಿಕ ಹಿಂಸೆ ಕೊಟ್ಟಿದ್ದಾರೆ ಎಂದು ನೀಡಿದ ದೂರನ್ನು ದಾಖಲಿಸಿಕೊಂಡಿರುವ ಕೆ.ಆರ್. ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಫೇಸ್‌ಬುಕ್ ಮೂಲಕ ಪರಿಚಯವಾದ ಗೆಳೆಯನಿಂದ ಗೆಳತಿಯ ಸ್ಕೂಟರ್ ಕಳವು!

ಮೈಸೂರು, ಜ. 2– ಬಿ.ಕಾಂ ಪದವೀಧರೆಗೆ ಫೇಸ್‌ಬುಕ್ ಮೂಲಕ ಪರಿಚಯವಾದ ಯುವಕ ಆಕೆಯ ದ್ವಿಚಕ್ರ ವಾಹನವನ್ನು ಅಪಹರಿಸಿರುವ ಬಗ್ಗೆ ವರದಿಯಾಗಿದೆ.

ಮೈಸೂರಿನ ನಾರ್ತ್ ಇಸ್ಟ್ ಆಫ್ ನರಸಿಂಹರಾಜ ಮೊಹಲ್ಲಾ ನಿವಾಸಿ ವಿ. ಹರ್ಷಿತಾ(21) ದ್ವಿಚಕ್ರ ವಾಹನ ಕಳೆದುಕೊಂಡವರಾಗಿದ್ದು, ಡಿಸೆಂಬರ್ 19ರಂದು ರೋಹಿತ್ ಸೀರ್ಝುರ್ ಎಂಬ ಫೇಸ್‌ಬುಕ್ ಅಕೌಂಟ್‌ನಿಂದ ಬಂದ ರಿಕ್ವೆಸ್ಟ್ ಅನ್ನು ಇವರು ಅಕ್ಸೆಪ್ಟ್ ಮಾಡಿದ್ದಾರೆ. ಡಿಸೆಂಬರ್ 26ರಂದು ಆತ ಕರೆ ಮಾಡಿ ಯುವತಿಯ ಮೊಬೈಲ್ ನಂಬರ್ ಪಡೆದು, ಮರುದಿನವೇ ತನ್ನ ಕಾಲಿಗೆ ಪೆಟ್ಟಾಗಿದ್ದು, ಹಣ ಕಳುಹಿಸುವಂತೆ ಕೇಳಿದ್ದಾನೆ. ಅಲ್ಲದೇ, ಹಣ ಹೂಡಿಕೆ ಮಾಡಿದರೆ ಲಾಭ ಬರುತ್ತದೆ ಎಂದು ಯಾವುದೋ ಸಂಸ್ಥೆ ಹೆಸರಿನಲ್ಲಿ ಹಣ ಹೂಡಿಕೆ ಮಾಡಿಸಲು ಪ್ರಯತ್ನಿಸಿದ್ದಾನೆ. ಅದಕ್ಕೆ ಯುವತಿ ನಿರಾಕರಿಸಿದ್ದಾಳೆ.

ಕ್ರೈಂ ಬಾಕ್ಸ್

ಡಿಸೆಂಬರ್ 28ರಂದು ಯುವತಿಗೆ ಕರೆ ಮಾಡಿದ ರೋಹಿತ್, ಆಕೆಯನ್ನು ಆಕಾಶವಾಣಿ ಸರ್ಕಲ್‌ಗೆ ಕರೆಸಿಕೊಂಡು ಮಾತನಾಡಿ ಕಳುಹಿಸಿದ್ದಾನೆ. ಮತ್ತೆ ಡಿಸೆಂಬರ್ 30ರಂದು ಮಧ್ಯಾಹ್ನ ಹರ್ಷಿತಾಳನ್ನು ಪಡುವಾರಹಳ್ಳಿಯ ಸಮಾಜ ಕಲ್ಯಾಣ ಇಲಾಖೆ ಬಳಿಗೆ ಕರೆಸಿಕೊಂಡು, ತನ್ನ ಬೈಕ್ ಅನ್ನು ಸರ್ವಿಸ್‌ಗೆ ಬಿಟ್ಟಿರುವುದಾಗಿ ತಿಳಿಸಿ, ತನ್ನನ್ನು ಮಣಿಪಾಲ್ ಜಂಕ್ಷನ್‌ಗೆ ಡ್ರಾಪ್ ಕೊಡುವಂತೆ ಕೇಳಿದ್ದಾನೆ. ಯುವತಿಯ ಸುಜುಕಿ ಆಕ್ಸಿಸ್–125 (ಕೆಎ 55–ವೈ 9473) ಅನ್ನು ಆತನೇ ಚಾಲನೆ ಮಾಡಿಕೊಂಡು ಬಂದು ಮಣಿಪಾಲ್ ಜಂಕ್ಷನ್ ಬಳಿ ಇರುವ ವೈಟ್ ಪ್ಯಾಲೇಸ್ ಮುಂಭಾಗ ಸರ್ವಿಸ್ ರಸ್ತೆಯಲ್ಲಿ ಸ್ಕೂಟರ್ ಅನ್ನು ನಿಲ್ಲಿಸಿ, ಆಕೆಯ ಜೊತೆ ಮಾತನಾಡಬೇಕೆಂದು ಹೇಳಿದ್ದಾನೆ. ಯುವತಿ ಇಳಿಯುತ್ತಿದ್ದಂತೆಯೇ ಸ್ಕೂಟರ್ ಚಾಲನೆ ಮಾಡಿಕೊಂಡು ಪರಾರಿಯಾಗಿದ್ದಾನೆ. ಈ ಸಂಬಂಧ ಎನ್.ಆರ್. ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸ್ನೇಹಿತನ ಇರಿದು ಕೊಂದ ಆರೋಪಿಯ ಬಂಧನ

ಮೈಸೂರು, ಜ.2(ಎಸ್‌ಬಿಡಿ)– ಅನುಮಾನದಿಂದ ಸ್ನೇಹಿತನನ್ನೇ ಇರಿದು ಕೊಲೆ ಮಾಡಿ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಘಟನೆ ನಡೆದ 24 ಗಂಟೆಯೊಳಗೆ ಮೈಸೂರಿನ ವಿಜಯನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಮೈಸೂರಿನ ಕೂರ್ಗಳ್ಳಿಯಲ್ಲಿ ದರ್ಶನ್ ಎಂಬಾತನಿಗೆ ಡಿ.23ರಂದು ಲೋಕೇಶ್ ಚಾಕುವಿನಿಂದ ಇರಿದು ಪರಾರಿಯಾಗಿದ್ದ. ದರ್ಶನನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದರು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ವಿಜಯನಗರ ಠಾಣೆ ಪೊಲೀಸರು, ಕೆ.ಆರ್.ನಗರದ ಸಂಬಂಧಿಕರ ಮನೆಯಲ್ಲಿದ್ದ ಆರೋಪಿ ಲೋಕೇಶ್‌ನನ್ನು ಡಿ.24ರಂದು ಬಂಧಿಸಿದ್ದಾರೆ ಎಂದು ಪೊಲೀಸ್ ಆಯುಕ್ತರ ಕಚೇರಿ ಪ್ರಕಟಣೆ ತಿಳಿಸಿದೆ.

ಪಿರಿಯಾಪಟ್ಟಣ ಮೂಲದ ದರ್ಶನ್, ಲೋಕೇಶ್ ಇನ್ನಿತರ ಸ್ನೇಹಿತರು ಕೂರ್ಗಳ್ಳಿಯ ಒಂದೇ ಮನೆಯಲ್ಲಿ ವಾಸವಿದ್ದು, ಪೇಂಟ್ ಕೆಲಸ ಮಾಡಿಕೊಂಡಿದ್ದರು. ಆರೋಪಿ ತನ್ನ 2ನೇ ಪತ್ನಿಗೆ ದರ್ಶನ್ ಪದೇ ಪದೆ ಮೆಸೇಜ್ ಹಾಗೂ ಕಾಲ್ ಮಾಡುತ್ತಾನೆ ಎಂದು ಅನುಮಾನಿಸಿ, ಚಾಕುವಿನಿಂದ ಇರಿದಿದ್ದಾಗಿ ವಿಚಾರಣೆ ವೇಳೆ ತಿಳಿಸಿದ್ದಾನೆ.

ಡಿಸಿಪಿ ಮುತ್ತುರಾಜ್ ಹಾಗೂ ನರಸಿಂಹರಾಜ ವಿಭಾಗದ ಎಸಿಪಿ ಶಿವಶಂಕರ್ ಮಾರ್ಗದರ್ಶನದಲ್ಲಿ, ವಿಜಯನಗರ ಠಾಣೆ ಇನ್ಸ್‌ಪೆಕ್ಟರ್ ರವಿ ಶಂಕರ್, ಸಬ್‌ಇನ್‌ಸ್ಪೆಕ್ಟರ್‌ಗಳಾದ ಶಬರೀಶ್, ನಾರಾಯಣ, ಸಿಬ್ಬಂದಿ ಶಂಕರ್, ಮುರಳೀಧರ್, ಲೋಕೇಶ್, ಪ್ರಭಾಕರ್, ಸೋಮಾರಾಧ್ಯ, ಮೆಹಬೂಬ್ ಪಾಷ, ಶಿವಕುಮಾರ್, ಶ್ರೀನಿವಾಸ ಮೂರ್ತಿ, ಅಣ್ಣಪ್ಪ ದೇವಾಡಿಗಾ ಹಾಗೂ ಕಾಮಣ್ಣ ಕಾರ್ಯಾಚರಣೆ ನಡೆಸಿ, ಆರೋಪಿಯನ್ನು ಬಂಧಿಸಿದ್ದಾರೆ.

## ಲಾರಿ ಹಿಂಬದಿ ಚಕ್ರಕ್ಕೆ ಸಿಲುಕಿ ಬೈಕ್ ಸವಾರ ಸಾವು

ಮೈಸೂರು, ಜ.2(ಆರ್‌ಕೆ)– ಲಾರಿ ಹಿಂಬದಿ ಚಕ್ರಕ್ಕೆ ಸಿಲುಕಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಬನ್ನೂರು ರಸ್ತೆಯ ಎಟಿಎಂಇ ಕಾಲೇಜು ಬಳಿ ಸೋಮವಾರ ರಾತ್ರಿ ನಡೆದಿದೆ. ಮೈಸೂರು ತಾಲೂಕು ಮೆಲ್ಲಹಳ್ಳಿಯ ಮರವ ಸಿದ್ದ ಎಂಬುವರ ಪುತ್ರ ಶಿವಕುಮಾರ್(23) ಅಪಘಾತದಲ್ಲಿ ಸಾವನ್ನಪ್ಪಿದವನಾಗಿದ್ದು, ಈತ ಮೈಸೂರಿನ ಹಾರ್ಡ್‌ವೇರ್ ಶಾಪ್‌ವೊಂದರಲ್ಲಿ ಕೆಲಸ ಮಾಡುತ್ತಿದ್ದ.

ಬನ್ನೂರು ಕಡೆಯಿಂದ ಬರುತ್ತಿದ್ದ ಲಾರಿಯನ್ನು ಈತ ಬೈಕ್‌ನಲ್ಲಿ ಹಿಂಬಾಲಿಸುತ್ತಿದ್ದ. ಎಟಿಎಂಇ ಕಾಲೇಜು ಸಮೀಪ ಬೈಕ್ ಬಂಪರ್ ಲಾರಿಗೆ ತಗುಲಿ ಬೈಕ್, ಲಾರಿ ಹಿಂಬದಿ ಚಕ್ರಕ್ಕೆ ಸಿಲುಕಿ ಸ್ವಲ್ಪ ದೂರ ಎಳೆದುಕೊಂಡು ಹೋಗಿತ್ತು. ಇದರಿಂದಾಗಿ ಸವಾರ ಶಿವಕುಮಾರ್ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ವರುಣಾ ಠಾಣೆ ಸಬ್ ಇನ್ಸ್‌ಪೆಕ್ಟರ್ ಸುಷ್ಮಾ ಮತ್ತು ಸಿಬ್ಬಂದಿ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

### ಪಿರಿಯಾಪಟ್ಟಣ ಚರ್ಚ್ ಮೇಲಿನ ದಾಳಿ ಪ್ರಕರಣ

# ಸಂಬಳ ನೀಡದ ಫಾದರ್ ಮೇಲಿನ ಪ್ರತೀಕಾರಕ್ಕೆ ಪೌರಕಾರ್ಮಿಕ ಯುವಕನ ಕೃತ್ಯ

**● ಪತ್ರಿಕಾಗೋಷ್ಠಿಯಲ್ಲಿ ಎಸ್ಪಿ ಸೀಮಾ ಲಾಟ್ಕರ್ ವಿವರಣೆ ● ಬಾಕಿ ಸಂಬಳ ಕೇಳಲು ಚರ್ಚ್‌ಗೆ ಬಂದು, ಯಾರೂ ಇಲ್ಲದಿದ್ದ ಕಂಡು ಹುಂಡಿ ಹಣ ಕದ್ದಿದ್ದ**

ಮೈಸೂರು, ಜ.2(ಎಸ್‌ಬಿಡಿ)– ಪಿರಿಯಾಪಟ್ಟಣದ ಸೆಂಟ್ ಮೇರಿಸ್ ಚರ್ಚ್‌ಗೆ ನುಗ್ಗಿ ಬಾಲ ಏಸು ಮೂರ್ತಿಯನ್ನು ಒಡೆದು, ಹುಂಡಿಯನ್ನು ದೋಚಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.



ಚರ್ಚ್ ಸಮೀಪದ ಮಹದೇಶ್ವರ ಬಡಾವಣೆ, ಪೌರಕಾರ್ಮಿಕರ ಕಾಲೋನಿ ನಿವಾಸಿ ವಿಶ್ವ(24) ಬಂಧಿತನಾಗಿದ್ದು, ಈತ 2 ವರ್ಷದ ಹಿಂದೆ ಅದೇ ಚರ್ಚ್‌ನಲ್ಲಿ ಕೆಲಸ ಮಾಡಿಕೊಂಡಿದ್ದ. ಹಿಂದಿನ ಫಾದರ್ ಸಂಬಳ ನೀಡಿಲ್ಲವೆಂದು ಬೇಸರಗೊಂಡಿದ್ದ ಆತ ಕ್ರಿಸ್‌ಮಸ್ ವೇಳೆ ಅವರು ಬಂದಿರಬಹುದೆಂದು ಭಾವಿಸಿ ಭೇಟಿಯಾಗಲು ಬಂದವನು ಈ ಕೃತ್ಯವೆಸಗಿದ್ದಾನೆ. ಈ ಘಟನೆ ಹಿಂದೆ ಮತ್ಯಾವುದೇ ಕಾರಣಗಳಿಲ್ಲ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕಿ(ಎಸ್ಪಿ) ಸೀಮಾ ಲಾಟ್ಕರ್, ಸೋಮವಾರ ಸುದ್ದಿಗೋಷ್ಠಿಯಲ್ಲಿ ಸ್ಪಷ್ಟಪಡಿಸಿದರು.

ಕಳೆದ ಡಿಸೆಂಬರ್ 27ರಂದು ಪಿರಿಯಾಪಟ್ಟಣದ ಗೋಣಿಕೊಪ್ಪ ರಸ್ತೆಯ ಸೆಂಟ್ ಮೇರಿಸ್ ಚರ್ಚ್‌ನ ಬೀಗ ಹೊಡೆದು ಹುಂಡಿಯನ್ನು ಕಳವು ಮಾಡಲಾಗಿತ್ತು. ಅಲ್ಲದೆ ಕ್ರಿಸ್‌ಮಸ್ ಆಚರಣೆಯಂದು ಟೇಬಲ್ ಮೇಲೆ ತೊಟ್ಟಿಲಲ್ಲಿಟ್ಟು ಆರಾಧಿಸಿದ್ದ ಬಾಲ ಏಸು ಮೂರ್ತಿಯನ್ನು ಒಡೆದು ಹಾಕಲಾಗಿತ್ತು. ಈ ಸಂಬಂಧ ಚರ್ಚ್‌ನ ಫಾದರ್ ಜಾನ್‌ಪಾಲ್ ಅವರು ನೀಡಿದ್ದ ದೂರಿನನ್ವಯ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿತ್ತು.

**ಮೂರು ತಂಡ ರಚನೆ:** ಸೂಕ್ಷ್ಮ ಪ್ರಕರಣವಾಗಿದ್ದ ಕಾರಣ ಪಿರಿಯಾಪಟ್ಟಣ ಠಾಣೆ ಇನ್ಸ್‌ಪೆಕ್ಟರ್ ಶ್ರೀಧರ, ಬೈಲಕುಪ್ಪೆ ವೃತ್ತ ನಿರೀಕ್ಷಕ ಪ್ರಕಾಶ್ ಹಾಗೂ ಹುಣಸೂರು ಗ್ರಾಮಾಂತರ ಠಾಣೆ ಸಿ.ವಿ.ರವಿ ನೇತೃತ್ವದ ಮೂರು ತಂಡಗಳನ್ನು ತನಿಖೆಗೆ ನಿಯೋಜಿಸಲಾಗಿತ್ತು. ಈ ಘಟನೆಯ ಹಿಂದೆ ಧಾರ್ಮಿಕ ವೈಷಮ್ಯವಿರಬಹುದಾ, ಸ್ಥಳೀಯ ದುಷ್ಕರ್ಮಿಗಳು ಈ ಕೃತ್ಯವೆಸಗಿರಬಹುದಾ, ಇಲ್ಲವೇ ಕಳ್ಳರು ನುಗ್ಗಿ ಹಣ ದೋಚಿದ ಬಳಿಕ ತನಿಖೆಯ ದಿಕ್ಕು ತಪ್ಪಿಸಲೆಂದು ಬಾಲ ಏಸು ಮೂರ್ತಿಯನ್ನು ಒಡೆದಿರಬಹುದಾ, ಹೀಗೆ ಎಲ್ಲಾ ಆಯಾಮಗಳಲ್ಲೂ ಪೊಲೀಸರು ತನಿಖೆ ಕೈಗೊಂಡಿದ್ದರು.

**ನೆರವಾದ ಗ್ಲೌಸ್:** ಚರ್ಚ್‌ನೊಳಗೆ ಸಿಕ್ಕಿದ ಸ್ವಚ್ಛತಾ ಕಾರ್ಯಕ್ಕೆ ಬಳಸುವ ನೀಲಿ ಬಣ್ಣದ ಗ್ಲೌಸ್ ಆರೋಪಿಯ ಪತ್ತೆಗೆ ನೆರವಾಯಿತು. ಚರ್ಚ್‌ನ 500 ಮೀಟರ್ ದೂರದಲ್ಲಿರುವ ಪೌರಕಾರ್ಮಿಕರ ಕಾಲೋನಿಗೆ ತೆರಳಿದ ಪೊಲೀಸರು, ಪೌರಕಾರ್ಮಿಕ ವೃತ್ತಿ ಮಾಡುವವರ ಪಟ್ಟಿ ಮಾಡಿ, ನಡವಳಿಕೆ ಇನ್ನಿತರ ಆಧಾರದಲ್ಲಿ ಕೆಲವರ ವಿಚಾರಣೆ ನಡೆಸಿದರು. ಕಡೆಗೆ ಪೌರಕಾರ್ಮಿಕ ಮಹದೇವು ಪುತ್ರ ವಿಶ್ವನ ಮೇಲೆ ಅನುಮಾನ ಬಂದು ಆತನನ್ನು ಇಂದು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಚರ್ಚ್‌ನೊಳಗೆ ತಾನೇ ನುಗ್ಗಿ ಕಳ್ಳತನ ಮಾಡಿದ್ದಾಗಿ ಪೊಲೀಸರಿಗೆ ತಿಳಿಸಿದ್ದಾನೆ. ಅಸಲಿಗೆ ತನಿಖೆಗೆ ನೆರವಾದ ಗ್ಲೌಸ್ ಆರೋಪಿ ಧರಿಸಿದ್ದಲ್ಲ. ಕ್ರಿಸ್‌ಮಸ್ ಬಳಿಕ ಸ್ವಚ್ಛ ಮಾಡಲು ಚರ್ಚ್‌ನವರೇ ಬಳಸಿದ್ದು. ಆದರೆ ಕಳ್ಳತನಕ್ಕೆ ಆರೋಪಿಯೇ ಬಳಸಿದ್ದಿರಬಹುದು ಎಂಬ ಆಯಾಮದಲ್ಲಿ ತನಿಖೆ ನಡೆಸಿದ್ದು ಪೊಲೀಸರಿಗೆ ನೆರವಾಗಿದೆ.

**ಕಾರಣವೇನು?:** ವಿಶ್ವ ಅದೇ ಚರ್ಚ್‌ನಲ್ಲಿ 2 ವರ್ಷದ ಹಿಂದೆ ಸ್ವಚ್ಛತಾ ಕಾರ್ಯ ಮಾಡಿಕೊಂಡಿದ್ದ. ಆ ವೇಳೆ ಇದ್ದ ಫಾದರ್ ಕೆಲ ತಿಂಗಳ ಸಂಬಳ ನೀಡಿರಲಿಲ್ಲವಂತೆ. ಕ್ರಿಸ್‌ಮಸ್ ಆಚರಣೆಗೆ ಅವರು ಬರಬಹುದೆಂದು ಭಾವಿಸಿದ ವಿಶ್ವ, ಅಂದು ಚರ್ಚ್ ಬಳಿ ಹೋಗಿ ಕೇಕ್ ತಿಂದಿದ್ದನಾದರೂ ಹೆಚ್ಚು ಜನ ಇದ್ದ ಕಾರಣ ಒಳಗೆ ಹೋಗಲಾಗದೆ ವಾಪಸ್ಸಾಗಿದ್ದ. ಮತ್ತೆ ಡಿ.27ರಂದು ಚರ್ಚ್ ಬಳಿ ಹೋದಾಗ ಅಲ್ಲಿ ಯಾರೂ ಇಲ್ಲದಿರುವುದನ್ನು ಗಮನಿಸಿ ಹಿಂದಿನ ಬಾಗಿಲಿನಿಂದ ಒಳಗೆ ನುಗ್ಗಿ ಮೂರು ಹುಂಡಿಯಲ್ಲಿದ್ದ ಹಣ ತೆಗೆದುಕೊಂಡಿದ್ದಾನೆ. ಬಾಲ ಏಸು ಮೂರ್ತಿಯಿದ್ದ ಟೇಬಲ್ ಮೇಲೆ ಹಾಸಿದ್ದ ಬಟ್ಟೆ ಕೆಳಗೂ ಹಣವಿರಬಹುದೆಂದು ಅದನ್ನು ಜಗ್ಗಿದಾಗ ಮೂರ್ತಿ ಕೆಳಗೆ ಬಿದ್ದು ಒಡೆಯಿತು. ನಂತರ ಅಲ್ಲಿಂದ ಹೊರಬಂದೆ ಎಂದು ಆತ ಹೇಳಿಕೆ ನೀಡಿದ್ದಾನೆಂದು ಎಸ್ಪಿ ಸೀಮಾ ಲಾಟ್ಕರ್ ತಿಳಿಸಿದರು.

> ಚರ್ಚ್‌ನಲ್ಲಿ ಸಿಸಿ ಕ್ಯಾಮರಾ ಅಳವಡಿಸಿಲ್ಲ. ಆರೋಪಿ ಹಿಂದೆ ಅಲ್ಲಿಯೇ ಕೆಲಸ ಮಾಡಿಕೊಂಡಿದ್ದರಿಂದ ಹಿಂದಿನ ಬಾಗಿಲಿನಿಂದ ಒಳನುಗ್ಗಿ ಕಳ್ಳತನ ಮಾಡಿದ್ದಾನೆ. ಸಿಸಿ ಕ್ಯಾಮರಾ ಅಳವಡಿಸುವಂತೆ ಚರ್ಚ್‌ನ ಫಾದರ್‌ಗೆ ಸೂಚನೆ ನೀಡಲಾಗಿದೆ.
> -ಎಸ್ಪಿ ಸೀಮಾ ಲಾಟ್ಕರ್.

**2 ತಿಂಗಳಿಂದ ಕೆಲಸವಿರಲಿಲ್ಲ:** ಪಟ್ಟಣ ಪಂಚಾಯ್ತಿಯಲ್ಲಿ ಪೌರಕಾರ್ಮಿಕನಾಗಿದ್ದ ವಿಶ್ವ, ಗುಜರಿ ವಸ್ತುಗಳನ್ನು ಮಾರಾಟ ಮಾಡಿದ್ದ ಎಂದು ಆತನನ್ನು ಕೆಲಸದಿಂದ ತೆಗೆದುಹಾಕಲಾಗಿತ್ತು. ಹಾಗಾಗಿ 2 ತಿಂಗಳಿಂದ ಕೆಲಸವಿಲ್ಲದೆ ಮದ್ಯಪಾನ ಮಾಡಿಕೊಂಡು ಓಡಾಡಿಕೊಂಡಿದ್ದ. ಚರ್ಚ್‌ನಲ್ಲಿ ಕದ್ದ ಹಣದಲ್ಲೂ ಮದ್ಯಪಾನ ಮಾಡಿದೆ, ಸ್ವಲ್ಪ ಚಿಂದಿ ಆಯುವ ಹುಡುಗರಿಗೆ ನೀಡಿದೆ ಎಂದೆಲ್ಲಾ ಹೇಳುತ್ತಾನೆ. ಎಷ್ಟು ಹಣ ಕದ್ದಿದ್ದಾನೆ ಎಂಬುದು ನಿಖರವಾಗಿ ತಿಳಿಯಬೇಕಿದೆ ಎಂದು ಹೇಳಿದರು.

**ಬೇರೆ ಪ್ರಕರಣಗಳಿಲ್ಲ:** ಆರೋಪಿ ವಿರುದ್ಧ ಬೇರೆ ಯಾವುದೇ ಪ್ರಕರಣಗಳಿಲ್ಲ. ಹಿಂದಿನ ಫಾದರ್ ಸಂಬಳ ಕೊಟ್ಟಿಲ್ಲ ಎಂದು ಹಣಕ್ಕಾಗಿ ಈ ಕೃತ್ಯ ಮಾಡಿದ್ದಾಗಿ ಹೇಳಿದ್ದಾನೆ. ಚರ್ಚ್ ಒಳಭಾಗದಲ್ಲಿ, ಪ್ರವೇಶ ದ್ವಾರ ಹಾಗೂ ಹೊರ ಆವರಣದಲ್ಲಿದ್ದ ಏಸು ಮೂರ್ತಿಗಳು ಏನೂ ಆಗಿಲ್ಲ. ಹಾಗಾಗಿ ಇದರಲ್ಲಿ ಧಾರ್ಮಿಕ ವೈಷಮ್ಯ ಇದ್ದಂತಿಲ್ಲ. ಡಿ.27ರಂದು ಬೆಳಗ್ಗೆ 11 ಗಂಟೆ ವೇಳೆಗೆ ಈ ಕೃತ್ಯವೆಸಗಿದ್ದಾಗಿ ಆರೋಪಿ ತಿಳಿಸಿದ್ದಾನೆ. ಅಂದು ಬೆಳಗ್ಗೆ ಮೈಸೂರಿಗೆ ಬಂದಿದ್ದ ಫಾದರ್ ಜಾನ್‌ಪಾಲ್ ಅವರು ರಾತ್ರಿ 7 ಗಂಟೆಗೆ ವಾಪಸ್ಸಾದಾಗ ಘಟನೆ ಬೆಳಕಿಗೆ ಬಂದಿದೆ. ಚರ್ಚ್‌ನಲ್ಲಿ ಸ್ವಚ್ಛತಾ ಕಾರ್ಯ ಮಾಡುವ ಮಹಿಳೆಗೆ ಅಂದು ರಜೆ ನೀಡಿದ್ದೆವು. ಹಾಗಾಗಿ ಚರ್ಚ್‌ನಲ್ಲಿ ಯಾರೂ ಇರಲಿಲ್ಲ ಎಂದು ಅವರು ಹೇಳಿಕೆ ನೀಡಿದ್ದಾರೆಂದು ಎಸ್ಪಿ ತಿಳಿಸಿದರು.

**ತಂಡಗಳಿಗೆ ಶ್ಲಾಘನೆ:** ಎಎಸ್‌ಪಿ ಡಾ.ನಂದಿನಿ ಮಾರ್ಗದರ್ಶನ ಹಾಗೂ ಹುಣಸೂರು ಉಪವಿಭಾಗದ ಡಿವೈಎಸ್ಪಿ ಎಂ.ಕೆ.ಮಹೇಶ್ ನೇತೃತ್ವದಲ್ಲಿ ಇನ್‌ಸ್ಪೆಕ್ಟರ್‌ಗಳಾದ ಶ್ರೀಧರ, ಪ್ರಕಾಶ, ಸಿ.ವಿ.ರವಿ, ಸಬ್‌ಇನ್‌ಸ್ಪೆಕ್ಟರ್‌ಗಳಾದ ಬಸವರಾಜು, ಪ್ರಕಾಶ್ ಎತ್ತಿನಮನಿ, ಗೋವಿಂದ, ಸಿಬ್ಬಂದಿ ಲಿಂಗರಾಜಪ್ಪ, ಸತೀಶ್ ಕುಮಾರ್, ಅರುಣ್‌ಕುಮಾರ್, ಪ್ರಭಾಕರ, ಲತೀಫ್, ದೇವರಾಜು, ರವೀಶ್, ಪ್ರಸಾದ್, ಇರ್ಫಾನ್ ಹಾಗೂ ಚೇತನ್ ಮೂರು ತಂಡಗಳಲ್ಲಿ ಪ್ರಕರಣ ಭೇದಿಸಿದ್ದು, ಇವರ ಕಾರ್ಯವನ್ನು ಎಸ್ಪಿಯವರು ಶ್ಲಾಘಿಸಿದರು. ಸುದ್ದಿಗೋಷ್ಠಿಯಲ್ಲಿ ಎಎಸ್‌ಪಿ ಡಾ.ನಂದಿನಿ ಹಾಜರಿದ್ದರು.

## ಚಾಮರಾಜ ಒಡೆಯರ್ ವೃತ್ತದ ಅವ್ಯವಸ್ಥೆ ಸರಿಪಡಿಸಲು ಅಧಿಕಾರಿಗಳಿಗೆ ಮೇಯರ್ ಶಿವಕುಮಾರ್ ತಾಕೀತು





ಮೈಸೂರು, ಜ.2(ಎಸ್‌ಬಿಡಿ)– ಮೈಸೂರಿನ 10ನೇ ಚಾಮರಾಜ ಒಡೆಯರ್ ವೃತ್ತದ ಅವ್ಯವಸ್ಥೆಯನ್ನು ಸರಿಪಡಿಸುವಂತೆ ಮೇಯರ್ ಶಿವಕುಮಾರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಪಾರಂಪರಿಕ ತಜ್ಞ ಪ್ರೊ.ರಂಗರಾಜು ನೇತೃತ್ವದ ಪಾರಂಪರಿಕ ಉಪಸಮಿತಿ ಸರ್ವೆ ನಡೆಸುತ್ತಿದ್ದ ಸಂದರ್ಭದಲ್ಲಿ ವೃತ್ತದ ಅಧ್ವಾನಗಳು ಅನಾವರಣವಾಗಿವೆ. ಕೂಡಲೇ ರಂಗರಾಜು ಅವರು ಮೇಯರ್‌ಗೆ ಕರೆ ಮಾಡಿ ವಿಷಯ ತಿಳಿಸಿದ್ದಾರೆ. ತಕ್ಷಣ ಧಾವಿಸಿದ ಮೇಯರ್ ಶಿವಕುಮಾರ್, ಉಪಸಮಿತಿ ಜೊತೆಗೂಡಿ ವೃತ್ತವನ್ನು ಪರಿಶೀಲಿಸಿದರು.

ವಾಹನ ಡಿಕ್ಕಿ ಹೊಡೆದು ಪಾರಂಪರಿಕ ಶೈಲಿಯ ವಿದ್ಯುತ್ ಕಂಬ ಮುರಿದು ಬಿದ್ದಿರುವುದು, ಮತ್ತೊಂದು ಕಂಬದ ವಿದ್ಯುತ್ ದೀಪ ಕಳಚಿರುವುದು, ಮೆಟ್ಟಲಿಗೆ ಅಳವಡಿಸಿರುವ ಚಪ್ಪಡಿ ಉರುಳಿರುವುದು, ಹೆಗ್ಗಣ ಬಿಲ ಕೊರೆದಿರುವುದು, ಚಾಮರಾಜ ಒಡೆಯರ್ ಪ್ರತಿಮೆಗೆ ವಾಹನಗಳ ಹೊಗೆ, ಧೂಳು ಮೆತ್ತಿಕೊಂಡಿರುವುದು, ಹೀಗೆ ಹಲವು ಸಮಸ್ಯೆಗಳಿರುವುದನ್ನು ಪ್ರೊ.ರಂಗರಾಜು, ಮೇಯರ್ ಗಮನಕ್ಕೆ ತಂದರಲ್ಲದೆ, ಒಡೆಯರ್ ಪ್ರತಿಮೆಯನ್ನು ಸ್ವಚ್ಛಗೊಳಿಸಲು ಕ್ರಮ ವಹಿಸುವಂತೆ ಮನವಿ ಮಾಡಿದರು.

ಈ ವೇಳೆ ಸಿಸಿ ಕ್ಯಾಮರಾ ಫುಟೇಜ್‌ಗಳನ್ನು ಪರಿಶೀಲಿಸಿ, ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿರುವ ವಾಹನವನ್ನು ಪತ್ತೆ ಹಚ್ಚಿ. ಹೆಗ್ಗಣಗಳು ಕೊರೆದಿರುವ ಬಿಲಗಳನ್ನು ಮುಚ್ಚಿಸಿ. ಪ್ರತಿಮೆಯನ್ನು ಸ್ವಚ್ಛಗೊಳಿಸಲು ಕ್ರಮ ಕೈಗೊಳ್ಳಿ ಎಂದು ಮೇಯರ್ ಶಿವಕುಮಾರ್ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

ಪ್ರೊ.ರಂಗರಾಜು ನೇತೃತ್ವದಲ್ಲಿ ಪಾರಂಪರಿಕ ಇಲಾಖೆ ಉಪನಿರ್ದೇಶಕಿ ಮಂಜುಳಾ, ನಗರ ಪಾಲಿಕೆ ನಗರ ಯೋಜನೆ ಸಹಾಯಕ ನಿರ್ದೇಶಕಿ ರಮ್ಯಾ, ಪಾಲಿಕೆಯ ಎಇಗಳಾದ ಪವಿತ್ರ, ರಘು, ಪ್ರೊ. ಶಕಿಬುರ್ ರೆಹಮಾನ್, ಸೌಮ್ಯ ಮತ್ತಿತರರನ್ನೊಳಗೊಂಡ ಪಾರಂಪರಿಕ ಉಪಸಮಿತಿ 2 ತಿಂಗಳಿಂದ ಪಾರಂಪರಿಕ ಕಟ್ಟಡ ಸ್ಮಾರಕಗಳ ಸರ್ವೆ ನಡೆಸುತ್ತಿದೆ. ಒಟ್ಟು 131ರಲ್ಲಿ ಸುಮಾರು 70 ಪಾರಂಪರಿಕ ನಿರ್ಮಾಣಗಳ ಸರ್ವೆ ಮುಗಿದಿದ್ದು, ಪೂರ್ಣಗೊಂಡ ಬಳಿಕ ಪಾರಂಪರಿಕ ನಿರ್ಮಾಣಗಳ ಸ್ಥಿತಿಗತಿ ಬಗ್ಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಪಾರಂಪರಿಕ ಸಮಿತಿಗೆ ವರದಿ ಸಲ್ಲಿಸಲಾಗುತ್ತದೆ.

## ಅಸಹ್ಯಕರವಾಗಿ 'ಸಾಂಬಶಿವ ಪ್ರಹಸನ' ನಾಟಕ ಪ್ರದರ್ಶನ: ಸೂಕ್ತ ಕ್ರಮಕ್ಕೆ ದೂರು

**ಮೈಸೂರು ಪೊಲೀಸ್ ಆಯುಕ್ತರಿಗೆ ಮೌಖಿಕ ದೂರು**

ಮೈಸೂರು, ಜ.2– ಮೈಸೂರಿನ ರಂಗಾಯಣದಲ್ಲಿ ನನ್ನ ಅನುಮತಿ ಇಲ್ಲದೆ ಅಸಹ್ಯಕರವಾಗಿ ನನ್ನ 'ಸಾಂಬಶಿವ ಪ್ರಹಸನ' ನಾಟಕವನ್ನು ಪ್ರದರ್ಶಿಸಿದ್ದು, ಪ್ರದರ್ಶನ ಮಾಡಿದವರು ಮತ್ತು ಇದಕ್ಕೆ ಕಾರಣರಾದ ಎಲ್ಲರ ಮೇಲೂ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಡಾ.ಚಂದ್ರಶೇಖರ್ ಕಂಬಾರ ಮೈಸೂರು ನಗರ ಪೊಲೀಸ್ ಆಯುಕ್ತರಿಗೆ ಇ-ಮೇಲ್ ಮೂಲಕ ದೂರು ನೀಡಿದ್ದಾರೆ.



ಈ ಸಂಬಂಧ ಖುದ್ದು ನಗರ ಪೊಲೀಸ್ ಆಯುಕ್ತರೊಂದಿಗೆ ದೂರವಾಣಿ ಮೂಲಕ ಮಾತನಾಡಿರುವ ಡಾ.ಚಂದ್ರಶೇಖರ್ ಕಂಬಾರ ಅವರು, ಮೈಸೂರಿನ ರಂಗಾಯಣದಲ್ಲಿ ನನ್ನ ನಾಟಕ 'ಸಾಂಬಶಿವ ಪ್ರಹಸನ'ವನ್ನು ಅಸಹ್ಯವಾಗಿ ತಿರುಚಿ ಪ್ರದರ್ಶಿಸಿರುವ ಬಗ್ಗೆ ನನಗೆ ತುಂಬಾ ವಿಷಾದವಾಗಿದೆ. ಮೊದಲನೆಯದಾಗಿ ನನ್ನ ನಾಟಕ ಪ್ರದರ್ಶಿಸುವುದಕ್ಕೆ ನನ್ನ ಅನುಮತಿ ಕೇಳಲೇಬೇಕಾಗಿತ್ತು. ಆದರೆ, ಇವರು ಕೇಳಿಲ್ಲ.

ರಂಗಾಯಣವಾದರೂ ನನ್ನ ಅನುಮತಿ ಇಲ್ಲದ ನಾಟಕ ಪ್ರದರ್ಶನಕ್ಕೆ ಅವಕಾಶ ಮಾಡಿಕೊಟ್ಟಿರುವುದು ವಿಷಾದಕರ ಸಂಗತಿ. ಎರಡನೆಯದಾಗಿ ನನ್ನ ಯಾವುದೇ ನಾಟಕಗಳಲ್ಲಿ ವ್ಯಕ್ತಿಗತ ನಿಂದನೆ ಇರುವುದು ಸಾಧ್ಯವಿಲ್ಲ. ಅನುಮತಿ ಇಲ್ಲದ ನಾಟಕವನ್ನು ಪ್ರದರ್ಶಿಸಿದ್ದಕ್ಕೆ, ಪ್ರದರ್ಶಿಸಲು ಅವಕಾಶ ಮಾಡಿಕೊಟ್ಟವರಿಗೂ, ಇಲ್ಲದ ಸಾಹಿತ್ಯವನ್ನು ಸೇರಿಸಿದ್ದಕ್ಕೆ ನಿರ್ದೇಶಕರ ಮೇಲೂ ಹಾಗೂ ಅಹಿತಕರ ವಾತಾವರಣಕ್ಕೆ ಕಾರಣರಾದ ಎಲ್ಲರ ಮೇಲೂ ಸೂಕ್ತ ಕ್ರಮ ಜರುಗಿಸುವಂತೆ ಮನವಿ ಮಾಡಿದ್ದಾರೆ. ಕಂಬಾರರ ದೂರು ಆಲಿಸಿರುವ ನಗರ ಪೊಲೀಸ್ ಆಯುಕ್ತರು, ಸೂಕ್ತ ಕ್ರಮ ವಹಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

# ಸಂಕ್ರಾಂತಿ ನಂತರ ಮೈಸೂರು, ಚಾ.ನಗರ ಜಿಲ್ಲೆಯ ಉಳಿದ ಕ್ಷೇತ್ರಗಳಿಗೆ ಜೆಡಿಎಸ್ ಅಭ್ಯರ್ಥಿಗಳ ಘೋಷಣೆ

**ನರಸಿಂಹರಾಜ, ಚಾಮರಾಜ ಕ್ಷೇತ್ರದ ಆಕಾಂಕ್ಷಿಗಳ ಅಭಿಪ್ರಾಯ ಸಂಗ್ರಹ**

ಮೈಸೂರು, ಜ.2(ಎಂಕೆ)– ಸಂಕ್ರಾಂತಿ ಹಬ್ಬದ ಬಳಿಕ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಯ ಉಳಿದ ವಿಧಾನಸಭಾ ಕ್ಷೇತ್ರಗಳಿಗೆ ಜೆಡಿಎಸ್ ಅಭ್ಯರ್ಥಿಗಳನ್ನು ಘೋಷಣೆ ಮಾಡಲು ನಿರ್ಧರಿಸಲಾಯಿತು.



ಮೈಸೂರಿನ ಹೂಟಗಳ್ಳಿಯಲ್ಲಿರುವ ಸೈಲೆಂಟ್ ಶೋರ್ಸ್‌ನಲ್ಲಿ ಸೋಮವಾರ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ಸ್ಥಳೀಯ ಶಾಸಕರು, ಟಿಕೆಟ್ ಆಕಾಂಕ್ಷಿಗಳು, ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ನಡೆದ ಅಭಿಪ್ರಾಯ ಸಂಗ್ರಹ ಸಭೆಯಲ್ಲಿ ನರಸಿಂಹರಾಜ ವಿಧಾನಸಭಾ ಕ್ಷೇತ್ರ, ಚಾಮರಾಜ, ನಂಜನಗೂಡು, ಹೆಚ್.ಡಿ.ಕೋಟೆ, ಚಾಮರಾಜನಗರ, ಗುಂಡ್ಲುಪೇಟೆ, ಹನೂರು ಹಾಗೂ ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರಗಳ ಅಭ್ಯರ್ಥಿಗಳನ್ನು ಸಂಕ್ರಾಂತಿ ಹಬ್ಬದ ಬಳಿಕ ಘೋಷಣೆ ಮಾಡುವ ನಿರ್ಧಾರ ಕೈಗೊಳ್ಳಲಾಯಿತು.

**ಗೆಲುವಿನ ಲೆಕ್ಕಾಚಾರ:** ಮಧ್ಯಾಹ್ನ 2 ಗಂಟೆಯಿಂದ ರಾತ್ರಿ 9 ಗಂಟೆಯವರೆಗೆ ನಡೆದ ಅಭಿಪ್ರಾಯ ಸಂಗ್ರಹ ಸಭೆಯಲ್ಲಿ ಯಾರನ್ನು ಅಭ್ಯರ್ಥಿಯನ್ನಾಗಿ ಸ್ಪರ್ಧೆಗಿಳಿಸಿದರೆ ಫಲಿತಾಂಶ ಏನಾಗಲಿದೆ. ಎಷ್ಟು ಮತಗಳನ್ನು ಪಡೆಯಬಹುದು. ಆಕಾಂಕ್ಷಿಗಳು ಪಕ್ಷ ಸಂಘಟನೆಯಲ್ಲಿ ತೊಡಗಿದ್ದಾರೆಯೇ ಎಂದು ಚುನಾವಣೆ ಗೆಲುವಿನ ಲೆಕ್ಕಾಚಾರ ಹಾಕಲಾಯಿತು.

ನರಸಿಂಹರಾಜ ವಿಧಾನಸಭಾ ಕ್ಷೇತ್ರದಲ್ಲಿ 9 ಮಂದಿ ಟಿಕೆಟ್ ಆಕಾಂಕ್ಷಿಗಳಾಗಿ ಅರ್ಜಿ ಸಲ್ಲಿಸಿದ್ದು, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದ ಅನುಭವವುಳ್ಳ ಅಬ್ದುಲ್ ಅಜೀಜ್ ಅವರಿಗೆ ಮತ್ತೆ ಟಿಕೆಟ್ ನೀಡಬೇಕು ಎಂದು ಬಹುತೇಕರು ಅಭಿಪ್ರಾಯ ವ್ಯಕ್ತಪಡಿಸಿದರು. ಮೊದಲ ಬಾರಿ ಟಿಕೆಟ್ ಆಕಾಂಕ್ಷಿಯಾಗಿ ಅರ್ಜಿ ಸಲ್ಲಿಸಿರುವ ಜೆಡಿಎಸ್ ಮುಖಂಡ ಅಬ್ದುಲ್ ಖಾದರ್ ಶಾಹೀದ್, ತಮಗೆ ಟಿಕೆಟ್ ನೀಡುವಂತೆ ಮನವಿ ಮಾಡಿದರಲ್ಲದೆ ಅಂತಿಮವಾಗಿ ಯಾರನ್ನೇ ಅಭ್ಯರ್ಥಿ ಎಂದು ಘೋಷಣೆ ಮಾಡಿದರೂ ಸಹಕಾರ ನೀಡುವುದಾಗಿ ತಿಳಿಸಿದರು.

**ಚಾಮರಾಜ ಕ್ಷೇತ್ರದಲ್ಲಿ 8 ಮಂದಿ ಆಕಾಂಕ್ಷಿಗಳು:** ಚಾಮರಾಜ ವಿಧಾನಸಭಾ ಕ್ಷೇತ್ರದ ಟಿಕೆಟ್ ಆಕಾಂಕ್ಷಿಗಳಾಗಿ ಮಾಜಿ ಮೇಯರ್ ಎಂ.ಜೆ.ರವಿಕುಮಾರ್, ಮಾಜಿ ಕಾರ್ಪೊರೇಟರ್ ಸಿ.ಮಹದೇಶ್, ನಗರ ಪಾಲಿಕೆ ಹಾಲಿ ಸದಸ್ಯರಾದ ಎಸ್.ಬಿ.ಎಂ ಮಂಜು, ಕೆ.ವಿ.ಶ್ರೀಧರ್, ಪ್ರೇಮಾ ಶಂಕರೇಗೌಡ, ಮುಖಂಡರಾದ ಹೆಚ್.ಕೆ.ರಮೇಶ್, ಎನ್.ಮಲ್ಲೇಶ್ ಹಾಗೂ ಮಲ್ಲಿಕಾರ್ಜುನ ಅರ್ಜಿ ಸಲ್ಲಿಸಿದ್ದಾರೆ. 8 ಮಂದಿ ಆಕಾಂಕ್ಷಿಗಳಲ್ಲಿ ಮಾಜಿ ಕಾರ್ಪೊರೇಟರ್ ಸಿ.ಮಹದೇಶ್ ಅವರಿಗೆ ಟಿಕೆಟ್ ನೀಡಿದರೆ, ಪಕ್ಷ ಗೆಲ್ಲುವ ಸಾಧ್ಯತೆ ಇದೆ. ಒಟ್ಟಾರೆ ಈಗಿರುವ ಆಕಾಂಕ್ಷಿಗಳಲ್ಲಿ ಯಾರಿಗೆ ಟಿಕೆಟ್ ನೀಡಿದರೂ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ. ಆದರೆ ಕಡೇ ಹಂತದಲ್ಲಿ ಬೇರೆ ಪಕ್ಷದಲ್ಲಿ ಟಿಕೆಟ್ ಸಿಗಲಿಲ್ಲ ಎಂದು ಬರುವ ವಲಸಿಗರಿಗೆ ಯಾವುದೇ ಕಾರಣಕ್ಕೂ ಟಿಕೆಟ್ ನೀಡಬೇಡಿ ಎಂಬ ಒತ್ತಾಯಗಳು ಕೇಳಿಬಂದವು.

ಈ ವೇಳೆ ಮಾತನಾಡಿದ ಮಾಜಿ ಸಿಎಂ ಕುಮಾರಸ್ವಾಮಿ, ಯಾವುದೇ ಕಾರಣಕ್ಕೂ ಈ ಬಾರಿ ಬೇರೆ ಪಕ್ಷದಿಂದ ಬರುವವರಿಗೆ ಟಿಕೆಟ್ ನೀಡುವುದಿಲ್ಲ. ಪಕ್ಷ ಸಂಘಟನೆಯಲ್ಲಿ ಸಕ್ರೀಯವಾಗಿ ತೊಡಗಿಕೊಂಡಿರುವವರಿಗೆ ಟಿಕೆಟ್ ನೀಡಲಾಗುವುದು ಎಂದರಲ್ಲದೆ ಟಿಕೆಟ್ ಆಕಾಂಕ್ಷಿಗಳ ಕಾರ್ಯಚಟುವಟಿಕೆ ಕುರಿತು ಮಾಹಿತಿ ಪಡೆದು ಯುದ್ಧಕಾಲದಲ್ಲಿ ಶಸ್ತ್ರಾಭ್ಯಾಸ ಎಂಬಂತೆ ಚುನಾವಣೆ ಹತ್ತಿರ ಇರುವಾಗ ಪಕ್ಷ ಸಂಘಟನೆ ಮಾಡಲು ಸಾಧ್ಯವಿಲ್ಲ. ಚುನಾವಣೆಯಲ್ಲಿ ಗೆಲ್ಲಬೇಕಾದರೆ ಪಕ್ಷ ಸಂಘಟನೆ ಮುಖ್ಯವಾಗಿದ್ದು ಈಗ ಬಿಜೆಪಿ ವಶದಲ್ಲಿರುವ ಚಾಮರಾಜ ಕ್ಷೇತ್ರದಲ್ಲಿ ಮತ್ತೆ ಜೆಡಿಎಸ್ ಅಭ್ಯರ್ಥಿ ಗೆಲುವಿಗೆ ಶ್ರಮಿಸುವಂತೆ ಕರೆ ನೀಡಿದರು.

**ಅಭಿಷೇಕ್ ಗೆಲ್ಲಿಸಿ:** ವರುಣಾ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷದಿಂದ ಅಭಿಷೇಕ್ ಅಭ್ಯರ್ಥಿ ಎಂದು ಈಗಾಗಲೇ ಘೋಷಣೆ ಮಾಡಲಾಗಿದೆ. ಆದ್ದರಿಂದ ಎಲ್ಲರೂ ಸೇರಿ ಅಭಿಷೇಕ್ ಗೆಲ್ಲಿಸುವಂತೆ ಮನವಿ ಮಾಡಿದ ಹೆಚ್‌ಡಿಕೆ, ಸಿದ್ದರಾಮಯ್ಯ ಅವರು ವರುಣಾ ಕ್ಷೇತ್ರದಲ್ಲಿ ಸ್ಪರ್ಧಿಸುವುದು ಅನುಮಾನ. ಯತೀಂದ್ರ ಸಿದ್ದರಾಮಯ್ಯ ಮತ್ತೆ ಸ್ಪರ್ಧಿಸುವ ಸಾಧ್ಯತೆ ಇದೆ. ವರುಣಾ ಕ್ಷೇತ್ರದಲ್ಲಿ ಜೆಡಿಎಸ್ ಅಲೆ ಇದ್ದು, ಕಾರ್ಯಕರ್ತರು ಅಭ್ಯರ್ಥಿಗೆ ಧೈರ್ಯ ತುಂಬುವ ಮೂಲಕ ಒಗ್ಗಟ್ಟಿನಿಂದ ಕೆಲಸ ಮಾಡಿ ಗೆಲ್ಲಿಸುವಂತೆ ಸೂಚಿಸಿದರು. ಹಾಗೆಯೇ ನಂಜನಗೂಡು, ಹೆಚ್.ಡಿ.ಕೋಟೆ, ಚಾಮರಾಜನಗರ, ಗುಂಡ್ಲುಪೇಟೆ, ಹನೂರು ಹಾಗೂ ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರಗಳ ಟಿಕೆಟ್ ಆಕಾಂಕ್ಷಿಗಳ ಕುರಿತು ಅಭಿಪ್ರಾಯ ಸಂಗ್ರಹಿಸಿದರು.

**ಎನ್‌ಆರ್ ಕ್ಷೇತ್ರಕ್ಕೆ ಸಿಎಂ ಇಬ್ರಾಹಿಂ...!**

ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿ ಜೆಡಿಎಸ್ ರಾಜ್ಯಾಧ್ಯಕ್ಷ ಸಿ.ಎಂ.ಇಬ್ರಾಹಿಂ ಹೆಸರಿನಲ್ಲಿ ಅರ್ಜಿ ಸಲ್ಲಿಕೆಯಾಗಿರುವುದು ಗೊಂದಲಕ್ಕೆ ಕಾರಣವಾಯಿತು. ಸಿಎಂ ಇಬ್ರಾಹಿಂ ಅವರೇ ಕರೆ ಮಾಡಿ ಅವರ ಬೆಂಬಲಿಗರಿಂದ ಅರ್ಜಿ ಸಲ್ಲಿಸಿದ್ದಾರೆ ಎಂದು ಕೆಲವರು ಹೇಳಿದರೆ, ಗೊಂದಲ ಸೃಷ್ಟಿಸುವುದಕ್ಕಾಗಿ ಈ ರೀತಿ ಯಾರೋ ಅರ್ಜಿ ಸಲ್ಲಿಸಿದ್ದಾರೆ ಎಂದು ಮತ್ತೆ ಕೆಲವರು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ, ಸಿಎಂ ಇಬ್ರಾಹಿಂ ಅವರು ಅರ್ಜಿ ಸಲ್ಲಿಸಲು ಸಾಧ್ಯವಿಲ್ಲ. ಗೊಂದಲ ಸೃಷ್ಟಿಸುವುದಕ್ಕಾಗಿ ಈ ರೀತಿ ಅರ್ಜಿ ಸಲ್ಲಿಕೆಯಾಗಿದೆ. ಇದಕ್ಕೆ ತಲೆ ಕೆಡಿಸಿಕೊಳ್ಳುವ ಅಗತ್ಯವಿಲ್ಲ ಎಂದರೂ ಟಿಕೆಟ್‌ನ ಪ್ರಬಲ ಆಕಾಂಕ್ಷಿಯಾದ ಅಬ್ದುಲ್ ಅಜೀಜ್, ಸಿಎಂ ಇಬ್ರಾಹಿಂ ಅವರೇ ಈ ಗೊಂದಲ ಪರಿಹರಿಸಬೇಕು ಎಂದು ಪಟ್ಟುಹಿಡಿದರು.

**ಸಿದ್ದರಾಮಯ್ಯನನ್ನು ಜಿಟಿಡಿ ಸೋಲಿಸಿಲ್ವಾ..!**

> ವರುಣಾ ವಿಧಾನಸಭಾ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಸ್ಪರ್ಧಿಸಿದರೂ ಭಯ ಪಡುವ ಅಗತ್ಯವಿಲ್ಲ. ಸಿದ್ದರಾಮಯ್ಯನನ್ನು ಜಿಟಿಡಿ ಸೋಲಿಸಿಲ್ವಾ.. ಸದ್ಯ ವರುಣಾದಲ್ಲಿ ಜೆಡಿಎಸ್ ಅಲೆ ಇದೆ. ಅಭ್ಯರ್ಥಿ ಹಾಗೂ ಕಾರ್ಯಕರ್ತರು ತಮ್ಮ ಚಟುವಟಿಕೆಯ ವೇಗ ಹೆಚ್ಚಿಸಿಕೊಂಡು ಬೂತ್‌ಮಟ್ಟದಲ್ಲಿ ಪಕ್ಷ ಸಂಘಟನೆ ಮಾಡಬೇಕು. ಅಭ್ಯರ್ಥಿಗೆ ಕಾರ್ಯಕರ್ತರೇ ಧೈರ್ಯ ತುಂಬಬೇಕು.
> -ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ


**ಬಲ ಪ್ರದರ್ಶನ:** ಅಭಿಪ್ರಾಯ ಸಂಗ್ರಹ ಸಭೆಗೆ ಆಗಮಿಸಿದ್ದ ಜೆಡಿಎಸ್ ಟಿಕೆಟ್ ಆಕಾಂಕ್ಷಿಗಳ ಬಲ ಪ್ರದರ್ಶನವಾಯಿತು. ತಂಡೋಪತಂಡವಾಗಿ ಆಗಮಿಸಿದ್ದ ಆಕಾಂಕ್ಷಿಗಳ ಬೆಂಬಲಿಗರು ಟಿಕೆಟ್ ನೀಡುವಂತೆ ದುಂಬಾಲು ಬಿದ್ದರಲ್ಲದೆ ಘೋಷಣೆ ಕೂಗಿದರು. ಮುಂಬರುವ ವಿಧಾನ ಸಭಾ ಚುನಾವಣೆಯಲ್ಲಿ ಜೆಡಿಎಸ್ ಅಧಿಕಾರಕ್ಕೆ ಬರಬೇಕಾದರೆ ನಮ್ಮ ಅಭ್ಯರ್ಥಿಗೆ ಟಿಕೆಟ್ ನೀಡಿ ಎಂದು ಒತ್ತಾಯಿಸಿದರು. ಹೆಚ್.ಡಿ.ಕೋಟೆ ಕ್ಷೇತ್ರದಲ್ಲಿ ಕೆ.ಎಂ.ಕೃಷ್ಣ ನಾಯಕ ಅವರಿಗೆ ಟಿಕೆಟ್ ನೀಡಬೇಕು ಎಂದು ಆಗ್ರಹಿಸಿದ ಹಲವರು ಪ್ರತಿಭಟಿಸಿದರು. ಇದರಿಂದಾಗಿ ಸೈಲೆಂಟ್ ಶೋರ್ಸ್‌ನ ಹೊರಗೆ ಕೆಲಕಾಲ ಗೊಂದಲದ ವಾತಾವರಣ ಸೃಷ್ಟಿಯಾಗಿತ್ತು.

ಶಾಸಕರಾದ ಜಿ.ಟಿ.ದೇವೇಗೌಡ, ಸಾ.ರಾ. ಮಹೇಶ್, ಕೆ.ಮಹದೇವ್, ಅಶ್ವಿನ್ ಕುಮಾರ್, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮೈಸೂರು ನಗರಪಾಲಿಕೆ ಸದಸ್ಯರು, ಜೆಡಿಎಸ್ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

ಮೈಸೂರು ಮಿತ್ರ



## ಗಣ್ಯರ ಕಂಬನಿ...



ಪರಮಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರು ಸಮಾಜಕ್ಕೆ ನೀಡಿರುವ ಗಣನೀಯ ಸೇವೆಗಾಗಿ ಅವರನ್ನು ಸ್ಮರಿಸಲಾಗುತ್ತದೆ. ಅವರು ಇತರರ ಒಳಿತಿಗಾಗಿ ಅವಿಶ್ರಾಂತವಾಗಿ ಶ್ರಮಿಸಿದ್ದರು. ಜ್ಞಾನೋತ್ಸಾಹಕ್ಕಾಗಿ ಅವರು ಗೌರವ ಗಳಿಸಿದ್ದರು. ಈ ದುಃಖದ ಸಮಯದಲ್ಲಿ ಅವರ ಅಸಂಖ್ಯಾತ ಭಕ್ತರೊಂದಿಗೆ ನನ್ನ ಸಂವೇದನೆ ಇದೆ. ಓಂ. ಶಾಂತಿ... **–ಪ್ರಧಾನಿ ನರೇಂದ್ರ ಮೋದಿ**



ದೇಶ ಕಂಡ ಶ್ರೇಷ್ಠ ಸಂತರು, ಆಧ್ಯಾತ್ಮಿಕ ಪ್ರವಚನಕಾರ, ವಿಜಯಪುರದ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮೀಜಿರವರು ಲಿಂಗೈಕ್ಯರಾದ ಸುದ್ದಿ ತಿಳಿದು ಮನಸ್ಸಿಗೆ ಅತೀವ ದುಃಖ ಉಂಟು ಮಾಡಿದೆ. ನಡೆದಾಡುವ ದೇವರೆಂದೇ ಖ್ಯಾತರಾಗಿದ್ದ ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ, ಅವರ ಭಕ್ತ ಸಮೂಹಕ್ಕೆ ಈ ದುಃಖ ತಡೆಯುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ.
**– ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು**



ವಿಜಯಪುರದ ಜ್ಞಾನ ಯೋಗಾಶ್ರಮದ ಪರಮ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಲಿಂಗೈಕ್ಯರಾದ ಸುದ್ದಿ ತಿಳಿದು ಅತ್ಯಂತ ದುಃಖ ವಾಗಿದೆ. ಶ್ರೀಗಳ ಅಗಲಿಕೆ ನಾಡಿಗೆ ತುಂಬಲಾರದ ನಷ್ಟವಾಗಿದೆ. ಶ್ರೀಗಳ ಆತ್ಮಕ್ಕೆ ಸದ್ಗತಿ ಕೋರುತ್ತೇನೆ. ತಮ್ಮ ಪ್ರವಚನಗಳ ಮೂಲಕ ಮನುಕುಲದ ಉದ್ಧಾರಕ್ಕೆ ಶ್ರಮಿಸಿದ ಶ್ರೀಗಳ ಸೇವೆ ಅಮೋಘ ಹಾಗೂ ಅನನ್ಯವಾದುದು. ನಾಡಿನಾದ್ಯಂತ ಇರುವ ಶ್ರೀಗಳ ಭಕ್ತ ಸಮೂಹಕ್ಕೆ ಈ ದುಃಖವನ್ನು ಸಹಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುತ್ತೇನೆ. ಓಂ ಶಾಂತಿಃ.
**–ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ**



ಜ್ಞಾನಯೋಗಾಶ್ರಮದ ಪೀಠಾಧೀಶರಾದ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಲಿಂಗೈಕ್ಯರಾದ ಸುದ್ದಿ ಅತೀವ ನೋವುಂಟು ಮಾಡಿದೆ. ಧಾರ್ಮಿಕ ಪ್ರವಚನದ ಮೂಲಕ ಸಮಾಜವನ್ನು ಸನ್ಮಾರ್ಗದಲ್ಲಿ ನಡೆಸುತ್ತಿದ್ದ ದಾರ್ಶನಿಕ ಗುರುವಿನ ಅಗಲಿಕೆ ವೈಯಕ್ತಿಕವಾಗಿ ಮತ್ತು ನಾಡಿಗೆ ತುಂಬಲಾರದ ನಷ್ಟ. ಶ್ರೀ ಸಿದ್ದೇಶ್ವರ ಸ್ವಾಮೀಜಿಯವರ ದಿವ್ಯ ಆತ್ಮಕ್ಕೆ ಚಿರಶಾಂತಿ ಸಿಗಲಿ. ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಮಠದ ಅನುಯಾಯಿಗಳಿಗೆ, ಭಕ್ತವೃಂದಕ್ಕೆ ದೇವರು ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ. **– ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ**



ತಮ್ಮ ಪ್ರವಚನಗಳ ಮೂಲಕ ಕೋಟ್ಯಾಂತರ ಜನರಿಗೆ ಜ್ಞಾನದಾಸೋಹ ನೀಡಿದ ನಡೆದಾಡುವ ದೇವರು, ವಿಜಯಪುರದ ಜ್ಞಾನಯೋಗಾಶ್ರಮದ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿ ವಿಧಿವಶರಾದ ಸುದ್ದಿ ಅತ್ಯಂತ ದುಃಖವನ್ನುಂಟು ಮಾಡಿದೆ. ಪೂಜ್ಯರ ಆತ್ಮಕ್ಕೆ ಸದ್ಗತಿ ಕೋರುತ್ತಾ, ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಭಕ್ತರಿಗೆ ದೇವರು ನೀಡಲಿ ಎಂದು ಪ್ರಾರ್ಥಿಸುತ್ತೇನೆ. **–ಬಿ.ಎಸ್.ಯಡಿಯೂರಪ್ಪ, ಮಾಜಿ ಮುಖ್ಯಮಂತ್ರಿ**



ನಮ್ಮ ಪಾಲಿಗೆ ನಡೆದಾಡುವ ಬೆಳಕು, ನಡೆದಾಡುವ ಅರಿವು, ನಡೆದಾಡುವ ದೇವರೇ ಆಗಿದ್ದ ಜ್ಞಾನ ಯೋಗಾಶ್ರಮದ ಜ್ಞಾನಯೋಗಿ ಪರಮಪೂಜ್ಯ ಶ್ರೀ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರು ಶಿವೈಕ್ಯರಾಗಿದ್ದಾರೆ. ಸಮಾಜಕ್ಕೆ ಚಿಕಿತ್ಸರಾಗಿದ್ದ ಪೂಜ್ಯರು, ತಮ್ಮ ಪರಿಪೂರ್ಣ ಸಾರ್ಥಕ ಬದುಕಿನಿಂದಲೇ ನಮ್ಮನ್ನು ಪಾವನಗೊಳಿಸಿದವರು. ತಮ್ಮ ಪ್ರತಿ ಹೆಜ್ಜೆಯಲ್ಲೂ ಜ್ಞಾನದ ಬೆಳಕು ಮೂಡಿಸುತ್ತಿದ್ದ ಅವರ ನಿರ್ಗಮನ ಬಹುದೊಡ್ಡ ನಷ್ಟ. ಪೂಜ್ಯರು ಬಿಟ್ಟು ಹೋಗಿರುವ ಅರಿವು ನಮಗೆಲ್ಲ ದಿವ್ಯಬೆಳಕು. ಆ ಬೆಳಕಿನಡಿಯಲ್ಲಿ ಮುನ್ನಡೆಯೋಣ ಎನ್ನುವ ಆಶಯ ನನ್ನದಾಗಿದೆ. **–ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ**



ವಿಜಯಪುರದ ಜ್ಞಾನ ಯೋಗಾಶ್ರಮದ ಪರಮ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮಿಯವರು ಲಿಂಗೈಕ್ಯರಾದ ಸುದ್ದಿಯು ಅತ್ಯಂತ ದುಃಖದಾಯಕವಾಗಿದೆ. ಜನರ ಆಸ್ತಿಕ ಭಾವನೆಗಳು ಮೌಢ್ಯಗಳತ್ತ ಜಾರದಂತೆ ಆಧ್ಯಾತ್ಮಿಕ ಅಂತಃಶಕ್ತಿ ತುಂಬಿ, ಸನ್ಮಾರ್ಗ ತೋರುತ್ತಾ, ಸಾಮಾಜಮುಖಿ ಕಾರ್ಯಗಳಲ್ಲಿ ತೊಡಗಿ ಸದಾ ಲೋಕದ ಹಿತ ಬಯಸುತ್ತಿದ್ದ ಶ್ರೀಗಳನ್ನು ಕಳೆದುಕೊಂಡ ನಾಡು ಬಡವಾಗಿದೆ. **–ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷ**



ವಿಜಯಪುರದ ಜ್ಞಾನಯೋಗಾಶ್ರಮದ ಪೀಠಾಧೀಶರಾದ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಲಿಂಗೈಕ್ಯರಾದ ಸುದ್ದಿ ಕೇಳಿ ಅತೀವ ನೋವುಂಟು ಮಾಡಿದೆ. ಧಾರ್ಮಿಕ ಪ್ರವಚನದ ಮೂಲಕ ಸಮಾಜವನ್ನು ಸನ್ಮಾರ್ಗದಲ್ಲಿ ನಡೆಸುತ್ತಿದ್ದ ದಾರ್ಶನಿಕ ಗುರುವಿನ ಅಗಲಿಕೆ ವೈಯಕ್ತಿಕವಾಗಿ ಮತ್ತು ನಾಡಿಗೆ ಹಾಗೂ ಭಕ್ತ ವೃಂದಕ್ಕೆ ತುಂಬಲಾರದ ನಷ್ಟ. **–ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ**



ವಿಜಯಪುರದ ಜ್ಞಾನ ಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮೀಜಿ ನಿಧನ ದೇಶಕ್ಕೆ ತುಂಬಲಾರದ ನಷ್ಟವನ್ನುಂಟು ಮಾಡಿದೆ. ಪೂಜ್ಯರು ಭಾರತದ ಅತ್ಯುತ್ತಮ ಆಧ್ಯಾತ್ಮಿಕ ಚಿಂತಕರು ಮತ್ತು ಪ್ರೇರಕ ಭಾಷಣಕಾರರಲ್ಲಿ ಒಬ್ಬರಾಗಿದ್ದರು, ಧಾರ್ಮಿಕವಾಗಿ ಮಾತ್ರವಲ್ಲದೆ ಸಾಮಾಜಿಕವಾಗಿಯೂ ಜನರಿಗೆ ಸಾಕಷ್ಟು ಮಾರ್ಗದರ್ಶನ ನೀಡಿದರು, ಜನತೆಗೆ ಜ್ಞಾನ ದಾಸೋಹ ನೀಡುತ್ತಾ ಸನ್ಮಾರ್ಗದಲ್ಲಿ ನಡೆಯಲು ಪ್ರೇರೇಪಣೆ ನೀಡುತ್ತಿದ್ದ ಮಹಾತ್ ಚೇತನ್ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು. ಪೂಜ್ಯರ ನಿಧನದಿಂದ ಅಸಂಖ್ಯಾತ ಭಕ್ತರಿಗೆ ಆಗಿರುವ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ದಯಪಾಲಿಸಲೆಂದು ಪ್ರಾರ್ಥಿಸುತ್ತೇನೆ.
**–ಜಿ.ಟಿ.ದೇವೇಗೌಡ, ಶಾಸಕರು, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ**



ಋಷಿಯಾಗಿ, ಶ್ವೇತದಾರಿ ಶರಣರಾಗಿ ಕೋಟ್ಯಾಂತರ ಜನರನ್ನು ಸರಳ, ಸಾರ್ಥಕ ಜೀವನದ ಹಾದಿಯಲ್ಲಿ ಹೆಜ್ಜೆ ಹಾಕಿಸಿದ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ಆಗಲಿಕೆ ಇಡೀ ಸಮಾಜಕ್ಕೆ ದೊಡ್ಡ ನಷ್ಟ. ಇಂತಹ ಮಹಾತ್ಮರನ್ನು ದಸರಾ ಉದ್ಘಾಟನೆಗೆ ಆಹ್ವಾನಿಸಲು ಜಿಲ್ಲಾ ಉಸ್ತುವಾರಿ ಸಚಿವನಾಗಿ ಅವರ ಆಶ್ರಮಕ್ಕೆ ಹೋಗಿದ್ದಾಗ ಅದು ನಿಜವಾದ ಕೈಲಾಸದಂತೆ ಕಂಡು ಬಂದಿತು. ಅವರು ದಸರಾ ಉದ್ಘಾಟಿಸಿದ ಘಳಿಗೆಯಲ್ಲಿ ನಾನು ಜಿಲ್ಲಾ ಉಸ್ತು ವಾರಿ ಸಚಿವನಾಗಿದ್ದು ನನ್ನ ಸೌಭಾಗ್ಯ. ವೈಕುಂಠ ಏಕಾದಶಿಯಂದು ಶ್ರೀಗಳು ನೇರವಾಗಿ ಸ್ವರ್ಗವನ್ನು ಪ್ರವೇಶಿಸಿದ್ದಾರೆ. ಜ್ಞಾನ ಯೋಗಿಗಳು ನಮ್ಮೆಲ್ಲರಿಗೂ ಪ್ರೇರಣೆ ನೀಡುವ ಆತ್ಮಶಕ್ತಿಯಾಗಿರಲಿ. ಕೋಟ್ಯಾಂತರ ಭಕ್ತರಿಗೆ ಅಗಲಿಕೆ ನೋವು ಭರಿಸುವ ಶಕ್ತಿಯನ್ನು ತಾಯಿ ಚಾಮುಂಡೇಶ್ವರಿ ಕರುಣಿಸಲೆಂದು ಪ್ರಾರ್ಥಿಸುತ್ತೇನೆ. **–ಎಸ್.ಎ.ರಾಮದಾಸ್, ಶಾಸಕರು, ಕೃಷ್ಣರಾಜ ಕ್ಷೇತ್ರ**



ಸಿದ್ದೇಶ್ವರ ಸ್ವಾಮೀಜಿಯವರು ದೇವರ ಸ್ವರೂಪಿಯಂತಿದ್ದರು. ಸದಾ ಶ್ವೇತ ವಸ್ತ್ರಧಾರಿಯಾಗಿ ಪರಿಶುದ್ಧ ಜೀವನದ ಸಂದೇಶ ಸಾರುತ್ತಿದ್ದರು. ಅವರ ಪ್ರವಚನ ಜನರನ್ನು ಪರಿಶುದ್ಧಗೊಳಿಸಿ, ಸನ್ಮಾರ್ಗಕ್ಕೆ ಕೊಂಡೊಯ್ಯುತ್ತಿತ್ತು. ಶ್ರೀಗಳು ವೈಕುಂಠ ಏಕಾದಶಿಯಂದು ನಮ್ಮನ್ನು ಅಗಲಿರುವುದು ಅವರ ಪುಣ್ಯ ಕಾರ್ಯಗಳಿಗೆ ಸಾಕ್ಷಿ. ಅವರ ಆತ್ಮಕ್ಕೆ ಸದಾ ಶಾಂತಿ ಕೋರುತ್ತೇನೆ.
**–ಸಂದೇಶ್ ನಾಗರಾಜ್, ವಿಧಾನಪರಿಷತ್ ಮಾಜಿ ಸದಸ್ಯ**



ವಿಜಯಪುರ ಜ್ಞಾನಯೋಗಾಶ್ರಮದ ಪೀಠಾಧೀಶರಾದ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಲಿಂಗೈಕ್ಯರಾದ ವಾರ್ತೆಯು ಅತೀವ ನೋವನ್ನುಂಟು ಮಾಡಿದೆ. ಶ್ರೀ ಸಿದ್ದೇಶ್ವರ ಸ್ವಾಮೀಜಿಯವರ ದಿವ್ಯ ಆತ್ಮಕ್ಕೆ ಚಿರಶಾಂತಿ ದೊರಕಲಿ ಹಾಗೂ ಶ್ರೀಗಳ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಭಕ್ತವೃಂದಕ್ಕೆ ಭಗವಂತ ನೀಡಲಿ ಎಂದು ಪ್ರಾರ್ಥಿಸುತ್ತೇನೆ.
**–ಡಾ.ಯತೀಂದ್ರ ಸಿದ್ದರಾಮಯ್ಯ, ವರುಣಾ ಕ್ಷೇತ್ರದ ಶಾಸಕ**




ಸುತ್ತೂರು ಶ್ರೀ ಕ್ಷೇತ್ರದ ಮೂಲಕ ಮೈಸೂರಿನೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದ ವಿಜಯಪುರ ಜ್ಞಾನಯೋಗಾಶ್ರಮದ ಜ್ಞಾನಯೋಗಿ, ಕಾಯಕಯೋಗಿ ಪರಮಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳಿಗೆ ಭಾವಪೂರ್ಣ ಶ್ರದ್ಧಾಂಜಲಿ.
**–ಪ್ರತಾಪ್ ಸಿಂಹ, ಸಂಸದ, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ.**


ಬೇಡಿದರೂ ಸಿಗದ ಮರಣ...'ವೈಕುಂಠ ಏಕಾದಶಿ ಮರಣ... ಮುಕ್ಕೋಟಿ ದ್ವಾದಶಿ ದಹನ' ನಮೋ ಶ್ರೀ ಸಿದ್ದೇಶ್ವರ ಸ್ವಾಮೀಜಿ... ಧನ್ಯೋಸ್ಮಿ. ಸದ್ಗತಿ ದೊರೆಯಲಿ...
**–ಜಗನ್ನಾಥ್ ಕಾಳೇನಹಳ್ಳಿ**

ಶಾಸಕ ಎಲ್.ನಾಗೇಂದ್ರ, ಮಾಜಿ ಶಾಸಕರಾದ ವಾಸು, ಎಂ.ಕೆ.ಸೋಮಶೇಖರ್, ಜಿ.ಎನ್.ನಂಜುಂಡಸ್ವಾಮಿ, ಎಸ್.ಜಯಣ್ಣ, ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಡಿ.ತಮ್ಮಯ್ಯ, ಮೇಯರ್ ಶಿವಕುಮಾರ್, ಮಾಜಿ ಮೇಯರ್ ಸಂದೇಶ್ ಸ್ವಾಮಿ, ಜಿಪಂ ಮಾಜಿ ಅಧ್ಯಕ್ಷ ಕೆ.ಮರೀಗೌಡ, ಮಾಜಿ ಕಾರ್ಪೊರೇಟರ್ ಆರ್.ಸೋಮಸುಂದರ್, ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ. ಹರೀಶ್‌ಗೌಡ, ಕಾರ್ಪೊರೇಟರ್‌ಗಳಾದ ಕಾಂಗ್ರೆಸ್ ಮುಖಂಡರಾದ ಕೆ.ಹರೀಶ್‌ಗೌಡ, ರಾಕೇಶ್ ಪಾಪಣ್ಣ, ರೈತ ಮುಖಂಡ ಕುರುಬೂರು ಶಾಂತಕುಮಾರ್, ವಿಕ್ರಾಂತ್ ಪಿ.ದೇವೇಗೌಡ, ಸೇರಿದಂತೆ ಅನೇಕರು ಶ್ರೀ ಸಿದ್ದೇಶ್ವರ ಸ್ವಾಮೀಜಿ ಅಗಲಿಕೆಗೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

# ಶ್ರೀ ಸಿದ್ದೇಶ್ವರಸ್ವಾಮಿಗಳವರ ಅಗಲಿಕೆಗೆ ಸುತ್ತೂರು ಶ್ರೀಗಳವರ ಅಶ್ರುತರ್ಪಣ

ವಿಜಯಪುರ ಜ್ಞಾನಯೋಗಾಶ್ರಮದ ಚರಮೂರ್ತಿಗಳಾಗಿದ್ದ ಶ್ರೀ ಸಿದ್ದೇಶ್ವರಸ್ವಾಮಿಗಳವರು ಸೋಮವಾರ ಸಂಜೆ ಲಿಂಗೈಕ್ಯರಾದ ಸುದ್ದಿ ನಾಡಿನ ಜನರ ಪಾಲಿಗೆ ದಿಗ್ಭ್ರಮೆಯುಂಟುಮಾಡಿದೆ.





ಶ್ರೀ ಸಿದ್ದೇಶ್ವರಸ್ವಾಮಿಗಳವರು ಯಾವ ಲೌಕಿಕ ವಿಶೇಷಣಗಳಿಗೂ ನಿಲುಕುವಂಥವರಲ್ಲ. ಅವರನ್ನು ಜನತೆ 'ನಡೆದಾಡುವ ದೇವರು' ಎಂದು ಪ್ರೀತ್ಯಾದರಗಳಿಂದ ಗೌರವಿಸುತ್ತಿದ್ದರು. ನಿಜವಾದ ಅರ್ಥದಲ್ಲಿ ಅವರೊಬ್ಬರು ಅವಧೂತರು. ವೇದಾಂತಕೇಸರಿ ಶ್ರೀ ಮಲ್ಲಿಕಾರ್ಜುನಸ್ವಾಮಿ ಗಳವರಿಂದ ಅಧ್ಯಾತ್ಮದೀಕ್ಷೆ ಪಡೆದು, ಸಕಲಶಾಸ್ತ್ರವಿಶಾರದರಾದ ಅವರು ಪುರಾಣಕಾಲದ ಋಷಿಸದೃಶ ವ್ಯಕ್ತಿತ್ವ ಹೊಂದಿದ್ದ ಜ್ಞಾನನಿಧಿಗಳು.

ಶ್ರೀ ಸಿದ್ದೇಶ್ವರಸ್ವಾಮಿಗಳವರು ಇಹದ ಮಹಾಮಣಿಹವನ್ನು ಪೂರೈಸಿ ಅಸ್ತಂಗತರಾಗಿರುವುದು ಅನುಭಾವಲೋಕದಲ್ಲಿ ದಟ್ಟ ಕತ್ತಲೆ ಆವರಿಸಿದಂತಾಗಿದೆ. ಅನಾರೋಗ್ಯದಿಂದ ಅಲ್ಪ ಕಾಲ ವಿಶ್ರಾಂತಿಗೆ ಸಂದಿದ್ದರೂ, ಅದು ಅವರ ಶಾಶ್ವತ ವಿಶ್ರಾಂತಿಗೆ ಕಾರಣವಾಗುತ್ತದೆ ಎನ್ನುವುದನ್ನು ಊಹಿಸಿಕೊಳ್ಳುವುದೂ ಕಷ್ಟವಾಗುತ್ತಿದೆ. ನಡೆಯಲ್ಲಿ ನುಡಿಯನ್ನು, ನುಡಿಯಲ್ಲಿ ನಡೆಯನ್ನು ಸಂಲಗ್ನಗೊಳಿಸಿಕೊಂಡು, ಶಿವಪಥದಲ್ಲಿ ಸುದೀರ್ಘ ಬದುಕನ್ನು ನಡೆದ ಅವರ ಪರಿ ಚಿಜ್ಯೋತಿಯ ವ್ಯಕ್ತ ಪ್ರತಿರೂಪದಂತೆ ಇದ್ದಿತು.

ಹಳೆಯ ಮೈಸೂರು ಹಾಗೂ ಉತ್ತರ ಕರ್ನಾಟಕದ ನೆರೆಹಾವಳಿಗೆ ಸಹಾಯ ಹಸ್ತ ನೀಡಲು ತೆರಳಿದ್ದ ಮೈಸೂರು ಭಾಗದ ಜನತೆಗೆ ಅವರು ಕೃತಜ್ಞತೆ ತಿಳಿಸಲು ಆಡಿದ ಮಾತುಗಳು ಅಲ್ಲಿ ನೆರೆದಿದ್ದವರ ಹೃದಯವನ್ನು ಆವರಿಸಿ ಕಣ್ಣಂಚಿನಲ್ಲಿ ಕಂಬನಿ ತುಂಬಿಕೊಂಡ ಚಿತ್ರ ಈಗಲೂ ಕಣ್ಣಿಗೆ ಕಟ್ಟಿದಂತಿದೆ.


ಸುತೂರು ಶ್ರೀಮಠಕ್ಕೆ ಪ್ರತಿವರ್ಷವೂ ತಪ್ಪದೆ ಆಗಮಿಸಿ, ತಿಂಗಳುಗಟ್ಟಲೆ ವಾಸ್ತವ್ಯ ಹೂಡಿ ಮಠಾಧಿಪತಿಗಳಿಗೆ ಹಾಗೂ ಶ್ರೀಸಾಮಾನ್ಯರಿಗೆ ಅವರ ಜ್ಯೋತಿರ್ಲಿಂಗಸ್ವರೂಪದ ದಾರ್ಶನಿಕ ಮಾತುಗಳಿಂದ ಎಲ್ಲರ ಮನದ ಕೊಳೆಯನ್ನು ತೊಳೆಯುತ್ತಿದ್ದುದನ್ನು ನೆನೆಸಿಕೊಂಡರೆ ಈಗ ದೊಡ್ಡ ಶೂನ್ಯ ಆವರಿಸಿದಂತಾಗಿದೆ. ಭಾರತೀಯ ಪರಂಪರೆಗೆ ಅನುಗುಣವಾಗಿ ಅವರು ಉತ್ತರಾಯಣ ಪುಣ್ಯಕಾಲದಲ್ಲಿ – ವೈಕುಂಠ ಏಕಾದಶಿಯ ಪರ್ವದಿನದಂದು – ದೇಹತ್ಯಾಗ ಮಾಡಿದುದು ಅನಿರೀಕ್ಷಿತ. ಸರ್ವಧರ್ಮ ಸಮಭಾವದ ಈ ಆದ್ಯಾತ್ಮಿಕ ಅಧ್ವರ್ಯುಗಳು ನುಡಿದಂತೆ ನಡೆದ ವಿಶ್ವಮಾನ್ಯರು. ಗುಮ್ಮಟಗಳ ನಗರಿಯ ಬಹು ದೊಡ್ಡ "ಜ್ಞಾನಗುಮ್ಮಟ' ಬಯಲಲ್ಲಿ ಲೀನವಾಗಿದೆ. ಅವರ ಮೌನಸದೃಶವಾದ ಮಾತು–ಮಾತುಗಳ ನಡುವಣ ಮೌನದ ಮಹಾಬೆಳಕು ಈಗ ಇಲ್ಲವಾಗಿದೆ.

ಹೀಗೆ ಬಯಲಲ್ಲಿ ಬಯಲಾಗಿ ಹೋಗಿರುವ ಜ್ಞಾನಸೂರ್ಯ ಶ್ರೀ ಸಿದ್ದೇಶ್ವರಸ್ವಾಮಿಗಳವರ ಭಕ್ತಾದಿಗಳು ಈ ಅಗಲಿಕೆಗಾಗಿ ದುಃಖಿಸದೆ, ಅವರು ಸಾರಿದ ಸಾರ್ವಕಾಲಿಕ ಮೌಲ್ಯಗಳನ್ನು ಅನುಸರಿಸುವ ಮೂಲಕ ಅವರಿಗೆ ಕೃತಜ್ಞತೆಯ ಶ್ರದ್ಧಾಂಜಲಿಗಳನ್ನು ಅರ್ಪಿಸಬೇಕೆಂದು ಹಾರೈಸುತ್ತೇವೆ.
**–ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ**

**“ ನಾವೀ ಜಗತ್ತಿನಲ್ಲಿ ಸ್ವಲ್ಪ ನಿರ್ಭಯರಾಗಿರಬೇಕು. ಯಾವುದಕ್ಕೂ ಬಹಳ ಹೆದರಬಾರದು. ಇಲ್ಲಿ ಪ್ರಿಯ, ಅಪ್ರಿಯ, ಬೇಕಾದ, ಬೇಡಾದ ಸಂಗತಿ ಎಲ್ಲಾ ಇದೆ. ನಾವೇ ಈ ಜಗತ್ತಿನ ಕೇಂದ್ರಬಿಂದುವಲ್ಲ, ನಮ್ಮಂಥ ಅಸಂಖ್ಯ ಜೀವರಾಶಿಗಳಿಲ್ಲಿವೆ. ಕಾರಣ ನಮಗಾಗಿ ಈ ಜಗತ್ತಲ್ಲ, ಈ ಜಗತ್ತಿನಲ್ಲಿ ನಾವು ನಮ್ಮ ಬದುಕನ್ನು ಕಟ್ಟಿಕೊಂಡಿದ್ದೇವೆ. ಆದ್ದರಿಂದ ನಾವೀ ಜಗತ್ತಿನೊಂದಿಗೆ ಹೊಂದಿಕೊಂಡು ಬಾಳಬೇಕು. ಕತ್ತಲೆ ಬಂದಾಗ ಕತ್ತಲನ್ನೇ ಸ್ವೀಕರಿಸಬೇಕು, ಬೆಳಕು ಬಂದಾಗ ಬೆಳಕನ್ನೇ ಸ್ವೀಕರಿಸಬೇಕು. ಹಾಗೆಯೇ ಜೀವನದಲ್ಲಿ ಸುಖ–ದುಃಖ, ಮಾನಾಪಮಾನ ಏನೇ ಬರಲಿ ಅದನ್ನು ಸ್ವೀಕರಿಸುವ ಮನಸ್ಥಿತಿ ನಮಗಿರಬೇಕು.** –ಶ್ರೀ ಸಿದ್ದೇಶ್ವರ ಸ್ವಾಮೀಜಿ

# ಅಂತಿಮ ಅಭಿವಂದನ ಪತ್ರ

(ಅ)
೧. ಬದುಕು ಅನುಭವಗಳ ಪ್ರವಾಹ.
೨. ಅದರ ಸಿರಿವಂತಿಕೆಯು ವಿಶ್ವ–ಚಿಂತನೆ ಹಾಗೂ ಸತ್ಯಶೋಧನೆಗಳಿಂದ. ಅದರ ಸೌಂದರ್ಯವು ರಾಗದ್ವೇಷರಹಿತವಾದ ಹಾಗೂ ಅಸೀಮಿತವಾದ ಸದ್ಭಾವದಿಂದ.
೩. ಅದನ್ನು ಸುಭಗ ಹಾಗೂ ಸಮೃದ್ಧಗೊಳಿಸುವುದೇ "ಸಾಧನೆ'.
೪. ಅಂಥ ಜೀವನದ ಉಪಯುಕ್ತವಾದ ಅನುಭವಗಳನ್ನು ಆಸಕ್ತರೊಂದಿಗೆ ಹಂಚಿಕೊಳ್ಳುವುದೇ 'ಧರ್ಮ'. ಅದು ಸ್ವ–ಪರ ನೆಮ್ಮದಿಗೆ ಕಾರಣ.
(ಬ)
೫. ನನ್ನದು ಆವೇಗವಿಲ್ಲದ, ಸಾವಧಾನದ ಸಾಮಾನ್ಯ ಬದುಕು.
೬. ಅದನ್ನು ರೂಪಿಸಿದವರು 'ಗುರುದೇವರು'. ಅದನ್ನು ಹದುಳಿಸಿದವರು ನಾಡಿನ ಪೂಜ್ಯರು, ಹಿತೈಷಿಗಳು, ಸ–ಹೃದಯರು, ಸಾಧಕರು, ಹಾಗೂ ಶ್ರೀ ಸಾಮಾನ್ಯರು.
೭. ನಿಸರ್ಗವು ಮೈ ಮನಸ್ಸುಗಳಿಗೆ ತಂಪನಿತ್ತಿದೆ. ತಾತ್ತ್ವಿಕ ಚಿಂತನೆಗಳು ತಿಳಿಬೆಳಗ ಹರಡಿವೆ. ಜಾಗತಿಕ ತತ್ತ್ವಜ್ಞಾನಿಗಳ ಮತ್ತು ವಿಜ್ಞಾನಿಗಳ ಶೋಧನೆಗಳು ದೃಷ್ಟಿಯ ಪರಿಸೀಮೆಯನ್ನು ದೂರ ದೂರ ಸರಿಸಿವೆ.
(ಕ)
೮. ಆದ್ದರಿಂದಲೇ ನಾನು ಎಲ್ಲರಿಗೂ ಎಲ್ಲದಕ್ಕೂ "ಉಪಕೃತ',
೯. ಬದುಕು ಮುಗಿಯುತ್ತದೆ; ದೀಪ ಆರಿದಂತೆ; ತೆರೆ ಅಡಗಿದಂತೆ; ಮೇಘ ಕರಗಿದಂತೆ.
೧೦. ಉಳಿಯುವುದು ಬರಿ ಬಯಲು, ಮಹಾಮೌನ, ಶೂನ್ಯಸತ್ಯ!
೧೧. ಹಲವು ದಶಕಗಳ ಕಾಲ ಈ ಅದ್ಭುತ ಜಗತ್ತಿನಲ್ಲಿ ಬಾಳಿದ್ದೇನೆ; ನೋಡಿ ತಿಳಿದು ಅನುಭವಿಸಿದ್ದೇನೆ. ನನ್ನ ಬದುಕು ಕೊನೆಗೊಳ್ಳುವ ಮುಂಚೆ ಅದನ್ನು ಕೃತಜ್ಞತೆಯಿಂದ ಸ್ಮರಿಸಬೇಕು; ಅದಕ್ಕಾಗಿ ಈ 'ಅಂತಿಮ ಅಭಿವಾದನ– ಪತ್ರ!
(ಡ)
೧೨. ದೇಹದ ವಿಷಯದಲ್ಲಿ ಒಂದೆರಡು ಆಶಯಗಳು.
೧. ದೇಹವನ್ನು ಭೂಮಿಯಲ್ಲಿಡುವ ಬದಲು ಅಗ್ನಿಯರ್ಪಿತ ಮಾಡುವುದು.
೨. ಶ್ರಾದ್ಧಿಕ ವಿಧಿ–ವಿಧಾನಕರ್ಮಗಳು ಅನಗತ್ಯ.
೩. ಚಿತಾಭಸ್ಮವನ್ನು ನದಿ ಅಥವಾ ಸಾಗರದಲ್ಲಿ ವಿಸರ್ಜಿಸುವುದು.
೪. ಯಾವುದೇ ಬಗೆಯ ಸ್ಮಾರಕ ನಿರ್ಮಿಸಲಾಗದು.
೧೩. ಅಂತಿಮ ನೆನಹು;
೧. 'ಸತ್ಯವೂ ಇಲ್ಲ, ಅಸತ್ಯವೂ ಇಲ್ಲ.
ಸಹಜವೂ ಇಲ್ಲ, ಅಸಹಜವೂ ಇಲ್ಲ.
ನಾನೂ ಇಲ್ಲ, ನೀನೂ ಇಲ್ಲ.
ಇಲ್ಲ, ಇಲ್ಲ ಎಂಬುದು ತಾನಿಲ್ಲ.
ಗುಹೇಶ್ವರನೆಂಬುದು ತಾ ಬಯಲು?,
**೨. ಅಂತ್ಯಃ ಪ್ರಣಾಮಾಂಜಲಿಃ!**




(ಸ್ವಾಮಿ ಸಿದ್ದೇಶ್ವರ)
ಗುರುಪೂರ್ಣಿಮೆ ೨೦೧೪
(1) A. S. Pachhapure
Judge
High Court of Karnataka
Bangalore.
(2) S. S. Sullampur
Dist Judge
JUDGE
FAMILY COURT, BIJAPUR

# 2012ರ ನಾಡಹಬ್ಬ ದಸರಾ ಉದ್ಘಾಟಿಸಿದ್ದ ಶ್ರೀಗಳು



ಮೈಸೂರು, ಜ.2(ಎಂಕೆ)– 2012ರ ನಾಡಹಬ್ಬ ಮೈಸೂರು ದಸರಾ ಮಹೋತ್ಸವವನ್ನು ಉದ್ಘಾಟಿಸಿದ್ದ ವಿಜಯಪುರ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮೀಜಿ, ದಸರಾ ಕೇವಲ ಹಬ್ಬವಲ್ಲ ಇಡೀ ವಿಶ್ವವನ್ನು ಕನ್ನಡ ನಾಡಿನ ಸಂಸ್ಕೃತಿ ಮತ್ತು ಸಂಪ್ರದಾಯವನ್ನು ಅನುಭವಿಸಲು ಆಹ್ವಾನಿಸುವ ಸಂದರ್ಭವಾಗಿದೆ. ಅಲ್ಲದೆ, ವಿವಿಧೆಡೆಯಿಂದ ಬಂದಿರುವ ಜನರಿಗೆ ಒಂದೇ ಕಡೆ ಒಂದಾಗುವಂತೆ ಸ್ಪಷ್ಟ ಸಂದೇಶವನ್ನು ರವಾನಿಸುತ್ತದೆ ಎಂದಿದ್ದರು.

ನೆಮ್ಮದಿಯ ಬದುಕಿಗಾದರೂ ಪರಿಸರ ಉಳಿಸಿ ಎಂದು ಜನರಿಗೆ ಕಿವಿಮಾತು ಹೇಳಿದ ಸಿದ್ದೇಶ್ವರ ಸ್ವಾಮೀಜಿಯವರೊಂದಿಗೆ ಅಂದಿನ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್, ಅವರ ಪತ್ನಿ ಶಿಲ್ಪಾ ಜಗದೀಶ್ ಶೆಟ್ಟರ್, ವೈದ್ಯಕೀಯ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಎಸ್.ಎ.ರಾಮದಾಸ್, ಕನ್ನಡ ಮತ್ತು ಸಂಸ್ಕೃತಿ ಸಚಿವರಾಗಿದ್ದ ಗೋವಿಂದ ಕಾರಜೋಳ, ಮುಜರಾಯಿ ಸಚಿವರಾಗಿದ್ದ ಕೋಟ ಶ್ರೀನಿವಾಸ ಪೂಜಾರಿ, ಅಂದಿನ ಮೈಸೂರು ಮೇಯರ್ ಎಂ.ಸಿ.ರಾಜೇಶ್ವರಿ ಉಪಸ್ಥಿತರಿದ್ದರು.



**ನೆರೆಹೊರೆಯವರನ್ನು ಕಂಡು ನಾನು ಉರಿದೇಳುತ್ತಿದ್ದರೆ ನನ್ನ ಪೂಜೆ ಪುನಸ್ಕಾರಗಳಿಗೇನು ಬೆಲೆ?...**
**ಸ್ವಾರ್ಥ ತ್ಯಜಿಸಿದರೆ ಆದರ್ಶ ಸಾಧಿಸುತ್ತದೆ....**
**ಹೃದಯ ಪರಿಮಳವಾದರೆ ಮಾತು ಮಕರಂದವಾಗುತ್ತದೆ!...**
**ಮನಸ್ಸು ರಸಪಾಕವಾದರೆ ಮನುಷ್ಯ ಮಹಾನುಭಾವನಾಗುತ್ತಾನೆ...**
**ತನ್ನನ್ನೂ, ತನ್ನ ಸೌಖ್ಯವನ್ನೂ ಮರೆತು ಪರರ ಹಿತಕ್ಕಾಗಿ ಮಾಡುವ ಕಾರ್ಯವೇ ತಪಸ್ಸು. ಅದರಿಂದ ಸತ್ಯಸಾಕ್ಷಾತ್ಕಾರ!**
**–ಶ್ರೀ ಸಿದ್ದೇಶ್ವರ ಸ್ವಾಮೀಜಿ**

# ಸರಳತೆಯ ಸಾಕಾರ ಮೂರ್ತಿ ಸಿದ್ದೇಶ್ವರರು...



ವಿಜಯಪುರ ಜ್ಞಾನಯೋಗಾಶ್ರಮದ ಪರಮ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳು ಆಧ್ಯಾತ್ಮದ ಬಗ್ಗೆ ತುಂಬ ಆಳವಾದ ಅಧ್ಯಯನ ಚಿಂತನೆಗಳನ್ನು ನಡೆಸಿರುವ ಶ್ರೇಷ್ಠ ಅನುಭಾವಿಗಳೂ ಮಧುರ ಸ್ವಭಾವದವರೂ ಆಗಿದ್ದು ಕನ್ನಡ, ಸಂಸ್ಕೃತ, ಇಂಗ್ಲಿಷ್, ಮರಾಠಿ ಮತ್ತು ಹಿಂದಿ ಭಾಷೆಗಳಲ್ಲಿ ನಿಷ್ಣಾತರು. ದೇಶ ವಿದೇಶದ ಭಕ್ತ ಜನ ಹೊಸ ಜ್ಞಾನ – ತತ್ವಗಳಿಗೆ ಮಾರು ಹೋಗಿದ್ದರು.

ಅತ್ಯಂತ ಸರಳ ಸಜ್ಜನಿಕೆಯ ಸಾಕಾರ ಮೂರ್ತಿ, ನನ್ನದು–ತನ್ನದೆಂಬ ಮಮಕಾರ ತೊರೆದ ಮಹಾಪುರುಷರೇ ಶ್ರೀ ಸಿದ್ಧೇಶ್ವರ ಸ್ವಾಮಿಗಳವರು. ಇವರು ಸಂತರಷ್ಟೇ ಅಲ್ಲ ಜ್ಞಾನೋಪಾಸಕರು ಕೂಡ. ಸಂತರು ನಾಡಿನಲ್ಲಿ ಬಹಳ ಜನ ಇದ್ದರು, ಈಗಲೂ ಇದ್ದಾರೆ. ಆದರೆ ಜ್ಞಾನಯೋಗಿಗಳು ಬಹಳ ಅಪರೂಪ. ಅಂಥವರ ಲ್ಲೊಬ್ಬರು ಶ್ರೀ ಸಿದ್ಧೇಶ್ವರ ಸ್ವಾಮಿಗಳು. ವಿಜಯಪುರದ ಜ್ಞಾನಯೋಗಾಶ್ರಮ ಜನತೆಗೆ ಜ್ಞಾನದಾಸೋಹ ನೀಡುವ ವಿಶಿಷ್ಟ ಕೇಂದ್ರ. ಗದುಗಿನ ಶಿವಾನಂದ ಶ್ರೀಗಳ ಪರಂಪರೆಯಲ್ಲಿ ಬಂದ ಈ ಆಶ್ರಮ ಇವರ ಗುರುಗಳಾದ ವೇದಾಂತ ಕೇಸರಿ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳ ಕಾಲದಲ್ಲಿ ಅತ್ಯಂತ ಪ್ರವರ್ಧಮಾನಕ್ಕೆ ಬಂತು. ಉತ್ತರ ಕರ್ನಾಟಕದ ಜನಮಾನಸದಲ್ಲಿ ಬಹಳವಾಗಿ ಮಹತ್ವ ಪಡೆಯಿತು.

ನಿಸ್ವಾರ್ಥ ಸೇವೆ, ಮಮಕಾರಗಳಿಲ್ಲದೆ, ಯಾರ ಹಂಗಿಗೂ ಒಳಗಾಗದೆ ಸರ್ವಜನರಿಂದಲೂ ಪ್ರೀತಿ, ವಿಶ್ವಾಸದ ಆಶ್ರಯತಾಣವಾಗಿ ಬೆಳೆಯಿತು. ಪೂಜ್ಯ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಪ್ರವಚನದ ಮೂಲಕ ಜನರಲ್ಲಿ ಜ್ಞಾನದ ಜ್ಯೋತಿಯನ್ನು ಬೆಳಗುತ್ತಿದ್ದರು. ಕರ್ನಾಟಕವಲ್ಲದೆ ಮಹಾರಾಷ್ಟ್ರದ ಪ್ರಮುಖ ನಗರಗಳಲ್ಲಿ ತಿಂಗಳುಗಟ್ಟಲೆ ಪ್ರವಚನ ನೀಡುತ್ತಿದ್ದರು.

ಇವರ ಗಾಢ ಪ್ರಭಾವ ಸುತ್ತಮುತ್ತಲ ಜನರ ಮೇಲೆ ಉಂಟಾಗಿ ಕ್ರಮೇಣ ಶ್ರೀಗಳು ಗ್ರಾಮೀಣ ಪ್ರದೇಶದ ಮಕ್ಕಳು ವಿದ್ಯೆಗಾಗಿ ಕಷ್ಟಪಡುತ್ತಿದ್ದುದನ್ನು ಗಮನಿಸಿ ಅವರಿಗಾಗಿ ವಿದ್ಯಾಸಂಸ್ಥೆಗಳನ್ನು ಪ್ರಾರಂಭಿಸಿ ಅವರಿಗೆ ಊಟ, ವಸತಿಗಳಿಗೆ ವ್ಯವಸ್ಥೆ ಮಾಡಿದರು. ಇದರಿಂದಾಗಿ ಸಾವಿರಾರು ಮಕ್ಕಳು ವಿದ್ಯಾವಂತರಾದರು. ಹಾಗೆ ವಿದ್ಯೆ ಕಲಿಯಲು ಬಂದ ಸಾವಿರಾರು ಮಕ್ಕಳಲ್ಲಿ ಶ್ರೀ ಸಿದ್ದೇಶ್ವರರೂ ಒಬ್ಬರು. ವಿಜಯಪುರ ಜ್ಞಾನಯೋಗಾಶ್ರಮದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಶ್ರೀಸಿದ್ದೇಶ್ವರರು ತಮ್ಮ ಗುರುಗಳ ಮಾರ್ಗದರ್ಶನದಲ್ಲೇ ಆಶ್ರಮದ ಚಟುವಟಿಕೆಗಳನ್ನು ಮುಂದುವರಿಸಿಕೊಂಡು ಬರುತ್ತಿದ್ದರು. ಸಿದ್ದೇಶ್ವರರ ಪ್ರವಚನ ಕೇಳಿದವರು ಅದರಲ್ಲೇ ಅನುರಕ್ತರಾಗಿ ಬಿಡುತ್ತಿದ್ದರು. ಅವರ ಪ್ರವಚನ ಕಾರ್ಯಕ್ರಮ ಎಲ್ಲಿ ಏರ್ಪಡಿಸಿದರೂ ಸಹ ಅಲ್ಲಿಗೆ ಸಾವಿರಾರು ಸಂಖ್ಯೆಯಲ್ಲಿ ಜನ ಸೇರುತ್ತಿದ್ದರು. ಒಂದು ಗಂಟೆಯ ಅವರ ಪ್ರವಚನ ದುದ್ದಕ್ಕೂ ಸೇರಿದ ಅಷ್ಟು ತುಂಬು ತನ್ಮಯತೆಯಿಂದ ಕುಳಿತಿರುತ್ತಿದ್ದರು. ಜ್ಞಾನ ಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ, ವಿಜಯಪುರದ ಜೀವಂತ ದೇವರು ಎಂದು ಪ್ರಸಿದ್ಧರಾದ ಶ್ರೀ ಸಿದ್ದೇಶ್ವರ ಸ್ವಾಮಿಜಿಯು ದೈವಭಕ್ತಿ ಎಂಬ ನೈಜ ಮತ್ತು ನೇರ ಉದಾಹರಣೆಯಾಗಿದೆ. ಅವರ ಭಾಷಣಗಳು ಪ್ರತಿಯೊಬ್ಬರ ಜೀವನದಲ್ಲಿ ಅದ್ಭುತ ರೂಪಾಂತರವನ್ನು ತಂದಿವೆ ಮತ್ತು ಅಂತಿಮವಾಗಿ ಶಾಂತಿಯುತ ಮತ್ತು ಸಂತೋಷದ ಜೀವನಕ್ಕೆ ಕಾರಣವಾಗುತ್ತದೆ.

ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಜೀವಂತ ದೇವರಿಗೆ ಹೋಲಿಸಬಹುದಾದ ಮಾನವರಲ್ಲಿ ಒಬ್ಬರು. ಅವರ ಗುಣಗಳನ್ನು ವಿವರಿಸುವಲ್ಲಿ ಪದಗಳು ಕಡಿಮೆಯಾಗಬಹುದು. ಅವರ ಅನಿಸಿಕೆಗಳನ್ನು ಅನಕ್ಷರಸ್ಥರಿಂದಲೂ ಚೆನ್ನಾಗಿ ಅರ್ಥಪೂರ್ಣವಾಗಿ ಅರ್ಥೈಸಿಕೊಳ್ಳಬಹುದು.

ಅವರು ಬಹಳ ಅರ್ಥಮಾಡಿಕೊಳ್ಳುವ ಮತ್ತು ಆನಂದಿಸುವ ರೀತಿಯಲ್ಲಿ ಬಹಳ ಕಠಿಣ ವಿಷಯಗಳನ್ನು ಬೋಧಿಸುತ್ತಾರೆ. ಉತ್ತರ ಕರ್ನಾಟಕದ ಪ್ರತಿಯೊಬ್ಬ ವ್ಯಕ್ತಿಗೂ ಸ್ವಾಮೀಜಿಯವರ ವಿದ್ವತ್ ಪರಿಚಯ ಅವರ ವೀಡಿಯೊಗಳು ಆನ್‌ಲೈನ್‌ನಲ್ಲಿ ಪ್ರಪಂಚದಾದ್ಯಂತ ಹರಿದಾಡಿ ಪ್ರಸಿದ್ಧ ವ್ಯಕ್ತಿಯಾಗಿದ್ದರು. ಅವರ ಉಪನ್ಯಾಸ ಸರಣಿಯ “ಬದುಕುವದು ಹೇಗೆ, 'ನಾವು ಹೇಗೆ ಬದುಕಬೇಕು' ಮುಂತಾದವು “ಲಕ್ಷಾಂತರ ಭಾರತೀಯರನ್ನು ರೂಪಾಂ ತರಿಸಿದೆ. ಜೀವನದಲ್ಲಿ ಸಂತೃಪ್ತಿ ಮತ್ತು ಸಂತೋಷದ ಬಗ್ಗೆ ಪ್ರಾಯೋಗಿಕ ಪಾಠಗಳನ್ನು ಜನರು ಮೆಚ್ಚಿದ್ದಾರೆ.

ಶ್ರೀ ಸಿದ್ದೇಶ್ವರ ಸ್ವಾಮೀಜಿ ಅಲಮ ಪ್ರಭುನ ವಚನಗಳ ಮೇಲೆ ಅಧಿಕೃತ ಭಾಷಣಕಾರರಾಗಿದ್ದರು. ಅವರು ವಚನಗಳ ಬಗ್ಗೆ ಹೊಸ ಬೆಳಕನ್ನು ಚೆಲ್ಲಿದ್ದಾರೆ. ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಸರಳವಾದ ಸ್ಫೂರ್ತಿದಾಯಕ ಜೀವನ ಶೈಲಿಯನ್ನು ಹೊಂದಿದ್ದರು. ಭಾರತದ ಸಂತರು ಮತ್ತು ಸಿಯರ್ಸ್ ಕೃತಿಗಳ ಆಧಾರದ ಮೇಲೆ ಹಲವಾರು ಪುಸ್ತಕಗಳನ್ನು ಬರೆದಿದ್ದಾರೆ. ವೇದಾಂತ, ಗೀತಾ, ಯೋಗಸೂತ್ರ, ವಚನಗಳ ಕುರಿತಾದ ಶ್ರೀ ಸ್ವಾಮೀಜಿಯವರ ಉಪನ್ಯಾಸಗಳು ಚಿಂತನೆ, ಅಭಿವ್ಯಕ್ತಿ ಚಿಂತನೆಗಾಗಿ ಹೆಸರುವಾಸಿಯಾಗಿವೆ.


–ಬನ್ನೂರು ಕೆ.ರಾಜು, ಸಾಹಿತಿ, ಹಿರಿಯ ಪತ್ರಕರ್ತ

ಮೈಸೂರು ಮಿತ್ರ




# ಬಾಲ್ಯದಲ್ಲೇ ಸಿದ್ದೇಶ್ವರರ ಪ್ರತಿಭೆಗೆ ಮಾರು ಹೋಗಿದ್ದ ಗುರು ಮಲ್ಲಿಕಾರ್ಜುನಸ್ವಾಮಿಗಳು!









ವಿಜಯಪುರ, ಜ.2– ವಿಜಯಪುರದ ತಿಕೋಟಾ ತಾಲೂಕಿನ ಬಿಜ್ಜರಗಿ ಗ್ರಾಮದ ಸಾಮಾನ್ಯ ರೈತ ಕುಟುಂಬದಲ್ಲಿ 1941 ಅಕ್ಟೋಬರ್ 24ರಂದು ಜನಿಸಿದ ಸಿದ್ದೇಶ್ವರ ಸ್ವಾಮೀಜಿಯ ಬಾಲ್ಯಹೆಸರು ಸಿದ್ದಗೊಂಡಪ್ಪ. ತಮ್ಮ ಗ್ರಾಮದಲ್ಲಿಯೇ ನಾಲ್ಕನೇ ತರಗತಿಯವರೆಗೆ ಓದಿದ ಸ್ವಾಮೀಜಿ ಅವರು ವಿಜಯಪುರ ಜ್ಞಾನಯೋಗಾಶ್ರಮದ ಮಲ್ಲಿಕಾರ್ಜುನ ಸ್ವಾಮಿಗಳ ಬಳಿ ಬಂದರು. ಬಾಲಕ ಸಿದ್ದೇಶ್ವರನ ಚುರುಕುತನ ಹಾಗೂ ಚಿಕ್ಕವಯಸ್ಸಿನಲ್ಲಿ ಕಂಡ ಜ್ಞಾನ, ಮಲ್ಲಿಕಾರ್ಜುನಸ್ವಾಮಿ ಅವರ ಗಮನಕ್ಕೆ ಬರಲು ತಡವಾಗಲಿಲ್ಲ. ಸಿದ್ದೇಶ್ವರನಲ್ಲಿ ತಮ್ಮ ಆಶ್ರಮದ ಮುಂದಿನ ಸ್ವಾಮೀಜಿಯನ್ನು ಬಾಲ್ಯದಲ್ಲೇ ಕಂಡ ಮಲ್ಲಿಕಾರ್ಜುನ ಸ್ವಾಮಿಗಳು ತಾವು ಎಲ್ಲಿಗೆ ಪ್ರವಚನಕ್ಕೆ ಹೋದರೂ ಅಲ್ಲಿಗೆ ಸಿದ್ದೇಶ್ವರರನ್ನು ಕರೆದುಕೊಂಡು ಹೋಗಲು ಪ್ರಾರಂಭಿಸಿದರು. ಜೊತೆಯಲ್ಲಿ ಸಿದ್ದೇಶ್ವರ ಅವರ ವಿದ್ಯಾಭ್ಯಾಸ ಸಹ ಮುಂದು ವರಿಯಿತು.

**ತತ್ವಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ:** ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಪದವಿ ನಂತರ ಕೊಲ್ಹಾಪುರದ ವಿಶ್ವವಿದ್ಯಾಲಯದಲ್ಲಿ ತತ್ವಶಾಸ್ತ್ರ ವಿಷಯದಲ್ಲಿ ಎಂ.ಎ. ಪದವಿಯನ್ನು ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದರು. ಸಿದ್ದೇಶ್ವರ ಸ್ವಾಮೀಜಿಗಳು ಕನ್ನಡ, ಸಂಸ್ಕೃತ, ಇಂಗ್ಲಿಷ್, ಮರಾಠಿ ಮತ್ತು ಹಿಂದಿ ಭಾಷೆಯಲ್ಲಿ ಪಾಂಡಿತ್ಯ ಹೊಂದಿದ್ದರು. ಎಂ.ಎ ಓದುತ್ತಿದ್ದ ವೇಳೆ ಸಿದ್ದೇಶ್ವರರು ಕೊಲ್ಹಾಪುರದಲ್ಲಿ ಶ್ರೀ ವಿಜಯ ಪಾಟೀಲರ ಮನೆಯಲ್ಲಿ ವಾಸವಿದ್ದರು. ಆ ಅವಧಿಯಲ್ಲಿ ತಮ್ಮ ಗುರುಗಳಾದ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಮಾಡಿದ ಪ್ರವಚನಗಳನ್ನು ಒಂದುಗೂಡಿಸಿ "ಸಿದ್ಧಾಂತ ಶಿಖಾಮಣಿ" ಎಂಬ ಪುಸ್ತಕ ಬರೆದು ಗುರುಗಳ ಹೆಸರಿನಲ್ಲೇ ಪ್ರಕಟಿಸಿದ್ದರು. ಆಗ ಅವರಿಗೆ ಕೇವಲ 19 ವರ್ಷ. ಸಿದ್ದೇಶ್ವರರ ಮಾತು ಎಂದರೆ ಮಲ್ಲಿಕಾರ್ಜುನ ಸ್ವಾಮಿಗಳಿಗೆ ಬಲು ಪ್ರೀತಿ. ಆತ ಮಹಾ ಬುದ್ದಿವಂತ, ಆಧ್ಯಾತ್ಮಿಕದಂತೆ ಲೌಕಿಕ ವಿಷಯಗಳಲ್ಲೂ ವಿಶೇಷ ಪರಿಜ್ಞಾನ ಇದೆ. ಮುಂದೆ ಜಗತ್ತಿಗೇ ದೊಡ್ಡವನಾಗುತ್ತಾನೆ ಎಂದು ವಿಶ್ವಾಸದಿಂದ ಎಲ್ಲರೆದುರು ಹೇಳುತ್ತಿದ್ದರು. ಸ್ನಾತಕೋತ್ತರ ಪದವಿ ಪಡೆದು ವಿಜಯಪುರಕ್ಕೆ ಹಿಂದಿರುಗಿದ ನಂತರ ಸಿದ್ದೇಶ್ವರರಿಗೆ ಭಗವದ್ಗೀತೆಯ ಬಗ್ಗೆ, ಉಪನಿಷತ್ತುಗಳ ಬಗ್ಗೆ ಮಲ್ಲಿಕಾರ್ಜುನ ಸ್ವಾಮಿಗಳು ವ್ಯಾಖ್ಯಾನವನ್ನು ನೀಡಿ ಅವರ ಜ್ಞಾನ ದಿಗಂತವನ್ನು ವಿಸ್ತೃತಗೊಳಿಸಿದರು. ಪೂಜ್ಯರು ಉಪನಿಷತ್ತುಗಳು, ಭಗವದ್ಗೀತೆ, ಯೋಗಸೂತ್ರ, ವಚನ ಶಾಸ್ತ್ರ ಮುಂತಾದ ವಿಷಯಗಳ ಬಗೆಗೆ ತಾವು ಹೇಗೆ ಗುರು ಮುಖೇನ ಕಲಿತ ಜ್ಞಾನವನ್ನು ಬಳಸಿಕೊಂಡು ಭೋದಪ್ರದ ಪ್ರವಚನಗಳನ್ನು ನೀಡುತ್ತಿದ್ದಾರೆ. ಗಹನವಾದ ವೇದಾಂತ ತತ್ವಗಳನ್ನು ಅತ್ಯಂತ ಸರಳವಾಗಿ ಜನಮಾನಸದಲ್ಲಿ ಉಳಿಯುವಂತೆ ವಿವರಿಸುವುದೇ ಅವರ ವೈಶಿಷ್ಟ್ಯ.

**ಪ್ರವಚನ ಕೇಳಲು ಸಾವಿರ ಸಾವಿರ ಸಂಖ್ಯೆ:** ವಿಜಯಪುರ ಜ್ಞಾನಯೋಗಾಶ್ರಮದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಶ್ರೀ ಸಿದ್ದೇಶ್ವರರು ತಮ್ಮ ಗುರುಗಳ ಮಾರ್ಗದರ್ಶನದಲ್ಲೇ ಆಶ್ರಮದ ಚಟುವಟಿಕೆಗಳನ್ನು ಮುಂದುವರಿಸಿಕೊಂಡು ಬರುತ್ತಿದ್ದರು. ಸಿದ್ದೇಶ್ವರರ ಪ್ರವಚನ ಎಲ್ಲಿ ಏರ್ಪಡಿಸಿದರೂ ಅಲ್ಲಿ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಸೇರುತ್ತಿದ್ದರು. ಒಂದು ಗಂಟೆಯ ಅವರ ಪ್ರವಚನ ದುದ್ದಕ್ಕೂ ಸೂಜಿಗಲ್ಲಿನಂತಹ ಸೆಳೆತ, ಅವರು ಭಾಷೆ, ಧಾಟಿ, ಪದ ಪ್ರಯೋಗ, ಉದಾಹಣೆಗಳ ಮೂಲಕ ಪ್ರಚಲಿತ ಸಂಗತಿಗಳನ್ನು ಸಮ್ಮಿಳಿತಗೊಳಿಸುತ್ತಿದ್ದರು. ಜೊತೆಗೆ ಕಲ್ಲು, ಮಣ್ಣು, ಗಿಡ, ಮರ, ಹೂ, ಹಣ್ಣು, ಪಕ್ಷಿ, ಪ್ರಾಣಿಗಳಲ್ಲಿ ಜೀವ ಚೈತನ್ಯವಿದೆ ಎಂಬುದನ್ನು ಅವರು ವಿವರಿಸುವ ರೀತಿ ಅದ್ಭುತವಾದುದು. ತಮ್ಮ ಗುರುಗಳು ಸ್ಥಾಪಿಸಿದ ನೂರಾರು ವಿದ್ಯಾ ಸಂಸ್ಥೆಗಳನ್ನು ಸಿದ್ದೇಶ್ವರರು ಮುಂದುವರಿಸಿಕೊಂಡು ಬರುತ್ತಿದ್ದರೂ ಅವರ ಯಾವ ಸಂಸ್ಥೆಗೂ ಆಶ್ರಮ ಅಥವಾ ಅವರ ಹೆಸರಾಗಲಿ ಇರುವುದಿಲ್ಲ. 'ಕೆರೆಯ ನೀರನ್ನು ಕೆರೆಗೆ ಚೆಲ್ಲಿ' ಎಂಬ ದಾಸ ವಾಣಿಯಂತೆ 'ನನ್ನದೇನಿದೆ, ಎಲ್ಲವೂ ಭಗವಂತನದು, ಇಲ್ಲಿರುವ ಪ್ರತಿಯೊಬ್ಬ ಮನುಷ್ಯನೂ ದೇವರು. ಎಲ್ಲರಲ್ಲೂ ದೇವರನ್ನು ಕಾಣಬೇಕು. ನಾನು ನನ್ನದೆಂಬ ಮಮಕಾರ ಸಲ್ಲದು. ಇಹ–ಪರ ಎರಡೂ ಒಂದೆ' ಎಂದು ಸಾರುತ್ತ ಅದರಂತೆ ನಡೆಯುತ್ತಿದ್ದ ಅಪರೂಪದ ಯೋಗಿಗಳು ಶ್ರೀ ಸಿದ್ದೇಶ್ವರರು.


**ಜೀವನ ಶೈಲಿ:** ಶ್ರೀಸಿದ್ದೇಶ್ವರ ಸ್ವಾಮೀಜಿಯವರು ಸರಳ, ಸ್ಫೂರ್ತಿದಾಯಕ ಜೀವನ ಶೈಲಿ ಹೊಂದಿದ್ದರು. ತತ್ವಜ್ಞಾನಿ, ಆಲೋಚಕ ಸ್ವಾಮಿಜಿ ಪ್ರಪಂಚದಾದ್ಯಂತ ಆಧ್ಯಾತ್ಮಿಕ ಪ್ರವಚನಗಳನ್ನು ನೀಡಿದ್ದಾರೆ. ಅವರು ತತ್ವಶಾಸ್ತ್ರದಲ್ಲಿ ಪಡೆದಿದ್ದ ಪದವಿಯ ಅನುಭವವನ್ನು ಆಧ್ಯಾತ್ಮಿಕತೆಗೆ ಮೀಸಲಿಟ್ಟಿದ್ದರು. ಭಾರತದ ಸಂತರ ಕೃತಿಗಳ ಆಧಾರದ ಮೇಲೆ ಹಲವಾರು ಪುಸ್ತಕಗಳನ್ನು ಬರೆದಿದ್ದಾರೆ. ವೇದಾಂತ, ಗೀತಾ, ಯೋಗಸೂತ್ರ, ವಚನಗಳ ಕುರಿತಾದ ಸ್ವಾಮಿಜಿಯವರ ಉಪನ್ಯಾಸಗಳು ಅಭಿವ್ಯಕ್ತಿ ಮತ್ತು ಚಿಂತನೆಗೆ ಹೆಸರುವಾಸಿಯಾಗಿದೆ.

### ಪ್ರಶಸ್ತಿಗಳ ಅವಶ್ಯಕತೆ ನನಗಿಲ್ಲ


ಸಿದ್ದೇಶ್ವರ ಶ್ರೀಗಳು ತಮ್ಮನ್ನು ಹುಡುಕಿಕೊಂಡು ಬಂದ ದೇಶದ ಅತ್ಯುನ್ನತ ಪದ್ಮಶ್ರೀ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳನ್ನು ಸ್ವೀಕರಿ ಸಲು ನಯವಾಗಿಯೇ ನಿರಾಕರಿಸಿದ್ದರು.

ಶ್ರೀಗಳಿಗೆ ಕೇಂದ್ರ ಸರ್ಕಾರ ಪದ್ಮಶ್ರೀ ಪ್ರಶಸ್ತಿ ಪ್ರಕಟಿಸಿದಾಗ 'ನಾಗರಿಕ ಗೌರವ ಪ್ರಶಸ್ತಿಗಳ ಮೇಲೆ ನನಗೆ ಅಪಾರ ಗೌರವ ಇದೆ. ಪದ್ಮಶ್ರೀ ಪ್ರಶಸ್ತಿ ಘೋಷಿಸಿದ್ದಕ್ಕೆ ಧನ್ಯವಾದಗಳು. ಆದರೆ ನಾನೊಬ್ಬ ಸರಳ ವ್ಯಕ್ತಿ. ಸಾಮಾನ್ಯ ಜೀವನ ನಡೆಸುತ್ತಾ, ಆಧ್ಯಾತ್ಮಿಕ ಬೋಧನೆಯ ಮೂಲಕ ಜನರ ಜೀವನ ಉದಾತ್ತಗೊಳಿಸುವ ಉದ್ದೇಶ ನನ್ನದು. ಹಾಗಾಗಿ ಪ್ರಶಸ್ತಿಗಳ ಅವಶ್ಯಕತೆ ನನಗಿಲ್ಲ. ಎಲ್ಲಾ ಗೌರವಾಧರಗಳೊಂದಿಗೆ ಈ ಪ್ರಶಸ್ತಿಯನ್ನು ಹಿಂದಿರುಗಿಸುತ್ತಿದ್ದೇನೆ. ಅನ್ಯತಾ ಭಾವಿಸದಿರಿ' ಎಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯುವ ಮೂಲಕ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳು ಪದ್ಮಶ್ರೀ ಪ್ರಶಸ್ತಿಯನ್ನು ನಿರಾಕರಿಸಿದ್ದರು.

ಅದೇ ರೀತಿ ಅವರು ವ್ಯಾಸಂಗ ಮಾಡಿದ ಕರ್ನಾಟಕ ವಿಶ್ವವಿದ್ಯಾನಿಲಯ ಗೌರವ ಡಾಕ್ಟರೇಟ್ ಪ್ರಕಟಿಸಿದಾಗ ಅದನ್ನೂ ಶ್ರೀಗಳು ಸ್ವೀಕರಿಸಿರಲಿಲ್ಲ. ಹೀಗೆ ತಮಗೆ ಸಂದ ಎಷ್ಟೋ ಪ್ರಶಸ್ತಿ ಮತ್ತು ಪುರಸ್ಕಾರಗಳನ್ನು ಅವರು ವಿನಮ್ರವಾಗಿಯೇ ನಿರಾಕರಿಸಿದ್ದಾರೆ. ಇದಕ್ಕೆ ಕಾರಣ ವೇನು. ಎಂಬ ಪ್ರಶ್ನೆಗೆ, "ಅವರು ಆಧ್ಯಾತ್ಮ, ಆದರ್ಶ ಮತ್ತು ನೈತಿಕತೆ ಬಗ್ಗೆ ಕೇವಲ ಬೋಧನೆ ಮಾಡುವುದಷ್ಟೇ ಅಲ್ಲ. ಅವುಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದಾರೆ. ನುಡಿದಂತೆ ನಡೆಯುವ ಮತ್ತು ನಡೆದಂತೆಯೇ ನುಡಿಯುವ ವ್ಯಕ್ತಿತ್ವ ಅವರದು" ಎಂದು ಸ್ವಾಮೀಜಿಯನ್ನು ಹತ್ತಿರದಿಂದ ಕಂಡಿರುವವರೊಬ್ಬರು ಹೇಳುತ್ತಾರೆ.



ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರು ಶ್ರೀಗಳಿಗೆ ವಂದಿಸುತ್ತಿರುವುದು.



ಭಾನುವಾರ ರಾತ್ರಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಶ್ರೀಗಳನ್ನು ಭೇಟಿಯಾಗಿ ಅವರ ಆರೋಗ್ಯ ವಿಚಾರಿಸಿದ್ದರು.

## ಸಿದ್ದೇಶ್ವರ ಶ್ರೀಗಳು ಲಿಂಗಾಯತ ಶ್ರೀಗಳಾದರೂ ಚಿತೆಗೆ ಅಗ್ನಿಸ್ಪರ್ಶ

ವಿಜಯಪುರ, ಜ.2– ಸೋಮವಾರ ಸಂಜೆ ಲಿಂಗೈಕ್ಯರಾದ ವಿಜಯಪುರ ಜ್ಞಾನಯೋಗಾಶ್ರಮದ ಸಿದ್ದೇಶ್ವರ ಶ್ರೀಗಳು ಲಿಂಗಾಯತ ಸಮಾಜದ ಅಗ್ರಗಣ್ಯ ಶ್ರೀಗಳಾದರೂ ಅವರ ಪಾರ್ಥಿವ ಶರೀರವನ್ನು ಸಮಾಧಿ ಮಾಡದೇ ಅಗ್ನಿ ಸ್ಪರ್ಶದ ಮೂಲಕ ಅಂತ್ಯಕ್ರಿಯೆ ನೆರವೇರಿಸಲಾಗುತ್ತಿದೆ. ತಾವು ಇಹಲೋಕ ತ್ಯಜಿಸಿದ ಬಳಿಕ ಶರೀರವನ್ನು ಸಮಾಧಿ ಮಾಡದೆ, ಯಾವುದೇ ಸ್ಮಾರಕ ನಿರ್ಮಿಸದೆ ಅಗ್ನಿ ಸ್ಪರ್ಶ ಮಾಡಿ, ಚಿತಾ ಭಸ್ಮವನ್ನು ಜಲಮೂಲಗಳಲ್ಲಿ ವಿಸರ್ಜಿಸಬೇಕು ಎಂದು 2014 ರಲ್ಲೇ ಶ್ರೀಗಳು ಕಾನೂನು ಬದ್ಧವಾಗಿ ಬರೆದಿಟ್ಟಿದ್ದರು. ಅದೇ ರೀತಿಯಲ್ಲಿ ಅಂತಿಮ ವಿಧಿಗಳನ್ನು ನಡೆಸಲಾಗುವುದು ಎಂದು ವಿವಿಧ ಶ್ರೀಗಳು ಮತ್ತು ಗಣ್ಯರು ತಿಳಿಸಿದ್ದಾರೆ.

ಒಂದನೇ ಪುಟದಿಂದ

## ಸಿದ್ದೇಶ್ವರ ಸ್ವಾಮೀಜಿ ಅಸ್ತಂಗತ

ಪ್ರಹ್ಲಾದ ಜೋಶಿ ಅವರು ತಮ್ಮ ಫೋನ್ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರನ್ನು ಸಂಪರ್ಕಿಸಿ ಶ್ರೀಗಳ ಜೊತೆ ಮಾತನಾಡಲು ಅನುವು ಮಾಡಿಕೊಟ್ಟಿದ್ದರು. ಪ್ರಧಾನಿ ಸಹ ಉನ್ನತ ಮಟ್ಟದ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದರೂ ಶ್ರೀಗಳು ಕೈ ಮುಗಿಯುವ ಮೂಲಕ ಈ ಜೀವಕ್ಕೆ ಚಿಕಿತ್ಸೆ ಅಗತ್ಯವಿಲ್ಲ, ಸಹಜವಾಗಿ ತೆರಳಲು ಬಿಡಿ ಎಂದು ಕೈಸನ್ನೆ ಮಾಡಿದ್ದರು.

'ಗುಡಿ ಕಟ್ಟಬಾರದು, ಸಮಾದಿ ಮಾಡಬಾರದು' ಎಂಬ ಶ್ರೀಗಳ ಆಶಯದಂತೆ ಅಗ್ನಿ ಸ್ಪರ್ಶ ಮಾಡುವ ಮೂಲಕ ಅಂತಿಮ ಸಂಸ್ಕಾರ ನಡೆಸಲು ನಿರ್ಧರಿಸಲಾಗಿದೆ. ಅಂತ್ಯಸಂಸ್ಕಾರದಲ್ಲಿ ಮಠಾಧೀಶರು, ಗಣ್ಯರು, ಮಾಧ್ಯಮದವರಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ತಿಳಿಸಿದ್ದಾರೆ. ಆಶ್ರಮದ ಶಿಷ್ಯ ವರ್ಗ, ನಾಡಿನ ಹಿರಿಯ ಮಠಾಧೀಶರು, ಗಣ್ಯರು ಶ್ರೀಗಳ ಅಂತ್ಯ ಸಂಸ್ಕಾರದ ವಿಧಿವಿಧಾನಗಳನ್ನು ನಡೆಸಲು ಅಗತ್ಯ ಸಿದ್ಧತೆ ಕೈಗೊಂಡಿದ್ದಾರೆ. ಶ್ರೀಗಳ ಅಂತಿಮ ದರ್ಶನಕ್ಕೆ ಸಹಸ್ರಾರು ಭಕ್ತರು ಆಶ್ರಮದತ್ತ ಧಾವಿಸುತ್ತಿರುವುದರಿಂದ ಯಾವುದೇ ಅಸ್ತವ್ಯಸ್ತವಾಗದಂತೆ ನೋಡಿಕೊಳ್ಳಲು ಜಿಲ್ಲಾಧಿಕಾರಿ ವಿಜಯ ಮಹಾಂತೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಚ್.ಡಿ.ಆನಂದಕುಮಾರ್ ಅಗತ್ಯ ವ್ಯವಸ್ಥೆ, ಭದ್ರತೆ ಮಾಡಿದ್ದಾರೆ.

ಅಂತಿಮ ದರ್ಶನಕ್ಕೆ 5 ರಿಂದ 10 ಲಕ್ಷ ಭಕ್ತರು ಬರುವ ನಿರೀಕ್ಷೆ ಇದ್ದು, ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ಎಂ.ಬಿ.ಪಾಟೀಲ, ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರು ಉಪಹಾರದ ವ್ಯವಸ್ಥೆ ಮಾಡಿದ್ದಾರೆ. ಸಾರ್ವಜನಿಕರೂ ಸಹ ಭಕ್ತರಿಗೆ ಉಪಹಾರದ ವ್ಯವಸ್ಥೆ ಮಾಡಬಹುದಾಗಿದೆ ಎಂದು ಕನ್ಹೇರಿ ಮಠದ ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮೀಜಿ, ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ಎಂ.ಬಿ.ಪಾಟೀಲರು ತಿಳಿಸಿದರು.


### ಸಮಾಧಿ ಮಾಡಬಾರದು ಅನುಸಾರ ಅಂತ್ಯಕ್ರಿಯೆ

ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಶ್ರೀಗಳ ಅಂತಿಮ ದರ್ಶನಕ್ಕಾಗಿ ಸೊಲ್ಲಾಪುರ, ಕಲ್ಬುರ್ಗಿ, ಸಿಂಧಗಿ, ಬಾಗಲಕೋಟೆ, ಜಮಖಂಡಿ, ಅಥಣಿ ಕಡೆಯಿಂದ ಆಗಮಿಸುವ ಭಕ್ತಾದಿಗಳು ವಿಜಯಪುರ ನಗರದ ರಿಂಗ್‌ರಸ್ತೆಯ ಮೂಲಕ ಜಿಲ್ಲಾಸ್ಪತ್ರೆ ಹಿಂಭಾಗದಲ್ಲಿ ವಾಹನ ನಿಲುಗಡೆಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಈ ಸ್ಥಳದಲ್ಲಿ ಭಕ್ತಾದಿಗಳಿಗೆ ಪ್ರಸಾದ, ಕುಡಿಯುವ ನೀರು ಸೇರಿದಂತೆ ಎಲ್ಲಾ ವ್ಯವಸ್ಥೆಯನ್ನು ಮಾಡಲಾಗಿದೆ. ಭಕ್ತಾದಿಗಳು ಸೈನಿಕ ಶಾಲೆ ಎದುರು ಇರುವ ನೇತಾಜಿ ಸುಭಾಷ್ ಚಂದ್ರಬೋಸ್ ರಸ್ತೆಯ ಮೂಲಕ ಶಾಲೆಯ ಮುಖ್ಯ ದ್ವಾರ ಪ್ರವೇಶಿಸಿ, ಅಂತಿಮ ದರ್ಶನ ನಂತರ ಶಾಲೆಯ 2ನೇ ಗೇಟ್ ಮೂಲಕ ಹೊರಗೆ ಹೋಗುವುದು ಎಂದು ತಿಳಿಸಲಾಗಿದೆ.

ಸೈನಿಕ ಶಾಲೆಯಲ್ಲಿ ಮಧ್ಯಾಹ್ನ 3 ರಿಂದ ಸಂಜೆ 4 ರವರೆಗೆ ಪೂಜ್ಯರಿಗೆ ಸಕಲ ಸರ್ಕಾರಿ ಗೌರವಗಳನ್ನು ಸಲ್ಲಿಸಲಾಗುವುದು. ಸಂಜೆ 4 ಗಂಟೆಗೆ ತೆರೆದ ವಾಹನದಲ್ಲಿ ಪಾರ್ಥಿವ ಶರೀರವನ್ನು ಮತ್ತೆ ಜ್ಞಾನ ಯೋಗಾಶ್ರಮಕ್ಕೆ ತರಲಾಗುವುದು. ಅಂತ್ಯಕ್ರಿಯೆಯನ್ನು ಸಂಜೆ 5 ಗಂಟೆಗೆ ಆಶ್ರಮದ ಆವರಣದಲ್ಲಿ ವಿಧಿ ವಿಧಾನಗಳಂತೆ ನೆರವೇರಿಸಲಾಗವುದು ಎಂದು ತಿಳಿಸಿರುವ ಜಿಲ್ಲಾಧಿಕಾರಿಗಳು ಆಶ್ರಮದಲ್ಲಿ ಸ್ಥಳಾವಕಾಶದ ಅಭಾವವಿರುವುದರಿಂದ ಭಕ್ತಾದಿಗಳು ಸೈನಿಕ ಶಾಲೆ ಆವರಣದಲ್ಲೇ ಶ್ರೀಗಳ ಅಂತಿಮ ದರ್ಶನ ಪಡೆಯುವಂತೆ ಕೋರಿದ್ದಾರೆ.

# ಪ್ರಧಾನಿ ಮೋದಿ ಅವರನ್ನು ಕೊಂಡಾಡಿದ್ದ ಶ್ರೀಗಳು

### ಜೆಎಸ್‌ಎಸ್ ಮಹಾವಿದ್ಯಾಪೀಠದ ಕೆಎಸ್‌ಎಸ್ ಸಂಸ್ಕೃತ ಪಾಠಶಾಲೆ ಉದ್ಘಾಟನೆ ವೇಳೆ ಪ್ರಧಾನಿಗಳಿಂದ ಶ್ರೀಗಳು ರಚಿಸಿದ್ದ ಪುಸ್ತಕಗಳ ಬಿಡುಗಡೆ



ಮೈಸೂರು,ಜ.2(ಎಂಕೆ)– ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಸುತ್ತೂರು ಶಾಖಾ ಮಠದಲ್ಲಿ ಕಳೆದ ಜೂ.20 ರಂದು ನಡೆದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕೆಎಸ್‌ಎಸ್ ಸಂಸ್ಕೃತ ಪಾಠಶಾಲೆ ಉದ್ಘಾಟನೆ ಹಾಗೂ ತಾವು ರಚಿಸಿದ್ದ 'ಪತಂಜಲಿಸ್ ಯೋಗ ಸೂತ್ರಾಸ್', 'ಶಿವ ಸೂತ್ರಾಸ್' ಹಾಗೂ 'ನಾರದ ಭಕ್ತಿ ಸೂತ್ರಾಸ್' ಕೃತಿಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಭಾಗವಹಿಸಿದ್ದ ವಿಜಯಪುರ ಜ್ಞಾನಯೋಗಾಶ್ರಮದ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು, ಪ್ರಧಾನಿ ನರೇಂದ್ರ ಮೋದಿ ಲೋಕ ಹಿತೈಷಿ ಎಂದು ಗುಣಗಾನ ಮಾಡಿದ್ದರು.

**ಅತ್ಯಂತ ಜನಪ್ರಿಯ, ಲೋಕ ಹಿತೈಷಿಯಾದ ಪ್ರಧಾನಿ ನರೇಂದ್ರ ಮೋದಿಯವರನ್ನು ನೋಡೋದೆ ಒಂದು ಸೌಭಾಗ್ಯ. ಅವರಲ್ಲಿಗೆ ಬರುತ್ತಾರೆ ಎಂದರೆ ಎಷ್ಟೊಂದು ಸಂತೋಷ. ದಿನದ ಎಲ್ಲಾ ತಾಸುಗಳನ್ನು ಜನಚಿಂತನೆಗಾಗಿ ದೇಶದ ಅಭಿವೃದ್ಧಿಗಾಗಿ ಮೀಸಲಿಟ್ಟಿದ್ದಾರೆ. ಬರೀ ಭಾರತವಲ್ಲ ಜಗತ್ತಿನ ಅನೇಕ ರಾಷ್ಟ್ರಗಳ ಜನ ಅವರನ್ನು ಪ್ರೀತಿಸುತ್ತಾರೆ. ಇಂತಹ ಒಬ್ಬ ಪ್ರಧಾನಿ ದೇಶಕ್ಕೆ ದೊರೆತದ್ದು ಸುದೈವ ಎಂದಿದ್ದರು.**

ಶಿವಸೂತ್ರ, ಪತಂಜಲಿ ಸೂತ್ರ, ಭಕ್ತಿ ಸೂತ್ರ ಅವರಿಂದಲೇ ಬಿಡುಗಡೆಯಾಯಿತೆಂದರೆ ಅವರು ಯೋಗಿಗಳು. ಅವರಿಗೆ ಕಿಸೆ(ಜೇಬು)ಗಳಿದ್ದಾವೆ. ಆದರೆ ತುಂಬುವ ಮನಸ್ಸಿಲ್ಲ. ಈ 3 ಗ್ರಂಥಗಳಲ್ಲಿ ಇರುವುದು ನಿಮ್ಮನ್ನು, ನಿಮ್ಮ ಜನರನ್ನು, ಜಗತ್ತನ್ನು ಪ್ರೀತಿಸಿ. ಇದು ನಿಮ್ಮ ಯೋಗ. ಪ್ರಧಾನಿಯವರು ದಿನದ ತುಂಬಾ ಕೆಲಸ ಮಾಡಿದರೂ ಅವರ ಮುಖದ ಮೇಲಿನ ಮಂದಸ್ಮಿತ ಕಡಿಮೆಯಾಗುವುದಿಲ್ಲ. ನನಗೂ ಎಷ್ಟು ಸಂತೋಷವಾಗಿದೆ ಎಂದರೆ ಅವರನ್ನು ನಿಮ್ಮನ್ನು ನೋಡಿ ಮಾತುಗಳನ್ನಾಡದೆ ಸುಮ್ಮನಿರುವುದೇ ಒಳ್ಳೆಯದು ಎಂದು ಹೇಳುತ್ತಾ ತಮ್ಮ ವಿದ್ವತ್ ಮಾತಿನಿಂದಲೇ ವೇದಿಕೆ ಮೇಲಿದ್ದವರು ಹಾಗೂ ನೆರೆದ ಸಬಾಸದರ ಮನಗೆದ್ದಿದ್ದರು.

## ವೈಕುಂಠ ಏಕಾದಶಿ: ಕೆ.ಆರ್. ಪೇಟೆ ದೇವಾಲಯಗಳಲ್ಲಿ ಭಕ್ತರ ದಂಡು

ಕೆ.ಆರ್.ಪೇಟೆ, ಜ.2– ವೈಕುಂಠ ಏಕಾದಶಿ ಅಂಗವಾಗಿ ಸೋಮವಾರ ತಾಲೂಕಿನ ವಿಷ್ಣು, ವೆಂಕಟೇಶ್ವರ, ಚನ್ನಕೇಶವ, ಲಕ್ಷ್ಮೀ ನಾರಾಯಣಸ್ವಾಮಿ ದೇವಾಲಯಗಳಲ್ಲಿ ವಿಶೇಷ ಪೂಜೆ, ಅಭಿಷೇಕ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ ಕಾರ್ಯಕ್ರಮಗಳು ಸಂಭ್ರಮದಿಂದ ನಡೆಯಿತು.



ಭಕ್ತರು ಕುಟುಂಬ ಸಮೇತ ದೇವಾಲಯಗಳ ಮುಂದೆ ಸಾಲಿನಲ್ಲಿ ನಿಂತು, ದೇವರಿಗೆ ಹಣ್ಣು, ಕಾಯಿ, ಕಾಣಿಕೆ ಅರ್ಪಿಸಿ, ದೇವರ ದರ್ಶನ ಪಡೆದರು.

ತಾಲೂಕಿನ ಅಗ್ರಹಾರ ಬಾಚಹಳ್ಳಿಯ ಶ್ರೀ ಚನ್ನ ಕೇಶವ ದೇವಾಲಯದಲ್ಲಿ ವೈಕುಂಠ ಏಕಾದಶಿ ಅಂಗವಾಗಿ ದೇವಾಲಯವನ್ನು ವಿವಿಧ ತಳಿರು, ತೋರಣ ಹಾಗೂ ಹೂವಿನಿಂದ ಅಲಂಕರಿಸಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಜೊತೆಗೆ ಗ್ರಾಮ ದೇವತೆ ಶ್ರೀ ಲಕ್ಷ್ಮೀದೇವಿ ಉತ್ಸವ ಮೂರ್ತಿಗೂ ವಿಶೇಷ ಪೂಜೆ ಸಲ್ಲಿಸಲಾಯಿತು. ಕಿರುತೆರೆ ಕಲಾವಿದ ಅಘಾರಾಂ ಚಂದ್ರಶೇಖರ್ ತಂಡದವರು ದೇವರ ಭಜನೆ, ಗೀತ ಗಾಯನ ಕಾರ್ಯಕ್ರಮ ನಡೆಸಿಕೊಡುವ ಮೂಲಕ ಭಕ್ತರಿಗೆ ಭಕ್ತಿ ಭಾವಪರವಶಗೊಳಿಸಿದರು. ಮನ್ಮುಲ್ ನಿರ್ದೇಶಕ ಹೆಚ್.ಟಿ.ಮಂಜು, ಡಾಲು ರವಿ, ಕಾಂಗ್ರೆಸ್ ಮುಖಂಡ ವಿಜಯ್ ರಾಮೇಗೌಡ, ಸಮಾಜ ಸೇವಕ ಮಲ್ಲಿಕಾರ್ಜುನ್, ಗ್ರಾಪಂ ಅಧ್ಯಕ್ಷೆ ಸಾವಿತ್ರಮ್ಮ ಗೋವಿಂದಶೆಟ್ಟಿ, ಪಿಡಿಒ ದೇವೇಗೌಡ, ವಿಎಸ್‌ಎಸ್‌ಎನ್ ಬ್ಯಾಂಕ್ ಕಾರ್ಯದರ್ಶಿ ರಾಮಸ್ವಾಮಿ, ಸಚಿವ ನಾರಾಯಣಗೌಡರ ಧರ್ಮಪತ್ನಿ ದೇವಕಿ ನಾರಾಯಣಗೌಡ, ಅಪ್ತ ಸಹಾಯಕ ದಯಾನಂದ್ ಸೇರಿ ಹಲವು ಗ್ರಾಮಸ್ಥರು ಹಾಗೂ ಗ್ರಾಮದ ಮುಖಂಡರು ಭಾಗವಹಿಸಿದ್ದರು. ತಾಲೂಕಿನ ಹೊಸಹೊಳಲು ಶ್ರೀ ಲಕ್ಷ್ಮೀ ನಾರಾಯಣಸ್ವಾಮಿ ದೇವಾಲಯ, ಹೇಮಗಿರಿ ಶ್ರೀ ಕಲ್ಯಾಣ ವೆಂಕಟರಮಣಸ್ವಾಮಿ ದೇವಾಲಯ, ಬೈರ್ದ ಹೊಸೂರು ಶ್ರೀ ಬೋಳಾರೆ ರಂಗನಾಥಸ್ವಾಮಿ ದೇವಾಲಯ, ಶೆಕ್ಕೆರಿ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಾಲಯ, ಬೂಕನಕೆರೆ ಶ್ರೀ ವೆಂಕಟೇಶ್ವರ ಸ್ವಾಮಿ ದೇವಾಲಯ ಸೇರಿದಂತೆ ಹಲವು ದೇವಾಲಯಗಳಲ್ಲಿ ಪೂಜೆ, ಅಭಿಷೇಕ, ತೀರ್ಥ ಪ್ರಸಾದ ವಿತರಿಸಲಾಯಿತು.

### ಬಿಜೆಪಿಗೆ ಕೊತ್ತತ್ತಿ ಹೋಬಳಿ ಮೊದಲ ವೃತ್ತದ ಕಾರ್ಯಕರ್ತರ ಸೇರ್ಪಡೆ

# ಜೆಡಿಎಸ್ ಜೊತೆ ಹೊಂದಾಣಿಕೆ ಇಲ್ಲ: ಸಿ.ಪಿ.ಯೋಗೇಶ್ವರ್

ಮಂಡ್ಯ, ಜ.2– ಹೊಂದಾಣಿಕೆ ರಾಜಕಾರಣಕ್ಕೆ ಜೆಡಿಎಸ್ ಹೆಸರುವಾಸಿ. ಈ ಹಿಂದೆ ಹಳೇ ಮೈಸೂರು ಭಾಗವನ್ನು ಬಿಜೆಪಿ ಗಂಭೀರವಾಗಿ ಪರಿಗಣಿಸಿರಲಿಲ್ಲ. ಆದರೆ, ಈ ಬಾರಿ ಸ್ವತಃ ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರು ಈ ಭಾಗವನ್ನು ಗಂಭೀರವಾಗಿ ತೆಗೆದುಕೊಂಡಿದ್ದು, ಈ ಬಾರಿ ಏಳು ಕ್ಷೇತ್ರದಲ್ಲೂ ಪ್ರಬಲ ಅಭ್ಯರ್ಥಿಗಳನ್ನು ನಿಲ್ಲಿಸುತ್ತೇವೆ. ಜೊತೆಗೆ ಹೆಚ್ಚಿನ ಸ್ಥಾನಗಳನ್ನು ಗೆಲ್ಲುತ್ತೇವೆ ಹೊರತು ನಾವು ಯಾವುದೇ ಕಾರಣಕ್ಕೂ ಜೆಡಿಎಸ್ ಜೊತೆ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ ಎಂದು ವಿಧಾನಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಸ್ಪಷ್ಟಪಡಿಸಿದರು.

ತಾಲೂಕಿನ ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಬೇವಿನಹಳ್ಳಿ ಗ್ರಾಮದಲ್ಲಿ ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ಸಮ್ಮುಖದಲ್ಲಿ ಕೊತ್ತತ್ತಿ ಹೋಬಳಿ ಮೊದಲ ವೃತ್ತದ ಜೆಡಿಎಸ್ ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಬಿಜೆಪಿಗೆ ಸೇರ್ಪಡೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

2018ರ ಚುನಾವಣೆಯಲ್ಲಿ ಮಂಡ್ಯ ಜಿಲ್ಲೆಯ ಏಳು ಕ್ಷೇತ್ರದಲ್ಲಿ ಜೆಡಿಎಸ್ ಗೆಲ್ಲಿಸಿದ್ದೀರಿ.



ನಾರಾಯಣಗೌಡ ರಾಜೀನಾಮೆ ಕೊಟ್ಟು ಬಿಜೆಪಿಗೆ ಬಂದಿದ್ದಾರೆ. ನಮ್ಮ ಪಕ್ಷಕ್ಕೆ ಬಂದು ಅಧಿಕಾರ ಹಿಡಿದು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದಾರೆ. ಅಭಿವೃದ್ಧಿ ದೃಷ್ಟಿಯಿಂದ ಮಂಡ್ಯಕ್ಕೆ ಹೊಸ ನಾಯಕತ್ವ ಬೇಕು ಎಂದು ಹೇಳಿದರು.

ಈ ಭಾಗದ ಯುವ ಮುಖಂಡ ಸಚ್ಚಿದಾನಂದ ಅವರನ್ನು ಬಿಜೆಪಿಗೆ ಕರೆ ತಂದಿದ್ದೇವೆ. 2023ಕ್ಕೇ ಶ್ರೀರಂಗಪಟ್ಟಣ ಕ್ಷೇತ್ರದಲ್ಲಿ ಬಿಜೆಪಿ ಶಾಸಕರಿರುತ್ತಾರೆ. ರಾಜ್ಯದಲ್ಲಿ ಹಿಂದುಳಿದಿರುವ ಜಿಲ್ಲೆ ಮಂಡ್ಯ ಜಿಲ್ಲೆ. ಚನ್ನಪಟ್ಟಣದ ಅಭಿವೃದ್ಧಿ ನೋಡ ಬನ್ನಿ. ಮಂಡ್ಯದಲ್ಲಿ ರಸ್ತೆಗಳು ಅಭಿವೃದ್ಧಿಯಾಗಿಲ್ಲ ಕಾಂಕ್ರೀಟ್ ರಸ್ತೆ ಆಗಿಲ್ಲ. ನನ್ನ ಕ್ಷೇತ್ರ ಚನ್ನಪಟ್ಟಣ ಎಷ್ಟು ಮುಖ್ಯ, ಅಷ್ಟೆ ಮಂಡ್ಯ ಮುಖ್ಯ ಎಂದರು.

ದೇಶದಲ್ಲಿ ಗುಜರಾತ್‌ನ ಅಮುಲ್ ಡೈರಿ ಬೆಳೆದಿದೆ. ಮಂಡ್ಯದ ಡೈರಿ ಅಮುಲ್ ಜೊತೆ ವಿಲೀನ ಮಾಡಿ ಅಂತ ಹೇಳಿಲ್ಲ. ಗುಜರಾತ್–ಕರ್ನಾಟಕ ಸಹಕಾರದಿಂದ ಕಾರ್ಯನಿರ್ವಹಿಸುವಂತೆ ಸಲಹೆ ನೀಡಿದರು ಅಷ್ಟೇ, ಆದರೆ, ಕಾಂಗ್ರೆಸ್ –ಜೆಡಿಎಸ್ ಮೂರ್ಖರು ಕಿತಾಪತಿ ಮಾಡಿದ್ದಾರೆ ಎಂದು ಲೇವಡಿ ಮಾಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಕೆ. ಗೋಪಾಲಯ್ಯ ಮಾತನಾಡಿ, ಮಂಡ್ಯ ಜಿಲ್ಲೆಯಲ್ಲಿ ಬಿಜೆಪಿ ಕಟ್ಟುತ್ತೇವೆ. ಕಾಂಗ್ರೆಸ್–ಜೆಡಿಎಸ್ ತ್ಯಜಿಸಿ ಬಿಜೆಪಿಗೆ ಬಂದಿದ್ದಿರಿ. ಮೋದಿ ನಾಯಕತ್ವದಲ್ಲಿ ರಾಜ್ಯದಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರುತ್ತೆ. ಮಂಡ್ಯದಲ್ಲಿ ಬಿಜೆಪಿ ಕಟ್ಟಲು ನಾವು ಮುಂದಾಗಿದ್ದೇವೆ. 2023ಕ್ಕೆ ಬಿಜೆಪಿಗೆ ಅಧಿಕಾರ ಕೊಡಿ. ರೈತರ ಕುಟುಂಬದ ಖಾತೆಗೆ 5 ಸಾವಿರ ಕೊಟ್ಟಿದ್ದಾರೆ. 80 ಕೋಟಿ ಜನರಿಗೆ ಕೊರೊನಾದಲ್ಲಿ ಸಂಕಷ್ಟ ನಿವಾರಿಸಿದ್ದಾರೆ. ಶ್ರೀರಂಗಪಟ್ಟಣದ ಮತದಾರರು ಒಳ್ಳೆಯ ನಿರ್ಧಾರ ತೆಗೆದುಕೊಳ್ಳಿ, ಅಭಿವೃದ್ಧಿಗೆ ಒತ್ತು ಕೊಡುವ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತದೆ ಎಂದರು.

ಕ್ರೀಡಾ ಹಾಗೂ ರೇಷ್ಮೆ ಸಚಿವ ಕೆ.ಸಿ. ನಾರಾಯಣಗೌಡ ಮಾತನಾಡಿ, ಮುಂದಿನ ಸರ್ಕಾರ ನಮ್ಮದೇ ಆಗಿದ್ದು, 1750ಕೋಟಿ ಅನುದಾನ ಮಂಡ್ಯಗೆ ಕೊಟ್ಟಿದ್ದಾರೆ. ಶ್ರೀರಂಗಪಟ್ಟಣಕ್ಕೂ 2 ಸಾವಿರ ಕೋಟಿ ಪ್ಯಾಕೇಜ್ ಕೊಡುತ್ತೇವೆ. ಶ್ರೀರಂಗಪಟ್ಟಣದಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲಿಸಿ ಎಂದು ಮನವಿ ಮಾಡಿದರು.

ಬಿಜೆಪಿ ಮುಖಂಡ ಇಂಡವಾಳು ಸಚ್ಚಿದಾನಂದ ಮಾತನಾಡಿ, ಮಂಡ್ಯ ಜಿಲ್ಲೆಯಲ್ಲಿ ಬಿಜೆಪಿ ಸದೃಢವಾಗುತ್ತಿದೆ. ಬಿಜೆಪಿಯ ಬದಲಾವಣೆ ಅಲೆ ಎದ್ದಿದ್ದೆ. ಹಲವರು ಬಿಜೆಪಿಗೆ ಸೇರ್ಪಡೆಯಾಗುತ್ತಿದ್ದಾರೆ. ಚಾಣಕ್ಯ ಅಮಿತ್ ಶಾ ಮಂಡ್ಯಕ್ಕೆ ಬಂದು ಮಂಡ್ಯವನ್ನು ಗುಣಗಾನ ಮಾಡಿದ್ದಾರೆ. ಮಂಡ್ಯದಲ್ಲಿ ಮತಷ್ಟು ಸ್ಥಾನ ಗೆಲ್ಲುವ ವಿಶ್ವಾಸ ಇದೆ. ಮಂಡ್ಯಕ್ಕೆ ಯೋಗಿ ಆದಿತ್ಯನಾಥ್ ಅವರು ಸಹ ಬರುತ್ತಾರೆ. ಶ್ರೀರಂಗಪಟ್ಟಣದಲ್ಲಿ ನಡೆಯುವ ಬಿಜೆಪಿ ಕಾರ್ಯಕ್ರಮಕ್ಕೆ ಸಿಎಂ ಬಸವರಾಜ ಬೊಮ್ಮಾಯಿ ಬರುತ್ತಾರೆ. ಎಲ್ಲಾ ನಾಯಕರ ಮಾರ್ಗದರ್ಶನದಲ್ಲಿ ಬಿಜೆಪಿ ಅಭ್ಯರ್ಥಿಯನ್ನು ವಿಧಾನಸೌಧಕ್ಕೆ ಗೆಲ್ಲಿಸಿ ಕಳುಹಿಸಿ ಎಂದು ಮನವಿ ಮಾಡಿದರು.

ವೇದಿಕೆಯಲ್ಲಿ ಬಿಜೆಪಿ ರಾಜ್ಯ ಕಾರ್ಯಕಾರಣಿ ಸದಸ್ಯ ಡಾ.ಸಿದ್ದರಾಮಯ್ಯ, ಜಿಪಂ ಮಾಜಿ ಸದಸ್ಯ ಎಸ್.ಎಲ್.ಲಿಂಗರಾಜು, ತಾಲೂಕು ಬಿಜೆಪಿ ಅಧ್ಯಕ್ಷ ರಮೇಶ್, ಬಿಜೆಪಿ ಮುಖಂಡರಾದ ರಾಮಲಿಂಗಯ್ಯ, ಕೆಆರ್‌ಎಸ್ ರಾಜೇಗೌಡ, ಶ್ರೀಧರ್, ಮಹೇಶ್, ಮಾಯಿಗಯ್ಯ, ಬಿ.ಸಿ.ಸಂತೋಷ್ ಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಿವೃತ್ತ ಶಿಕ್ಷಕಿ ಅನುಮಾನಾಸ್ಪದ ಸಾವು, ರೈಲಿಗೆ ತಲೆಕೊಟ್ಟು ಮಗ ಆತ್ಮಹತ್ಯೆ



ಮಂಡ್ಯ, ಜ.2– ನಿವೃತ್ತ ಶಿಕ್ಷಕಿಯೊಬ್ಬರು ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದು, ಆಕೆಯ ಮಗ ಸಹ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸೋಮವಾರ ನಡೆದಿದೆ.

ಸುಭಾಷ್ ನಗರದ ಕ್ರಿಶ್ಚಿಯನ್ ಕಾಲೋನಿಯ ನಿವೃತ್ತ ಶಿಕ್ಷಕಿ ವೀಣಾ ಜೋದಿನಿ ಮತ್ತು ಇವರ ಮಗ ನಿತಿನ್ ಸಾವನ್ನಪ್ಪಿದವರಾಗಿದ್ದು, ಶಿಕ್ಷಕಿ ವೀಣಾ ಜೋದಿನಿ ಅವರ ಮೃತದೇಹ ಹೊಸ ವರ್ಷದ ಮೊದಲ ದಿನವಾದ ಭಾನುವಾರ ನೇಣು ಬಿಗಿದ ಸ್ಥಿತಿಯಲ್ಲಿ ಮನೆಯಲ್ಲಿ ಪತ್ತೆಯಾಗಿತ್ತು.

ಪಶ್ಚಿಮ ಠಾಣಾ ಪೊಲೀಸರು ಪರಿಶೀಲನೆ ನಡೆಸಿ, ಮೃತ ದೇಹವನ್ನು ಮರಣೋತ್ತರ ಪರೀಕ್ಷೆಗೆ ಮಿಮ್ಸ್‌ಗೆ ರವಾನಿಸಿದ್ದರು. ತಾಯಿಯ ಸಾವಿನ ಬಗ್ಗೆ ಪುತ್ರನ ಮೇಲೆ ಅನುಮಾನ ವ್ಯಕ್ತಪಡಿಸಿ ನಿತಿನ್‌ನನ್ನ ಪೊಲೀಸರು ವಿಚಾರಣೆ ಸಹ ಮಾಡಿದ್ದರು. ತಾಯಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರ ಮುಂದೆ ಹೇಳಿದ್ದ. ಶವ ಪರೀಕ್ಷೆಯ ವರದಿ ಬರುವವರೆಗೂ ಎಲ್ಲೂ ಹೋಗದಂತೆ ಪೊಲೀಸರು ಆತನಿಗೆ ತಾಕೀತು ಮಾಡಿದ್ದರು.

ಆದರೆ, ಭಾನುವಾರ ತಡರಾತ್ರಿ ತಾಯಿಯ ಶವ ಶವಾಗಾರದಲ್ಲಿ ಇರುವ ಸಮಯದಲ್ಲೇ ನಿತಿನ್, ನಗರದ ಹೊರವಲಯ ವಿ.ಸಿ.ಫಾರಂ ಗೇಟ್ ಬಳಿ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಸೋಮವಾರ ಬೆಳಗ್ಗೆ ಅಕ್ಕಪಕ್ಕದ ರೈತರು ಇದನ್ನು ಗಮನಿಸಿ, ರೈಲ್ವೆ ಪೊಲೀಸರಿಗೆ ಮಾಹಿತಿ ನೀಡಿದ್ದು, ಪೊಲೀಸರು ಶವವನ್ನು ಮಿಮ್ಸ್ ಶವಾಗಾರಕ್ಕೆ ಸಾಗಿಸಿ ಮರಣೋತ್ತರ ಪರೀಕ್ಷೆ ನಂತರ ದೇಹಗಳನ್ನು ಸಂಬಂಧಿಗಳಿಗೆ ಹಸ್ತಾಂತರಿಸಿದ್ದಾರೆ.

ಜೂಜಾಟದ ದಾಸನಾಗಿದ್ದ ನಿತಿನ್ ಹಣಕ್ಕಾಗಿ ತಾಯಿಯನ್ನು ನಿತ್ಯ ಪೀಡಿಸುತ್ತಿದ್ದನು. ತಾಯಿ ಆತನ ಮದುವೆಗಾಗಿ ಹಣ ಮೀಸಲಿಟ್ಟಿದ್ದರೆ, ಮದುವೆಯೇ ಬೇಡ ಹಣ ಕೊಡು ಎಂದು ಪೀಡಿಸುತ್ತಿದ್ದ. ಜೊತೆಗೆ ವೀಣಾರಿಂದ ಬಹಳ ವರ್ಷಗಳಿಂದ ದೂರವಾಗಿದ್ದ ತಂದೆಯ ಬಳಿಯೂ ಹೋಗಿ ಹಣಕ್ಕೆ ಬೇಡಿಕೆ ಇಟ್ಟಿದ್ದನಂತೆ. ಆರ್.ಪಿ. ರಸ್ತೆಯಲ್ಲಿದ್ದ ತಮಗೆ ಸೇರಿದ್ದ ಆಸ್ತಿಯನ್ನು ಎರಡು ವರ್ಷದ ಹಿಂದೆ ವೀಣಾ ಮಾರಾಟ ಮಾಡಿದ್ದರು, ಆಸ್ತಿ ಮಾರಾಟದ ಹಣವನ್ನು ಮಗ ನಿತಿನ್ ದುಂದು ವೆಚ್ಚ ಮಾಡಿದ್ದಲ್ಲದೆ, ಲಕ್ಷಾಂತರ ರೂ ಸಾಲ ಮಾಡಿಕೊಂಡಿದ್ದನು ಎನ್ನಲಾಗಿದೆ.

ಕ್ರಿಸ್ಮಸ್ ಹಬ್ಬವನ್ನು ತಾಯಿ–ಮಗ ಜೊತೆಯಲ್ಲೇ ಆಚರಿಸಿದ್ದರು. ಹೊಸ ವರ್ಷವನ್ನು ಸಂಭ್ರಮದಿಂದ ಸ್ವಾಗತಿಸಬೇಕಾಗಿತ್ತು ಅಷ್ಟರಲ್ಲೇ ಹೊಸ ವರ್ಷದ ಮೊದಲ ದಿನ ತನ್ನ ಮನೆಯಲ್ಲಿ ನಿವೃತ್ತ ಶಿಕ್ಷಕಿ ವೀಣಾ ಜೋದಿನಿ ಅವರ ಮೃತದೇಹ ಮನೆಯ ಕಿಟಕಿಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿತ್ತು.

ಅನುಮಾನಾಸ್ಪದ ಸಾವಿನ ವಿಚಾರ ಅಕ್ಕ–ಪಕ್ಕದ ಮನೆಯವರಿಗೆ ತಿಳಿದು ಪಶ್ಚಿಮ ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದರು. ಸ್ಥಳಕ್ಕಾಗಮಿಸಿದ ಪೊಲೀಸರು, ನಿವೃತ್ತ ಶಿಕ್ಷಕಿ ವೀಣಾ ಎತ್ತರವಾಗಿದ್ದು, ಆದರೆ ಅಷ್ಟು ಎತ್ತರ ಇರದ ಕಿಟಕಿಗೆ ನೇಣು ಬಿಗಿದುಕೊಳ್ಳಲು ಸಾಧ್ಯವೇ ಎಂಬ ಅನುಮಾನವನ್ನು ಪೊಲೀಸರು ವ್ಯಕ್ತಪಡಿಸಿದ್ದಾರೆ. ಮಗನೇ ತಾಯಿಯನ್ನು ಕೊಂದಿರಬಹುದು ಎಂಬ ಶಂಕೆ ಅಕ್ಕಪಕ್ಕದ ಮನೆಯವರಿಂದ ವ್ಯಕ್ತವಾಗಿದ್ದು, ಪೊಲೀಸರು ವಿಚಾರಣೆ ನಡೆಸುತ್ತಿದ್ದು, ವೀಣಾ ಜೋದಿನಿ ಅನುಮಾನಾ ಸ್ಪದ ಸಾವು ಕೊಲೆಯೋ ಅಥವಾ ಆತ್ಮಹತ್ಯೆಯೋ ಎಂಬುದು ತಿಳಿದು ಬರಬೇಕಿದೆ.

## ಲೈಂಗಿಕ ಕಿರುಕುಳ: ವ್ಯಕ್ತಿ ಬಂಧನ

ನಾಗಮಂಗಲ, ಜ.2– ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಟೈಲರ್‌ನನ್ನು ಬಂಧಿಸಿರುವ ನಾಗಮಂಗಲದ ಪೊಲೀಸರು, ಪೋಕ್ಸೊ ಕಾಯ್ದೆ ಅಡಿ ಪ್ರಕರಣ ದಾಖಲಿಸಿದ್ದಾರೆ. ಅನ್ಸರ್ ಪಾಷಾ ಬಂಧಿತ ಆರೋಪಿ.

ಪಟ್ಟಣದ ಬಾಲಕಿಯೊಬ್ಬಳು ಡಿ.31 ರಂದು ಟೈಲರ್ ಅನ್ಸರ್ ಪಾಷಾ ಎಂಬುವನ ಬಳಿ ಬಟ್ಟೆಹೊಲಿಯಲು ಅಳತೆ ನೀಡಲು ಹೋಗಿದ್ದು, ಆತ ನಾಳೆ ಬನ್ನಿ, ಎಂದು ಹೇಳಿದ್ದಾನೆ. ನಂತರ ಜ.1ರಂದು 11 ಗಂಟೆಗೆ ಬಾಲಕಿ ಟೈಲರ್ ಅಂಗಡಿಗೆ ಅಳತೆ ಕೊಡಲು ಹೋಗಿದ್ದಾಗ, ಅಳತೆ ತೆಗೆದುಕೊಳ್ಳುವ ನೆಪದಲ್ಲಿ ದೇಹದ ಅಂಗಗಳನ್ನು ಮುಟ್ಟಿದ್ದಾನೆ ಎಂದು ಬಾಲಕಿ ಮನೆಗೆ ಬಂದು ಅಳುತ್ತಾ ಕುಳಿತಿದ್ದು, ನಂತರ ದೊಡ್ಡಮ್ಮನಿಗೆ ವಿಷಯ ತಿಳಿಸಿದ್ದಾಳೆ. ತಕ್ಷಣ ಕುಟುಂಬದವರು ಟೈಲರ್ ಅಂಗಡಿಗೆ ಹೋಗಿ ಅನ್ಸರ್‌ನನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ವಿಷಯ ತಿಳಿದ ಪೊಲೀಸರು ಪೋಷಕರಿಂದ ದೂರು ಪಡೆದು ಆತನನ್ನು ಬಂಧಿಸಿದ್ದಾರೆ.

ವಿಷಯ ಬಹಿರಂಗವಾಗುತ್ತಿದ್ದಂತೆ ಒಂದು ಕೋಮಿನ ನೂರಾರು ಯುವಕರು ಪಟ್ಟಣ ಠಾಣೆ ಮುಂದೆ ಜಮಾಯಿಸುತ್ತಿದ್ದಂತೆ ಪರಿಸ್ಥಿತಿ ಬಿಗಡಾಯಿಸಿ ಆತನ ಮೇಲೆ ಪ್ರಕರಣ ದಾಖಲಿಸಬೇಕೆಂದು ಆಗ್ರಹಿಸಿದ್ದಾರೆ. ಈಗಾಗಲೇ ದೂರು ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಸಮರ್ಪಕ ವಿದ್ಯುತ್ ಪೂರೈಕೆಗೆ ಆಗ್ರಹಿಸಿ ಪ್ರತಿಭಟನೆ




ಪಾಂಡವಪುರ, ಜ.2– ರೈತರ ಕೃಷಿ ಪಂಪ್‌ಸೆಟ್ ಬಳಕೆಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುತ್ತಿಲ್ಲ ಎಂದು ಆರೋಪಿಸಿ ತಾಲೂಕಿನ ಮಹದೇಶ್ವರಪುರ ಗ್ರಾಮದ ಬಳಿ ಇರುವ 66/11 ಕೆವಿ ವಿದ್ಯುತ್ ವಿತರಣಾ ಕೇಂದ್ರಕ್ಕೆ ರೈತರು ಸೋಮವಾರ ಬೆಳಗ್ಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

66/11 ಕೆವಿ ವಿದ್ಯುತ್ ವಿತರಣಾ ಕೇಂದ್ರಕ್ಕೆ ಮುತ್ತಿಗೆ ಹಾಕಿದ ರೈತರು ಸೆಸ್ಕ್ ಅಧಿಕಾರಿಗಳು ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವಂತೆ ಆಗ್ರಹಿಸಿದರು.

ಕೃಷಿ ಪಂಪ್‌ಸೆಟ್‌ಗಳಿಗೆ ರಾತ್ರಿಯ ವೇಳೆಯಲ್ಲಿ ವಿದ್ಯುತ್ ಪೂರೈಕೆ ಮಾಡುತ್ತಿದ್ದಾರೆ. ಇದರಿಂದ ರೈತರಿಗೆ ಕೃಷಿ ಚಟುವಟಿಕೆಗೆ ತೊಂದರೆಯಾಗುತ್ತಿದೆ. ತಾಲೂಕಿನಾದ್ಯಂತ ಚಿರತೆಗಳ ಹಾವಳಿ ಹೆಚ್ಚಾಗಿದೆ. ಹಾಗಾಗಿ ರಾತ್ರಿಯ ವೇಳೆಯಲ್ಲಿ ಬೆಳೆಗಳಿಗೆ ನೀರು ಹಾಯಿಸಲು ತೊಂದರೆಯಾಗುತ್ತಿದೆ. ಜೊತೆಗೆ ರಾತ್ರಿಯ ವೇಳೆಯಲ್ಲಿ ವಿದ್ಯುತ್ ನೀಡಿದರು ಸಹ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡುತ್ತಿಲ್ಲ. ಇದರಿಂದಾಗಿ ಬೆಳೆ ಒಣಗುತ್ತಿವೆ ಎಂದು ಆಕ್ರೋಶ ಹೊರಹಾಕಿದರು.

ಸ್ಥಳಕ್ಕೆ ಧಾವಿಸಿದ ಸೆಸ್ಕ್ ಇಇ ಕೆ.ಎಸ್.ರಘು, ಎಇಇ ಪುಟ್ಟಸ್ವಾಮಿ ಅವರನ್ನು ರೈತರು ತರಾಟೆಗೆ ತೆಗೆದುಕೊಂಡರು. ಬಳಿಕ ರೈತ ನಾಯಕಿ ಸುನೀತ ಪುಟ್ಟಣ್ಣಯ್ಯ ಬಂದು ಪ್ರತಿಭಟನಾಕಾರರ ಸಮಸ್ಯೆ ಆಲಿಸಿದರು. ಪ್ರತಿಭಟನೆಯಲ್ಲಿ ನೂರಾರು ರೈತರು ಪಾಲ್ಗೊಂಡಿದ್ದರು.

# ಪ್ರತಿಯೊಬ್ಬ ಸಾಧಕನಿಗೂ ಗುರಿ ಸಾಧಿಸಲು ಛಲ ಇರಬೇಕು

### ಸ್ವರಾಲಯ ಸಾಂಸ್ಕೃತಿಕ ಹಬ್ಬದಲ್ಲಿ ವಿದ್ವಾನ್ ಸಿ.ಚೇತನ್ ಅಭಿಮತ



ಮೈಸೂರು, ಜ.2– ಪ್ರತಿಯೊಬ್ಬ ಸಾಧಕನಿಗೂ ಗುರಿ ಸಾಧಿಸಲು ಛಲ ಮುಖ್ಯ, ಆ ಸಾಧನೆಯ ಮಾರ್ಗವನ್ನು ಕಂಡುಕೊಳ್ಳಲು ಯಾವುದೇ ಕಠಿಣ ಸನ್ನಿವೇಶ ಬಂದರೂ ಲೆಕ್ಕಿಸದೆ ತನ್ನ ಹಾದಿಯಲ್ಲಿ ಗುರಿ ಮುಟ್ಟಿ, ಜನರ ಮೆಚ್ಚುಗೆ ಗಳಿಸಬೇಕು. ಈ ಕೆಲಸವನ್ನು ಸ್ವರಾಲಯ ಸಂಗೀತ ಸಂಸ್ಥೆ ಸಂಸ್ಥಾಪಕ ಅಧ್ಯಕ್ಷೆ ಡಾ.ಸುಮಾ ಹರಿನಾಥ್ ಸಾಧಿಸಿ, ಈ ವೇದಿಕೆಯಲ್ಲಿ ಸಾಕ್ಷಿಯಾಗಿದ್ದಾರೆ ಎಂದು ಮೃದಂಗ ವಿದ್ವಾನ್ ಸಿ.ಚೇತನ್ ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ನಗರದ ನಾದಬ್ರಹ್ಮ ಸಭಾಂಗಣದಲ್ಲಿ ರಾಮಕೃಷ್ಣನಗರದ ಸ್ವರಾಲಯ ಸಂಗೀತ ಸಂಸ್ಥೆ ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯದ ಸಹಯೋಗದೊಂದಿಗೆ ಆಯೋಜಿಸಿದ್ದ ಸ್ವರಾಲಯ ಸಾಂಸ್ಕೃತಿಕ ಹಬ್ಬ 2022 ಭಾಗ–2 ಅನ್ನು ಉದ್ಘಾಟಿಸಿ, ಮಾತನಾಡಿದರು. ಡಾ.ಸುಮಾಹರಿನಾಥ್ ಅವರು ಯಾವುದೇ ಫಲಾಪೇಕ್ಷೆಯಿಲ್ಲದೇ ನೂರಾರು ವಿದ್ಯಾರ್ಥಿಗಳಿಗೆ ಸಂಗೀತ ಧಾರೆ ಎರೆದಿದ್ದಾರೆ ಎಂದು ತಿಳಿಸಿ, ಸ್ವರಾಲಯ ಸಂಗೀತ ಸಂಸ್ಥೆ ನಗರದ ಹಲವೆಡೆಗಳಲ್ಲಿ ಸಂಗೀತದ ಗಾಯನವನ್ನು ಏರ್ಪಡಿಸಿ, ಜನರ ವಿಶ್ವಾಸ ಗಳಿಸಿರುವುದು ಹೆಮ್ಮೆಯ ವಿಷಯ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಸಂಗೀತ ಶಿಕ್ಷಕಿ ಚಂದ್ರಿಕಾ ಮಾತನಾಡಿ, ಸ್ವರಾಲಯ ಸಂಗೀತ ಸಂಸ್ಥೆ ಕಳೆದ 33 ವರ್ಷಗಳಿಂದ ನಿರಂತರವಾಗಿ ನಡೆಸಿಕೊಂಡು ಬರುತ್ತಿರುವುದು ಶ್ಲಾಘನೀಯ ಸಂಗತಿ. ಸಂಗೀತ ಹಾಗೂ ನೃತ್ಯ ಎಲ್ಲರಿಗೂ ಒಲಿಯುವುದಿಲ್ಲ. ಕೆಲವೇ ಕೆಲವು ಮಂದಿಗೆ ಮಾತ್ರ ಈ ಅವಕಾಶ ಲಭ್ಯವಾಗುತ್ತದೆ. ಆದರೆ ದುರದೃಷ್ಟವಷಾತ್ ಇಂದು ಸಂಗೀತ ಕೇಳಲು ಬೆರಳೆಣಿಕೆಯಷ್ಟು ಮಂದಿ ಬರುತ್ತಾರೆ. ಅದೇ ಮೋಜು, ಕುಣಿತಕ್ಕೆ ಕಿಕ್ಕಿರಿದು ಜನ ಸೇರುತ್ತಾರೆ ಎಂದು ವಿಷಾದ ವ್ಯಕ್ತಪಡಿಸಿ, ಸಂಗೀತದ ಕಲೆಯನ್ನು ಮುಂದಿನ ಪೀಳಿಗೆ ಉಳಿಸಿ, ಬೆಳೆಸಬೇಕೆಂದು ಕರೆ ನೀಡಿದರು.

ವೇದಿಕೆಯಲ್ಲಿ ಸ್ವರಾಲಯ ಸಂಗೀತ ಸಂಸ್ಥೆ ಅಧ್ಯಕ್ಷೆ ಡಾ.ಸುಮಾ ಹರಿನಾಥ್ ಅಧ್ಯಕ್ಷತೆ ವಹಿಸಿದ್ದರು. ಕು.ಅನಘ ಆರ್ ಪ್ರಾರ್ಥಿಸಿದರೆ, ಕಾರ್ಯದರ್ಶಿ ಹೆಚ್.ಎಸ್.ಶ್ರೀಕಾಂತಾಮಣಿ ಎಲ್ಲರನ್ನೂ ಸ್ವಾಗತಿಸಿ, ವಂದಿಸಿದರು. ಕು.ಅಖಿಲ ನಿರೂಪಿಸಿದರು. ವೇದಿಕೆ ಕಾರ್ಯಕ್ರಮದ ನಂತರ ಸಂಸ್ಥೆಯ ವಿದ್ಯಾರ್ಥಿಗಳಿಂದ ಸೋಲಿಗರ ನೃತ್ಯ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು. ಕು.ಆರ್.ಪಿ.ಕೌಶಿಕ್‌ರಿಂದ ಶಾಸ್ತ್ರೀಯ ಸಂಗೀತ ಗಾಯನ ಏರ್ಪಡಿಸಲಾಗಿತ್ತು. ಇವರಿಗೆ ಪಕ್ಕವಾದ್ಯದಲ್ಲಿ ವಯೋಲಿನ್‌ನಲ್ಲಿ ವಿದ್ವಾನ್ ಸಿ.ಚೇತನ್ ಹಾಗೂ ಮೃದಂಗದಲ್ಲಿ ವಿದ್ವಾನ್ ಜಿ.ಆರ್.ಸತೀಶ್ ಸಾಥ್ ನೀಡಿದರು. ಉಪಾಧ್ಯಕ್ಷೆ ಜಯಶ್ರೀ ತೋಳ್ಪಾಡಿ ನಿರ್ದೇಶನದಲ್ಲಿ ಕಲಾರ್ಪಣಂ ತಂಡದಿಂದ ಭರತನಾಟ್ಯ ಏರ್ಪಡಿಸಲಾಗಿತ್ತು.



ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಶಾರದಾ ವಿಲಾಸ ಪದವಿ ಪೂರ್ವ ಕಾಲೇಜಿನಲ್ಲಿ ನೂತನ ವರ್ಷದ ದಿನದರ್ಶಿಕೆಯನ್ನು ಬಿಡುಗಡೆಗೊಳಿಸಲಾಯಿತು. ಚಿತ್ರದಲ್ಲಿ ಸಂಸ್ಥೆಯ ಗೌರವ ಕಾರ್ಯದರ್ಶಿ ಎನ್.ಚಂದ್ರಶೇಖರ್, ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದ ಅಧ್ಯಕ್ಷ ಡಾ.ಮದಿ ಅಳಗನ್, ಆಡಳಿತ ಮಂಡಳಿ ಸದಸ್ಯ ಎಸ್.ನಾಗರಾಜ್, ಕಾಲೇಜಿನ ಪ್ರಾಂಶುಪಾಲ ಸಿ.ಕೆ.ಅಶೋಕ್‌ಕುಮಾರ್, ಕ್ರೀಡಾ ವಿಭಾಗದ ನಿರ್ದೇಶಕ ಡಿ.ಶಿವಶಂಕರ್, ಉಪನ್ಯಾಸಕರಾದ ಹೆಚ್.ಆರ್.ಪರಮೇಶ್, ಶ್ರೀಮತಿ ಜಾಯ್ಸ್, ರಾಜೇಂದ್ರಪ್ರಸಾದ್ ಹೊನ್ನಲಗೆರೆ, ಕಾವ್ಯ ಜಿ. ಅವರನ್ನು ಕಾಣಬಹುದು.

# ಸಂವಿಧಾನವೇ ಮಹಿಳೆಯರ ವಿಮೋಚನೆಗೆ ಮೂಲ ಮಂತ್ರ




ಮೈಸೂರು, ಜ. 2– ಬಹುಸಂಸ್ಕೃತಿಯ ಬೀಡಾದ ಭಾರತದಲ್ಲಿ ಒಲೆ..ಹೊಲಗಳ ನಂಟಿನೊಂದಿಗೆ ಬದುಕಿನ ಬಂಡಿಯನ್ನು ಯಶಸ್ವಿಯಾಗಿ ಕೊಂಡೊಯ್ಯುತ್ತಿರುವ ಗ್ರಾಮೀಣ ಮಹಿಳೆಯಾಗಲೀ, ಒಳದುಡಿಮೆ–ಹೊರ ದುಡಿಮೆಯಂತಹ ಒತ್ತಡದಲ್ಲಿ ಸಿಲುಕಿಯೂ ದೇಶದ ಅಭಿವೃದ್ಧಿಗೆ ಕೊಡುಗೆ ನೀಡುತ್ತಿರುವ ನಗರ ಪ್ರದೇಶದ ಉದ್ಯೋಗಸ್ಥ ಮಹಿಳೆಯಾಗಲೀ ಇವರ ಅಂತರಂಗದಲ್ಲಿ ಅಗಾಧವಾದ ಅಸಾಧಾರಣ ಅಂತಃಶಕ್ತಿ ಮಡುಗಟ್ಟಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ, ಮಹಾರಾಜ ಕಾಲೇಜಿನ ಜಾನಪದ ವಿಭಾಗದ ಪ್ರಾಧ್ಯಾಪಕರಾದ ಡಾ.ವಿಜಯಲಕ್ಷ್ಮಿ ಮನಾಪುರ ಹೇಳಿದರು,

ಮೈಸೂರಿನ ಮಹಾರಾಣಿ ಮಹಿಳಾ ಕಲಾ ಕಾಲೇಜಿನ ವತಿಯಿಂದ ಹಮ್ಮಿಕೊಂಡಿದ್ದ ಹಿರಿಯ ವಿದ್ಯಾರ್ಥಿನಿಯರ ಸಮ್ಮಿಲನ–2022 ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅನಾದಿ ಕಾಲದಿಂದಲೂ ನಮ್ಮ ನೆಲದಲ್ಲಿ ಸ್ತ್ರೀ ವಿರೋಧಿ ನೀತಿಗಳು ಹೆಣ್ಣಿನ ಘನತೆ, ಅಸ್ತಿತ್ವಕ್ಕೆ ಆಪತ್ತು ತಂದೊಡ್ಡಿವೆ. ಪ್ರಸ್ತುತದಲ್ಲಿ ಉದಾರೀಕರಣ, ಜಾಗತೀಕರಣದ ಬಾಹುಗಳಿಂದ ಮಹಿಳೆಯರ ಸಂಕೋಲೆಗಳು ಮತ್ತಷ್ಟು ಬಿಗಿಯಾಗಿ ಅವಳನ್ನು ದುರವಸ್ಥೆಗೆ ತಳ್ಳುತ್ತಿವೆ. ಇಷ್ಟೆಲ್ಲಾ ಪ್ರತಿಕೂಲ ಪರಿಣಾಮ, ದೌರ್ಜನ್ಯಗಳ ನಡುವೆಯೂ ಮಹಿಳೆ ಕುಗ್ಗದೆ, ಜಗ್ಗದೆ ತನ್ನ ಕ್ರಿಯಾಶೀಲ ಕಾರ್ಯಚಟುವಟಿಕೆ, ದಿಟ್ಟ ಮನೋಭಾವ, ಸ್ವ– ಸಾಮರ್ಥ್ಯದ ಮೂಲಕ ತನ್ನನ್ನು ಕೌಟುಂಬಿಕ, ಸಾಮಾಜಿಕ, ಸಾಂಸ್ಕೃತಿಕವಾಗಿ ವಿಸ್ತರಿಸಿಕೊಂಡು ತನ್ನ ವಿಮೋಚನೆ ತನ್ನಿಂದಲೇ ಎಂದು ಮನಗಂಡು ಮುನ್ನುಗ್ಗುತ್ತಿರುವ ಮಹಿಳೆಯರು ಸಮಾಜಕ್ಕೆ ಮಾದರಿಯಾಗಿದ್ದಾರೆ. ಅದರಲ್ಲೂ ಪ್ರಸ್ತುತದ 'ಮೋಹಕ ಜಗತ್ತು' ಹದಿಹರೆಯದ ಹೆಣ್ಣು ಮಕ್ಕಳಿಗೆ ಸವಾಲಾಗಿ ಪರಿಣಮಿಸಿದೆ.

ಇಂತಹ ಸಮಕಾಲೀನ ಸಂದರ್ಭದಲ್ಲಿ ಹೆಣ್ಣು ಮಕ್ಕಳು ಭಾರತ ಸಂವಿಧಾನ ದೊರಕಿಸಿಕೊಟ್ಟಿರುವ ಮಹಿಳಾ ಹಕ್ಕುಗಳ ಬಗೆಗೆ ಅರಿವು ಮೂಡಿಸಿಕೊಂಡು ಮುನ್ನಡೆಯಬೇಕಾಗಿದೆ. ಏಕೆಂದರೆ ಸನಾತನ ಸಾಮಾಜಿಕ ವ್ಯವಸ್ಥೆ ಮಹಿಳೆಗೆ ಅಕ್ಷರ ಬೇಡ, ಅರಿವು ಬೇಡ, ಆಸ್ತಿ ಬೇಡ, ಅಧಿಕಾರ ಬೇಡ, ಹಕ್ಕುಗಳು ಬೇಡ, ಎಂದು ಎಲ್ಲವನ್ನೂ ನಿರಾಕರಿಸಿತ್ತು ಆದರೆ ಇವೆಲ್ಲಾ ಬೇಡಗಳನ್ನು ಅಳಿಸಿ ಹಾಕಿ ಎಲ್ಲವೂ ಇದೆ ಎಂದು ಮಹಿಳೆಗೆ ಘನತೆ, ಗೌರವಗಳನ್ನು ತಂದುಕೊಟ್ಟದ್ದು ಭಾರತದ ಸಂವಿಧಾನ. ಈ ಸಂವಿಧಾನವೇ ಮಹಿಳೆಯರ ವಿಮೋಚನೆಗೆ ಮೂಲಮಂತ್ರ ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಪ್ರೊ.ಶ್ರೀನಿವಾಸ, ಪ್ರೊ.ಸಿ.ಬಿ.ರಾಜೇಶ್ವರಿ, ಡಾ.ಬಿ.ಪಿ.ಅಶ್ವಿನಿ ಹಾಗೂ ಹಿರಿಯ ವಿದ್ಯಾರ್ಥಿನಿಯರ ಸಂಘದ ಪದಾಧಿಕಾರಿಗಳು ಮತ್ತು ವಿದ್ಯಾರ್ಥಿನಿಯರು ಹಾಜರಿದ್ದರು. ಇದೇ ಸಂದರ್ಭದಲ್ಲಿ ಸಾಧಕ ಮಹಿಳೆಯರನ್ನು ಸನ್ಮಾನಿಸಲಾಯಿತು.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಮೈಸೂರು, ಜ.2– ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 2022–23 ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ, ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಪೋಷಕರು, ವಿದ್ಯಾರ್ಥಿಗಳು ಮತ್ತು ಶಿಕ್ಷಣ ಸಂಸ್ಥೆಯ ಮನವಿ ಮೇರೆಗೆ ಜ.31 ರ ವರೆಗೆ ವಿಸ್ತರಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು https://ssp.postmatric.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in ಹಾಗೂ ದೂರವಾಣಿ ಸಂಖ್ಯೆ:8050770005, ರಾಜ್ಯ ವಿದ್ಯಾರ್ಥಿ ವೇತನದ ತಂತ್ರಾಂಶ ಸಹಾಯವಾಣಿ–080–35254757ನ್ನು ಸಂಪರ್ಕಿಸಬಹುದು ಎಂದು ಮೈಸೂರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಇತ್ತೀಚೆಗೆ ಮುಡಾ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಉದ್ಯಮಿಯೂ ಆದ ಯಶಸ್ವಿ ಸೋಮಶೇಖರ್ ಅವರನ್ನು ಭಾರತ ರತ್ನ ಡಾ. ಸರ್ ಎಂ. ವಿಶ್ವೇಶ್ವರಯ್ಯ ಗೃಹ ನಿರ್ಮಾಣ ಸಹಕಾರ ಸಂಘದ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಜಿ ಎಸ್ ಅಶೋಕ್ ಕುಮಾರ್, ಉಪಾಧ್ಯಕ್ಷ ಡಾ ಕೆ ರಘುರಾಮ್ ವಾಜಪೇಯಿ, ನಿರ್ದೇಶಕರಾದ ಕೆ.ಎಸ್.ಕೃಷ್ಣ, ಎ.ಎಸ್.ಸತೀಶ್, ಸಿ.ಕೆ.ಶಿವರಾಜ್, ರಾಮಚಂದ್ರ ಎನ್ ನಾಯಕ್, ಟಿ.ಎಸ್.ರವಿಪ್ರಕಾಶ್, ಬಿ.ಆರ್. ಭಾರತಿ, ಎಚ್.ಎಸ್. ಕೆಂಪಾಚಾರಿ, ಎಚ್.ಎಸ್.ರಾಣಿ, ಎಂ. ವೆಂಕಟೇಶ್ ಇತರರು ಹಾಜರಿದ್ದರು.**



**ಮೈಸೂರು ನಗರದ, ಪಾತ್ರೆ ವ್ಯಾಪಾರಿಗಳ ಸಂಘದ ಅಧ್ಯಕ್ಷ ಹಾಗೂ ಮೈಸೂರು ಮೃಗಾಲಯದ ಮಾಜಿ ನಿರ್ದೇಶಕ ಕೆ. ತುಕರಾಂ, ನೂತನ ವರ್ಷ 2023 ರ ಕ್ಯಾಲೆಂಡರನ್ನು ಮಾಜಿ ಶಾಸಕ ವಾಸು ಬಿಡುಗಡೆ ಮಾಡಿದರು. ಚಿತ್ರದಲ್ಲಿ ಭಾರತೀಯ ಜೀವ ವಿಮಾ ನಿಗಮದ ಅಭಿವೃದ್ಧಿ ಅಧಿಕಾರಿ ಬೂಕನಕೆರೆ ವಿಜೇಂದ್ರ ಸೇರಿದಂತೆ, ಸಂಘದ ಎಲ್ಲಾ ಪದಾಧಿಕಾರಿಗಳು ಹಾಜರಿದ್ದರು.**

## ರತನ್ ಟಾಟಾ ಆಪ್ತ, ಟಾಟಾ ಸನ್ಸ್‌ನ ಮಾಜಿ ನಿರ್ದೇಶಕ ಆರ್.ಕೃಷ್ಣಕುಮಾರ್ ವಿಧಿವಶ




ಮುಂಬಯಿ: ಟಾಟಾ ಗ್ರೂಪ್‌ನಲ್ಲಿ ಹಲವು ಪ್ರಮುಖ ಹುದ್ದೆಗಳನ್ನು ಅಲಂಕರಿಸಿದ್ದ ಹಾಗೂ ರತನ್ ಟಾಟಾ ಅವರಿಗೆ ಆತ್ಮೀಯರಾಗಿದ್ದ ಆರ್. ಕೃಷ್ಣಕುಮಾರ್ ಹೃದಯಾಘಾತದಿಂದ ವಿಧಿವಶರಾಗಿದ್ದಾರೆ. ಕೃಷ್ಣಕುಮಾರ್ ಭಾನುವಾರ ಸಂಜೆ ನಿಧನರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೇರಳ ಮೂಲದ ಕೃಷ್ಣಕುಮಾರ್ ಅವರಿಗೆ 84 ವರ್ಷ ವಯಸ್ಸಾಗಿತ್ತು ಟಾಟಾ ಸಮೂಹದ ಇಂಡಿಯನ್ ಹೋಟೆಲ್ಸ್ ಮುಖ್ಯಸ್ಥ ಸೇರಿದಂತೆ ವಿವಿಧ ಪ್ರಮುಖ ಹುದ್ದೆಗಳನ್ನು ನಿರ್ವಹಿಸಿದ್ದರು. ಕೃಷ್ಣಕುಮಾರ್ ನಿಧನಕ್ಕೆ ರತನ್ ಟಾಟಾ ಸಂತಾಪ ಸೂಚಿಸಿದ್ದಾರೆ. ನನ್ನ ಸ್ನೇಹಿತ, ಸಹೋದ್ಯೋಗಿ ಅವರ ಅಗಲಿಕೆಯನ್ನು ಪದಗಳಲ್ಲಿ ವಿವರಿಸಲು ಸಾಧ್ಯವಿಲ್ಲ. ಉದ್ಯಮ ಮತ್ತು ವೈಯಕ್ತಿಕವಾಗಿ ಅವರ ಜೊತೆಗಿನ ಒಡನಾಟವನ್ನು ಸದಾ ಸ್ಮರಿಸುತ್ತೇನೆ. ಅವರು ಟಾಟಾ ಸಮೂಹ ಮತ್ತು ಟಾಟಾ ಟ್ರಸ್ಟ್‌ನ ನಿಜವಾದ ದಿಗ್ಗಜರಾಗಿದ್ದು, ನಮಗೆಲ್ಲರಿಗೂ ತುಂಬಲಾರದ ನಷ್ಟವಾಗಿದೆ ಎಂದು ಹೇಳಿದರು. ಟಾಟಾ ಸನ್ಸ್ ಅಧ್ಯಕ್ಷ ಎನ್. ಚಂದ್ರಶೇಖರ್ ಸಹ ಸಂತಾಪ ಸೂಚಿಸಿದ್ದು, ಟಾಟಾ ಸಮೂಹಕ್ಕೆ ಕೃಷ್ಣಕುಮಾರ್ ನೀಡಿದ್ದ ಅಗಾಧ ಕೊಡುಗೆಯನ್ನು ಸ್ಮರಿಸಿದ್ದಾರೆ.

# ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡ ಪ್ರದೀಪ್ ನಮ್ಮ ಕಾರ್ಯಕರ್ತನೇ

ಬೆಂಗಳೂರು: ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಉದ್ಯಮಿ ಪ್ರದೀಪ್ ನಮ್ಮ ಪಕ್ಷದ ಕಾರ್ಯಕರ್ತನೇ ಎಂದು ಶಾಸಕ ಅರವಿಂದ್ ಲಿಂಬಾವಳಿ ಸ್ಪಷ್ಟನೆ ನೀಡಿದ್ದಾರೆ.

ಉದ್ಯಮಿ ಪ್ರದೀಪ್ ಆತ್ಮಹತ್ಯೆ ಪ್ರಕರಣದಲ್ಲಿ ತಮ್ಮ ವಿರುದ್ಧ ಎಫ್‌ಐಆರ್ ದಾಖಲಾಗಿರುವ ಕುರಿತು ಇಂದು ವಿಧಾನಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ ಸ್ಪಷ್ಟನೆ ನೀಡಿದ್ದಾರೆ. ನಿನ್ನೆಯಿಂದಲೂ ಕುತೂಹಲದಿಂದ ಬಹಳ ಜನ ನನಗೆ ಕರೆ ಮಾಡಿದ್ದರು. ಆ ಘಟನೆ ಬಗ್ಗೆ ಸ್ಪಷ್ಟೀಕರಣ ಕೊಡಲು ಮಾತ ನಾಡುತ್ತಿದ್ದೇನೆ. ಮೊದಲನೆಯದಾಗಿ ಪ್ರದೀಪನ ಆತ್ಮಕ್ಕೆ ಶಾಂತಿ ಸಿಗಲಿ, ಅವನು ನಮ್ಮ ಕಾರ್ಯಕರ್ತನೇ ಎಂದು ತಿಳಿಸಿದ್ದಾರೆ.



2019ರ ಚುನಾವಣೆಯಲ್ಲಿ ಸೋಷಿಯಲ್ ಮೀಡಿಯಾ ಕಾಂಟ್ರ್ಯಾಕ್ಟ್ ತೆಗೆದುಕೊಂಡು ಕೆಲಸ ಮಾಡಿದರು. ಆ ನಂತರ ಕಾರ್ಯಕರ್ತನಾಗಿ ವಾರ್ಡ್ ಮಟ್ಟದಲ್ಲಿ ಕೆಲಸ ಮಾಡುತ್ತಿದ್ದ. ಅಂತಹವನು ಈ ಸ್ಥಿತಿಗೆ ಹೋಗಿರುವುದು ದುರದೃಷ್ಟಕರ ಎಂದು ವಿಷಾದಿಸಿದ್ದಾರೆ.

ಕಳೆದ ಜೂನ್ ತಿಂಗಳ ಜನತಾ ದರ್ಶನ ಕಾರ್ಯಕ್ರಮದಲ್ಲಿ ನನ್ನೊಂದಿಗೆ ಮಾತನಾಡಲು ಬಂದಿದ್ದ. ನನ್ನ ಹತ್ತಿರ ಸಮಸ್ಯೆ ಹೇಳಿಕೊಂಡ. ಕೂಡಲೇ ನಾನು ಅವನು ಹೇಳಿದ ನಂಬರ್‌ಗಳಿಗೆ ಕರೆ ಮಾಡಿದ್ದೆ, ಪ್ರದೀಪ್ ಹೂಡಿಕೆ ಮಾಡಿದ್ದ ಹಣ ವಾಪಸ್ ಕೊಡಿ ಅಂತ ಹೇಳಿದ್ದೆ. ಆದರೆ ಕರೆ ಸ್ವೀಕರಿಸಿದ್ದ ವ್ಯಕ್ತಿ ಕೊರೊನಾ ಸಂಕಷ್ಟ ನಿವಾರಿಸಿಕೊಂಡು ಹಣ ಕೊಡ್ತೀವಿ ಎಂದಿದ್ದರು. 15 ದಿನದ ನಂತರ ಪುನಃ ಬಂದಾಗ ಅವನು ಹೇಳಿದ ಇಬ್ಬರಿಗೂ ಮತ್ತೆ ಕರೆ ಮಾಡಿ ಖಾರವಾಗಿಯೇ ಹೇಳಿದೆ. ಪ್ರದೀಪ್ ಆರ್ಥಿಕವಾಗಿ ಸಂಕಷ್ಟದಲ್ಲಿದ್ದಾನೆ ಹಣ ಸೆಟ್ಲು ಮಾಡಿ ಅಂತಾ ವಾರ್ನಿಂಗ್ ಸಹ ಮಾಡಿದ್ದೆ. ನಂತರ ಗುದ್ದಲಿ ಪೂಜೆ ಕಾರ್ಯಕ್ರಮವೊಂದರಲ್ಲಿ ಸಿಕ್ಕಿ ಸಮಸ್ಯೆ ಬಗೆಹರಿದಿದೆ ಥ್ಯಾಂಕ್ಸ್ ಅಂತಾ ಹೇಳಿದ್ದ ಎಂದು ವಿವರಿಸಿದ್ದಾರೆ. ಅದಾದ ನಂತರ ಬೆಳ್ಳಂದೂರು ಠಾಣೆಯಲ್ಲಿ ಅವರ ಪತ್ನಿ ದೂರು ನೀಡಿದ್ದರು. ಅವರ ಕೌಟುಂಬಿಕ ಸಮಸ್ಯೆ ಆದಾಗ ನನ್ನ ಹತ್ತಿರ ಬಂದಿದ್ದರು. ಆಗಲೂ ಪೊಲೀಸರೊಂದಿಗೆ ಮಾತನಾಡಿ ಸಮಸ್ಯೆ ಬಗೆಹರಿಸುವಂತೆ ಹೇಳಿದ್ದೆ. ಈಗ ಡೆತ್ ನೋಟ್ ಬರೆದಿಟ್ಟಿರುವ ಬಗ್ಗೆಯೂ ತನಿಖೆ ನಡೆಯಬೇಕು ಒತ್ತಾಯಿಸುತ್ತೇನೆ ಎಂದು ಹೇಳಿದ್ದಾರೆ. ಎಫ್‌ಐಆರ್‌ನಲ್ಲಿ ಹೆಸರು ದಾಖಲಾಗಿರೋ ಗೋಪಿ, ಸುಬ್ಬಯ್ಯ ಎಲ್ಲರೂ ನನಗೆ ಪರಿಚಯಸ್ಥರೇ. ಅವರು ವೈಟ್ ಪಟೇಲ್ಸ್‌ನ ಮಾಲಿಕರು. ನಮ್ಮ ಪಕ್ಷದ ಕಾರ್ಯಕ್ರಮಗಳು ಅಲ್ಲಿ ನಡೆಯುತ್ತಿರುತ್ತದೆ. ಆದ್ದರಿಂದ ಸಹಜವಾಗಿಯೇ ಪರಿಚಯ ಎಂದು ಸ್ಪಷ್ಟನೆ ನೀಡಿದ್ದಾರೆ.

## ತೊರೆನೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಶಿಕ್ಷಣ ಮಂತ್ರಿ ಭೇಟಿ, ಶೈಕ್ಷಣಿಕ ಚಟುವಟಿಕೆ ಪರಿಶೀಲನೆ

ಕುಶಾಲನಗರ, ಜ.2– ತಾಲೂಕಿನ ತೊರೆನೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಸೋಮವಾರ ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ಭೇಟಿ ನೀಡಿ ಶೈಕ್ಷಣಿಕ ಚಟುವಟಿಕೆ ಪರಿಶೀಲನೆ ನಡೆಸಿದರು.



ತೊರೆನೂರು ಶಾಲೆಗೆ ದಿಢೀರ್ ಭೇಟಿ ನೀಡಿದ ಅವರು ಶಾಲೆಯ ಕಟ್ಟಡ, ಶೈಕ್ಷಣಿಕ ಚಟುವಟಿಕೆ ಹಾಗೂ ಮಕ್ಕಳ ಹಾಜರಾತಿ ಸೇರಿದಂತೆ ಮೂಲ ಸೌಕರ್ಯಗಳ ಬಗ್ಗೆ ಪರಿಶೀಲಿಸಿದರು. ಪೋಷಕರೊಂದಿಗೆ ಸಮಾಲೋಚನೆ ನಡೆಸಿದ ಸಚಿವರು, ಮಕ್ಕಳ ಹಾಜರಾತಿ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಹಾಗೂ ಶಾಲಾಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಹೇಳಿದರು. ಈ ಸಂದರ್ಭ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೂಪಾ ಮಹೇಶ್, ತಹಸೀಲ್ದಾರ್ ಪ್ರಕಾಶ್, ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ರಂಗದಾಮಯ್ಯ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ವಿ.ಸುರೇಶ್, ಶಾಲೆ ಅಭಿವೃದ್ಧಿಗೆ ಸಮಿತಿ ಅಧ್ಯಕ್ಷ ದಿನೇಶ್, ಮುಖ್ಯ ಶಿಕ್ಷಕಿ ಕಾಮಾಕ್ಷಿ ಹಾಗೂ ಗ್ರಾಮಸ್ಥರು ಇದ್ದರು.

### ಸೌತ್ ಇಂಡಿಯನ್ ಫಿಲಂ ಫೆಸ್ಟಿವಲ್

# ನಾಡ ಪೆದ ಆಶಾ ಅತ್ಯುತ್ತಮ ಚಿತ್ರ

### ಬೊಳ್ಳಜಿರ ಬಿ.ಅಯ್ಯಪ್ಪ ಅತ್ಯುತ್ತಮ ನಟ



ಮಡಿಕೇರಿ, ಜ.2– ಕೊಟ್ಟುಕತ್ತೀರ ಪ್ರಕಾಶ್ ಕಾರ್ಯಪ್ಪ ನಿರ್ದೇಶನದ 'ನಾಡ ಪೆದ ಆಶಾ' ಕೊಡವ ಚಿತ್ರಕ್ಕೆ ಸೌತ್ ಇಂಡಿಯನ್ ಫಿಲಂ ಫೆಸ್ಟಿವಲ್‌ನಲ್ಲಿ ಅತ್ಯುತ್ತಮ ಚಿತ್ರ ಪ್ರಶಸ್ತಿ ದೊರೆತಿದೆ. ಈ ಚಿತ್ರದ ನಟನೆಗಾಗಿ ನಾಯಕ ನಟ ಬೊಳ್ಳಜಿರ ಬಿ.ಅಯ್ಯಪ್ಪ ಅವರಿಗೆ ಅತ್ಯುತ್ತಮ ನಟ ಪ್ರಶಸ್ತಿ ಲಭಿಸಿದೆ.

ಫಿಲಂ ಫೆಸ್ಟಿವಲ್‌ಗೆ 11,520 ಚಿತ್ರಗಳು ಬಂದಿದ್ದು, ವಿವಿಧ ವಿಭಾಗಗಳಲ್ಲಿ ಆಯ್ಕೆಯಾದ 630 ಚಿತ್ರಗಳಲ್ಲಿ 'ನಾಡ ಪೆದ ಆಶಾ' ಕೂಡ ಒಂದು. ತೀರ್ಪುಗಾರರ ಮೆಚ್ಚುಗೆಗೆ ಪಾತ್ರವಾದ ಈ ಚಿತ್ರ ಮೂರು ಪ್ರಶಸ್ತಿಗಳನ್ನು ಬಾಚಿಕೊಂಡಿದೆ. ಸ್ಕ್ರೀ ಪ್ರಧಾನ ಕಥಾವಸ್ತುವಿನ 'ನಾಡ ಪೆದ ಆಶಾ' 2021ರ ಸೆಪ್ಟೆಂಬರ್ ತಿಂಗಳಲ್ಲಿ ಬಿಡುಗಡೆಗೊಂಡು ಕೊಡಗು ಜಿಲ್ಲೆಯಾದ್ಯಂತ 123 ಯಶಸ್ವಿ ಪ್ರದರ್ಶನಗಳನ್ನು ಕಂಡಿದೆ.

ಕರ್ನಾಟಕ ಸೇರಿದಂತೆ ದೇಶದ ವಿವಿಧೆಡೆ ನಡೆದ ಅಂತರಾಷ್ಟ್ರೀಯ ಚಲನ ಚಿತ್ರೋತ್ಸವಗಳಲ್ಲಿ ಪ್ರದರ್ಶನಗೊಂಡ 'ನಾಡ ಪೆದ ಆಶಾ' ಕೊಡವ ಚಿತ್ರ ಇಲ್ಲಿಯವರೆಗೆ ಒಟ್ಟು 10 ಪ್ರಶಸ್ತಿಗಳನ್ನು ತನ್ನದಾಗಿಸಿಕೊಂಡಿದೆ. ಸಾಲು ಸಾಲು ಪ್ರಶಸ್ತಿಗಳು ದೊರೆಯುತ್ತಿರುವ ಬಗ್ಗೆ ಹರ್ಷ ವ್ಯಕ್ತಪಡಿಸಿರುವ ನಿರ್ದೇಶಕ ಕೊಟ್ಟುಕತ್ತೀರ ಪ್ರಕಾಶ್ ಕಾರ್ಯಪ್ಪ ಇಡೀ ಚಿತ್ರ ತಂಡದ ಶ್ರಮದ ಫಲವಾಗಿ ಪ್ರಶಸ್ತಿಗಳು ಬರುತ್ತಿವೆ ಎಂದರು. ಮತ್ತಷ್ಟು ಉತ್ತಮ ಚಿತ್ರಗಳನ್ನು ನಿರ್ದೇಶಿಸುವ ವಿಶ್ವಾಸವನ್ನು ವ್ಯಕ್ತಪಡಿಸಿದರು. ಅತ್ಯುತ್ತಮ ನಟ ಪ್ರಶಸ್ತಿ ವಿಜೇತ ಬೊಳ್ಳಜಿರ ಬಿ.ಅಯ್ಯಪ್ಪ ಮಾತನಾಡಿ ನಟನೆಯ ಅವಕಾಶ ಕಲ್ಪಿಸಿದ ಚಿತ್ರತಂಡಕ್ಕೆ ಕೃತಜ್ಞತೆ ಸಲ್ಲಿಸಿದರು. ಇನ್ನು ಮುಂದೆಯೂ ಉತ್ತಮ ಚಿತ್ರಗಳಲ್ಲಿ ಅಭಿನಯಿಸಲು ಈ ಪ್ರಶಸ್ತಿ ಪ್ರೋತ್ಸಾಹವನ್ನು ನೀಡಿದೆ ಎಂದು ಸಂತಸ ವ್ಯಕ್ತಪಡಿಸಿದರು.

## ಆಕಸ್ಮಿಕ ಬೆಂಕಿ; ಲಕ್ಷಾಂತರ ರೂ. ಮೌಲ್ಯದ ರಬ್ಬರ್ ಭಸ್ಮ



ಮಡಿಕೇರಿ, ಜ.2– ರಬ್ಬರ್ ಹಾಳೆ ಒಣಗಿಸುವ ಹೊಗೆ ಮನೆಗೆ ಆಕಸ್ಮಿಕವಾಗಿ ಬೆಂಕಿ ತಗುಲಿದ ಪರಿಣಾಮ ಲಕ್ಷಾಂತರ ಮೌಲ್ಯದ ರಬ್ಬರ್ ಹಾಳೆಗಳು ಸುಟ್ಟು ಭಸ್ಮವಾದ ಘಟನೆ ಸಂಪಾಜೆ ಸಮೀಪದ ಚೆಂಬು ಗ್ರಾಮದಲ್ಲಿ ನಡೆದಿದೆ.

ಚೆಂಬು ಗ್ರಾಮ ನಿವಾಸಿ ಸೂರಜ್ ಹೊಸೂರು ಎಂಬುವರಿಗೆ ಸೇರಿದ ರಬ್ಬರ್ ಹಾಳೆ ಒಣಗಿಸುವ ಹೊಗೆಮನೆ ಅಗ್ನಿ ಅವಘಡದಿಂದ ಸುಟ್ಟು ಭಸ್ಮವಾಗಿದೆ. ಬೆಂಕಿ ಕಾಣಿಸಿಕೊಂಡ ತಕ್ಷಣವೇ ಗ್ರಾಮಸ್ಥರು, ಕಾರ್ಮಿಕರು, ಬೆಂಕಿ ನಂದಿಸಲು ಹರಸಾಹಸಪಟ್ಟರೂ ವೇಗವಾಗಿ ಬೆಂಕಿ ವ್ಯಾಪಿಸಿ ಲಕ್ಷಾಂತರ ಮೌಲ್ಯದ ಯಂತ್ರೋಪಕರಣಗಳು ಸೇರಿದಂತೆ ರಬ್ಬರ್ ಹಾಳೆಗಳು ಸುಟ್ಟು ಕರಕಲಾಗಿವೆ. ಈ ಘಟನೆ ಕುರಿತು ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬೆಂಕಿ ಅವಘಡಕ್ಕೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಕಾರಣವಾಗಿರಬಹುದು ಎಂದು ಶಂಕಿಸಲಾಗಿದೆ.

## ಇಂದು, ನಾಳೆ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ

ಮಡಿಕೇರಿ, ಜ.2– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ ಕೊಡಗು ಇವರ ಸಂಯುಕ್ತ ಆಶ್ರಯದಲ್ಲಿ ಕೊಡಗು ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಯು ಜನವರಿ 3 ಮತ್ತು 4 ರಂದು ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದೆ.

ಜ.3 ರಂದು ಬೆಳಗ್ಗೆ 10.30 ಗಂಟೆಗೆ ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದೆ. ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಬಿ.ಸಿ.ನಾಗೇಶ್, ಶಾಸಕರಾದ ಎಂ.ಪಿ.ಅಪ್ಪಚ್ಚುರಂಜನ್, ಕೆ.ಜಿ.ಬೋಪಯ್ಯ, ಸಂಸದ ಪ್ರತಾಪ್ ಸಿಂಹ, ವಿಧಾನಪರಿಷತ್ ಸದಸ್ಯರಾದ ಎಂ.ಪಿ.ಸುಜಾ ಕುಶಾಲಪ್ಪ, ಎಸ್.ಎಲ್.ಭೋಜೇಗೌಡ, ಆಯನೂರು ಮಂಜುನಾಥ್, ಕರ್ನಾಟಕ ಜೀವ ವೈವಿಧ್ಯ ಮಂಡಳಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ, ನಗರಸಭೆ ಅಧ್ಯಕ್ಷೆ ಅನಿತಾ ಪೂವಯ್ಯ, ಕೊಡಗು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅನ್ಬುಕುಮಾರ್, ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕ್ಯಾಪ್ಟನ್ ಎಂ.ಎ.ಅಯ್ಯಪ್ಪ, ಜಿ.ಪಂ.ಸಿಇಒ ಡಾ.ಎಸ್.ಆಕಾಶ್, ತಹಸೀಲ್ದಾರ್ ಪಿ.ಎಸ್.ಮಹೇಶ್, ಪೌರಾಯುಕ್ತ ವಿಜಯ ಇತರರು ಪಾಲ್ಗೊಳ್ಳಲಿದ್ದಾರೆ.

# ಗೋಣಿಕೊಪ್ಪ ಬೈಪಾಸ್‌ನಲ್ಲಿ ತಾತ್ಕಾಲಿಕವಾಗಿ ದ್ವಿಮುಖ ರಸ್ತೆ ಸಂಚಾರಕ್ಕೆ ಬೋಪಯ್ಯ ಸೂಚನೆ



ಗೋಣಿಕೊಪ್ಪ, ಜ.2– ಗೋಣಿಕೊಪ್ಪ ಪಟ್ಟಣದ ಬೈಪಾಸ್ ರಸ್ತೆಯ ಏಕಮುಖ ವಾಹನ ಸಂಚಾರ ವ್ಯವಸ್ಥೆ ಸಡಿಲಗೊಳಿಸಿ ಒಂದು ತಿಂಗಳವರೆಗೆ ಪ್ರಾಯೋಗಿಕವಾಗಿ ದ್ವಿಮುಖ ಸಂಚಾರವನ್ನು ಮುಂದುವರಿಸಿ ನಂತರದ ಬೆಳವಣಿಗೆಯಿಂದ ಗಮನಿಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳುವಂತೆ ಪೊಲೀಸ್ ಇಲಾಖೆಗೆ ಸೂಚಿಸಿರುವುದಾಗಿ ಶಾಸಕ ಕೆ.ಜಿ. ಬೋಪಯ್ಯ ತಿಳಿಸಿದರು.

ಪಟ್ಟಣದ ಬೈಪಾಸ್ ರಸ್ತೆಯ ರೂ.55 ಲಕ್ಷ ಅನುದಾನದಲ್ಲಿ ಕಾಂಕ್ರೀಟ್ ಹಾಗೂ ಡಾಂಬರೀಕರಣ ಪೂರ್ಣಗೊಂಡ ಹಿನ್ನೆಲೆ ರಸ್ತೆಯನ್ನು ಸಾರ್ವಜನಿಕರ ಸೇವೆಗೆ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆಯನ್ನು ನಿಯಂತ್ರಿಸುವ ಉದ್ದೇಶದಿಂದ ಏಕಮುಖ ವಾಹನ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಲಾಗಿತ್ತು. ವ್ಯವಸ್ಥೆ ರದ್ದುಗೊಳಿಸುವಂತೆ ವರ್ತಕರು ಬೇಡಿಕೆ ಸಲ್ಲಿಸುತ್ತಿರುವುದರಿಂದ ಏಕಮುಖ ಸಂಚಾರ ನಿಯಮವನ್ನು ಸಡಿಲಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿದೆ ಎಂದರು.

ಗೋಣಿಕೊಪ್ಪ ಗ್ರಾಪಂ ವ್ಯಾಪ್ತಿಯಲ್ಲಿ 91.25 ಲಕ್ಷ ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗಳು ನಡೆಯಲಿದೆ. ಅದರಂತೆ 55 ಲಕ್ಷದಲ್ಲಿ ಬೈಪಾಸ್ ರಸ್ತೆ ಅಭಿವೃದ್ಧಿಗೊಂಡಿದೆ. 3 ಲಕ್ಷದಲ್ಲಿ ಜ್ಯೂಸ್ ಫ್ಯಾಕ್ಟರಿ ರಸ್ತೆ, 6.25 ಲಕ್ಷದಲ್ಲಿ ಸಂತ್ ಥೋಮಸ್ ಶಾಲೆ ರಸ್ತೆ, 4.75 ಲಕ್ಷದಲ್ಲಿ ಅಂಚೆ ಕಚೇರಿ ರಸ್ತೆ, 5 ಲಕ್ಷದಲ್ಲಿ ಮಾರುಕಟ್ಟೆ ಸಮೀಪದ ಪರಿಶಿಷ್ಟ ಜಾತಿ ಕಾಲೋನಿ ರಸ್ತೆ, 3.75 ಲಕ್ಷದಲ್ಲಿ ಆಸ್ಪತ್ರೆ ಹಿಂಭಾಗದ ರಸ್ತೆ, 4 ಲಕ್ಷದಲ್ಲಿ ಉಮಾಮಹೇಶ್ವರಿ ದೇವಸ್ಥಾನ ಮುಂಭಾಗದ ರಸ್ತೆ, 3 ಲಕ್ಷ ಅನುದಾನದಲ್ಲಿ ಆಟೋ ಮಾಲೀಕರ ಹಾಗೂ ಚಾಲಕರ ಸಂಘದ ಕಟ್ಟಡ ಮೇಲ್ಛಾವಣಿ ನಿರ್ಮಾಣ ಮತ್ತು 1.50 ಲಕ್ಷದಲ್ಲಿ ಒಂದನೇ ವಿಭಾಗದ ರಸ್ತೆ ಅಭಿವೃದ್ಧಿ ಕಾಮಗಾರಿಗಳು ನಡೆಯಲಿದೆ ಎಂದು ಮಾಹಿತಿ ನೀಡಿದರು.

ಗೋಣಿಕೊಪ್ಪ ಗ್ರಾ.ಪಂ ಅಧ್ಯಕ್ಷೆ ಮನ್ನಕಮನೆ ಸೌಮ್ಯಾ ಬಾಲು, ಸದಸ್ಯ ಚಿತ್ರಾ ಬಿ. ಚೇತನ್, ಬಿ.ಎನ್. ಪ್ರಕಾಶ್, ಜಿ.ಪಂ ಸಾಮಾಜಿಕ ನ್ಯಾಯ ಸಮಿತಿ ಅಧ್ಯಕ್ಷ (ಮಾಜಿ) ಸಿ.ಕೆ. ಬೋಪಣ್ಣ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕುಂಞಂಗಡ ಅರುಣ್ ಭೀಮಯ್ಯ, ಗುತ್ತಿಗೆದಾರರಾದ ಟಿ.ಪಿ ಪ್ರವೀಣ್, ಕೆ.ಯು ತಿಮ್ಮಯ್ಯ ಇದ್ದರು.

## 2 ವರ್ಷದಿಂದ ನಡೆಯದ ಕಾಕೋಟುಪರಂಬು ಗ್ರಾಮಸಭೆ

### ಕಾಂಗ್ರೆಸ್‌ನಿಂದ ಪ್ರತಿಭಟನೆ ಎಚ್ಚರಿಕೆ



ವಿರಾಜಪೇಟೆ, ಜ.2– ಕಾಕೋಟು ಪರಂಬು ಗ್ರಾಮ ಪಂಚಾಯಿತಿ ಕಳೆದ ಎರಡು ವರ್ಷಗಳಿಂದಲೂ ಗ್ರಾಮಸಭೆ ನಡೆಸ್ತಿಲ್ಲ. ಗ್ರಾಮಸ್ಥರ ಸಮಸ್ಯೆಗಳನ್ನು ಹೇಳಿಕೊಳ್ಳಲು ಅವಕಾಶವೇ ಇಲ್ಲದಂತಾಗಿದೆ. ಇನ್ನು 15 ದಿನಗಳಲ್ಲಿ ಗ್ರಾಮ ಸಭೆ ಕರೆಯದಿದ್ದರೆ ಪಂಚಾಯಿತಿ ಎದುರು ಉಗ್ರ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ಕಾಂಗ್ರೆಸ್ ಪಕ್ಷದ ವಲಯ ಅಧ್ಯಕ್ಷ ಗ್ರಾಮದ ಮಂಡೇಟಿರ ಅನಿಲ್ ಅಯ್ಯಪ್ಪ ಎಚ್ಚರಿಸಿದ್ದಾರೆ.

ವಿರಾಜಪೇಟೆಯಲ್ಲಿ ಕರೆದಿದ್ದ ಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಕೋಟು ಪರಂಬು ಗ್ರಾಮ ಪಂಚಾಯಿತಿ ವತಿಯಿಂದ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ಪೈಪ್ ಅಳವಡಿಸಿದ್ದರೂ ಬೇಸಿಗೆ ಕಾಲದಲ್ಲಿ ಕುಡಿಯಲು ನೀರು ಸಮರ್ಪಕವಾಗಿ ಕೊಡುತ್ತಿಲ್ಲ. ಸಮಸ್ಯೆಗಳನ್ನು ಕೇಳಿದರೆ ಸರಿಯಾದ ಮಾಹಿತಿ ನೀಡುತ್ತಿಲ್ಲ. ಜನರ ಸಮಸ್ಯೆಗಳನ್ನು ಹೇಳಿಕೊಳ್ಳಲು ಗ್ರಾಮ ಸಭೆ ನಡೆಯುತ್ತಿಲ್ಲ. ನಿಯಮದ ಪ್ರಕಾರ ಆರು ತಿಂಗಳಿಗೊಮ್ಮೆ ಗ್ರಾಮ ಸಭೆ ನಡೆಸಬೇಕು. ಆದರೆ ಕಳೆದ ಎರಡು ವರ್ಷದ ಅವಧಿಯಲ್ಲಿ ಒಂದೇ ಗ್ರಾಮ ಸಭೆ ನಡೆದಿರುವುದಾಗಿ ಹೇಳಿದ ಅವರು, ಈಗ ಜಿಪಂ ಮತ್ತು ತಾಪಂ ಜನಪ್ರತಿನಿಧಿಗಳು ಇಲ್ಲದಿರುವುದರಿಂದ ಜನರಿಗೆ ಗ್ರಾಮ ಪಂಚಾಯಿತಿಯೇ ಮುಖ್ಯವಾಗಿದ್ದು ಇವರು ಕೂಡ ಗ್ರಾಮ ಸಭೆ ನಡೆಸುತ್ತಿಲ್ಲ. ಈ ಸಂಬಂಧ ಮೇಲಾಧಿಕಾರಿಗಳಿಗೆ ಮನವಿ ಸಲ್ಲಿಸುವುದಾಗಿ ತಿಳಿಸಿದರು.

ಗ್ರಾಮದ ರವೀಂದ್ರ ಮಾತನಾಡಿ, ಕಾಕೋಟುಪರಂಬು ವ್ಯಾಪ್ತಿಯ ಹೆಮ್ಮಾಡು ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ 2.30 ಕೋಟಿ ರೂ.ಅನುದಾನದಲ್ಲಿ ಸೇತುವೆ ಕಾಮಗಾರಿ ನಡೆಯುತ್ತಿದ್ದು ಎರಡು ವರ್ಷ ಕಳೆದರು ಕಾಮಗಾರಿ ಮುಗಿದಿಲ್ಲ. ಮತ್ತು ಕಾಮಗಾರಿ ಗುಣಮಟ್ಟ ಕಳೆದುಕೊಂಡಿದೆ. ಇದರ ಬಗ್ಗೆ ಸಂಬಂಧಪಟ್ಟವರ ಗಮನ ಹರಿಸಬೇಕು ಎಂದರು.

ಗೋಷ್ಠಿ ಯಲ್ಲಿ ಕಾಕೋಟುಪರಂಬು ಗ್ರಾಮಸ್ಥರಾದ ಪೊನ್ನಪ್ಪ, ಪ್ರಕಾಶ್ ರೈ, ಸುನೀಲ್ ಮತ್ತಿತರರು ಉಪಸ್ಥಿತರಿದ್ದರು.

## ರೋಹಿಣಿ ನಿಧನ



ಕುಶಾಲನಗರ, ಜ.2– ಕುಶಾಲನಗರದ ಆದಿಶಂಕರಾಚಾರ್ಯ ಬಡಾವಣೆ ನಿವಾಸಿ ನಿವೃತ್ತ ಎ.ಎಸ್.ಐ. ಪ್ರಕಾಶ್ ಅವರ ಪತ್ನಿ ನಿವೃತ್ತ ಶಿಕ್ಷಕಿ ರೋಹಿಣಿ (71) ಸೋಮವಾರ ನಿಧನರಾದರು. ಮೃತರು ಪತಿ ಹಾಗೂ ಇಬ್ಬರು ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಕುಶಾಲನಗರದಲ್ಲಿ ಸೋಮವಾರ ನೆರವೇರಿತು.

## ಮಂದಣ್ಣ



ಕುಶಾಲನಗರ, ಜ.2– ಕುಶಾಲನಗರದ ಹೌಸಿಂಗ್ ಬೋರ್ಡ್ ನಿವಾಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿವೃತ್ತ ನೌಕರ ಯು.ಪಿ.ಮಂದಣ್ಣ (62) ಸೋಮವಾರ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಇಬ್ಬರು ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅಂತ್ಯಸಂಸ್ಕಾರ ಮದೆನಾಡಿನಲ್ಲಿ ಸೋಮವಾರ ನೆರವೇರಿತು.


## ಇಂದು ವಿದ್ಯುತ್ ವ್ಯತ್ಯಯ

ಮಡಿಕೇರಿ, ಜ.2– ಮಡಿಕೇರಿ-ವಿರಾಜಪೇಟೆ 66 ಕೆವಿ ವಿದ್ಯುತ್ ಮಾರ್ಗದ ಕಾಮಗಾರಿ ಕೈಗೊಳ್ಳಬೇಕಿರುವುದರಿಂದ ಬೃಹತ್ ಕಾಮಗಾರಿ ವಿಭಾಗ ಕೊಡಗು ಜಿಲ್ಲೆ ಕೆ.ಪಿ.ಟಿ.ಸಿ.ಎಲ್ ಮೈಸೂರು ಅವರ ಕೋರಿಕೆಯಂತೆ ಜ.3 ರಂದು ಬೆಳಗ್ಗೆ 08 ಗಂಟೆಯಿಂದ ಸಂಜೆ 5 ಗಂಟೆಯವರೆಗೆ 33 ಕೆವಿ ವಿರಾಜಪೇಟೆ-ಮೂರ್ನಾಡು ಮಾರ್ಗದಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳಿಸಲಾಗುವುದು. ಆದ್ದರಿಂದ ಪಾಲಂಗಾಲ, ಮೂರ್ನಾಡು, ನಾಪೋಕ್ಲು, ಹೊದ್ದೂರು, ಮರಗೋಡು, ಬೇತು, ಕಕ್ಕಬೆ, ನೆಲಜಿ, ಹಾಕತ್ತೂರು, ಕಾಂತೂರು, ಸುತ್ತಮುತ್ತಲ ವ್ಯಾಪ್ತಿಯ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿನಿ ನೇಣಿಗೆ ಶರಣು

ಕುಶಾಲನಗರ, ಜ.2– ಸಮೀಪದ ಕೂಡಿಗೆ ಗ್ರಾ.ಪಂ ವ್ಯಾಪ್ತಿಯ ಪ್ರೌಢಶಾಲೆಯೊಂದರ 10ನೇ ತರಗತಿ ವಿದ್ಯಾರ್ಥಿನಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಹೆಗ್ಗಡಳ್ಳಿ ರಸ್ತೆ ನಿವಾಸಿ ಕಾಂತ ಎಂಬುವರ ಪುತ್ರಿ ಅಂಜಲಿ (14) ಭಾನುವಾರ ಸಂಜೆ ಬ್ಯಾಡಗೊಟ್ಟದ ಮನೆಯಲ್ಲಿ ಯಾರೂ ಇಲ್ಲದ ಸಂದರ್ಭ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಈಕೆಯ ಆತ್ಮಹತ್ಯೆಗೆ ಕಾರಣ ತಿಳಿದುಬಂದಿಲ್ಲ. ಈ ಕುರಿತು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಜಿಲ್ಲೆಯಲ್ಲಿ ಶ್ರದ್ಧಾಭಕ್ತಿಯ ವೈಕುಂಠ ಏಕಾದಶಿ



ಚಾಮರಾಜನಗರ, ಜ.2– ಜಿಲ್ಲೆಯಾದ್ಯಂತ ಸೋಮವಾರ ವೈಕುಂಠ ಏಕಾದಶಿಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ವೆಂಕಟೇಶ್ವರ, ಶ್ರೀನಿವಾಸ, ರಂಗನಾಥಸ್ವಾಮಿ, ನಾರಾಯಣ ದೇವಾಲಯ ಹಾಗೂ ಪಣ್ಯದಹುಂಡಿ ಗ್ರಾಮದ ಬಳಿಯ ಶ್ರೀ ಪ್ರಸನ್ನ ವೆಂಕಟರಮಣ ಸ್ವಾಮಿಯ ದೇವಾಲಯಗಳಲ್ಲಿ ಮುಂಜಾನೆಯಿಂದಲೇ ವಿಶೇಷ ಪೂಜೆ ಪುನಸ್ಕಾರಗಳು ನಡೆದವು. ಬೆಳಗ್ಗೆಯಿಂದಲೇ ಭಕ್ತರು ದೇವಾಲಯಗಳಿಗೆ ತೆರಳಿ ದೇವರ ದರ್ಶನ ಪಡೆದರು.

ವೆಂಕಟೇಶ್ವರ, ನಾರಾಯಣಸ್ವಾಮಿ, ರಂಗನಾಥಸ್ವಾಮಿ ದೇವಾಲಯಗಳನ್ನು ರಂಗೋಲಿ, ತಳಿರು ತೋರಣಗಳಿಂದ ಅಲಂಕರಿಸಲಾಗಿತ್ತು. ದೇವರ ವಿಗ್ರಹಗಳಿಗೂ ವಿಶೇಷ ಅರ್ಚನೆ, ಅಭಿಷೇಕ ನೆರವೇರಿಸಲಾಯಿತು. ಬಳಿಕ ಹೂವು, ಆಭರಣಗಳಿಂದ ವಿಶೇಷ ಅಲಂಕಾರ ಮಾಡಲಾಯಿತು.

ಚಾಮರಾಜನಗರದ ಕೊಳದ ಬೀದಿಯಲ್ಲಿರುವ ಕಾಡು ನಾರಾಯಣಸ್ವಾಮಿ ದೇವಾಲಯ, ಉಮ್ಮತ್ತೂರಿನ ರಂಗನಾಥಸ್ವಾಮಿ ದೇವಾಲಯ, ವೆಂಕಟಯ್ಯನ ಛತ್ರದ ವೆಂಕಟೇಶ್ವರ ದೇಗುಲ, ಹರದನಹಳ್ಳಿಯ ವೇಣುಗೋಪಾಲಸ್ವಾಮಿ ದೇವಾಲಯ ಗಳಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮ ಗಳು ನಡೆದವು.

ಗುಂಡ್ಲುಪೇಟೆ ತಾಲೂಕಿನ ತೆರಕಣಾಂಬಿ ಹೊಬಳಿಯ ಹುಲುಗನ ಮುರಡಿ ವೆಂಕಟರಮಣಸ್ವಾಮಿ ದೇವಸ್ಥಾನ ಹಾಗೂ ಹಿಮವದ್ ಗೋಪಾಲಸ್ವಾಮಿ ಬೆಟ್ಟ ದೇವಸ್ಥಾನದಲ್ಲಿ ವಿಶೇಷ ಪೂಜೆ ಏರ್ಪಡಿಸಲಾಗಿತ್ತು. ಕೊಳ್ಳೇಗಾಲ ತಾಲೂಕಿನ ಶಿವನಸಮುದ್ರ ಮಧ್ಯರಂಗನಾಥಸ್ವಾಮಿ ದೇವಾಲಯದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ವಿಶೇಷ ಧಾರ್ಮಿಕ ವಿಧಿ ವಿಧಾನಗಳು ನಡೆದವು.

# ಜ.6ರಿಂದ ಚಿಕ್ಕಲ್ಲೂರು ಜಾತ್ರಾ ಮಹೋತ್ಸವ

### ಶಾಸಕ ನರೇಂದ್ರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ▸ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ▸ 200 ಬಸ್ ವ್ಯವಸ್ಥೆ



ಚಾಮರಾಜನಗರ, ಜ.2– ಶ್ರೀಕ್ಷೇತ್ರ ಚಿಕ್ಕಲ್ಲೂರಿನಲ್ಲಿ ಇದೇ ಜನವರಿ 6ರಿಂದ 10ರವರೆಗೆ ನಡೆಯಲಿರುವ ಜಾತ್ರಾ ಮಹೋತ್ಸವಕ್ಕೆ ಅಗತ್ಯವಿರುವ ಸಕಲ ವ್ಯವಸ್ಥೆಗಳನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ಶಾಸಕ ಆರ್. ನರೇಂದ್ರ ಸೂಚನೆ ನೀಡಿದರು.

ಕೊಳ್ಳೇಗಾಲ ತಾಲೂಕಿನ ಚಿಕ್ಕಲ್ಲೂರು ಹಳೇ ಮಠದ ಆವರಣದಲ್ಲಿ ನಡೆದ ಜಾತ್ರಾ ಮಹೋತ್ಸವ ಸಿದ್ಧತೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋವಿಡ್‌ನಿಂದಾಗಿ ಕಳೆದೆರಡು ವರ್ಷಗಳಲ್ಲಿ ಈ ಹಿಂದೆ ನಡೆದಂತೆ ಜಾತ್ರೆ ನಡೆದಿರಲಿಲ್ಲ. ಹೀಗಾಗಿ ಈ ಬಾರಿ ಜಾತ್ರಾ ಮಹೋತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸಲಿದ್ದಾರೆ. ಕ್ಷೇತ್ರಕ್ಕೆ ಬರುವ ಭಕ್ತಾದಿಗಳಿಗೆ ಮೂಲಸೌಕರ್ಯದಲ್ಲಿ ಯಾವುದೇ ಕೊರತೆಯಾಗದಂತೆ ಎಲ್ಲ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಶಾಸಕರು ತಿಳಿಸಿದರು. ಜಾತ್ರಾ ಸಮಯದಲ್ಲಿ ಕುಡಿಯುವ ನೀರಿನ ವ್ಯವಸ್ಥೆಗೆ ಯಾವುದೇ ತೊಂದರೆಯಾಗಬಾರದು. ಹೆಚ್ಚು ನಲ್ಲಿಗಳನ್ನು ಅಳವಡಿಸಿ ನೀರಿನ ಪೂರೈಕೆ ಮಾಡಬೇಕು. ಶೌಚಾಲಯಗಳನ್ನು ತೆರೆಯಬೇಕು. ವಿಶೇಷವಾಗಿ ಸ್ವಚ್ಛತಾ ಕೆಲಸಗಳು ಆಗಬೇಕು. ಜಾತ್ರೆ ಆರಂಭವಾಗುವ ಮುಂಚೆಯೇ ದೇವಾಲಯ, ಜಾತ್ರಾ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯ ಪೂರ್ಣಗೊಳಿಸಬೇಕು. ಜಾತ್ರೆ ಮುಗಿದ ನಂತರವು ಸ್ವಚ್ಛತಾ ಕೆಲಸಗಳನ್ನು ನಿರ್ವಹಿಸಬೇಕು ಎಂದು ಶಾಸಕರು ನಿರ್ದೇಶನ ನೀಡಿದರು.

ಬಸ್ಸುಗಳ ನಿಯೋಜನೆ ಸಂಬಂಧ ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣ ಅಧಿಕಾರಿ ಶ್ರೀನಿವಾಸ್ ಅವರು ಮಾಹಿತಿ ನೀಡಿ, ಚಿಕ್ಕಲ್ಲೂರಿಗೆ 200 ಬಸ್‌ಗಳನ್ನು ಕಾರ್ಯಾಚರಣೆ ಮಾಡಲು ಸಿದ್ಧತೆ ಮಾಡಲಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ನರೇಂದ್ರ, ಈ ಬಾರಿಯ ಜಾತ್ರೆಗೆ ಹೆಚ್ಚಿನ ಭಕ್ತಾದಿಗಳು ಬರುವ ನಿರೀಕ್ಷೆಯಿದೆ. ಹೀಗಾಗಿ 200 ಬಸ್‌ಗಳಲ್ಲದೇ ಇನ್ನೂ 50 ಬಸ್ಸುಗಳನ್ನು ಹೆಚ್ಚಾಗಿ ನಿಯೋಜನೆ ಮಾಡಬೇಕು. ಹನೂರು, ಕೊಳ್ಳೇಗಾಲ, ಟಿ. ನರಸೀಪುರ, ಮಳವಳ್ಳಿ ಸೇರಿದಂತೆ ನಾನಾ ಭಾಗಗಳಿಂದ ಅಗತ್ಯಕ್ಕೆ ಅನುಗುಣವಾಗಿ ಬಸ್‌ಗಳ ಸಂಚಾರಕ್ಕೆ ವ್ಯವಸ್ಥೆ ಮಾಡುವಂತೆ ಸೂಚನೆ ನೀಡಿದರು.

ವಾಹನಗಳ ಸಂಚಾರ ಹೆಚ್ಚಾಗಿ ಇರಲಿರುವುದರಿಂದ ರಸ್ತೆಗಳನ್ನು ಸುಸ್ಥಿತಿಯಲ್ಲಿ ಇರುವಂತೆ ನೋಡಿಕೊಳ್ಳಬೇಕು. ಗುಂಡಿಗಳನ್ನು ಮುಚ್ಚುವ ಕಾರ್ಯ ವ್ಯವಸ್ಥಿತವಾಗಿ ಆಗಬೇಕು. ವಾಹನಗಳ ನಿಲುಗಡೆಗೂ ಎಲ್ಲೆಲ್ಲಿ ಲಭ್ಯವಿದೆಯೋ ಅಲ್ಲಿ ವ್ಯವಸ್ಥೆ ಮಾಡಬೇಕು. ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕೆಂದು ತಿಳಿಸಿದರು.

ಚಿಕ್ಕಲ್ಲೂರಿನಲ್ಲಿ ತನ್ನದೇ ಆದ ಪರಂಪರೆ ಇದೆ. ಭಕ್ತರ ಭಾವನೆಗಳಿಗೆ ಯಾವುದೇ ಧಕ್ಕೆಯಾಗಬಾರದು. ಮಠಕ್ಕೆ ಸಂಬಂಧಿಸಿದವರು ಉಂಟುಮಾಡುವ ಭಕ್ತಾದಿಗಳಿಗೆ ಆಚರಣೆಯನ್ನು ಬಗೆಹರಿಸಿಕೊಳ್ಳಿ. ಜಾತ್ರೆ ಎಂದಿನಂತೆ ಅಚ್ಚುಕಟ್ಟಾಗಿ ನಡೆಯಬೇಕು. ಇದಕ್ಕೆ ಪೂರಕವಾಗಿರುವ ಎಲ್ಲಾ ಸಿದ್ಧತಾ ಕ್ರಮಗಳನ್ನು ತುರ್ತಾಗಿ ಪೂರ್ಣಗೊಳಿಸಬೇಕೆಂದು ಶಾಸಕರಾದ ಆರ್. ನರೇಂದ್ರ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಅವರು ಮಾತನಾಡಿ, ಜಾತ್ರೆ ಸಂಬಂಧ ಈಗಾಗಲೇ ಸ್ಥಳ ಪರಿಶೀಲಿಸಿ ಎಲ್ಲಾ ಕ್ರಮ ತೆಗೆದುಕೊಳ್ಳಲಾಗಿದೆ. ಅಧಿಕಾರಿಗಳ ಸಭೆ ನಡೆಸಲಾಗಿದೆ. ಭಕ್ತರ ಭಾವನೆಗಳಿಗೆ ತಕ್ಕಂತೆ ಈ ಹಿಂದಿನಂತೆಯೇ ಜಾತ್ರೆ ನಡೆಯುವ ನಿಟ್ಟಿನಲ್ಲಿ ಎಲ್ಲಾ ವ್ಯವಸ್ಥೆಗಳನ್ನು ಕೈಗೊಳ್ಳಲಾಗಿದೆ. ಈಗಾಗಲೇ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು. ಕಾನೂನು ಸುವ್ಯವಸ್ಥೆ ಪಾಲನೆ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಟಿ.ಪಿ. ಶಿವಕುಮಾರ್, ಡಿವೈಎಸ್‌ಪಿ ಜೆ.ಯು. ಸೋಮೇಗೌಡ ಅವರು ಮಾತನಾಡಿದರು.

ಇದೇ ವೇಳೆ ಮಠದ ಜ್ಞಾನಾನಂದ ಚೆನ್ನರಾಜೇ ಅರಸ್, ಬಿ.ಪಿ. ಭರತರಾಜೇ ಅರಸ್, ಸಾಹಿತಿ, ಮುಖಂಡರಾದ ಮಹದೇವ ಶಂಕನಪುರ, ಉಗ್ರನರಸಿಂಹೇಗೌಡ, ಸೋಮಶೇಖರ್, ಇತರರು ಮಾತನಾಡಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಎಸ್. ಕಾತ್ಯಾಯಿನಿದೇವಿ, ಹೆಚ್ಚುವರಿ ಉಪವಿಭಾಗಾಧಿಕಾರಿ ಗೀತಾ ಹುಡೇದ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಹೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಕೆ.ಎಂ. ವಿಶ್ವೇಶ್ವರಯ್ಯ, ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಶಾಸನಸಭೆಗಳಿಗೆ ಪ್ರಾಮಾಣಿಕರ ಆಯ್ಕೆ ಮಾಡಲು ಮನವಿ



ಚಾಮರಾಜನಗರ, ಜ.2– ಈ ಹೊಸ ವರ್ಷದಲ್ಲಿ ನಾಡಿನ ದೇಶದ ಜನತೆ, ಮತದಾರರು ಬದಲಾವಣೆ ಆಗಬೇಕು. ಪ್ರಾಮಾಣಿಕರನ್ನು ಶಾಸನಸಭೆ ಮತ್ತು ಸಂಸತ್‌ಗೆ ಆಯ್ಕೆ ಮಾಡಿ ಕಳುಹಿಸಬೇಕು ಎಂದು ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್‌ನಾಗರಾಜ್ ಮನವಿ ಮಾಡಿದರು.

ತಾಲೂಕಿನ ಕಸ್ತೂರು ದೊಡ್ಡಮ್ಮತಾಯಿ ದೇವಸ್ಥಾನಕ್ಕೆ ಭೇಟಿ ದೇವರ ದರ್ಶನ ಪಡೆದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊಸ ವರ್ಷ ಎಂದರೆ ಪ್ರಾಮಾಣಿಕತೆ, ಸತ್ಯ, ಧರ್ಮ ಇದನ್ನು ಹೊಸ ವರ್ಷದಲ್ಲಿ ಪಾಲನೆ ಮಾಡಬೇಕಾದ ಕರ್ತವ್ಯ ಬಹಳ ಮುಖ್ಯವಾಗಿ ಚುನಾವಣೆಗಳಿಗೆ ಪ್ರಾಮಾಣಿಕತೆ, ಅಧಿಕಾರ ಪ್ರಾಮುಖ್ಯತೆ, ಪ್ರಾಮಾಣಿಕತೆ, ನಂಬಿಕೆ, ಜಾತ್ಯಾತೀತ ಇದು ನಮ್ಮ ಸಂದೇಶ ಆಗಬೇಕು. ಮಹಾತ್ಮ ಗಾಂಧೀಜಿಯವರು ಈ ದೇಶದ, ವಿಶ್ವದ ಮಹಾನ್ ವ್ಯಕ್ತಿ. ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳು ಕಳೆದರೂ ಬಡತನ ಬಡವರಾಗಿಯೇ ಇದ್ದಾರೆ ಎಂದರು.

**ರಾಜ್ಯ, ದೇಶದ ಪಕ್ಷಗಳು ವ್ಯಾಪಾರಿಯ ಕೇಂದ್ರ:** ದೇಶ, ರಾಜ್ಯದಲ್ಲಿ ಭ್ರಷ್ಟಾಚಾರ, ಲಂಚ, ಜಾತಿ ತಾಂಡವವಾಡುತ್ತಿವೆ. ಶಾಸನ ಸಭೆ, ಸಂಸತ್‌ನಲ್ಲಿ ಪ್ರಾಮಾಣಿಕರ ಕೊರತೆ ಹೆಚ್ಚು ಇದೆ. ನಮ್ಮ ರಾಜ್ಯ, ದೇಶದ ಪಕ್ಷಗಳು ವ್ಯಾಪಾರಿಯ ಕೇಂದ್ರವಾಗಿದೆ. ರಾಜಕೀಯ ಪಕ್ಷಗಳು ಹಾಳಾಗಿವೆ. ರಾಜಕೀಯ ಪಕ್ಷಗಳನ್ನು ಹತೋಟಿಗೆ ತರಬೇಕು ಹೊರತು ದೇಶದಲ್ಲಿ ಚುನಾವಣೆ ವ್ಯವಸ್ಥೆ ಹಾಳಾಗುತ್ತದೆ ಎಂದರು.

## ಬೇಗೂರು ಬಳಿ ಒಂಟಿ ಸಲಗ ಹಾವಳಿ

### ರೈತನಿಗೆ ತೀವ್ರ ಗಾಯ, ಬೆಳೆ ನಾಶ

ಬೇಗೂರು, ಜ. 2– ಕಾಡಾನೆ ದಾಳಿಗೆ ರೈತ ತೀವ್ರವಾಗಿ ಗಾಯಗೊಂಡ ಘಟನೆ ಇಲ್ಲಿಗೆ ಸಮೀಪದ ತಗ್ಗಲೂರು ಗ್ರಾಮದ ಬಳಿ ನಡೆದಿದೆ.

ಬೆಟ್ಟದ ಮಾದಳ್ಳಿ ಗ್ರಾಮದ ದೇವರಾಜಪ್ಪ ಗಾಯಗೊಂಡವ ನಾಗಿದ್ದು, ಈತನನ್ನು ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ. ಇಂದು ಬೆಳಿಗ್ಗೆ ದೇವರಾಜಪ್ಪ ತಗ್ಗಲೂರು ಗ್ರಾಮದ ಬಳಿ ಇರುವ ತಮ್ಮ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಏಕಾಏಕಿ ನುಗ್ಗಿದ ಒಂಟಿ ಸಲಗ ಇವರನ್ನು ಸೊಂಡಿಲಿನಿಂದ ಎತ್ತಿ ಎಸೆದಿದೆ. ಈ ವೇಳೆ ಅವರ ಜೊತೆಗಿದ್ದ ಕೀರ್ತಿಕುಮಾರ್, ವೃಷಭೇಂದ್ರಪ್ಪ, ಸತೀಶ್, ಕುಮಾರ್ ಅವರುಗಳು ಮರವನ್ನೇರಿ ಕುಳಿತು ಅಪಾಯದಿಂದ ಪಾರಾಗಿದ್ದಾರೆ. ಜಮೀನಿನಿಂದ ಕಾಡಾನೆ ತೆರಳಿದ ಬಳಿಕ ಇವರು ದೇವರಾಜಪ್ಪ ಅವರನ್ನು ಆಸ್ಪತ್ರೆಗೆ ಸಾಗಿಸಿದ್ದಾರೆ.

ಈ ಒಂಟಿ ಸಲಗ ಬೇಗೂರು ಸುತ್ತಮುತ್ತ ಹಾವಳಿ ನಡೆಸಿದ್ದು, ಕೆಬ್ಬೆಗುರುಸ್ವಾಮಿ ಎಂಬುವರ ಬೆಳೆ ಅನ್ನು ಜಖಂಗೊಳಿಸಿದೆ. ಮಹದೇವಪ್ಪ ಮತ್ತು ಬಸವಣ್ಣ ಎಂಬುವರ ಜಮೀನಿನ ಮುಸುಕಿನ ಜೋಳ ಹಾಗೂ ಅರಿಶಿನ ಬೆಳೆಯನ್ನು ನಾಶ ಪಡಿಸಿದ ಕಾಡಾನೆ, ಗುರು ಸಿ. ವೀರಪ್ಪ ಎಂಬುವರ ಬಾಳೆ ತೋಟಕ್ಕೆ ನುಗ್ಗಿ ಬೆಳೆ ನಾಶ ಪಡಿಸಿದೆ. ಅಲ್ಲದೆ ತಂತಿ ಬೇಲಿಯನ್ನು ಕಿತ್ತೆಸೆದಿದೆ. ಒಂಟಿ ಸಲಗದ ಹಾವಳಿಯಿಂದ ಗ್ರಾಮಸ್ಥರು ಆತಂಕಗೊಂಡಿದ್ದಾರೆ.

ಓಂಕಾರ್ ಅರಣ್ಯ ವಲಯ ಮತ್ತು ಬಂಡೀಪುರ ಟೈಗರ್ ಪ್ರಾಜೆಕ್ಟ್ ವ್ಯಾಪ್ತಿಯ ಅರಣ್ಯ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗ ಗ್ರಾಮದಲ್ಲೇ ಬೀಡು ಬಿಟ್ಟಿದ್ದು, ಪಟಾಕಿ ಸಿಡಿಸಿ ಆನೆಯನ್ನು ಕಾಡಿಗೆ ಅಟ್ಟಲು ಪ್ರಯತ್ನಿಸಿದೆ. ಆದರೆ ಸಲಗ ಕಾಡಿಗೆ ಹೋಗದೇ ಜಮೀನುಗಳಲ್ಲೇ ಓಡಾಡುತ್ತಿದೆ.

ರಾತ್ರಿ ವೇಳೆಗೆ ಕಾರ್ಯಾಚರಣೆ ನಡೆಸಿ ಆನೆಯನ್ನು ಕಾಡಿಗೆ ಅಟ್ಟುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

# ಚಾ.ನಗರದಲ್ಲಿ ಭೀಮಾ ಕೋರೆಗಾಂವ್ ವಿಜಯಸ್ತಂಭ ನಿರ್ಮಾಣಕ್ಕೆ ಭೂಮಿಪೂಜೆ

ಚಾಮರಾಜನಗರ, ಜ.2– ಭೀಮಾ ಕೋರೆಗಾಂವ್ ವಿಜಯೋತ್ಸವ ಅಂಗವಾಗಿ ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾ ಸಮಿತಿ ವತಿಯಿಂದ ನಗರದ ಕರಿನಂಜನಪುರದ ಸಿದ್ಧಾರ್ಥ ವೃತ್ತದಲ್ಲಿ ಭೀಮಾ ಕೋರೆಗಾಂವ್ ವಿಜಯಸ್ತಂಭ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಲಾಯಿತು.

ಇದಕ್ಕೂ ಮೊದಲು ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾ ಸಮಿತಿ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಭವನದ ಆವರಣದಿಂದ ಕೋರೆಗಾಂವ್ ವಿಜಯಸ್ತಂಭ ಮೆರವಣಿಗೆ ಆರಂಭಗೊಂಡು ಸತ್ಯಮಂಗಲ ರಸ್ತೆ, ಡಿವಿಯೇಷನ್, ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿ ರಸ್ತೆ, ಜಿಲ್ಲಾಡಳಿತ ಭವನಕ್ಕೆ ತೆರಳಿ ಅಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ರವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಭೀಮಾ ಕೋರೆಗಾಂವ್ ವಿಜಯೋತ್ಸವ ಘೋಷಣೆ ಕೂಗಲಾಯಿತು. ನಂತರ ಜೋಡಿರಸ್ತೆ ಮೂಲಕ ಹೌಸಿಂಗ್ ಬೋರ್ಡ್, ಬುದ್ಧನಗರ ಮಾರ್ಗವಾಗಿ ಸಾಗಿ ಕರಿನಂಜನಪುರ ಸಿದ್ದಾರ್ಥ ವೃತ್ತದಲ್ಲಿ ಮೆರವಣಿಗೆ ಅಂತ್ಯಗೊಂಡಿತು. ಇದೇ ಸಂದರ್ಭದಲ್ಲಿ ಭೀಮಾ ಕೋರೆಗಾಂವ್ ಯುದ್ಧದಲ್ಲಿ ವೀರಮರಣ ಹೊಂದಿದ್ದ 22 ಮಹಾರ್ ಸೈನಿಕರಿಗೆ ಗೌರವ ವಂದನೆ ಸಲ್ಲಿಸಲಾಯಿತು. ಭಾರತೀಯ ಬೌದ್ಧ ಮಹಾಸಭಾದ ಜಿಲ್ಲಾಧ್ಯಕ್ಷ ಆರ್.ಪಿ.ನಾರಾಯಣ ಮಾತನಾಡಿ, 500 ಮಹಾರ್ ಸೈನಿಕರು 28 ಸಾವಿರ ಪೇಶ್ವೆ ಸೈನಿಕರನ್ನು ಸೋಲಿಸಿದ ದಿನವನ್ನು ಭೀಮಾಕೋರೆ ಗಾಂವ್ ವಿಜಯೋತ್ಸವವಾಗಿ ಪ್ರತಿ ಜ. 1 ರಂದು ಆಚರಿಸಲಾಗುತ್ತಿದೆ. ಇದು ಸಮಾನತೆಗಾಗಿ ನಡೆದ ಹೋರಾಟ, ಸ್ವಾಭಿಮಾನ ಹೋರಾಟವಾಗಿದೆ ಎಂದರು.

ಸಾಹಿತಿ ಮಂಜುನಾಥಪ್ರಸನ್ನ, ಭಾರತೀಯ ಬೌದ್ಧ ಮಹಾಸಭಾ ಉಪಾಧ್ಯಕ್ಷರಾದ ಮಲ್ಲಿಕಾರ್ಜುನಸ್ವಾಮಿ, ಉಮೇಶ್ ಕುದರ್,

ಗಮನ ಸೆಳೆದ ಕೋರೆಗಾಂವ್ ವಿಜಯಸ್ತಂಭ ಮೆರವಣಿಗೆ



ಪುಟ್ಟಸ್ವಾಮಿ, ತಾಲೂಕು ಅಧ್ಯಕ್ಷ ಸಿದ್ದರಾಜು, ಶಿವಣ್ಣ, ಚೆನ್ನಂಜಯ್ಯ, ಯತೀಶ್ವರಯ್ಯ, ಬಸವಣ್ಣ, ಪರಮೇಶ್ ಮುದ್ದಿಕುರಿಗಾರು, ರಾಮಾನುಜ ಮಹಿಳಾ ಸಂಘದ ಅಧ್ಯಕ್ಷೆ ಪುಷ್ಪಾ, ಗೌರವ ಅಧ್ಯಕ್ಷ ಮಂಜುಳ ಹಾಗೂ ಪದಾಧಿಕಾರಿಗಳು, ಕರಿನಂಜನಪುರ, ಬುದ್ಧನಗರ, ಹೌಸಿಂಗ್ ಬೋರ್ಡ್, ಬುದ್ಧ ಅಂಬೇಡ್ಕರ್ ಅನುಯಾಯಿಗಳು, ವಿವಿಧ ಸಂಘ-ಸಂಸ್ಥೆಗಳ ಸಂಘಟನೆಯ ಮುಖಂಡರುಗಳು ಭಾಗವಹಿಸಿದ್ದರು.

## ಇಂದು ಮಹದೇವಪ್ರಸಾದ್ ಪುಣ್ಯಸ್ಮರಣೆ



ಗುಂಡ್ಲುಪೇಟೆ, ಜ.2– ಸಚಿವ ದಿ. ಹೆಚ್.ಎಸ್. ಮಹದೇವಪ್ರಸಾದ್ ಅವರ 6ನೇ ವರ್ಷದ ಪುಣ್ಯಸ್ಮರಣೆ, ಜ.3ರ ಬೆಳಗ್ಗೆ 10 ಗಂಟೆಗೆ ತಾಲೂಕಿನ ಹಾಲಹಳ್ಳಿ ಗ್ರಾಮದ ಹೆಚ್.ಎಸ್.ಎಸ್. ಸಮುದಾಯ ಭವನದಲ್ಲಿ ಆಯೋಜಿಸಿದ್ದು, ಅಭಿಮಾನಿಗಳು ಭಾಗವಹಿಸುವಂತೆ ಮಾಜಿ ಸಚಿವೆ ಡಾ.ಗೀತಾ ಮಹದೇವ ಪ್ರಸಾದ್ ಹಾಗೂ ಮುಖಂಡ ಹೆಚ್.ಎಂ.ಗಣೇಶ್ ಪ್ರಸಾದ್ ತಮ್ಮ ಪ್ರಕಟಣೆಯಲ್ಲಿ ಕೋರಿದ್ದಾರೆ.

## ನಾಳೆ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ

ಚಾಮರಾಜನಗರ, ಜ.2– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಜ.4ರಂದು ಬೆಳಗ್ಗೆ 11 ಗಂಟೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ನೆರವೇರಲಿದೆ.

ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ಅವರು ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಸಂಸದ ವಿ. ಶ್ರೀನಿವಾಸಪ್ರಸಾದ್ ಧ್ವಜಾರೋಹಣ ನೆರವೇರಿಸುವರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಅವರು ಕ್ರೀಡಾಜ್ಯೋತಿ ಸ್ವೀಕಾರ ಮಾಡುವರು. ಶಾಸಕರಾದ ಆರ್. ನರೇಂದ್ರ, ಎನ್. ಮಹೇಶ್, ಸಿ.ಎಸ್. ನಿರಂಜನ್‌ಕುಮಾರ್, ಮರಿತಿಬ್ಬೇಗೌಡ, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕಾವೇರಿ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜಿ. ನಿಜಗುಣರಾಜು, ನಗರಸಭೆ ಅಧ್ಯಕ್ಷೆ ಸಿ.ಎಂ.ಆಶಾ, ಉಪಾಧ್ಯಕ್ಷೆ ಪಿ.ಸುಧಾ, ಸದಸ್ಯರಾದ ಚಂದ್ರಶೇಖರ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ಡಿ.ಎಸ್. ರಮೇಶ್, ಜಿಪಂ ಸಿಇಒ ಕೆ.ಎಂ. ಗಾಯತ್ರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಟಿ.ಪಿ. ಶಿವಕುಮಾರ್, ಹೆಚ್ಚುವರಿ ಜಿಲ್ಲಾಧಿಕಾರಿ ಎಸ್. ಕಾತ್ಯಾಯಿನಿದೇವಿ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು. ಸಂಜೆ 6.30 ಗಂಟೆಗೆ ಕೋರ್ಟ್ ರಸ್ತೆಯಲ್ಲಿರುವ ಜಿಲ್ಲಾ ಸರ್ಕಾರಿ ನೌಕರರ ಸಂಘದ ಆವರಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಸುಗಮ ಸಂಗೀತ ರಸಮಂಜರಿ ಕಾರ್ಯಕ್ರಮ ನಡೆಯಲಿದೆ.

## ಕುಮಾರಸ್ವಾಮಿ ಕನ್ನಡ 'ಕಟ್ಟಾಳು': ಬಿಜೆಪಿ ಕಿಡಿ

**ಬೆಂಗಳೂರು:** "ನಂದಿನಿ" ವಿಲೀನದ ಬಗ್ಗೆ ಯಾರೂ ಏನು ಹೇಳದಿದ್ದರೂ, ಯಾವತ್ತೂ ಇಲ್ಲದ ಕನ್ನಡ ಪ್ರೇಮ ತೋರಿಸಲು ಎಚ್ ಡಿ ಕುಮಾರಸ್ವಾಮಿ ಸುಳ್ಸುದ್ದಿ ಹಬ್ಬಿಸುತ್ತಿದ್ದಾರೆ ಎಂದು ಬಿಜೆಪಿ ಟೀಕಿಸಿದೆ. ಈ ಸಂಬಂಧ ಸಾಮಾಜಿಕ ಜಾಲತಾಣ ಟ್ವೀಟರ್‌ನಲ್ಲಿ ಸರಣಿ ಟ್ವೀಟ್ ಮಾಡಿರುವ ಬಿಜೆಪಿ, ಸದಾ ಕಾಲ ಸದಾರಮೆ ನಾಟಕವಾಡುವ ಕುಮಾರಸ್ವಾಮಿ ಕನ್ನಡಿಗರ ಬಗ್ಗೆ ಎಷ್ಟು ಕಾಳಜಿ ತೋರಿದ್ದಾರೆ ಅನ್ನೋದು ಎಲ್ಲರಿಗೂ ಅರಿವಿದೆ; ಮಂಡ್ಯದ ಜನತೆಯಂತೂ ಇದಕ್ಕೆ ಖುದ್ದು ಸಾಕ್ಷಿ. ಹಾಸನದಲ್ಲಿ ಅಣ್ಣ, ಮಂಡ್ಯದಲ್ಲಿ ಮಗ, ರಾಮನಗರದಲ್ಲಿ ಖುದ್ದು ದಂಪತಿಗಳು ಕೋಟೆ ಕಟ್ಟಿ ಮೆರೆಯುವ ಹುನ್ನಾರದಲ್ಲಿ, ಕಾರ್ಯಕರ್ತರಿಗೆ ಕ್ಯಾ–ರೇ ಎನ್ನದಿರುವುದು, ಹೆಗಲು ಕೊಟ್ಟ ಕಾರ್ಯಕರ್ತರಿಗೆ ಕೈ ಕೊಟ್ಟಿದ್ದು ಎಲ್ಲವನ್ನು ಜನ ಕಂಡಿದ್ದಾರೆ. ಮಂಡ್ಯ, ರಾಮನಗರದ ಅವರದೇ ಪಕ್ಷದ ಕಾರ್ಯಕರ್ತರು ಕುಮಾರಸ್ವಾಮಿಗೆ ಕನ್ನಡಿಗರಂತೆ ತೋರುವುದಿಲ್ಲವೇ ಎಂದು ಪ್ರಶ್ನಿಸಿದೆ.

ಮನ್ ಮುಲ್‌ನಲ್ಲಿ ಜೆಡಿಎಸ್ ನಾಯಕರದ್ದೇ ಕಾರುಬಾರಂತೆ! ಅಲ್ಲಿ ತಾಂಡವವಾಡುತ್ತಿರುವ ಅವ್ಯವಹಾರಗಳ ಬಗ್ಗೆ ಕುಮಾರಸ್ವಾಮಿ ದಿವ್ಯ ಮೌನ ವಹಿಸಿದ್ದಾರೆ. ಮೈಶುಗರ್ ಸಕ್ಕರೆ ಕಾರ್ಖಾನೆಗೆ ಬೀಗ ಜಡಿದು ಮಂಡ್ಯದ ಲಕ್ಷಾಂತರ ಜನರ ಹೊಟ್ಟೆಯ ಮೇಲೆ ಹೊಡೆದವರು ಕುಮಾರಸ್ವಾಮಿ ಅಲ್ಲವೇ ಎಂದು ಪ್ರಶ್ನಿಸಿದ್ದು, 2019ರ ಚುನಾವಣೆಯಲ್ಲಿ ನಿಖಿಲ್ ಕುಮಾರಸ್ವಾಮಿ, ಮಂಡ್ಯದಲ್ಲಿ ಸೋಲುವ ಮುನ್ನ ಚುನಾವಣಾ ಗಿಮಿಕ್ ಆಗಿ ಘೋಷಿಸಿದ್ದ 8,000 ಕೋಟಿ ರೂ. ಮೊತ್ತದ ಅಭಿವೃದ್ಧಿ ಯೋಜನೆಗಳು ಮಂಡ್ಯದ ಜನರ ದಿಕ್ಕುತಪಿಸಲು ನೀರಿನ ಮೇಲೆ ಗೀಚಿದ ಅಕ್ಷರಗಳು. ಇದು ಸ್ವಾಭಿಮಾನಿ ಮಂಡ್ಯದ ಕನ್ನಡಿಗರಿಗೆ ಕುಮಾರಸ್ವಾಮಿ ಮಾಡಿದ ಅವಮಾನ ಎಂದು ಆಕ್ರೋಶ ವ್ಯಕ್ತಪಡಿಸಿದೆ.

ಬಿಜೆಪಿ ರಾಮನಗರಕ್ಕೆ ವಿಶ್ವದರ್ಜೆಯ ರೇಷ್ಮೆ ಮಾರುಕಟ್ಟೆ, ಮಾಗಡಿಯಲ್ಲಿ ಕರ್ನಾಟಕ ಸಂಸ್ಕೃತ ವಿವಿಯ ಹೊಸ ಆವರಣ ಕೊಟ್ಟಿದೆ. ರಾಮನಗರವನ್ನು ಸ್ವಂತ ರಾಜಕೀಯ ಲಾಭಕ್ಕಾಗಿ ಜಿಲ್ಲೆಯಂದು ಘೋಷಿಸಿ ಬಿಡದಿಯಲ್ಲಿ ಐಷಾರಾಮಿ ಜೀವನ ಸಾಗಿಸುತ್ತ, ಸ್ವತಃ ದಂಪತಿಗಳೇ ಶಾಸಕರಾಗಿದ್ದಾರೆ ಹೊರತಾಗಿ ಜಿಲ್ಲೆಗೆ ಬೇರೇನು ಮಾಡಿದ್ದೀರಿ ರಾಮನಗರದ ರಾಮದೇವರ ಬೆಟ್ಟದಲ್ಲಿ ಅಯೋಧ್ಯೆ ಮಾದರಿಯಂತೆ ಶ್ರೀ ರಾಮಚಂದ್ರನ ದೇವಸ್ಥಾನವನ್ನು ನಿರ್ಮಿಸಲಿದೆ. ಮಾಗಡಿ ಕೆಂಪಾಪುರದಲ್ಲಿ ಕೆಂಪೇಗೌಡರ ಸ್ಮಾರಕ, ಮಾಗಡಿ ವೀರಾಪುರದಲ್ಲಿ ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿಯವರ ಸ್ಮಾರಕ ಮತ್ತು ಮಾಗಡಿ ಬಾನಂದೂರಿನಲ್ಲಿ ಬಾಲಗಂಗಾಧರನಾಥ ಸ್ವಾಮೀಜಿಯವರ ಸ್ಮಾರಕ ನಿರ್ಮಿಸಲಿದೆ.

ಒಂದನೇ ಪುಟದಿಂದ

## ಬಿಜೆಪಿ ಕೊನೆಯ ದಿನಗಳನ್ನು ಎಣಿಸುತ್ತಿದೆ

ಸರ್ಕಾರದ ಹಣ ಲೂಟಿ ಮಾಡಿದ್ದರೆ ತೋರಿಸಲಿ. ಒಂದೇ ಒಂದು ಉದಾಹರಣೆ ನೀಡಲಿ ಎಂದು ಶಾ ವಿರುದ್ಧ ಗುಡುಗಿದ ಕುಮಾರಸ್ವಾಮಿ, ರಾಜ್ಯ ಬಿಜೆಪಿ ಸರ್ಕಾರವೇ ಭ್ರಷ್ಟಾಚಾರದಲ್ಲಿ ಮುಳುಗಿದೆ. ಹೀಗಿರುವಾಗ ಅವರು ನಮ್ಮ ಬಗ್ಗೆ ಮಾತ ನಾಡುತ್ತಿದ್ದಾರೆ. ಜೆಡಿಎಸ್ ಜತೆ ಹೊಂದಾ ಣಿಕೆ ಇಲ್ಲ ಅಂತ ಹೇಳಿದ್ದಾರೆ. ನಾವೇನು ಅವರ ಮನೆ ಬಾಗಿಲಿಗೆ ಹೋಗಿದ್ದೇವೆಯೇ ನಮ್ಮ ಪಕ್ಷವನ್ನು ನಾವು ಕಟ್ಟುತ್ತಿದ್ದೇವೆ. ಯಾರು ಅವರ ಬಳಿ

ಅರ್ಜಿ ಹಾಕಿಕೊಂಡು ಹೋಗಿಲ್ಲ. ಬಿಜೆಪಿಯವರೇ ನಮ್ಮ ಮನೆ ಬಾಗಿಲಿಗೆ ಬಂದಿರೋದು ಎಂದು ಆಕ್ರೋಶ ದಿಂದ ನುಡಿದರು. ಜೆಡಿಎಸ್ ಪಕ್ಷ ಇದು ಕನ್ನಡಿಗರ, 6.5 ಕೋಟಿ ರೂ. ಕನ್ನಡಿಗರ ಪಕ್ಷ. ಹೊಂದಾಣಿಕೆ ಮಾಡಿಕೊಳ್ಳಲು ನಾನು ಬಿಜೆಪಿ ಅವರ ಮನೆ ಬಾಗಿಲಿಗೆ ಹೋಗಿಲ್ಲ. ನಾನು ಅಮಿತ್ ಶಾ ಮನೆಗೆ ಹೋಗಿದ್ದೇನೆಯೇ ಹೊಂದಾಣಿಕೆ ಬಗ್ಗೆ ಯಾಕೆ ಮಾತನಾಡುತ್ತಾರೆ. ನಾನು ಪಂಚರತ್ನ ಯಾತ್ರೆ ಮಾಡ್ತಿರೋದು ಯಾರ ಮನೆ ಬಾಗಿಲಿಗೂ ಹೋಗಲು ಅಲ್ಲ. ಮಾ.20ರವರೆಗೆ ಪಂಚರತ್ನ ಯಾತ್ರೆ ಮಾಡುತ್ತಿದ್ದೇನೆ. ದೇಶದಲ್ಲಿ 800ಕ್ಕೂ ಹೆಚ್ಚು ಶಾಸಕರನ್ನು ಖರೀದಿ ಮಾಡಿರುವ ಇತಿಹಾಸ ಇದ್ದರೆ ಅದು ಚುನಾವಣೆಗೂ ಮುನ್ನವೇ ಆಪರೇಷನ್ ಕಮಲ ಮಾಡಿದೆ. ಸಾಮರ್ಥ್ಯ ಇಲ್ಲದ ಕಡೆ ಖರೀದಿ ಮಾಡಲು ಈಗಾಗಲೇ ಬಿಜೆಪಿ ಹುನ್ನಾರ ನಡೆಸುತ್ತಿದೆ. ರಾಜ್ಯದಿಂದ ಬಿಜೆಪಿ ಪಕ್ಷವನ್ನು ಹೊರ ಹಾಕಲು ಜೆಡಿಎಸ್ ಪಣ ತೊಟ್ಟಿದೆ. ನಮ್ಮ ಪಕ್ಷವನ್ನು ಕೆಣಕಿದ್ದೀರಿ, ನಿಮ್ಮ ರಾಜ ಕಾರಣ ಉತ್ತರ ಭಾರತದಲ್ಲಿ ಇಟ್ಟುಕೊಳ್ಳಿ, ಕರ್ನಾಟಕದಲ್ಲಿ ಇನ್ನು ನಿಮ್ಮ ಆಟ ನಡೆಯುವುದಿಲ್ಲ ಎಂದು ಕುಮಾರಸ್ವಾಮಿ ಕಿಡಿ ಕಾರಿದರು.

## ನಿರ್ಧಾರ ನ್ಯಾಯ ಸಮ್ಮತವಾಗಿದೆ

ಎಂದು ಹೇಳಿದ್ದಾರೆ. ವಿಚಾರಣೆ ವೇಳೆ ಅರ್ಜಿದಾರರ ಪರವಾಗಿ ಹಾಜರಾಗಿದ್ದ ಹಿರಿಯ ವಕೀಲ, ಕಾಂಗ್ರೆಸ್ ನಾಯಕ ಪಿ.ಚಿದಂಬರಂ, ನೋಟುಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಏಕಪಕ್ಷೀಯವಾಗಿ, ಸ್ವಯಂ ಯಾವುದೇ ನಿರ್ಧಾರ ತೆಗೆದುಕೊಳ್ಳುವಂತಿಲ್ಲ. ಆರ್‌ಬಿಐನ ಕೇಂದ್ರೀಯ ಮಂಡಳಿಯ ಶಿಫಾರಸುಗಳ ಅನ್ವಯ ಮಾತ್ರವೇ ಸರ್ಕಾರ ಯಾವುದೇ ನಿರ್ಧಾರ ಕೈಗೊಳ್ಳಬಹುದು. ಹೀಗಾಗಿ 2016ರಲ್ಲಿ ಕೇಂದ್ರ ಸರ್ಕಾರ ಘೋಷಿಸಿದ ಅಪನಗದೀಕರಣ ನೀತಿ ತಪ್ಪು ನಿರ್ಧಾರ ಎಂದು ವಾದಿಸಿದ್ದರು.

ಮತ್ತೊಂದೆಡೆ ತನ್ನ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದ ಕೇಂದ್ರ ಸರ್ಕಾರ, ಈ ಪ್ರಕರಣದಲ್ಲಿ ನ್ಯಾಯಾಲಯದ ಮಧ್ಯಪ್ರವೇಶ ಸರಿಯಲ್ಲ ಎಂದಿತ್ತು. ಜೊತೆಗೆ ಸಮಯವನ್ನು ಹಿಂದಕ್ಕೆ ಸರಿಸುವ, ಒಡೆದ ಮೊಟ್ಟೆಯನ್ನು ಮರುಜೋಡಿಸುವ ಇಂಥ ಯತ್ನಗಳಿಂದ ಯಾರಿಗೂ ಯಾವುದೇ ಪರಿಹಾರ ನೀಡುವುದು ಸಾಧ್ಯವಿಲ್ಲ ಎಂದಿತ್ತು. ಅಲ್ಲದೆ ನಕಲಿ ನೋಟು ತಡೆ, ಭಯೋತ್ಪಾದನೆಗೆ ಹಣ ಪೂರೈಕೆ ಜಾಲಕ್ಕೆ ಕಡಿವಾಣ, ಕಪ್ಪುಹಣ ಮತ್ತು ತೆರಿಗೆ ವಂಚನೆ ತಡೆಯಲು ಅಪನಗದೀಕರಣ ಘೋಷಿಸಲಾಗಿದೆ. ಇದು ಸಾಕಷ್ಟು ಯೋಚಿಸಿ ಕೈಗೊಂಡ ನಿರ್ಧಾರವಾಗಿತ್ತು ಎಂದು ಸ್ಪಷ್ಟಪಡಿಸಿತ್ತು. ನೋಟು ನಿಷೇಧದಿಂದ ನಾಗರೀಕರು ಕೆಲ ಕಾಲ ಸಮಸ್ಯೆಗಳನ್ನು ಎದುರಿಸಿದ್ದರು, ಆದರೆ ದೇಶಕಟ್ಟುವ ಕೆಲಸದಲ್ಲಿ ಇದು ಅನಿವಾರ್ಯ. ಆದರೆ, ಇಂಥ ಸಮಸ್ಯೆಗಳನ್ನು ಬಳಿಕ ಲಭ್ಯ ವ್ಯವಸ್ಥೆಯ ಮೂಲಕ ಪರಿಹರಿಸಲಾಯಿತು ಎಂದು ಭಾರತೀಯ ರಿಸರ್ವ್ ಬ್ಯಾಂಕ್, ನ್ಯಾಯಾಲಯಕ್ಕೆ ಮಾಹಿತಿ ನೀಡಿತು.

## ನಿಷೇಧ ಆದೇಶ ಕಾನೂನುಬಾಹಿರ

ವಿರುದ್ಧವಾಗಿ ಚಲಾಯಿಸಿದ ಅಧಿಕಾರ. ಹೀಗಾಗಿ ಅದು ಕಾನೂನು ಬಾಹಿರ. ಅದನ್ನು ಜಾರಿಗೊಳಿಸಿದ ರೀತಿ ಕಾನೂನಿಗೆ ಅನುಸಾರವಾಗಿಲ್ಲ ಎಂದು ಹೇಳಿದ್ದಾರೆ.

ಆರ್‌ಬಿಐ ಕಾಯಿದೆಯ ಪ್ರಕಾರ, ನೋಟು ನಿಷೇಧ ಶಿಫಾರಸು ಭಾರತೀಯ ರಿಸರ್ವ್ ಬ್ಯಾಂಕ್‌ನ ಮಂಡಳಿಯಿಂದ ಸ್ವತಂತ್ರವಾಗಿ ಬರಬೇಕು ಎನ್ನುವುದು ಅರ್ಜಿದಾರರ ವಾದದ. ಆದರೆ, ಈ ಪ್ರಕರಣದಲ್ಲಿ ಕೇಂದ್ರವು ನವೆಂಬರ್ 7ರಂದು ಆರ್‌ಬಿಐಗೆ ಪತ್ರ ಬರೆದು ಅಂತಹ ಶಿಫಾರಸಿಗೆ ಸಲಹೆ ನೀಡಿತು ಎಂದು ತಿಳಿಸಿದರು.

## ಜ.20ರೊಳಗೆ ಪ್ರಕಟ

ರಾಜ್ಯ ಚುನಾವಣಾ ಸಮಿತಿ ಸಭೆ ಸೇರಿ 100 ಕ್ಷೇತ್ರಗಳಿಗೆ ಒಂದೇ ಹೆಸರನ್ನು ಶಿಫಾರಸ್ಸು ಮಾಡಿ, ಎಐಸಿಸಿಯಿಂದ ಅನುಮೋದನೆ ಪಡೆದು, 18 ಇಲ್ಲವೆ 20 ರಂದು ಬಿಡುಗಡೆ ಮಾಡಲು ರಾಜ್ಯಾಧ್ಯಕ್ಷ ಡಿ.ಕೆ.ಶಿವಕುಮಾರ್ ತೀರ್ಮಾನಿಸಿದ್ದಾರೆ.

ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಲಿಯಲ್ಲಿ ಶೇಕಡ 95 ರಷ್ಟು ಮಂದಿಗೆ ಮತ್ತೆ ಸ್ಪರ್ಧಿಸಲು ಟಿಕೆಟ್ ಸಿಗಲಿದೆ. ಕಳೆದ ಚುನಾವಣೆಯಲ್ಲಿ ಪರಾಜಿತಗೊಂಡವರ ಬಗ್ಗೆ ಸಮೀಕ್ಷಾ ಹಾಗೂ ಜಿಲ್ಲಾ ಉಸ್ತುವಾರಿಗಳು ನೀಡುವ ವರದಿ ಆಧರಿಸಿ, ಅದರಲ್ಲಿ ಕೆಲವರಿಗೆ ಮೊದಲ ಪಟ್ಟಿಯಲ್ಲೇ ಅವಕಾಶ ಮಾಡಿ ಕೊಡಲಾಗುವುದು. ಪಕ್ಷ ಬಿಟ್ಟು ಹೋದ ಶಾಸಕರು ಹಿಂತಿರುಗುತ್ತಾರಾ ಎಂಬ ಪ್ರಶ್ನೆಗೆ ರಾಜಕೀಯದಲ್ಲಿ ಏನು ಬೇಕಾದರೂ ಸಾಧ್ಯವಿದೆ. ಇನ್ನೂ ಯಾರೂ ಅರ್ಜಿ ಕೊಟ್ಟಿಲ್ಲ. ಅರ್ಜಿ ಕೊಟ್ಟ ನಂತರ ನಿಮಗೆ ಮಾಹಿತಿ ನೀಡುತ್ತೇನೆ ಎಂದರು.

ಪಕ್ಷದ ಉನ್ನತ ಮೂಲಗಳ ಪ್ರಕಾರ ಮೊದಲ ಪಟ್ಟಿಯಲ್ಲೇ ಹಾಲಿ ಶಾಸಕರಾದ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ (ಕನಕಪುರ), ಕಾರ್ಯಾಧ್ಯಕ್ಷ ರಾಮಲಿಂಗಾ ರೆಡ್ಡಿ (ಬಿಟಿಎಂ) ಅವರು ಸತತವಾಗಿ ಎಂಟನೇ ಬಾರಿಗೆ ಕಣಕ್ಕಿಳಿಯುತ್ತಿದ್ದಾರೆ.

ಹಳಿಯಾಳದಿಂದ ಮಾಜಿ ಸಚಿವ ಆರ್.ವಿ. ದೇಶಪಾಂಡೆ 9ನೇ ಬಾರಿಗೆ ಚುನಾವಣಾ ಕಣಕ್ಕೆ ಇಳಿಯಲು ಅವಕಾಶ ಪಡೆದುಕೊಳ್ಳುತ್ತಿದ್ದಾರೆ. ಉಳಿದಂತೆ ಡಾ.ಜಿ.ಪರಮೇಶ್ವರ (ಕೊರಟಗೇರೆ), ಡಾ.ಹೆಚ್.ಸಿ.ಮಹದೇವಪ್ಪ (ಟಿ.ನರಸೀಪುರ), ಧೃವನಾರಾಯಣ (ನಂಜನಗೂಡು), ಕೆ.ಎಚ್.ಮುನಿಯಪ್ಪ (ದೇವನಹಳ್ಳಿ), ಸತೀಶ ಜಾರಕಿಹೊಳಿ (ಯಮಕನಮರಡಿ), ಲಕ್ಷ್ಮೀ ಹೆಬ್ಬಾಳ್ಕರ್ (ಬೆಳಗಾವಿ ಗ್ರಾಮಾಂತರ), ಶಿವಾನಂದ ಪಾಟೀಲ್ (ಬಸವನಬಾಗೇವಾಡಿ), ಎಂ.ಬಿ. ಪಾಟೀಲ್ (ಬಬಲೇಶ್ವರ), ಶಾಮನೂರು ಶಿವಶಂಕರಪ್ಪ (ದಾವಣಗೆರೆ ದಕ್ಷಿಣ), ಯಶವಂತರಾಯಗೌಡ (ಇಂಡಿ), ಪ್ರಿಯಾಂಕ ಖರ್ಗೆ (ಚಿತ್ತಾಪುರ), ಖನಿಜಾ ಫಾತಿಮಾ (ಗುಲ್ಬರ್ಗ ಉತ್ತರ), ರಾಜಶೇಖರ ಪಾಟೀಲ್ (ಹುಮ್ನಾಬಾದ್), ಈಶ್ವರ್ ಖಂಡ್ರೆ (ಭಾಲ್ಕಿ), ಅಮರೇಗೌಡ ಬೈಯ್ಯಾಪೂರ (ಕುಷ್ಟಗಿ), ಹೆಚ್.ಕೆ.ಪಾಟೀಲ್ (ಗದಗ), ಪಿ.ಟಿ. ಪರಮಶ್ವರ್‌ನಾಯಕ (ಹಡಗಲಿ), ಭೀಮಾನಾಯಕ (ಹಗರಿಬೊಮ್ಮನಹಳ್ಳಿ), ಜೆ.ಎನ್.ಗಣೇಶ್ (ಕಂಪ್ಲಿ), ಬಿ.ನಾಗೇಂದ್ರ (ಬಳ್ಳಾರಿ), ಇ.ತುಕಾರಾವ್ (ಸಂಡೂರು), ಎಸ್.ರಾಮಪ್ಪ (ಹರಿಹರ), ಬಿ.ಕೆ.ಸಂಗಮೇಶ್ವರ್ (ಭದ್ರಾವತಿ), ಮಧುಬಂಗಾರಪ್ಪ (ಸೊರಬ), ಡಿ.ಟಿ. ರಾಜೇಗೌಡ (ಶೃಂಗೇರಿ), ನಯನಾ ಮೋಟಮ್ಮ (ಮೂಡಗೇರೆ), ಡಾ.ಹೆಚ್.ಡಿ.ರಂಗನಾಥ್ (ಕುಣಿಗಲ್), ಎನ್.ಎಚ್.ಶಿವಶಂಕರ ರೆಡ್ಡಿ (ಗೌರಿಬಿದನೂರು), ಎಸ್.ಎನ್.ಸುಬ್ಬಾರೆಡ್ಡಿ (ಬಾಗೇಪಲ್ಲಿ), ವಿ.ಮುನಿಯಪ್ಪ (ಶಿಡ್ಲಘಟ್ಟ), ಕೆ.ಆರ್.ರಮೇಶ್‌ಕುಮಾರ್ (ಶ್ರೀನಿವಾಸಪುರ), ಕೆ.ವೈ. ನಂಜೇಗೌಡ (ಮಾಲೂರು), ಕೃಷ್ಣಾಬೈರೇಗೌಡ (ಬ್ಯಾಟರಾಯನಪುರ), ಬಿ.ಎಸ್. ಸುರೇಶ್ (ಹೆಬ್ಬಾಳ), ಕೆ.ಜೆ. ಜಾರ್ಜ್ (ಸರ್ವಜ್ಞನಗರ), ದಿನೇಶ್ ಗೂಂಡೂರಾವ್ (ಗಾಂಧೀನಗರ), ಎಂ.ಕೃಷ್ಣಪ್ಪ (ವಿಜಯನಗರ), ಸೌಮ್ಯ ರೆಡ್ಡಿ (ಜಯನಗರ), ಬಿ.ಶಿವಣ್ಣ (ಆನೇಕಲ್), ಶರತ್‌ಕುಮಾರ್ ಬಚ್ಚೇಗೌಡ (ಹೊಸಕೋಟೆ), ಯು.ಟಿ. ಖಾದರ್ (ಮಂಗಳೂರು), ಹೆಚ್.ಪಿ.ಮಂಜುನಾಥ್ (ಹುಣಸೂರು), ತನ್ವೀರ್ ಸೇಠ್ (ನರಸಿಂಹರಾಜ), ಸಿ.ಪುಟ್ಟರಂಗಶೆಟ್ಟಿ (ಚಾಮರಾಜನಗರ), ಚೆಲುವರಾಯಸ್ವಾಮಿ (ನಾಗಮಂಗಲ), ರಮಾನಾಥ ರೈ (ಬಂಟ್ವಾಳ), ಟಿ.ಬಿ.ಜಯಚಂದ್ರ (ಶಿರಾ), ಬಿ.ಆರ್.ಪಾಟೀಲ್ (ಅಳಂದ್), ಎಸ್.ಎಸ್.ಮಲ್ಲಿಕಾರ್ಜುನ್ (ದಾವಣಗೆರೆ), ಅಶೋಕ್ (ರಾಮದುರ್ಗ), ಪುಟ್ಟಣ್ಣಶೆಟ್ಟಿ (ಸಿಂಧನೂರ್), ಪುಷ್ಪಾ ಅಮರನಾಥ್ (ಮಹದೇವಪುರ / ಸಕಲೇಶಪುರ) ಸೇರಿದಂತೆ 100 ಅಭ್ಯರ್ಥಿಗಳ ಮೊದಲ ಪಟ್ಟಿ ಜನವರಿ 18 ಇಲ್ಲವೆ 20 ರಂದು ಬಿಡುಗಡೆಯಾಗಲಿದೆ.

### ಕಬ್ಬು ಬೆಳೆಗಾರರ 39 ದಿನಗಳ ಸತತ ಹೋರಾಟಕ್ಕೆ ಮಣಿದ ಸರ್ಕಾರ

# ಟನ್‌ಗೆ 150 ರೂ. ಹೆಚ್ಚುವರಿ ದರ ನಿಗದಿ ಸ್ವಾಗತಾರ್ಹ

ಮೈಸೂರು, ಜ.2(ಆರ್‌ಕೆಬಿ)– ಕಬ್ಬು ಬೆಳೆಗಾರರ ಸತತ ಹೋರಾಟಕ್ಕೆ ಮಣಿದ ಸರ್ಕಾರ ಟನ್‌ಗೆ 150 ರೂ. ಹೆಚ್ಚುವರಿ ದರ ನಿಗದಿ ಮಾಡಿ ಆದೇಶ ಹೊರಡಿಸಿರುವುದು ರೈತರಿಗೆ ಸ್ವಲ್ಪಮಟ್ಟಿಗೆ ಸಮಾಧಾನ ತಂದಿದೆ. ಕಳೆದ 39 ದಿನಗಳಿಂದ ಕಬ್ಬು ಬೆಳೆಗಾರರು ನಡೆಸುತ್ತಿದ್ದ ಹೋರಾಟಕ್ಕೆ ಸಂದ ಜಯ ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಇಂದಿಲ್ಲಿ ತಿಳಿಸಿದರು.



ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಸಕ್ತ ಸಾಲಿನಲ್ಲಿ ಸಕ್ಕರೆ ಕಾರ್ಖಾನೆಗಳು ಯಾವುದೇ ಮಾನದಂಡವಿಲ್ಲದೆ ಯಾರ ಅನುಮತಿಯೂ ಇಲ್ಲದೆ ಕಬ್ಬು ಕಟಾವು, ಸಾಗಾಣಿಕೆ ವೆಚ್ಚವನ್ನು ಪ್ರತಿ ಬಾರಿಗೆ 250 ರಿಂದ 300 ರೂ. ಏರಿಕೆ ಮಾಡಿರುವ ಹಣದಲ್ಲಿ ಕಾರ್ಖಾನೆಗಳಿಂದ 150 ರೂ. ಕಡಿಮೆ ಮಾಡುವ ಮುಖ್ಯಮಂತ್ರಿಗಳ ಭರವಸೆ ಜಾರಿಯಾದರೆ, ಕಬ್ಬು ಕಟಾವು ಲಗಣಿ ವಸೂಲಿ ತಪ್ಪಿಸುವ ಕ್ರಮ ಕೈಗೊಂಡರೆ, ರೈತರ ಕಬ್ಬು ಉತ್ಪಾದನಾ ವೆಚ್ಚಕ್ಕೆ ತಕ್ಕ ಬೆಲೆ ಸಿಗುವಂತಾಗುತ್ತದೆ. ಈ ಬಗ್ಗೆ ಸಕ್ಕರೆ ಸಚಿವ ಶಂಕರ್ ಪಾಟೀಲ್ 20 ದಿನಗಳ ಒಳಗಾಗಿ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ. ಸರ್ಕಾರದ ಈ ನಿರ್ಧಾರವನ್ನು ಒಂದು ತಿಂಗಳು ಕಾದು ನೋಡುತ್ತೇವೆ, ಸರ್ಕಾರ ನುಡಿದಂತೆ ನಡೆದುಕೊಳ್ಳಬೇಕು ಎಂದು ತಿಳಿಸಿದರು.

ಸರ್ಕಾರದ ಆದೇಶದ ಪ್ರಕಾರ ಸಕ್ಕರೆ ಮುಲಾಸಿಸ್ ಕಬ್ಬಿನ ಸಿಪ್ಪೆ ಉತ್ಪನ್ನಗಳ ಆದಾಯ ಬರುವ ಕಾರ್ಖಾನೆಗಳು ಎಫ್‌ಆರ್‌ಪಿ ದರ 3050ಕ್ಕೆ ಹೆಚ್ಚುವರಿಯಾಗಿ ಟನ್‌ಗೆ 100 ರೂ. ಎಥೆನಾಲ್ ಉತ್ಪಾದನೆ ಮಾಡುವ ಕಾರ್ಖಾನೆಗಳು ಟನ್‌ಗೆ 150 ರೂ. ನೀಡಬೇಕು. ಪ್ರಸಕ್ತ ಸಾಲಿನಲ್ಲಿ ಕಬ್ಬು ಸರಬರಾಜು ಮಾಡಿರುವ, ಮುಂದೆ ಸರಬರಾಜು ಮಾಡುವ ರೈತರಿಗೆ ಹೆಚ್ಚುವರಿ ಹಣ ನೀಡಬೇಕು. 2022–23ರ ಸಾಲಿನಲ್ಲಿ ಸಕ್ಕರೆ ಕಾರ್ಖಾನೆಗಳು 7 ಕೋಟಿಗೂ ಹೆಚ್ಚು ಟನ್ ಕಬ್ಬು ನುರಿಸುವ ಸಾಧ್ಯತೆ ಇರುವ ಕಾರಣ ರಾಜ್ಯದ ಕಬ್ಬು ಬೆಳೆಗಾರರಿಗೆ 950 ಕೋಟಿ ಹಣ ಹೆಚ್ಚುವರಿಯಾಗಿ ಸಿಗುತ್ತದೆ. ರಾಜ್ಯದ ಕಬ್ಬು ಬೆಳೆಗಾರರ ಸತತ ಹೋರಾಟಕ್ಕೆ ಸರ್ಕಾರ ಮಣಿದಿದೆ. ಸ್ವಾಭಿಮಾನಿ ರೈತ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ. ಹೀಗಾಗಿ ಬೆಂಗಳೂರಿನಲ್ಲಿ 39 ದಿನಗಳಿಂದ ನಡೆಸುತ್ತಿದ್ದ ಹೋರಾಟವನ್ನು ಕೈಬಿಟ್ಟಿರುವುದಾಗಿ ಅವರು ತಿಳಿಸಿದರು.

ಕೃಷಿ ಸಾಲ ನೀಡುವಾಗ ಬ್ಯಾಂಕ್‌ಗಳು ಸಿಬಿಲ್ ಸ್ಕೋರ್ ಮಾನದಂಡ ಅಳವಡಿಸಬಾರದು. ಈ ಬಗ್ಗೆ ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿ ಸಭೆ ಜನವರಿಯಲ್ಲಿ ನಿರ್ಧಾರ ಕೈಗೊಳ್ಳುವ ಭರವಸೆಯನ್ನು ಆರ್‌ಬಿಐ ಮುಖ್ಯ ವ್ಯವಸ್ಥಾಪಕರು ಹಾಗೂ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ನೀಡಿದ್ದಾರೆ. ಸದ್ಯದಲ್ಲಿಯೇ ಸಂಘಟನೆಯ ರಾಜ್ಯ ಪದಾಧಿಕಾರಿಗಳು ಮುಖ್ಯಮಂತ್ರಿಗಳು ಮತ್ತು ಸಕ್ಕರೆ ಸಚಿವರನ್ನು ಭೇಟಿ ಮಾಡಿ ಇತರೆ ಉಳಿದ ಸಮಸ್ಯೆಗಳ ಬಗ್ಗೆ ತುರ್ತು ಕ್ರಮ ಕೈಗೊಳ್ಳಲು ಒತ್ತಾಯಿಸಲಾಗುವುದು ಎಂದರು.

ಕೇಂದ್ರ ಸರ್ಕಾರ ಎಫ್‌ಆರ್‌ಪಿ ದರ ನಿಗದಿ ಮಾಡುವಾಗ ಏರಿಕೆ ಮಾಡಿರುವ ಸಕ್ಕರೆ ಇಳುವರಿ ದರವನ್ನು ಇಳಿಕೆ ಮಾಡಲು ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಕೇಂದ್ರ ಕೃಷಿ ಸಚಿವ ನರೇಂದ್ರ ಸಿಂಗ್ ತೋಮರ್ ಇತ್ತೀಚೆಗೆ ದೆಹಲಿಯಲ್ಲಿ ಸಂಸದರು ಹಾಗೂ ರೈತ ಮುಖಂಡರ ನಿಯೋಗಕ್ಕೆ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ನಂದಿನಿ ಹಾಲು ಮಾರಾಟ ಮಹಾಮಂಡಲದ ಜೊತೆ ಗುಜರಾತಿನ ಅಮುಲ್ ಡೈರಿ ವಿಲೀನ ಬೇಡ ಎಂದು ಆಗ್ರಹಿಸಿದ ಕುರುಬೂರು ಶಾಂತಕುಮಾರ್, ಇದರಲ್ಲಿ ಖಾಸಗೀಕರಣದ ಲಾಬಿ ಕಾರ್ಯ ನಿರ್ವಹಿಸುತ್ತಿದೆ. ಇದರಿಂದ ರಾಜ್ಯದ 36 ಲಕ್ಷ ಹಾಲು ಉತ್ಪಾದಕರು ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಮುಂದೆ ರೈತರಿಗೆ ಮಾರಕವಾಗಲಿರುವ ಇದರ ವಿರುದ್ಧ ರೈತರು ನಂದಿನಿ ಹಾಲು ಉತ್ಪಾದಕರ ಜೊತೆಗೂಡಿ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಕಬ್ಬು ಬೆಳೆಗಾರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಜಿಲ್ಲಾ ಉಪಾಧ್ಯಕ್ಷ ಕೆರೆಹುಂಡಿ ರಾಜಣ್ಣ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ಮೈಸೂರು ತಾಲೂಕು ಅಧ್ಯಕ್ಷ ಲಕ್ಷ್ಮೀಪುರ ವೆಂಕಟೇಶ್ ಉಪಸ್ಥಿತರಿದ್ದರು.

## ಒಕ್ಕಲಿಗ ಸಂಘದಿಂದಲೇ ಸಮುದಾಯ ಸೇವೆಗೆ ಆಗ್ರಹ

### ಬಡ ವಿದ್ಯಾರ್ಥಿಗಳಿಗೆ ಹಾಸ್ಟೆಲ್, ನಗರಕ್ಕೆ ಬರುವ ರೈತಾಪಿ ವರ್ಗಕ್ಕೆ ತಂಗುವ ವ್ಯವಸ್ಥೆ ಮಾಡಲು ಒಕ್ಕಲಿಗ ಹಿತಚಿಂತಕ ಮೋಹನ್ ಕುಮಾರ್‌ಗೌಡ ಸಲಹೆ



ಮೈಸೂರು,ಜ.2(ಎಂಟಿವೈ)– ಒಕ್ಕಲಿಗ ಸಮುದಾಯದ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರದ ಮೇಲೆ ಒತ್ತಡ ಹೇರುವುದರೊಂದಿಗೆ ರಾಜ್ಯ ಒಕ್ಕಲಿಗರ ಸಂಘದ ವತಿಯಿಂದಲೇ ಕೆಲವು ಕಾರ್ಯಕ್ರಮ ರೂಪಿಸಿ, ಸಮುದಾಯದ ಜನರ ಏಳಿಗೆಗೆ ಮುಂದಾಗಬೇಕು ಎಂದು ಒಕ್ಕಲಿಗ ಹಿತ ಚಿಂತಕರು ವೇದಿಕೆಯ ಮುಖ್ಯಸ್ಥ ಎಂ. ಮೋಹನ್‌ಕುಮಾರ್‌ಗೌಡ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಕ್ಕಲಿಗ ಸಮುದಾಯದ ಏಳಿಗೆಗೆ ಸರ್ಕಾರ ಇನ್ನಷ್ಟು ಕಾರ್ಯಕ್ರಮ ರೂಪಿಸಬೇಕು. ಅದಕ್ಕಾಗಿ ಸಮುದಾಯ ಹಿರಿಯ ಮುಖಂಡರು ಒತ್ತಡ ಹೇರಬೇಕು. ರಾಜ್ಯ ಒಕ್ಕಲಿಗರ ಸಂಘವೂ ಸಮುದಾಯದ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮ ರೂಪಿಸಬೇಕು. ಸಮುದಾಯದ ಮಕ್ಕಳು ಭವಿಷ್ಯದಲ್ಲಿ ಉತ್ತಮ ಸ್ಥಾನ ಅಲಂಕರಿ ಸುವ ನಿಟ್ಟಿನಲ್ಲಿ ಸಂಘ ಈಗಿನಿಂದಲೇ ಮಾರ್ಗದರ್ಶನ ನೀಡುವುದರೊಂದಿಗೆ ಕಾರ್ಯಕ್ರಮ ರೂಪಿಸಬೇಕು ಎಂದು ಮನವಿ ಮಾಡಿದರು.

ಮೈಸೂರು ನಗರ ಶೈಕ್ಷಣಿಕ ಕೇಂದ್ರವಾಗಿದ್ದು, ವಿದ್ಯಾಭ್ಯಾಸಕ್ಕಾಗಿ ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಸೇರಿದಂತೆ ಬೇರೆ ಬೇರೆ ಜಿಲ್ಲೆಗಳಿಂದ ಮೈಸೂರಿಗೆ ವಿದ್ಯಾರ್ಥಿಗಳು ಆಗಮಿಸುತ್ತಾರೆ. ಆದರೆ ಇವರಿಗೆ ಹಾಸ್ಟೆಲ್ ಸೌಲಭ್ಯವಿಲ್ಲ. ಒಕ್ಕಲಿಗ ಸಮುದಾಯದ ವಿದ್ಯಾರ್ಥಿಗಳಿಗಾಗಿ ಹಾಸ್ಟೆಲ್ ಸೌಲಭ್ಯ ಕಲ್ಪಿಸುವ ಅಗತ್ಯವಿದೆ. ಒಕ್ಕಲಿಗರ ಸಂಘದ ವತಿಯಿಂದ ಮೈಸೂರಲ್ಲಿ 500 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸುವ ಹಾಸ್ಟೆಲ್ ನಿರ್ಮಾಣ ಮಾಡಬೇಕು. ಇದರಿಂದ ಪಿಜಿ ಸೇರಿದಂತೆ ಖಾಸಗಿ ಸಂಸ್ಥೆಗಳಲ್ಲಿರುವ ಸಮುದಾಯದ ವಿದ್ಯಾರ್ಥಿಗಳು ಹಾದಿ ತಪ್ಪದಂತೆ ಕಟ್ಟೆಚ್ಚರ ವಹಿಸಬಹುದಾಗಿದೆ. ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳ ಮನೋವಿಕಾಸಕ್ಕೆ ಪೂರಕವಾದ ಕಾರ್ಯಕ್ರಮ ನಡೆಸುವುದರಿಂದ ವಿದ್ಯಾರ್ಥಿಗಳನ್ನು ಸರಿದಾರಿಯತ್ತ ಕೊಂಡೊಯ್ಯಬಹುದಾಗಿದೆ ಎಂದು ಅಭಿಪ್ರಾಯಪಟ್ಟರು.

ಸಮುದಾಯದ ಅಭ್ಯರ್ಥಿಗಳು ಐಎಎಸ್, ಕೆಎಎಸ್ ಸೇರಿದಂತೆ ಇನ್ನಿತರ ಸ್ಪರ್ಧಾತ್ಮಕ ಪರೀಕ್ಷೆಗೆ ಸಜ್ಜುಗೊಳಿಸಲು ತರಬೇತಿ ಕೇಂದ್ರದ ಅವಶ್ಯಕತೆ ಇದೆ. ಉನ್ನತ ವ್ಯಾಸಂಗ ಮಾಡಲು ಅನುಕೂಲವಾಗುವಂತೆ ಸುಸಜ್ಜಿತ ಗ್ರಂಥಾಲಯವನ್ನು ತೆರೆಯಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮೈಸೂರಿಗೆ ಪ್ರತಿದಿನ ಹಣ್ಣು ತರಕಾರಿ ಮಾರಾಟ ಮಾಡಲು ವಿವಿಧೆಡೆಯಿಂದ ರೈತರು ಬರುತ್ತಾರೆ. ರಾತ್ರಿಯಿಡೀ ರಸ್ತೆ ಬದಿಯಲ್ಲಿ ಇರುತ್ತಾರೆ. ಒಕ್ಕಲುತನ ಮಾಡುವ ರೈತರು ಗೌರವಯುತವಾಗಿ ಬದುಕಲು ಮೈಸೂರಿನಲ್ಲಿರುವ ಒಕ್ಕಲಿಗ ಸಮುದಾಯದವರು ರಾತ್ರಿ ರೈತರು ವಾಸ್ತವ್ಯ ಹೂಡಲು ವ್ಯವಸ್ಥೆ ಮಾಡಿಕೊಟ್ಟರೆ, ಅವರು ಗೌರವಯುತವಾಗಿ ಬದುಕಲು ಸಾಧ್ಯವಾಗುತ್ತದೆ. ಆರ್ಥಿಕವಾಗಿ ಸದೃಢವಾಗಿರುವ ಒಕ್ಕಲಿಗರು ಸಮುದಾಯದ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ನೆರವು ನೀಡಬೇಕು. ತೊಂದರೆಯಲ್ಲಿರುವ ಸಮುದಾಯದ ವಿದ್ಯಾರ್ಥಿಗಳನ್ನು ಒಕ್ಕಲಿಗರ ಸಂಘ ಗುರುತಿಸಿ ನೆರವು ನೀಡಬೇಕು ಎಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಶಂಕರ್, ಟಿ. ರವಿಗೌಡ, ಜೆ. ಉಮೇಶ್, ಆರ್. ರವೀಂದ್ರ ಇದ್ದರು.

## ಚೆಕ್ ಬೌನ್ಸ್ ಪ್ರಕರಣ: ಉಪನ್ಯಾಸಕನಿಗೆ 13 ಲಕ್ಷ ದಂಡ

ಮೈಸೂರು, ಜ.2– ಮೂರು ಚೆಕ್ ಬೌನ್ಸ್ ಪ್ರಕರಣದಲ್ಲಿ ಮೈಸೂರಿನ ಕುವೆಂಪುನಗರ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಉಪನ್ಯಾಸಕರಾಗಿದ್ದ ಕುಪ್ಪಳ್ಳಿ ರಿಶ್ವನಾಥ್ ಅವರಿಗೆ ಮೈಸೂರಿನ ಐದನೇ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀಮತಿ ಧನವತಿ ಅವರು ಒಟ್ಟು 13 ಲಕ್ಷ ರೂ. ದಂಡ ವಿಧಿಸಿ, ತೀರ್ಪು ನೀಡಿದ್ದಾರೆ.

ವಿವರ: ಕುಪ್ಪಳ್ಳಿ ರಿಶ್ವನಾಥ್ ಅವರು ಮೈಸೂರಿನ ವಿಜಯನಗರ 2ನೇ ಹಂತದ ನಿವಾಸಿ ಆರ್.ಕೆ.ನಾಗರತ್ನ ಎಂಬುವರಿಗೆ 2007ರ ಡಿಸೆಂಬರ್‌ನಲ್ಲಿ ನಂಜನಗೂಡು ತಾಲೂಕು ಸಿಂಧುವಳ್ಳಿ ಗ್ರಾಮದ ಸರ್ವೆ ನಂ.64ರಲ್ಲಿರುವ 2.28 ಗುಂಟೆ ಜಮೀನಿನಲ್ಲಿ ಸರ್ಕಾರದ ಅನುಮತಿ ಪಡೆದು ವಸತಿ ಬಡಾವಣೆ ನಿರ್ಮಿಸಿ 50x80 ವಿಸ್ತೀರ್ಣದ ನಿವೇಶನವನ್ನು 11 ಲಕ್ಷ ರೂ.ಗಳಿಗೆ ನೀಡುವುದಾಗಿ ತಿಳಿಸಿ 10ಲಕ್ಷ ರೂ. ಪಡೆದಿದ್ದರು.

ಅವರು ಹೇಳಿದಂತೆ ವಸತಿ ಬಡಾವಣೆ ನಿರ್ಮಿಸಲು ಅಸಾಧ್ಯವಾಗಿದ್ದರಿಂದ ನಾಗರತ್ನ ನೀಡಿದ್ದ 10 ಲಕ್ಷ ರೂ.ಗಳಿಗೆ ವಾರ್ಷಿಕ ಶೇ.12ರಷ್ಟು ಬಡ್ಡಿಯೊಂದಿಗೆ ಹಣ ಹಿಂತಿರುಗಿಸಲು ಒಟ್ಟು 3 ಚೆಕ್‌ಗಳನ್ನು ನೀಡಿದ್ದರು. ಈ ಚೆಕ್‌ಗಳು ಬೌನ್ಸ್ ಆಗಿದ್ದರಿಂದ ರಿಶ್ವನಾಥ್ ವಿರುದ್ಧ ನಾಗರತ್ನ ಅವರು ನ್ಯಾಯಾಲಯದಲ್ಲಿ ಮೂರು ಪ್ರಕರಣಗಳನ್ನು ದಾಖಲಿಸಿದ್ದರು. ವಿಚಾರಣೆ ನಡೆಸಿದ್ದ ನ್ಯಾಯಾಧೀಶರು ಒಂದು ಪ್ರಕರಣದಲ್ಲಿ 2.60 ಲಕ್ಷ ರೂ. ಹಾಗೂ ಇನ್ನೆರಡು ಪ್ರಕರಣಗಳಲ್ಲಿ ತಲಾ 5.20 ಲಕ್ಷ ರೂ. ಸೇರಿ ಒಟ್ಟು 13 ಲಕ್ಷ ರೂ. ದಂಡ ವಿಧಿಸಿದ್ದು, ಈ ದಂಡದ ಮೊತ್ತದಲ್ಲಿ ನಾಗರತ್ನ ಅವರಿಗೆ ಒಟ್ಟು 12.85 ಲಕ್ಷ ರೂ. ಹಾಗೂ ಉಳಿದ 15 ಲಕ್ಷ ರೂ.ಗಳನ್ನು ನ್ಯಾಯಾಲಯದ ವೆಚ್ಚದ ಬಾಬ್ತು ಸರ್ಕಾರಕ್ಕೆ ಪಾವತಿಸಬೇಕೆಂದು ತೀರ್ಪು ನೀಡಿದ್ದರು.

ಈ ದಂಡದ ಮೊತ್ತವನ್ನು 3 ತಿಂಗಳೊಳಗಾಗಿ ಪಾವತಿಸದಿದ್ದರೆ ರಿಶ್ವನಾಥ್ ಅವರು 6 ತಿಂಗಳು ಸಾದಾ ಸೆರೆ ವಾಸ ಅನುಭವಿಸಬೇಕಾಗುತ್ತದೆ ಎಂದು ನ್ಯಾಯಾಧೀಶರು ತಮ್ಮ ತೀರ್ಪಿನಲ್ಲಿ ತಿಳಿಸಿದ್ದಾರೆ. ನಾಗರತ್ನ ಪರ ವಕೀಲ ಕೆ.ಈಶ್ವರ ಭಟ್ ವಾದ ಮಂಡಿಸಿದ್ದರು.

## ಜೆಎಸ್‌ಎಸ್ ಶಾಲೆಯಲ್ಲಿ ಸಂಸ್ಕೃತಿ ಪರಂಪರೆಯ ಕಲೋತ್ಸವ



ಮೈಸೂರು, ಜ. 2– ಮೈಸೂರು ಜೆಎಸ್‌ಎಸ್ ಪಬ್ಲಿಕ್ ಶಾಲೆ ಮತ್ತು ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಚಯದ ಆಶ್ರಯದಲ್ಲಿ ಮೈಸೂರಿನ ಕಲಾಮಂದಿರದಲ್ಲಿ. 19ನೇ ವರ್ಷದ ಶಾಲಾ ವಾರ್ಷಿಕೋತ್ಸವ 'ಕಲೋತ್ಸವ' ಶೀರ್ಷಿಕೆಯಡಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಮೈಸೂರಿನ ಉಪ ಪೊಲೀಸ್ ಆಯುಕ್ತರಾದ ಶ್ರೀಮತಿ ಎಂ ಎಸ್ ಗೀತಾ ಮಾತನಾಡಿ, ಶಿಕ್ಷಣದೊಂದಿಗೆ ಶಿಸ್ತನ್ನು ರೂಢಿಸಿಕೊಂಡಾಗ ಜೀವನದಲ್ಲಿ ಉನ್ನತವಾದ ಸಾಧನೆಗೈಯ್ಯಬಹುದು. ಇದಕ್ಕಾಗಿ ವಿದ್ಯಾರ್ಥಿ ದೆಸೆಯಿಂದಲೇ ಪರಿಶ್ರಮ ಛಲ ನಿಷ್ಠೆ ಆಸಕ್ತಿಯನ್ನು ಮೈಗೂಡಿಸಿಕೊಳ್ಳಬೇಕು ಎಂದರು. ಜೆಎಸ್‌ಎಸ್ ಮಹಾ ವಿದ್ಯಾಪೀಠದ ಶಾಲಾ ಶಿಕ್ಷಣ ವಿಭಾಗದ ನಿರ್ದೇಶಕ ಬಿ.ಎ.ರಾಜಶೇಖರ್ ಮಾತನಾಡಿ, ಶಿಕ್ಷಣದಿಂದ ಸಂಸ್ಕೃತಿ ನಾಗರಿಕತೆಯು ಪರಿಪಕ್ವಗೊಂಡು ಉತ್ತಮ ಬಾಳ್ವೆಗೆ ಪೂರಕವಾಗುವುದು. ವಿದ್ಯಾರ್ಥಿಗಳು ಉತ್ತಮ ಪ್ರಜೆಗಳಾಗಲು ಪೋಷಕರು ಶಿಕ್ಷಕರೊಟ್ಟಿಗೆ ಕೈಜೋಡಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಶಾಲೆಯ ಪ್ರಭಾರ ಪ್ರಾಂಶುಪಾಲ ಗುರುಪ್ರಸಾದ್ ಉಪಸ್ಥಿತರಿದ್ದು ಶಾಲಾ ವಾರ್ಷಿಕ ವರದಿಯನ್ನು ಸಭೆಯಲ್ಲಿ ಮಂಡಿಸಿದರು. ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ವಿಜೇತರಾದ ಹಾಗೂ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರಗಳನ್ನು ಹಾಗೂ ಪಾರಿತೋಷಕಗಳನ್ನು ನೀಡಿ ಅಭಿನಂದಿಸಲಾಯಿತು. ಸಭಾ ಕಾರ್ಯಕ್ರಮದ ನಂತರ ಕನ್ನಡ ನಾಡಿನ ಹಿರಿಮೆ ಗರಿಮೆ ಜನಪದ ಕಲೆ ಸಂಸ್ಕೃತಿಯನ್ನು ಬಿಂಬಿಸುವ ಹಾಗೂ ಭಾರತೀಯತೆಯಲ್ಲಿ ಐಕ್ಯತೆಯ ಮಂತ್ರವನ್ನು ಸಾರುವ ಹತ್ತಾರು ಗೀತೆಗಳಿಗೆ ವಿದ್ಯಾರ್ಥಿಗಳಿಂದ ನೃತ್ಯದ ಮೂಲಕ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

### ಕೂಲಿ ಹೆಚ್ಚಳವೂ ಸೇರಿದಂತೆ ವಿವಿಧ ಬೇಡಿಕೆ ಈಡೇರಿಸಲು ಆಗ್ರಹಿಸಿ ಪಡಿತರ ಧಾನ್ಯ ಎತ್ತುವಳಿ ಬಂದ್

## ಲೋಡಿಂಗ್, ಅನ್‌ಲೋಡಿಂಗ್ ಕಾರ್ಮಿಕರ ಪ್ರತಿಭಟನೆ




ಮೈಸೂರು,ಜ.2(ಎಂಟಿವೈ)– ಅನ್ನಭಾಗ್ಯ ಯೋಜನೆಯ ಆಹಾರ ಧಾನ್ಯ ಲೋಡಿಂಗ್, ಅನ್‌ಲೋಡಿಂಗ್ ಮಾಡುವವರ ಕೂಲಿ ಹೆಚ್ಚಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಲೋಡಿಂಗ್ ಮತ್ತು ಅನ್‌ಲೋಡಿಂಗ್ ಕಾರ್ಮಿಕರ ಒಕ್ಕೂಟದಿಂದ ಪಡಿತರ ಧಾನ್ಯಗಳ ಎತ್ತುವಳಿ ಕೆಲಸ ಬಂದ್ ಮಾಡಿ ಪ್ರತಿಭಟಿಸಲಾಯಿತು.

ಮೈಸೂರಿನ ಬನ್ನಿಮಂಟಪದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಲೋಡರ್ಸ್‌ಗಳು ಪ್ರತಿಭಟನೆ ಮಾಡಿ, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಲೋಡಿಂಗ್, ಅನ್‌ಲೋಡಿಂಗ್ ಕೂಲಿ ನಿಗದಿ ಮಾಡಿ ಐದು ವರ್ಷ ಕಳೆದಿವೆ. ಆದರೆ, ಈ ಬಳಿಕ ಅಡುಗೆ ಅನಿಲ, ಇನ್ನಿತರ ಅಗತ್ಯ ವಸ್ತುಗಳ ದರ ಏರಿದೆ. ಆದರೂ ಸರ್ಕಾರ ಕೂಲಿ ಹೆಚ್ಚಳ ಮಾಡಿಲ್ಲ. ಕಳೆದ 5 ವರ್ಷಗಳಿಂದ ಹೋರಾಟ ಮಾಡುತ್ತಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗುತ್ತಿಗೆದಾರರು ಗುತ್ತಿಗೆ ಕಾರ್ಮಿಕ ಕಾಯ್ದೆಗಳನ್ನು ಸಮರ್ಪಕವಾಗಿ ಜಾರಿ ಮಾಡುತ್ತಿಲ್ಲ. 2018ರಲ್ಲಿ ಕ್ವಿಂಟಾಲ್‌ಗೆ 16 ರೂ. ನಿಗದಿ ಮಾಡಲಾಗಿತ್ತು. ಆ ನಂತರ ಕೂಲಿ ಹೆಚ್ಚಳ ಮಾಡಿಲ್ಲ. ಹಲವಾರು ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಹಮಾಲಿ ಕಾರ್ಮಿಕರಿಗೆ ಗ್ರಾಮಾಂತರ ಸಾಗಾಣಿಕೆ ಟೆಂಡರ್‌ನಲ್ಲಿ ನಮೂದಿಸಿರುವ ನಿಯಮಾವಳಿಗಳನ್ನು ಪಾಲಿಸಿದ ಕಾರಣ ಹಮಾಲಿ ಕಾರ್ಮಿಕರನ್ನು ಶೋಷಣೆ ಮಾಡಲಾಗುತ್ತಿದೆ. ಕೂಲಿ ದುಡ್ಡಕ್ಕೆ ಅನುಗುಣವಾಗಿ ವೇತನ ನೀಡುತ್ತಿಲ್ಲ. ಇಎಸ್‌ಐ ಮತ್ತು ಪಿಎಫ್ ಪಾವತಿಸುತ್ತಿಲ್ಲ. ಹೀಗಾಗಿ ಕೂಡಲೇ ಸರ್ಕಾರದ ಕೂಲಿ ಹೆಚ್ಚಳ ಮಾಡಬೇಕು. ನಮ್ಮ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಒಕ್ಕೂಟದ ಜಿಲ್ಲಾಧ್ಯಕ್ಷ ಕರಿನಾಯಕ, ನರಸಿಂಹಮೂರ್ತಿ, ಗೋವಿಂದರಾಜು, ಚೆಲುವರಾಜು, ಮಹದೇವ್, ಎನ್.ಸಿ. ಕುಮಾರ್ ಸೇರಿದಂತೆ ಹಲವು ಪಾಲ್ಗೊಂಡಿದ್ದರು.

## ದೇವಾಂಗ ಸಮುದಾಯ '2ಎ' ಪ್ರವರ್ಗದಡಿ ನಾನಾ ಸವಲತ್ತು ಪಡೆದುಕೊಳ್ಳಲು ಸಲಹೆ



ಮೈಸೂರು,ಜ.2(ಎಂಟಿವೈ)– ಪ್ರವರ್ಗ 2'ಎ'ನಲ್ಲಿ ದೇವಾಂಗ ಸಮುದಾಯಕ್ಕೆ ಸರ್ಕಾರದಿಂದ ದೊರೆಯುವ ಸವಲತ್ತುಗಳ ಬಗ್ಗೆ ಮಾಹಿತಿ ಪಡೆದು, ಸದುಪಯೋಗ ಪಡೆದುಕೊಳ್ಳುವಂತೆ ಮೈಸೂರು ಜಿಲ್ಲಾ ದೇವಾಂಗ ಕುಟುಂಬ ಸಂಘದ ಮುಖ್ಯ ಸಂಘಟಕ ಎನ್.ಆರ್.ಜಗದೀಶ್ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇವಾಂಗ ಸಮುದಾಯ ಪ್ರವರ್ಗ 2'ಎ'ಗೆ ಸೇರುತ್ತದೆ. ಆದರೆ ಸಮುದಾಯದ ಅನೇಕರಿಗೆ ಸರ್ಕಾರದಿಂದ ದೊರೆಯುವ ಸೌಲಭ್ಯದ ಬಗ್ಗೆ ಅರಿವು ಇಲ್ಲದೆ ಸುಮ್ಮನಿದ್ದಾರೆ. ಈ ಹಿನ್ನೆಲೆಯಲ್ಲಿ ನಮ್ಮ ಸಂಘಟನೆಯಿಂದ ಕರಪತ್ರ ಪ್ರಕಟಿಸಿ, ಸಾಮಾಜಿಕ ಜಾಲತಾಣದ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ. ಸಮುದಾಯದ ಜನರನ್ನು ಸಂಘಟಿಸಲು ಕ್ರಮ ಕೈಗೊಳ್ಳಲಾಗಿದೆ. ಸಂಘದ ವತಿಯಿಂದ ನೂತನ ವರ್ಷದ ಕ್ಯಾಲೆಂಡರ್ ಹೊರತಂದಿದ್ದು, ದೇವಾಂಗ ಸಮುದಾಯ ಮೈಸೂರಿನ ಜಯನಗರದಲ್ಲಿರುವ ಸಂಸ್ಥೆಯ ಕಚೇರಿಯಲ್ಲಿ ಕ್ಯಾಲೆಂಡರ್ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ.9844058155 ಅನ್ನು ಸಂಪರ್ಕಿಸುವಂತೆ ಕೋರಿದರು. ಸುದ್ದಿಗೋಷ್ಠಿಯಲ್ಲಿ ಮೈಸೂರು ಜಿಲ್ಲಾ ದೇವಾಂಗ ಕುಟುಂಬದ ಪದಾಧಿಕಾರಿಗಳಾದ ಬಾಲರಾಜು, ಎನ್.ಎಲ್. ರತ್ನಾಕರ್, ಎಸ್. ಕೃಷ್ಣಶೆಟ್ಟಿ, ಗಿರೀಶ್‌ಕುಮಾರ್, ಎನ್.ಆರ್. ಭಾಸ್ಕರ್, ಎಂ.ಎಸ್. ಮಂಜುನಾಥ್ ಇದ್ದರು.



## ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಲ್ಲಿ ಇಂಜಿನಿಯರಿಂಗ್ ಶಿಕ್ಷಣ ಕುರಿತು ನಾಳೆಯಿಂದ ಅಂತರರಾಷ್ಟ್ರೀಯ ಸಮ್ಮೇಳನ

ಮೈಸೂರು,ಜ.2(ಎಂಟಿವೈ)– ಮೈಸೂರಿನ ಗೋಕುಲಂನಲ್ಲಿರುವ ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜಿನಲ್ಲಿ ಜ.4ರಿಂದ 8ರವರೆಗೆ ಸುಸ್ಥಿರ ಅಭಿವೃದ್ಧಿಗಾಗಿ ಎಂಜಿನಿಯರಿಂಗ್ ಶಿಕ್ಷಣದಲ್ಲಿ ಪರಿವರ್ತನೆಗಳು ವಿಷಯ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ ಆಯೋಜಿಸಲಾಗಿದೆ ಎಂದು ಕಾಲೇಜಿನ ಪ್ರಾಂಶುಪಾಲ ಡಾ. ಸದಾಶಿವೇಗೌಡ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹವಾಮಾನ ವೈಪರೀತ್ಯ ಅಧ್ಯಯನ, ಪರಿಹಾರೋಪಾಯ ಕುರಿತಂತೆ ಎಂಜಿನಿಯರಿಂಗ್ ವಿದ್ಯಾರ್ಥಿಗಳು ಸುಸ್ಥಿರ ಅಭಿವೃದ್ಧಿಗೆ ಹೇಗೆ ಕೊಡುಗೆ ನೀಡಬಹುದು. ವಿದ್ಯಾರ್ಥಿ ಕೇಂದ್ರೀಕೃತವಾದಂತೆ ಎಂಜಿನಿಯರಿಂಗ್ ವಿಷಯದ ಪಾಠ ಹೇಗೆ ಮಾಡಬಹುದು. ಅವು ವಿದ್ಯಾರ್ಥಿಗಳನ್ನು ಹೇಗೆ ತಲುಪುತ್ತಿವೆ ಎಂಬ ವಿಷಯ ಸೇರಿದಂತೆ ಇನ್ನಿತರ ಮಹತ್ತರ ವಿಷಯಗಳ ಬಗ್ಗೆ ಅಂತಾರಾಷ್ಟ್ರೀಯ ತಜ್ಞರು ವಿಷಯ ಮಂಡಿಸಲಿದ್ದಾರೆ ಎಂದರು.



ಸಮ್ಮೇಳನ ಜ.4ರಂದು ಬೆಳಗ್ಗೆ 10ಕ್ಕೆ ಆರಂಭವಾಗಲಿದ್ದು, ಕಾರ್ಯಕ್ರಮದಲ್ಲಿ ಇನ್‌ಸ್ಟಿಟ್ಯೂಟ್ ಆಫ್ ಟೌನ್ ಪ್ಲಾನರ್ಸ್ ಅಸೋಸಿಯೇಟ್ ಸದಸ್ಯ ಬರ್ಗಿಸ್ ಡ್ರೈವರ್, ರಾಷ್ಟ್ರೀಯ ಯುವ ಪ್ರಚಾರಕಿ ಸ್ನೇಹಾ ಶಾಹಿ ಹಾಗೂ ಇನ್ನಿತರರು ಪಾಲ್ಗೊಳ್ಳಲಿದ್ದಾರೆ. ಜ.5ರಂದು ಬೆಳಗ್ಗೆ 7.30ಕ್ಕೆ 'ಸುಸ್ಥಿತ ಗ್ರಹ ಕಲ್ಪನೆ ಮತ್ತು ಮಾದರಿ ಅಭಿವೃದ್ಧಿಗಾಗಿ' ವಾಕಥಾನ್ ಆಯೋಜಿಸಲಾಗಿದೆ. ಕಾಲೇಜು ಆವರಣದಿಂದ ಆರಂಭವಾಗುವ ವಾಕಥಾನ್ ವಿವಿಧ ರಸ್ತೆಗಳಲ್ಲಿ ಸಂಚರಿಸಲಿದೆ ಎಂದು ತಿಳಿಸಿದರು.

ಜ.6ರಂದು ಬೆಳಗ್ಗೆ 11ಕ್ಕೆ ಸಮ್ಮೇಳನದ ಮುಖ್ಯ ಕಾರ್ಯಕ್ರಮವನ್ನು ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್.ಅಶ್ವಥ್‌ನಾರಾಯಣ್ ಉದ್ಘಾಟಿಸಲಿದ್ದಾರೆ. ಕರ್ನಾಟಕ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಕುಲಪತಿ ಡಾ.ವಿದ್ಯಾಶಂಕರ್, ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಕಾರ್ಯದರ್ಶಿ ಪಿ.ವಿಶ್ವನಾಥ್ ಸೇರಿದಂತೆ ಇನ್ನಿತರರು ಪಾಲ್ಗೊಳ್ಳಲಿದ್ದಾರೆ. ಜ.7ರಂದು ವಿವಿಧೆಡೆಯಿಂದ ಆಗಮಿಸುವ ಸಂಪನ್ಮೂಲ ವ್ಯಕ್ತಿಗಳು, ತಜ್ಞರು ವಿಚಾರ ಮಂಡಿಸಲಿದ್ದಾರೆ. ಜ.8ರಂದು ಮಧ್ಯಾಹ್ನ 12ಕ್ಕೆ ಸಮ್ಮೇಳನದ ಸಮಾರೋಪ ಸಮಾರಂಭ ನಡೆಯಲಿದ್ದು, ಎಐಸಿಟಿಇಯ ಸದಸ್ಯ ಕಾರ್ಯದರ್ಶಿ ಡಾ.ರಾಜೀವ್ ಕುಮಾರ್, ಐಎಫ್‌ಇಇಎಸ್ ಮಾಜಿ ಕಾರ್ಯದರ್ಶಿ ಡಾ.ಹ್ಯಾನ್ಸ್ ಜೆಹೋಯರ್ ಪಾಲ್ಗೊಳ್ಳಲಿದ್ದಾರೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾಲೇಜಿನ ವಿವಿಧ ವಿಭಾಗದ ತಜ್ಞರಾದ ಡಾ. ವಿನುತಾ, ಡಾ. ಶೋಭಾ ಶಂಕರ್, ಡಾ. ಸುಚಿತ್ರ ಡಾ.ಅರುಣ್ ದೀಕ್ಷಿತ್, ಡಾ.ಟಿ.ಪಿ.ಸುರೇಖಾ ಇದ್ದರು.

### ಜಿಲ್ಲಾಡಳಿತದ ಕಾರ್ಮಿಕ ವಿರೋಧಿ ನೀತಿ ಖಂಡಿಸಿ

# ತಿ.ನರಸೀಪುರ, ನಂ.ಗೂಡು, ಕೋಟೆಯಲ್ಲಿ ಕಾರ್ಮಿಕರ ಪ್ರತಿಭಟನೆ

**ಇಎಸ್‌ಐ, ಪಿಎಫ್, ಲೋಡಿಂಗ್, ಅನ್ ಲೋಡಿಂಗ್ ಕೆಲಸಕ್ಕೆ ಕ್ವಿಂಟಾಲ್‌ಗೆ 25 ರೂ. ನಿಗದಿಗೆ ಆಗ್ರಹ**









ತಿ.ನರಸೀಪುರ/ನಂಜನಗೂಡು/ಹೆಚ್.ಡಿ.ಕೋಟೆ, ಜ.2– ಜಿಲ್ಲಾ ಮಟ್ಟದ ಸಮಿತಿ ರಚಿಸದ ಹಾಗೂ ಕಾರ್ಮಿಕರ ಸಮಸ್ಯೆಗಳ ಬಗೆಹರಿಸಲು ಸಭೆ ಕರೆಯದ ಜಿಲ್ಲಾಡಳಿತದ ಕಾರ್ಮಿಕ ವಿರೋಧಿ ನೀತಿಯನ್ನು ಖಂಡಿಸಿ ತಿ.ನರಸೀಪುರ, ನಂಜನಗೂಡು ಹಾಗೂ ಹೆಚ್.ಡಿ.ಕೋಟೆಯಲ್ಲಿ ಲೋಡಿಂಗ್ ಮತ್ತು ಅನ್ ಲೋಡಿಂಗ್ ಕಾರ್ಮಿಕರು ಕೆಲಸ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

**ತಿ.ನರಸೀಪುರ:** ಪಟ್ಟಣದ ಎಪಿಎಂಸಿ ಆವರಣದಲ್ಲಿರುವ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಉಗ್ರಾಣಗಳ ಬಳಿ ಸೋಮವಾರ ಲೋಡಿಂಗ್ ಮತ್ತು ಅನ್ ಲೋಡಿಂಗ್ ಕಾರ್ಮಿಕರು ಕೆಲಸ ಬಂದ್ ಮಾಡಿ ಪ್ರತಿಭಟನೆ ನಡೆಸಿದರು. ಕರ್ನಾಟಕ ರಾಜ್ಯ ಲೋಡಿಂಗ್ ಅಂಡ್ ಅನ್ ಲೋಡಿಂಗ್ ಕಾರ್ಮಿಕರ ಒಕ್ಕೂಟ ಬೇಡಿಕೆ ಈಡೇರಿಸಲು ಆಗ್ರಹಿಸಿ, ಕಾರ್ಮಿಕ ವಿರೋಧಿ ನೀತಿ ಖಂಡಿಸಿ ಪ್ರತಿಭಟನೆಗೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಪಟ್ಟಣದಲ್ಲಿಯೂ ಪಡಿತರ ಅನ್ನಭಾಗ್ಯ ಆಹಾರ ಧಾನ್ಯಗಳ ಲೋಡಿಂಗ್ ಮತ್ತು ಅನ್ ಲೋಡಿಂಗ್ ಕಾರ್ಮಿಕರು ಮುಷ್ಕರ ಆರಂಭಿಸಿದರು.

ಸಮಗ್ರವಾಗಿ ಇಎಸ್‌ಐ, ಪಿಎಫ್ ಮತ್ತು ಗುತ್ತಿಗೆ ಕಾರ್ಮಿಕ ಕಾನೂನು ಜಾರಿಗಾಗಿ ಆಗ್ರಹಿಸಿರುವ ಕಾರ್ಮಿಕರು ಗ್ರಾಮಾಂತರ ಸಾಗಾಣಿಕೆ ಲೋಡಿಂಗ್ ಮತ್ತು ಅನ್ ಲೋಡಿಂಗ್ ಕೆಲಸಕ್ಕೆ ಪ್ರತಿ ಕ್ವಿಂಟಾಲ್‌ಗೆ 25 ರೂ. ನಿಗದಿ ಮಾಡಬೇಕು. ಅಲ್ಲಿವರೆಗೂ ಪ್ರತಿಭಟನೆ ಹಿಂಪಡೆಯಲ್ಲ ಎಂದು ಪ್ರತಿಭಟನಾಕಾರರು ತಿಳಿಸಿದರು.

ಪ್ರತಿಭಟನೆಯಲ್ಲಿ ಕಾರ್ಮಿಕ ಮುಖಂಡರಾದ ಪುಟ್ಟಸ್ವಾಮಿ, ಗುರು ಮಲ್ಲೇಗೌಡ, ಎಂ.ಮಹದೇವಸ್ವಾಮಿ, ಹುಚ್ಚಪ್ಪ, ಸಿದ್ದರಾಜು, ರೇವಣ್ಣ, ರಾಜು, ಕುಮಾರ, ನಾಗಣ್ಣ ಹಾಗೂ ಇನ್ನಿತರರಿದ್ದರು.

**ನಂಜನಗೂಡು:** ಅನ್ನಭಾಗ್ಯ ಯೋಜನೆಯಡಿ ಆಹಾರ ಧಾನ್ಯಗಳ ಲೋಡಿಂಗ್, ಅನ್ ಲೋಡಿಂಗ್ ಮಾಡುವ ಹಮಾಲಿ ಕಾರ್ಮಿಕರ ಕೂಲಿ ಹೆಚ್ಚಳಕ್ಕೆ ಒತ್ತಾಯಿಸಿ ಕಾರ್ಮಿಕರು ಕೆಲಸ ಬಂದ್ ಮಾಡಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಿದರು.

ನಗರದ ಟಿಎಪಿಸಿಎಂಎಸ್, ಎಫ್‌ಸಿಐ ಗೋದಾಮುಗಳ ಬಳಿ ಜಮಾಯಿಸಿದ ಕಾರ್ಮಿಕರು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಲೋಡರ್ಸ್ ಅಸೋಸಿಯೇಷನ್ ತಾಲೂಕು ಅಧ್ಯಕ್ಷ ಮಣಿಕಂಠ ಮಾತನಾಡಿ, ಅನ್ನಭಾಗ್ಯ ಯೋಜನೆಯಡಿ ಆಹಾರ ಧಾನ್ಯಗಳ ಲೋಡಿಂಗ್, ಅನ್ ಲೋಡಿಂಗ್ ಮಾಡುವ ಕಾರ್ಮಿಕರಿಗೆ ಗುತ್ತಿಗೆದಾರರು ಸಂಬಳ ಚೀಟಿ, ಮಾಸ್ಟರ್ ರೋಲ್ ನೀಡುತ್ತಿಲ್ಲ. ಸಾಗಾಣಿಕೆ ಪ್ರಮಾಣಕ್ಕೆ ಅನುಗುಣವಾಗಿ ಲೋಡಿಂಗ್, ಅನ್ ಲೋಡಿಂಗ್ ಕೆಲಸಕ್ಕೆ ನಿಗದಿ ಪಡಿಸಿರುವ ಕೂಲಿ ದರಕ್ಕೆ ಅನುಗುಣವಾಗಿ ಕೂಲಿ ನೀಡುತ್ತಿಲ್ಲ. ಇಎಸ್‌ಐ, ಪಿಎಫ್ ಪಾವತಿಸುತ್ತಿಲ್ಲ. ಈ ಬಗ್ಗೆ ಸಾಕಷ್ಟು ಮನವಿ ಸಲ್ಲಿಸಿ ದರೂ, ಯಾವುದೇ ಪ್ರಯೋಜನವಾಗಿಲ್ಲ. ಅಲ್ಲದೆ 2018ರಲ್ಲಿ ಕೂಲಿ ಹಣ ಪ್ರತಿ ಕ್ವಿಂಟಾಲ್‌ಗೆ 16 ರೂ. ನಿಗದಿ ಪಡಿಸಲಾಗಿತ್ತು ಇಲ್ಲಿವರೆಗೂ ಯಾವುದೇ ಪರಿಷ್ಕರಣೆ ಮಾಡಿಲ್ಲ. ಆದ್ದರಿಂದ ಪ್ರತಿ ಕ್ವಿಂಟಾಲ್‌ಗೆ 25 ರೂ. ಕೂಲಿ ನಿಗದಿಪಡಿಸಬೇಕು ಎಂಬ ಬೇಡಿಕೆಯೊಂದಿಗೆ ಪ್ರತಿಭಟನೆ ನಡೆಸಲಾಗುತ್ತಿದೆ ಎಂದರು. ಪ್ರತಿಭಟನೆಯಲ್ಲಿ ಕುಮಾರ, ಶೇಖರ್, ಶಿವಣ್ಣ, ಮಂಚಯ್ಯ, ಮಹೇಶ್, ಎಂ.ಹುಚ್ಚಯ್ಯ, ನಾಗೇಂದ್ರ, ಗಂಗಾಧರ್, ಜಯಸಿಂಹ, ಬೈರವ, ಮನೋಜ್, ಕೃಷ್ಣಯ್ಯ, ನಿಖಿಲ್, ಸೇರಿದಂತೆ ಹಮಾಲಿ ಕಾರ್ಮಿಕರು ಇದ್ದರು.

**ಹೆಚ್.ಡಿ.ಕೋಟೆ:** ಕೂಲಿ ಹೆಚ್ಚಳ ಹಾಗೂ ಜಿಲ್ಲಾಡಳಿತ ಕಾರ್ಮಿಕ ವಿರೋಧಿ ನೀತಿ ಖಂಡಿಸಿ ಪಟ್ಟಣದ ಟಿಎಪಿಸಿಎಂಎಸ್ ಎದುರು ಮಂಜುನಾಥೇಶ್ವರ ಲೋಡರ್ಸ್ ಅಸೋಷಿಯೇಷನ್ ವತಿಯಿಂದ ಕಾರ್ಮಿಕರು ಕೆಲಸ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಮಂಜುನಾಥೇಶ್ವರ ಲೋಡರ್ಸ್ ಅಧ್ಯಕ್ಷ ಬಸವರಾಜು, ಉಪಾಧ್ಯಕ್ಷ ರಾಜನಾಯಕ, ಕಾರ್ಯದರ್ಶಿ ಜಿ.ಮಹದೇವ, ಸೋಮಣ್ಣ, ಡಿ.ಸೋಮಣ್ಣ, ಹರೀಶ್, ಲಕ್ಷ್ಮಣ, ಶಿವಪ್ಪನಾಯಕ, ಶಿವು, ಸಣ್ಣಸೋಮನಾಯಕ ಇದ್ದರು.

## ಪಿಎಚ್‌ಡಿ ಪಧವೀಧರರು

**ಬಿ.ಎಸ್. ಗುಣರೇಖ**



**ಮೈಸೂರು:** ಡಾ.ಟಿ.ಎ. ಬಿನಾಯ್ ಅವರ ಮಾರ್ಗದರ್ಶನದಲ್ಲಿ ಶ್ರೀಮತಿ ಬಿ.ಎಸ್. ಗುಣರೇಖ ಅವರು ಇಂಪ್ಯಾಕ್ಟ್ ಆಫ್ ಮಾರ್ಕೆಟಿಂಗ್ ಮಿಕ್ಸ್ ಆನ್ ಸ್ಯಾಟಿಸ್‌ಫ್ಯಾಕ್ಷನ್ ಆಫ್ ಇನ್‌ಬೌಂಡ್ ಟೂರಿಸ್ಟ್ಸ್ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಕುವೆಂಪು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

**ಅನ್ನುಕುಮಾರ್ ಯಾದವ್**



ಡಾ.ಎಂ.ಎನ್. ಸುಮ ಅವರ ಮಾರ್ಗದರ್ಶನದಲ್ಲಿ ಅನ್ನುಕುಮಾರ್ ಯಾದವ್ ಅವರು ಬಯೋಕೆಮಿಸ್ಟ್ರಿ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

## ಜ.6ರಿಂದ ಶ್ರೀತ್ರಿಪುರ ಸುಂದರಿ ಅಮ್ಮನವರ ಜಾತ್ರಾ ಮಹೋತ್ಸವ





ಮೂಗೂರು, ಜ.2– ಐತಿಹಾಸಿಕ ಹಿನ್ನೆಲೆಯುಳ್ಳ, ದುಷ್ಟರ ಸಂಹಾರಿಣಿ, ತಿಬ್ಬಾದೇವಿ, ಮೂಕಾಸುರ ಮರ್ದಿನಿ ಪುಣ್ಯಕ್ಷೇತ್ರ ಮೂಗೂರು ಶ್ರೀತ್ರಿಪುರ ಸುಂದರಿ ಅಮ್ಮನವರ ಜಾತ್ರಾ ಮಹೋತ್ಸವ ಜ.6ರಿಂದ 10 ರವರೆಗೆ ನಡೆಯಲಿದೆ.

ಕೊರೊನಾ ಹಿನ್ನೆಲೆಯಲ್ಲಿ ಕಳೆದ 2 ವರ್ಷಗಳಿಂದ ಜಾತ್ರೆಯನ್ನು ಸರಳವಾಗಿ ನಡೆಸಲಾಗಿತ್ತು. ಈ ಬಾರಿ ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಗಿದ್ದು, ಅದಕ್ಕಾಗಿ ಎಲ್ಲಾ ರೀತಿಯ ಸಿದ್ಧತೆಯನ್ನು ಕೈಗೊಳ್ಳಲಾಗಿದೆ.

ಆದಿಶಕ್ತಿ ಶ್ರೀ ತ್ರಿಪುರ ಸುಂದರಿ ಅಮ್ಮ ತಿಬ್ಬಾದೇವಿ ರಥೋತ್ಸವಕ್ಕೂ ಮುನ್ನ ವಾರಕ್ಕೂ ಮೊದಲೇ ವಿಶೇಷ ಪೂಜಾ ಕೈಂಕರ್ಯ, ಹಸ್ತಾನ ಅಂಕುರಾರ್ಪಣೆ ಮೂಲಕ ಡಿ.27 ರಂದು ಜಾತ್ರಾ ಮಹೋತ್ಸವಕ್ಕೆ ಚಾಲನೆ ದೊರೆತಿದೆ. ಜ.3ರಂದು ವಧೆ ಉತ್ಸವ, ರಾತ್ರಿ ಕಣಿಯರ ಮಂಟಪದ ಉತ್ಸವ, ಜ.4ರಂದು ಶೇಷ, ಪಕ್ಷಿ ವಾಹನೋತ್ಸವ, ಜ.5ರಂದು ಸಿಂಹ ವಾಹನೋತ್ಸವ ಹಾಗೂ ಚಂದ್ರ ಮಂಡಲೋತ್ಸವ, ಜ.6ರಂದು ಮೂಗೂರು ಬಂಡಿ ರುದ್ರಾಕ್ಷಿ ಮಂಟಪೋತ್ಸವ, ಜ.7ರಂದು ಹೂವಿನ ಪಲ್ಲಕ್ಕಿ ತೆಪ್ಪೋತ್ಸವ, ಜ.8ರಂದು ಶ್ರೀಅಮ್ಮನವರ ಮಹಾ ರಥೋತ್ಸವ ನಂತರ ಆನೆ ವಾಹನೋತ್ಸವ, ಜ.9 ರಂದು ಅಮ್ಮನವರು ಹೊಸಹಳ್ಳಿಗೆ ದಯಮಾಡಿ ಚಿಗುರು ಕಡಿಯುವುದು ನಂತರ ಮೂಗೂರಿನಲ್ಲಿ ಕುದುರೆ ಹಾಗೂ ಮಂಟಪದಲ್ಲಿ ಉಯ್ಯಾಲೆ ಉತ್ಸವ, ಜ.10 ಅಳು ಪಲ್ಲಕ್ಕಿಯಲ್ಲಿ ವೈಮಾಳಿಗೆ ಉತ್ಸವ, ರಾತ್ರಿ ದೇಗುಲದಲ್ಲಿ ಪೂರ್ಣಾಭಿಷೇಕ, ವಿಶೇಷ ಪೂಜೆ, ಮಹಾ ಮಂಗಳಾರತಿಯೊಂದಿಗೆ ಜಾತ್ರಾ ಧಾರ್ಮಿಕ ಆಚರಣೆಗೆ ತೆರೆ ಬೀಳಲಿದೆ.

**ಹಸಿರು ನಮ್ಮ ಉಸಿರು**



ಸರಗೂರಿನ ಶ್ರೀಲಕ್ಷ್ಮಿನರಸಿಂಹಸ್ವಾಮಿ ದೇವಾಲಯದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಪಪಂ ಸದಸ್ಯೆ ದಿವ್ಯಾ ಸೇರಿದಂತೆ ಇನ್ನಿತರರಿದ್ದರು.

## ಕೆ.ಆರ್.ನಗರದಲ್ಲಿ ಬೂತ್ ವಿಜಯ ಅಭಿಯಾನಕ್ಕೆ ಚಾಲನೆ



ಕೆ.ಆರ್.ನಗರ, ಜ.2– ತಾಲೂಕಿನ ಲಾಲನಹಳ್ಳಿ ಗ್ರಾಮದ ಗುರುಮಲ್ಲೇಶ್ವರ ದಾಸೋಹ ಮಠದ ಸಮುದಾಯ ಭವನದಲ್ಲಿ ಬೂತ್ ವಿಜಯ ಅಭಿಯಾನಕ್ಕೆ ರಾಜ್ಯ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಮಿರ್ಲೆ ಶ್ರೀನಿವಾಸಗೌಡ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಕ್ಷೇತ್ರದ ಅಭಿವೃದ್ಧಿಗೆ ರಾಜ್ಯ ಬಿಜೆಪಿ ಸರ್ಕಾರ ಸಾವಿರ ಕೋಟಿ ರೂ. ಅನುದಾನ ನೀಡಿದ್ದು, ಬಸವ ವಸತಿ ಯೋಜನೆಯಡಿ ವಸತಿ ಸಚಿವರು 2500 ಮನೆಗಳನ್ನು ಹೆಚ್ಚುವರಿಯಾಗಿ ಮಂಜೂರು ಮಾಡಿದ್ದಾರೆ. ಈ ಬಗ್ಗೆ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಸಾರ್ವಜನಿಕರಿಗೆ ತಿಳಿಸಬೇಕು ಎಂದರು.

ಮುಂದಿನ ದಿನಗಳಲ್ಲಿ ಎಲ್ಲರೂ ಪಕ್ಷ ಸಂಘಟಿಸಿ ಬಿಜೆಪಿ ಅಭ್ಯರ್ಥಿ ಗೆಲುವಿಗೆ ದುಡಿಯಬೇಕೆಂದು ಕರೆ ನೀಡಿದ ಅವರು, ಕಾಂಗ್ರೆಸ್ ಮತ್ತು ಜೆಡಿಎಸ್ ಪಕ್ಷದವರು ನಮ್ಮಲ್ಲಿ ಒಡಕು ಮೂಡಿಸಲು ಪ್ರಯತ್ನಿಸುತ್ತಿದ್ದು, ಅಪಪ್ರಚಾರಗಳಿಗೆ ಯಾರು ಕಿವಿಗೊಡಬಾರದು ಎಂದು ಮನವಿ ಮಾಡಿದರು.

ಜಿಲ್ಲಾ ಗ್ರಾಮಾಂತರ ಬಿಜೆಪಿ ಉಪಾಧ್ಯಕ್ಷ ಹೊಸಹಳ್ಳಿ ವೆಂಕಟೇಶ್ ಮಾತನಾಡಿ, ವಿಧಾನಸಭಾ ಕ್ಷೇತ್ರದ 252 ಬೂತ್‌ಗಳಲ್ಲಿ ನಿರಂತರ 10 ದಿನಗಳ ಕಾಲ ಬೂತ್ ವಿಜಯ ಅಭಿಯಾನ ನಡೆಯಲಿದ್ದು, ಪಕ್ಷದ ಮುಖಂಡರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದರು.

ಜಿಲ್ಲಾ ಬಿಜೆಪಿ ಮಾಧ್ಯಮ ಪ್ರಮುಖ ಹೆಚ್.ಪಿ.ಗೋಪಾಲ್, ಕೆ.ಆರ್.ನಗರ ಕ್ಷೇತ್ರದ ಅಭಿಯಾನದ ಉಸ್ತುವಾರಿಯೂ ಆದ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಕಿರಣ್ ಜಯರಾಂ ಮಾತನಾಡಿದರು. ಈ ವೇಳೆ ಕೆ.ಆರ್.ನಗರ ಮಂಡಲ ಬಿಜೆಪಿ ಅಧ್ಯಕ್ಷ ಕೆವೈ.ಮಂಜು, ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನಪ್ಪ, ಮಹಿಳಾ ಘಟಕದ ಅಧ್ಯಕ್ಷೆ ದಾಕ್ಷಾಯಿಣಿ, ಪ್ರಧಾನ ಕಾರ್ಯದರ್ಶಿ ಮಾರ್ಕಂಡೇಯ ಸ್ವಾಮಿ, ಖಜಾಂಚಿ ಎ.ಜಿ.ನಂಜೇಶ್, ಯುವ ಘಟಕದ ಅಧ್ಯಕ್ಷ ಧರ್ಮ, ಪುರಸಭೆ ಸದಸ್ಯರಾದ ವೀಣಾ, ಉಮಾಶಂಕರ, ಜಿ.ಜೆ.ಮಂಜು, ನಗರ ಯೋಜನಾ ಅಧಿಕಾರದ ನಿರ್ದೇಶಕ ಗೋಪಾಲರಾಜು, ಬಿಜೆಪಿ ಮುಖಂಡರಾದ ಚಿರಾಗ್ ಪಟೇಲ್, ಕೃಷ್ಣನಾಯಕ, ಕುಮಾರಸ್ವಾಮಿ, ನಾಗೇಶ್, ಪ್ರಕಾಶ್, ರಾಮಕೃಷ್ಣೇಗೌಡ ಮತ್ತಿತರರಿದ್ದರು.




ಹುಣಸೂರಿನ ಸ್ನೇಹಜೀವಿ ಗ್ರಾಮೀಣಾಭಿವೃದ್ಧಿ ಸಂಸ್ಥೆಯಿಂದ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಶಾಸಕ ಹೆಚ್.ಪಿ.ಮಂಜುನಾಥ್ 35 ಸಾವಿರ ರೂ. ವೆಚ್ಚದ ಪುಸ್ತಕಗಳನ್ನು ಉಚಿತವಾಗಿ ನೀಡಿದರು. ಈ ವೇಳೆ ತಹಸೀಲ್ದಾರ್ ಡಾ. ಅಶೋಕ್, ಮುಖಂಡರಾದ ರಮೇಶ್, ಬಸವರಾಜ್, ಕಸ್ತೂರಿಗೌಡ ಸೇರಿದಂತೆ ಇತರರಿದ್ದರು.

## ಕೊರೊನಾ ಸೋಂಕು ಪತ್ತೆ: ಶಾಸಕರ ನೇತೃತ್ವದಲ್ಲಿ ತುರ್ತು ಸಭೆ



ಹುಣಸೂರು, ಜ.2– ತಾಲೂಕಿನ ವ್ಯಕ್ತಿಯೊಬ್ಬರಿಗೆ ಕೊರೊನಾ ಸೋಂಕು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ನಗರದ ಉಪ ವಿಭಾಗಾಧಿಕಾರಿಗಳ ಕಚೇರಿಯಲ್ಲಿ ಶಾಸಕ ಹೆಚ್.ಪಿ.ಮಂಜುನಾಥ್ ನೇತೃತ್ವದಲ್ಲಿ ಸೋಮವಾರ ತುರ್ತು ಸಭೆ ನಡೆಯಿತು.

ಸಭೆಯಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ.ಕೀರ್ತಿಕುಮಾರ್ ಮಾತನಾಡಿ, ತಾಲೂಕಿನ ಚನ್ನಸೋಗೆ ಗ್ರಾಮದ ನಿವಾಸಿ ಶಿವಣ್ಣೇಗೌಡರಿಗೆ ಕೊರೊನಾ ಸೋಂಕು ತಗುಲಿದ್ದು, ತಕ್ಷಣ ಅವರನ್ನು ಮೈಸೂರಿನ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಇದೀಗ ಶಿವಣ್ಣೇಗೌಡ ಚೇತರಿಸಿಕೊಂಡಿದ್ದು, ಆರ್‌ಟಿಪಿಸಿಆರ್ ಪರೀಕ್ಷೆಯಲ್ಲೂ ನೆಗೆಟಿವ್ ಬಂದಿದೆ. ಆಸ್ಪತ್ರೆಯಿಂದ ಬಿಡುಗಡೆಯಾಗಲಿದ್ದಾರೆ ಎಂದರು.

ಕೊರೊನಾ ಮುಂಜಾಗ್ರತಾ ಕ್ರಮವಾಗಿ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ 25 ವಾರ್ಡ್ ಹಾಗೂ 5 ವೆಂಟಿಲೇಟರ್‌ಗಳು ಸೇರಿದಂತೆ ತಾಲೂಕಿನಾದ್ಯಂತ 45 ಚಿಕಿತ್ಸಾ ಕೇಂದ್ರ ಸಿದ್ಧವಾಗಿದೆ. ನಮ್ಮಲ್ಲಿ 6900 ಕೊವ್ಯಾಕ್ಸಿನ್ ಲಸಿಕೆ ಇದ್ದು, ಕೋವಿಶೀಲ್ಡ್ ಲಸಿಕೆ ನಾಳೆ ಬರಲಿದೆ ಎಂದು ತಿಳಿಸಿದರು.

ತುರ್ತು ನಿರ್ವಹಣೆಗಾಗಿ ಸಾರ್ವಜನಿಕ ಆಸ್ಪತ್ರೆಯಲ್ಲಿ 2 ಆಕ್ಸಿಜನ್ ಪ್ಲಾಂಟ್‌ಗಳಿವೆ. ಅಲ್ಲದೇ ಮುಂಜಾಗ್ರತಾ ಕ್ರಮವಾಗಿ 50 ಜಂಬೋ ಸಿಲಿಂಡರ್‌ಗಳನ್ನು ಸಿದ್ಧಗೊಳಿಸಿದ್ದೇವೆ ಎಂದರು.

60 ವರ್ಷ ಮೇಲ್ಪಟ್ಟವರು ಸ್ವಪ್ರೇರಣೆಯಿಂದ ಬೂಸ್ಟರ್ ಡೋಸ್ ಹಾಕಿಸಿಕೊಳ್ಳುತ್ತಿದ್ದಾರೆ. ನಾಳೆಯಿಂದ ಅಂಗನವಾಡಿ ಸೇರಿದಂತೆ ಎಲ್ಲಾ ಕೇಂದ್ರಗಳಲ್ಲೂ ಲಸಿಕೆ ನೀಡಲಾಗುವುದು. ಸಾರ್ವಜನಿಕರು ಆರೋಗ್ಯ ಇಲಾಖೆ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ ಆರೋಗ್ಯದ ಕಡೆ ಗಮನ ಹರಿಸಬೇಕು ಎಂದರು.

ಶಾಸಕ ಮಂಜುನಾಥ್ ಮಾತನಾಡಿ, ಪ್ರತಿಯೊಬ್ಬರಿಗೂ ಬೂಸ್ಟರ್ ಡೋಸ್ ನೀಡುವ ಮೂಲಕ ತಾಲೂಕಿನಲ್ಲಿ ಕೊರೊನಾ ಹರಡದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಎಸಿ ರುಚಿ ಜಿಂದಾಲ್, ತಹಸೀಲ್ದಾರ್ ಡಾ.ಅಶೋಕ್ ಕುಮಾರ್, ಆಸ್ಪತ್ರೆ ಆಡಳಿತಾಧಿಕಾರಿ ಡಾ.ಸರ್ವೇಶ್ ರಾಜ್ ಅರಸು, ತಾಪಂ ಇಓ ಮನು, ಬಿಇಓ ರೇವಣ್ಣ, ಸಂತೋಷ್ ಕುಮಾರ್, ಪೌರಾಯುಕ್ತೆ ಮಾನಸ, ಉಪ ತಹಸೀಲ್ದಾರ್ ಶಕೀಲಾ ಬಾನು, ಸಿಡಿಪಿಓ ವೀಣಾ ಇನ್ನಿತರರಿದ್ದರು.



ಜಯಪುರದ ಅನ್ನಪೂರ್ಣೇಶ್ವರಿ ಪ್ರಾಥಮಿಕ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿದ ಉದ್ಯಮಿ ಎಸ್.ಶ್ರೀಕಾಂತ್ ಅವರನ್ನು ಶಾಲೆ ವತಿಯಿಂದ ಅಭಿನಂದಿಸಲಾಯಿತು. ಮುಖ್ಯಶಿಕ್ಷಕ ನರಸತಿಮ್ಮೇಗೌಡ, ಜಾನಪದ ಕಲಾವಿದ ಅಮ್ಮ ರಾಮಚಂದ್ರ ಇದ್ದರು.

# ಮತ್ತೆ ಬಿಜೆಪಿ ಅಧಿಕಾರಕ್ಕೆ ತರಲು ಬೂತ್ ವಿಜಯ ಅಭಿಯಾನ

### ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ



ತಿ.ನರಸೀಪುರ, ಜ.2– ಕೇಂದ್ರ ಬಿಜೆಪಿ ನಾಯಕರ ಕರ್ನಾಟಕ ಮಿಷನ್–150ರ ಗುರಿಯಂತೆ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಿ, ರಾಜ್ಯದಲ್ಲಿ ಮತ್ತೆ ಬಿಜೆಪಿ ಸರ್ಕಾರವನ್ನು ಅಧಿಕಾರಕ್ಕೆ ತರಲು ಬೂತ್ ವಿಜಯ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ತಿಳಿಸಿದರು.

ವರುಣಾ ವಿಧಾನಸಭಾ ಕ್ಷೇತ್ರದ ನಗರ್ಲೆಯಲ್ಲಿ ಸೋಮವಾರ ಬಿಜೆಪಿ ನಿಷ್ಠಾವಂತ ಕಾರ್ಯಕರ್ತ ಏಜಾಜ್ ಪಾಷ ನಿವಾಸದ ಎದುರು ಬಾವುಟ ಕಟ್ಟುವ ಮೂಲಕ ಬೂತ್ ವಿಜಯ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬೂತ್ ಮಟ್ಟದಲ್ಲಿ ಪಕ್ಷ ಸಂಘಟನೆ ಬಲಿಷ್ಠವಾಗಿರುವುದರಿಂದ ರಾಜ್ಯದಲ್ಲಷ್ಟೇ ಅಲ್ಲ ವರುಣಾದಲ್ಲೂ ಬಿಜೆಪಿ ಗೆಲ್ಲಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ವಿಧಾನಸಭೆ ಚುನಾವಣೆ ಯಾವಾಗ ಘೋಷಣೆಯಾದರೂ ವರುಣಾದಲ್ಲಿ ಪಕ್ಷದ ಗೆಲುವಿಗೆ ದುಡಿಯಲು ಕಾರ್ಯಕರ್ತರಾದಿಯಾಗಿ ನಾವು ಸಿದ್ಧರಾಗಿದ್ದೇವೆ. ಕ್ಷೇತ್ರಕ್ಕೆ ಇನ್ನೂ ಅಧಿಕೃತ ಅಭ್ಯರ್ಥಿಯನ್ನು ಹೈಕಮಾಂಡ್ ಘೋಷಿಸಿಲ್ಲ. ಅಭ್ಯರ್ಥಿ ಆಯ್ಕೆ ವರಿಷ್ಠರ ವಿವೇಚನೆಗೆ ಬಿಟ್ಟಿದ್ದು, ಅಲ್ಲಿವರೆಗೂ ಪಕ್ಷ ನೀಡಿರುವ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸುತ್ತಿದ್ದೇವೆ ಎಂದರು.

ಬಿಜೆಪಿ ಕ್ಷೇತ್ರಾಧ್ಯಕ್ಷ ಕಲ್ಮಳ್ಳಿ ವಿಜಯ್ ಕುಮಾರ್ ಮಾತನಾಡಿ, ರಾಜ್ಯ ಸಮಿತಿ ಸೂಚನೆಯಂತೆ ಬೂತ್ ವಿಜಯ ಅಭಿಯಾನ ಜ.2 ರಿಂದ 12ರವರೆಗೆ ವರುಣಾ ವಿಧಾನಸಭಾ ಕ್ಷೇತ್ರದಾದ್ಯಂತ ನಡೆಯಲಿದೆ. ಕಾರ್ಯಕರ್ತರ ಮನೆ ಮೇಲೆ ಬಿಜೆಪಿ ಧ್ವಜ ಹಾರಿಸುವುದರೊಂದಿಗೆ ಮುಂಬರುವ ಚುನಾವಣೆ ವಿಜಯದ ಕಡೆಗೆ ಸದೃಢ ಹೆಜ್ಜೆಯನ್ನಿಡುವ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

> **ಕಳೆದ 4 ವರ್ಷಗಳಿಂದ ಬೂತ್ ಮಟ್ಟದಿಂದ ಪಕ್ಷ ಸಂಘಟಿಸಿ ಚುನಾವಣೆಗೆ ಕಾರ್ಯಕರ್ತರನ್ನು ಸಜ್ಜುಗೊಳಿಸಿರುವುದರಿಂದ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಯಾರೇ ಸ್ಪರ್ಧಿಸಿದರೂ ವರುಣಾದಲ್ಲಿ ಕಮಲ ಅರಳಲಿದೆ.**
>
> **–ಎ.ಎಂ.ಗುರುಸ್ವಾಮಿ, ಜಿಪಂ ಮಾಜಿ ಸದಸ್ಯ.**

ಈ ವೇಳೆ ಕಾಂಪೋಸ್ಟ್ ನಿಗಮದ ಅಧ್ಯಕ್ಷ ಎಸ್.ಮಹದೇವಯ್ಯ, ಕ್ಷೇತ್ರ ಉಸ್ತುವಾರಿ ಪ್ರಫುಲ್ಲಾ, ವರುಣಾ ಕ್ಷೇತ್ರದ ಟಿಕೆಟ್ ಆಕಾಂಕ್ಷಿಗಳಾದ ಎ.ಎಂ.ಗುರುಸ್ವಾಮಿ, ಬಿ.ಎನ್. ಸದಾನಂದ, ತೋಟದಪ್ಪ ಬಸವರಾಜು, ಮಮತಾ, ಶರತ್ ಪುಟ್ಟಬುದ್ಧಿ, ದೇವನೂರು ಜಿ.ಪ್ರತಾಪ್, ಜಿಪಂ ಮಾಜಿ ಅಧ್ಯಕ್ಷ ಕಾ.ಪು.ಸಿದ್ಧವೀರಪ್ಪ, ತಾಪಂ ಮಾಜಿ ಉಪಾಧ್ಯಕ್ಷ ಸುತ್ತೂರು ಚಿಕ್ಕಮಾದಪ್ಪ, ಮಾಜಿ ಅಧ್ಯಕ್ಷ ಎ.ಎನ್.ಶಿವಯ್ಯ, ಪ್ರಧಾನ ಕಾರ್ಯದರ್ಶಿಗಳಾದ ಎ.ಎನ್.ರಂಗೂ ನಾಯಕ, ಶಿವಬಸಪ್ಪ, ಯುವ ಮೋರ್ಚಾ ಅಧ್ಯಕ್ಷ ಎಸ್.ಮೋಹನ್, ಮುಖಂಡರಾದ ಮಹೇಶ್, ಪ್ರಭುಸ್ವಾಮಿ, ಸಂಜಯ್ ಶರ್ಮಾ ಇನ್ನಿತರರಿದ್ದರು.



## ಚುಂಚನಕಟ್ಟೆಯಲ್ಲಿ ವೈಕುಂಠ ಏಕಾದಶಿ ಸಂಭ್ರಮ

ಚುಂಚನಕಟ್ಟೆ, ಜ.2– ಇಲ್ಲಿನ ಶ್ರೀರಾಮ ದೇವಾಲಯದಲ್ಲಿ ಸೋಮವಾರ ವೈಕುಂಠ ಏಕಾದಶಿ ಸಂಭ್ರಮದಿಂದ ನಡೆಯಿತು.



ಮುಂಜಾನೆಯೇ ದೇವಾಲಯದಲ್ಲಿ ಸೀತಾ ಸಮೇತ ಶ್ರೀರಾಮ ಲಕ್ಷ್ಮಣರ ಮೂರ್ತಿಗಳಿಗೆ ವಿಶೇಷ ಅಲಂಕಾರ ಮಾಡಿ ಮಹಾ ಮಂಗಳಾರತಿ ನೆರವೇರಿಸಲಾಯಿತು. ನಂತರ ಉತ್ಸವ ಮೂರ್ತಿಗಳನ್ನು ದೇವಾಲಯದ ಸುತ್ತ ಮಂಗಳವಾದ್ಯಗಳೊಂದಿಗೆ ಮೆರವಣಿಗೆ ಮಾಡುವ ಮೂಲಕ ಭಕ್ತರು ಹರಕೆ ತೀರಿಸಿದರು. ಅಲ್ಲದೇ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪುನೀತರಾದರು.

ಸಾಲಿಗ್ರಾಮ ತಹಸೀಲ್ದಾರ್ ಮೋಹನ್ ಕುಮಾರ್, ಕೆ.ಆರ್.ನಗರ ತಹಸೀಲ್ದಾರ್ ಎಸ್.ಸಂತೋಷ್, ಕುಪ್ಪೆ ಗ್ರಾಪಂ ಅಧ್ಯಕ್ಷೆ ಗೌರಮ್ಮ ಸೇರಿದಂತೆ ಜನಪ್ರತಿನಿಧಿಗಳು ದೇವಾಲಯಕ್ಕೆ ಭೇಟಿ ನೀಡಿ ದರ್ಶನ ಪಡೆದರು. ಭಕ್ತರಿಗೆ ಚುಂಚನಕಟ್ಟೆ ಗ್ರಾಮದ ವ್ಯಾಪಾರಿ ಗಿರೀಗೌಡ, ಕಮಲಮ್ಮ ದಂಪತಿ ಪ್ರಸಾದ ವ್ಯವಸ್ಥೆ ಮಾಡಿದ್ದರು.

ಈ ವೇಳೆ ಅರ್ಚಕರಾದ ವಾಸು ಅಯ್ಯಂಗಾರ್, ನಾರಾಯಣ್ ಅಯ್ಯಂಗಾರ್, ಭವಾಮಿ ಪ್ರಸಾದ್, ಪಾರುಪತ್ತೆದಾರ ಯೋಗೇಶ್, ದೇವಾಲಯದ ಸಿಬ್ಬಂದಿ, ಗ್ರಾಮಸ್ಥರಾದ ಸಿ.ಜಿ.ಬಾಬು, ಸಿ.ಕೆ.ಕೃಷ್ಣ, ಪ್ರೇಮ್ ಕುಮಾರ್, ಬಸುರಾಜ್, ಮಧುಸೂದನ್, ಶ್ರೀನಿವಾಸ್, ರಾಜೇಗೌಡ, ಅನಂತು, ಮಂಜು, ಸ್ನೇಹ, ಚಂದ್ರನಾಯಕ ಇನ್ನಿತರರಿದ್ದರು.



ಪಿರಿಯಾಪಟ್ಟಣ ತಾಲೂಕಿನ ಕಂಬಿಪುರ, ಚಿಕ್ಕನೇರಳೆ, ನಿಲವಾಡಿ, ಅಡಗೂರು, ಮೂಡಲಕೊಪ್ಪಲಿನಲ್ಲಿ 1.20 ಕೋಟಿ ರೂ. ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಕೆ.ಮಹದೇವ್ ಗುದ್ದಲಿ ಪೂಜೆ ನೆರವೇರಿಸಿದರು. ಈ ವೇಳೆ ತಾಲೂಕು ಜೆಡಿಎಸ್ ಅಧ್ಯಕ್ಷ ಅಣ್ಣಯ್ಯಶೆಟ್ಟಿ ಸೇರಿದಂತೆ ಗ್ರಾಮಸ್ಥರು, ಅಧಿಕಾರಿಗಳಿದ್ದರು.

## ವೈಕುಂಠ ಏಕಾದಶಿ ಅಂಗವಾಗಿ

# ಮೈಸೂರಿನ ದೇವಾಲಯಗಳಲ್ಲಿ ಭಕ್ತರ ಜಾತ್ರೆ





ವೈಕುಂಠ ಏಕಾದಶಿ ಅಂಗವಾಗಿ ಮೈಸೂರಿನ ವಿಜಯನಗರದ ಶ್ರೀ ಯೋಗಾನರಸಿಂಹಸ್ವಾಮಿ ದೇವಾಲಯದಲ್ಲಿ ಪ್ರೊ. ಭಾಷ್ಯಂ ಸ್ವಾಮೀಜಿ ಅವರು ಸೋಮವಾರ ಭಕ್ತರಿಗೆ ಆರತಿ ನೀಡಿ, ಆಶೀರ್ವದಿಸಿದರು. ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ, ಪತ್ನಿ ಶ್ರೀಮತಿ ಅನಿತಾ ಕುಮಾರಸ್ವಾಮಿ, ಶಾಸಕ ಜಿ.ಟಿ. ದೇವೇಗೌಡರ ಪತ್ನಿ ಶ್ರೀಮತಿ ಲಲಿತಾ ಅವರು ಒಂಟಿಕೊಪ್ಪಲಿನ ಶ್ರೀ ಲಕ್ಷ್ಮೀವೆಂಕಟರಮಣ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದನ್ನು ಬಲಚಿತ್ರದಲ್ಲಿ ಕಾಣಬಹುದು.

ಮೈಸೂರು, ಜ.2(ಆರ್‌ಕೆ)- ಮೈಸೂರಿನ ದೇವಾಲಯಗಳಲ್ಲಿ ಇಂದು ವೈಕುಂಠ ಏಕಾದಶಿಯನ್ನು ಭಕ್ತಿ-ಭಾವಗಳಿಂದ ಆಚರಿಸಲಾಯಿತು.

ಮುಂಜಾನೆ 5 ಗಂಟೆಯಿಂದಲೇ ಭಕ್ತಾದಿಗಳು ದೇವಸ್ಥಾನಗಳಿಗೆ ತೆರಳಿ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು, ಪುನೀತರಾದರು. 2023ನೇ ಹೊಸ ವರ್ಷದ ಎರಡನೇ ದಿನವಾದ ಇಂದು ವೈಕುಂಠ ಏಕಾದಶಿ ಅಂಗವಾಗಿ ಎಲ್ಲಾ ವೆಂಕಟೇಶ್ವರ ದೇವಸ್ಥಾನ ಸೇರಿದಂತೆ ಎಲ್ಲಾ ದೇವಾಲಯಗಳಲ್ಲಿ ವಿಶೇಷ ಪೂಜೆ, ಸ್ವರ್ಗದ ಬಾಗಿಲು ವ್ಯವಸ್ಥೆಯೊಂದಿಗೆ ಅಭಿಷೇಕ, ಅರ್ಚನೆಗಳಂತಹ ಧಾರ್ಮಿಕ ಕೈಂಕರ್ಯಗಳು ಸಾಂಗೋಪಸಾಂಗವಾಗಿ ನೆರವೇರಿತು.

ವೈಕುಂಠದ ಬಾಗಿಲು ತೆರೆಯುವ ಈ ದಿನ ದೇವರ ದರ್ಶನ ಮಾಡಿದರೆ ಸ್ವರ್ಗ ದರ್ಶನವಾಗಲಿದೆ ಎಂಬುದು ಪ್ರತೀತಿ. ಎಲ್ಲಾ ವೆಂಕಟೇಶ್ವರ ದೇವಾಲಯಗಳಲ್ಲಿ ಸ್ವರ್ಗದ ಮಂಟಪ ಏರ್ಪಡಿಸಿ, ವೈಕುಂಠ ದ್ವಾರ ತೆರೆಯಲಾಗಿದ್ದು, ಆ ಮೂಲಕ ದೇವರ ದರ್ಶನ ಮಾಡಿದರೆ ಸನ್ಮಂಗಳವಾಗುತ್ತದೆ ಎಂಬ ನಂಬಿಕೆ ಭಕ್ತಾದಿಗಳಲ್ಲಿದೆ.

ಮೈಸೂರಿನ ವಿವಿ ಮೊಹಲ್ಲಾದ ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿ ದೇವಸ್ಥಾನದಲ್ಲಿ ಇಂದು ಮುಂಜಾನೆ 5 ಗಂಟೆಯಿಂದಲೇ ದೇವರ ದರ್ಶನ ಮಾಡಲು ಅವಕಾಶ ಕಲ್ಪಿಸಿದ್ದರಿಂದ ಭಕ್ತಾದಿಗಳು ಸಾಲುಗಟ್ಟಿ ನಿಂತು ವೆಂಕಟೇಶ್ವರಸ್ವಾಮಿ ದರ್ಶನ ಪಡೆದು ಪುನೀತರಾದರು. ವೈಕುಂಠ ಏಕಾದಶಿ ಅಂಗವಾಗಿ ಇಂದು ಪೊಲೀಸ್ ಭದ್ರತೆಯಲ್ಲಿ ದೇವಾಲಯದ ಖಜಾನೆಯಿಂದ ವಜ್ರಖಚಿತ ಕಿರೀಟವನ್ನು ತಂದು ಶ್ರೀ ವೆಂಕಟೇಶ್ವರನಿಗೆ ಧಾರಣೆ ಮಾಡಲಾಗಿದ್ದು, ರಾತ್ರಿ ಸುಮಾರು 11.30 ಗಂಟೆವರೆಗೂ ದೇವರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ದೇವರ ದರ್ಶನ ಪಡೆದ ಎಲ್ಲಾ ಭಕ್ತರಿಗೂ ಮುಂಜಾನೆಯಿಂದ ತಡರಾತ್ರಿವರೆಗೂ ಶ್ರೀ ಲಕ್ಷ್ಮೀವೆಂಕಟರಮಣ ದೇವಸ್ಥಾನ ಟ್ರಸ್ಟ್ ವತಿಯಿಂದ ಪ್ರಸಾದ ವಿನಿಯೋಗ ಮಾಡಲಾಯಿತು. ದೇವಸ್ಥಾನದಲ್ಲಿ ಆಯೋಜಿಸಿದ್ದ ಸ್ವರ್ಗ ಮಂಟಪದಿಂದ ದೇವರ ದರ್ಶನ ಮಾಡಿದರೆ ಮೋಕ್ಷ ಪ್ರಾಪ್ತಿಯಾಗಿ ಒಳಿತಾಗಲಿದೆ ಎಂಬ ಪ್ರತೀತಿ ಹಿನ್ನೆಲೆಯಲ್ಲಿ ಇಂದು ಸಾವಿರಾರು ಮಂದಿ ಭಕ್ತರ ದಂಡೇ ದೇವಸ್ಥಾನಗಳಿಗೆ ಹರಿದುಬಂದಿತು.

ದೇವಾಲಯವನ್ನು ತಳಿರು ತೋರಣ ಹಾಗೂ ಪುಷ್ಪಗಳಿಂದ ಅಲಂಕೃತಗೊಳಿಸಲಾಗಿತ್ತಲ್ಲದೇ, ಸ್ವರ್ಗಮಂಟಪದಲ್ಲಿ ಪ್ರತಿಷ್ಠಾಪಿಸಿದ್ದ ವೆಂಕಟರಮಣನಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ಶ್ರೀ ವೆಂಕಟರಮಣಸ್ವಾಮಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಕೆ.ಆರ್.ಮೋಹನ್‌ಕುಮಾರ್, ಟ್ರಸ್ಟಿ ಭರತೇಶ್ ಸೇರಿದಂತೆ ಇನ್ನಿತರೆ ಟ್ರಸ್ಟಿಗಳು, ಅರ್ಚಕರು, ಸಿಬ್ಬಂದಿ ಉಪಸ್ಥಿತರಿದ್ದು, ಭಕ್ತರಿಗೆ ದೇವರ ದರ್ಶನ ಪಡೆಯಲು ವ್ಯವಸ್ಥೆ ಮಾಡಿದ್ದರು.

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಪತ್ನಿ ಅನಿತಾ ಕುಮಾರಸ್ವಾಮಿ, ಶಾಸಕ ಜಿ.ಟಿ.ದೇವೇಗೌಡರ ಪತ್ನಿ ಲಲಿತಾ ಅವರೂ ಸಹ ಶ್ರೀ ಲಕ್ಷ್ಮೀವೆಂಕಟರಮಣ ಸ್ವಾಮಿ ದೇವಸ್ಥಾನಕ್ಕೆ ತೆರಳಿ ದೇವರ ದರ್ಶನ ಪಡೆದರು. ಈ ಸಂದರ್ಭ ಶಾಸಕ ಸಾ.ರಾ. ಮಹೇಶ್, ಕಾರ್ಪೊರೇಟರ್‌ಗಳಾದ ಎಸ್‌ಬಿಎಂ ಮಂಜು, ಪ್ರೇಮಾ ಶಂಕರೇಗೌಡ, ಲಕ್ಷ್ಮೀ ಶಿವಣ್ಣ, ಮಾಜಿ ಮೇಯರ್ ರವಿಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

2023ರ ಹೊಸ ವರ್ಷದ ದಿನ ಶ್ರೀ ಲಕ್ಷ್ಮೀವೆಂಕಟರಮಣ ದೇವಸ್ಥಾನಕ್ಕೆ ಸಾವಿರಾರು ಭಕ್ತರು ಭೇಟಿ ನೀಡಿದ್ದರು. ವೈಕುಂಠ ಏಕಾದಶಿಯಂದು 50,000ಕ್ಕೂ ಅಧಿಕ ಭಕ್ತರು ಸ್ವರ್ಗಮಂಟಪದಲ್ಲಿ ಪ್ರತಿಷ್ಠಾಪಿಸಿದ್ದ ದೇವರ ದರ್ಶನ ಪಡೆದು ಪುನೀತರಾದರು. ಮುಂಜಾನೆಯಿಂದ ತಡರಾತ್ರಿವರೆಗೂ ಸರತಿ ಸಾಲಿನಲ್ಲಿ ನಿಂತಿದ್ದ ಭಕ್ತರನ್ನು ವಿವಿ ಪುರಂ ಠಾಣೆ ಮತ್ತು ವಿವಿ ಪುರಂ ಸಂಚಾರ ಠಾಣೆ ಪೊಲೀಸರು ನಿರ್ವಹಣೆ ಮಾಡಿ, ನಿಯಂತ್ರಿಸಿದರು.

**ಇಸ್ಕಾನ್‌ನಲ್ಲೂ ಭಾರೀ ಭಕ್ತರು:** ಜಯನಗರದ ಇಸ್ಕಾನ್ ದೇವಸ್ಥಾನದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ವಿಶೇಷ ಪುಷ್ಪಾಲಂಕಾರ ಮಾಡಿ ದೇವರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಉದ್ಯಮಿ ಪೋತರಾಜ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ. ನಾರಾಯಣಗೌಡ ಸೇರಿದಂತೆ ಹಲವು ಗಣ್ಯರು ದೇವರ ದರ್ಶನ ಪಡೆದರು.

**ದತ್ತ ವೆಂಕಟೇಶ್ವರ:** ಮೈಸೂರು-ಊಟಿ ರಸ್ತೆಯ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ಆವರಣದಲ್ಲಿರುವ ಶ್ರೀ ವೆಂಕಟೇಶ್ವರ ದೇವಾಲಯದಲ್ಲೂ ಮುಂಜಾನೆ 5 ಗಂಟೆಯಿಂದಲೇ ವಿಶೇಷ ಪೂಜಾ ಕೈಂಕರ್ಯಗಳು ಆರಂಭವಾದವು. ವೈಕುಂಠ ದ್ವಾರದ ಮೂಲಕ ದೇವಸ್ಥಾನ ಪ್ರವೇಶಿಸಿದ ಭಕ್ತಾದಿಗಳು, ಶ್ರೀ ವೆಂಕಟೇಶ್ವರಸ್ವಾಮಿಯ ದರ್ಶನ ಪಡೆದರು. ಆಶ್ರಮದ ಕಿರಿಯ ಸ್ವಾಮಿ ಶ್ರೀ ದತ್ತ ವಿಜಯಾನಂದತೀರ್ಥ ಸ್ವಾಮೀಜಿ, ನಾರಾಯಣ ಹವನ, ಧನವಂತರಿ ದೇವಿಗೆ ವಿಶೇಷ ಅರ್ಚನೆ, ಪದ್ಮಾವತಿಗೆ ಸಹಸ್ರನಾಮ ಹಾಗೂ ಇನ್ನಿತರ ಪೂಜಾ ಕೈಂಕರ್ಯ ನೆರವೇರಿಸಿದರು. ವಿಜಯನಗರದ ಶ್ರೀ ಯೋಗಾನರಸಿಂಹ ಸ್ವಾಮಿ ದೇವಸ್ಥಾನ, ಮಾತೃಮಂಡಳಿ ಸರ್ಕಲ್‌ನ ಶ್ರೀ ಚಂದ್ರಮೌಳೇಶ್ವರ ದೇವಸ್ಥಾನ, ಸರಸ್ವತಿ ಟಾಕೀಸ್ ಬಳಿಯ ಈಶ್ವರ ದೇವಾಲಯ ಸೇರಿದಂತೆ ಮೈಸೂರಿನ ಎಲ್ಲಾ ಈಶ್ವರ ದೇವಸ್ಥಾನಗಳಲ್ಲೂ ಇಂದು ವೈಕುಂಠ ಏಕಾದಶಿ ಅಂಗವಾಗಿ ವಿಶೇಷ ಪೂಜೆ ನೆರವೇರಿದವು.

# ದತ್ತ ವೆಂಕಟೇಶ್ವರ ಸ್ವಾಮಿ ದೇವಾಲಯದಲ್ಲಿ ವೈಕುಂಠ ಏಕಾದಶಿ ಆಚರಣೆ





**ಮೈಸೂರು:** ವೈಕುಂಠ ಏಕಾದಶಿ ಪ್ರಯುಕ್ತ ಅವಧೂತ ದತ್ತಪೀಠದ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿರುವ ಶ್ರೀ ದತ್ತ ವೆಂಕಟೇಶ್ವರ ಸ್ವಾಮಿ ದೇವಾಲಯದಲ್ಲಿ ಇಂದು ಉತ್ತರ ದ್ವಾರದರ್ಶನದ ಮೂಲಕ ಸಹಸ್ರಾರು ಭಕ್ತರು ಸ್ವಾಮಿಯ ದರ್ಶನ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಕಿರಿಯ ಶ್ರೀಗಳಾದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಅವರು, ಲೋಕ ಕಲ್ಯಾಣಾರ್ಥವಾಗಿ ಶ್ರೀದೇವಿ, ಭೂದೇವಿ ಸಹಿತ ಸ್ವಾಮಿಗೆ ವಿಶೇಷ ಅರ್ಚನೆ, ಅಲಂಕಾರ ಮಾಡಲಾಗಿದೆ ಎಂದು ತಿಳಿಸಿದರು.

ಧನುರ್ಮಾಸದ ಏಕಾದಶಿ ದಿನ ಉತ್ತರ ಧ್ವಾರ ದರ್ಶನ ಮಾಡಿ ಶ್ರೀ ಸ್ವಾಮಿಯನ್ನು ನೋಡಿ ಆನಂತರ ಪ್ರತಿಷ್ಠಾಪಿಸಲಾಗಿರುವ ವೆಂಕಟೇಶ್ವರ ಸ್ವಾಮಿಯನ್ನು ನೋಡಿದರೆ ಆ ವೈಕುಂಠ ಸ್ವಾಮಿಯನ್ನು ದರ್ಶನ ಮಾಡಿದಷ್ಟೇ ಫಲ ಸಿಗುತ್ತದೆ ಎಂದು ತಿಳಿಸಿದರು.

ಅಲ್ಲದೆ ಸರ್ವದೋಷ ಪರಿಹಾರ ಸಿಗುತ್ತದೆ. ಸಕಲ ಪಾಪ ಪರಿಹಾರವಾಗುತ್ತದೆ. ಒಳ್ಳೆಯ ಆರೋಗ್ಯ,ಐಶ್ವರ್ಯ,ಜ್ಞಾನ ಸಿಗುತ್ತದೆ ಎಂದು ಹೇಳಿದರು.

ನಮ್ಮ ಆಶ್ರಮದಲ್ಲಿ ಸಕಲ ದೇವತೆಗಳು ವಿರಾಜಮಮಾನರಾಗಿದ್ದಾರೆ. ಉತ್ತರ ದ್ವಾರದಲ್ಲಿ ಶ್ರೀ ಸ್ವಾಮಿಗೆ ದರ್ಬಾರ್ ಅಲಂಕಾರ ಮಾಡಲಾಗಿದೆ ಎಂದು ತಿಳಿಸಿದರು.

ಧನ್ವಂತರಿ ದೇವಿಗೆ ವಿಶೇಷ ಅರ್ಚನೆ, ಪದ್ಮಾವತಿ ಅಮ್ಮನವರಿಗೆ ಸಹಸ್ರನಾಮ ಅರ್ಚನೆ ನೆರವೇರಿದೆ. ನಾರಾಯಣ ಹವನ ಮಾಡಲಾಗಿದೆ. ಲೋಕ ಕಲ್ಯಾಣಾರ್ಥವಾಗಿ ಎಲ್ಲಾ ಪೂಜೆ ನೆರವೇರಿದ್ದು, ಬೆಳಗಿನಿಂದ ರಾತ್ರಿತನಕ ಪ್ರಸಾದ ವಿನಿಯೋಗ ಇರುತ್ತದೆ. ಭೂಮಿ ಮೇಲೆ 107 ಕ್ಷೇತ್ರಗಳಿವೆ. 108ನೆಯದು ವೈಕುಂಠದಲ್ಲಿದೆ ಅಲ್ಲಿಗೆ ಹೋಗಲು ಎಲ್ಲಿಗೂ ಭಯ. ಅಲ್ಲಿ ಹೋಗಲು ಸಾಧ್ಯವೂ ಇಲ್ಲ ಹಾಗಾಗಿ ಭೂಮಿಯ ಮೇಲಿರುವ ಶ್ರೀ ಸ್ವಾಮಿಗೆ ನಾವು ಭಕ್ತಿಯಿಂದ ನಮಿಸಬೇಕು ಎಂದು ತಿಳಿಸಿದರು.

## ಕೊಡಗಹಳ್ಳಿ ಶ್ರೀ ಕೋದಂಡರಾಮ ಮಂದಿರದ ದೇವಸ್ಥಾನದಲ್ಲಿ ವೈಕುಂಠ ಏಕಾದಶಿ



**ತಿ.ನರಸೀಪುರ:** ಬನ್ನೂರು ಹೋಬಳಿ ಇತಿಹಾಸ ಪ್ರಸಿದ್ಧಿ ಕೊಡಗಹಳ್ಳಿ ಗ್ರಾಮದಲ್ಲಿ ಶ್ರೀ ಕೋದಂಡರಾಮಮಂದಿರದಲ್ಲಿ ವೈಕುಂಠ ಏಕಾದಶಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು. ಗ್ರಾಮದ ಪಟೇಲರಾದ ಚಿಕ್ಕಜವರಪ್ಪನವರ ನೇತೃತ್ವದಲ್ಲಿ ಶ್ರೀರಾಮ ದೇವರಿಗೆ ಹೂವಿನ ಅಲಂಕಾರ, ಅಭಿಷೇಕ, ವಿಶೇಷ ಪೂಜೆ ಹಾಗೂ ಭಕ್ತಿಗೀತೆಗಳ ಸಂಗೀತ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕೊಡಗಹಳ್ಳಿ ಗ್ರಾಮದ ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಧನಂಜಯ, ಮುಖ್ಯ ಪುರೋಹಿತರಾದ ಶ್ರೀನಿವಾಸ ದೀಕ್ಷಿತ್, ಮಂಜುನಾಥ್, ಚನ್ನಪ್ಪ, ಬೋಜರಾಜು, ಕೆ.ಜೆ. ನಾಗರಾಜು, ದೂರ ಹೇಮಾವತಿ, ಭಾಗ್ಯಮ್ಮ, ಗಾಯಕಿ ಸುಮ ಶ್ರೀನಿವಾಸ, ಮುನಿಕುಮಾರ್ ಉಪಸ್ಥಿತರಿದ್ದರು. ಬೆಳಿಗ್ಗೆಯಿಂದ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಗಾಯಕರಾದ ಬಸವಣ್ಣ ತಾಂಡವಚಾರ್, ಅರವಟ್ಟಿಗೆ ಕೊಪ್ಪಲು ಕೃಷ್ಣ, ತಬಲ ಗುರುರವರು ಭಕ್ತಿಗೀತೆ ಹಾಗೂ ವಿಶೇಷ ಸಂಗೀತ ಕಾರ್ಯಕ್ರಮವನ್ನು ನೆರವೇರಿಸಿಕೊಟ್ಟರು. ಕಾರ್ಯಕ್ರಮದ ನಂತರ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ನೆರವೇರಿತು.

# ಸಿದ್ದರಾಮಯ್ಯ, ಡಿಕೆಶಿ, ಪರಮೇಶ್ವರ್, ಹೆಚ್‌ಕೆಪಿ, ಎಂಬಿಪಿ ಸೇರಿದಂತೆ ಘಟಾನುಘಟಿಗಳ ಮಣಿಸಲು ಅಮಿತ್ ಷಾ ಟಾಸ್ಕ್

● ಇವರ ವಿರುದ್ಧ ಬಲಾಢ್ಯರ ಕಣಕ್ಕಿಳಿಸಲು ತಂತ್ರ ● ಸಿದ್ದರಾಮಯ್ಯ ಎಲ್ಲೇ ಸ್ಪರ್ಧಿಸಿದರೂ ಪ್ರಬಲ ಅಭ್ಯರ್ಥಿ ಕಣಕ್ಕಿಳಿಸಲು ಚಿಂತನೆ

ಬೆಂಗಳೂರು, ಜ. 2(ಕೆಎಂಶಿ)- ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಪ್ರತಿಪಕ್ಷದ ನಾಯಕ ಸಿದ್ಧರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಮಾಜಿ ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಸೇರಿದಂತೆ ಕಾಂಗ್ರೆಸ್‌ನ ಘಟಾನುಘಟಿ ನಾಯಕರ ಮಣಿಸಲು ಅತ್ಯಂತ ಪ್ರಭಾವಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಕೇಂದ್ರ ಗೃಹ ಸಚಿವ ಅಮಿತ್ ಷಾ ನಿರ್ಧರಿಸಿರುವ ಅಂಶ ಬೆಳಕಿಗೆ ಬಂದಿದೆ.

ಮುಂಬರುವ ಚುನಾವಣೆಯಲ್ಲಿ ಗೆದ್ದು ಅಧಿಕಾರ ಹಿಡಿಯಲು ಬಿಜೆಪಿಗೆ ಸವಾಲಾಗಿರುವ ಕಾಂಗ್ರೆಸ್ ಪಕ್ಷವನ್ನು ದುರ್ಬಲಗೊಳಿಸಲು ಅಮಿತ್ ಷಾ ಬಯಸಿದ್ದು, ಈ ಸಂಬಂಧ ರಾಜ್ಯ ಬಿಜೆಪಿ ಮತ್ತು ಸಂಘಪರಿವಾರದ ನಾಯಕರ ಜತೆ ಗಹನವಾಗಿ ಚರ್ಚಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಘಟಾನುಘಟಿ ನಾಯಕರು ಪರಾಭವಗೊಂಡರೆ ಆ ಪಕ್ಷ ದಿಕ್ಕೆಡುತ್ತದೆ ಎಂಬುದು ಅಮಿತ್ ಷಾ ಲೆಕ್ಕಾಚಾರ. ತಮಗೆ ಲಭ್ಯವಾಗಿರುವ ಸರ್ವೇ ವರದಿಗಳ ಆಧಾರದ ಮೇಲೆ ಅಮಿತ್ ಷಾ ಅವರು ಈ ರಣತಂತ್ರವನ್ನು ರೂಪಿಸಿದ್ದು, ಸಿದ್ದರಾಮಯ್ಯ, ಡಿಕೆಶಿ, ಡಾ.ಪರಮೇಶ್ವರ್, ಹೆಚ್.ಕೆ.ಪಾಟೀಲ್, ಎಂ.ಬಿ. ಪಾಟೀಲ್, ಡಾ.ಹೆಚ್.ಸಿ.ಮಹದೇವಪ್ಪ, ಸತೀಶ್ ಜಾರಕಿಹೊಳಿ ಸೇರಿದಂತೆ ಹಲವು ನಾಯಕರ ವಿರುದ್ಧ ಘಟಾನುಘಟಿಗಳನ್ನು ಕಣಕ್ಕಿಳಿಸಬೇಕು. ಇಲ್ಲವೇ ಕಣಕ್ಕಿಳಿಯುವ ಪಕ್ಷದ ಅಭ್ಯರ್ಥಿಗಳ ಶಕ್ತಿಯನ್ನು ಹೆಚ್ಚಿಸಲು ಬಯಸಿದ್ದಾರೆನ್ನಲಾಗಿದೆ. ಸಿದ್ಧರಾಮಯ್ಯ ಅವರು ಯಾವ ಕ್ಷೇತ್ರದಿಂದ ಸ್ಪರ್ಧಿಸುತ್ತಾರೆ ಎಂಬುದನ್ನು ಗಮನಿಸಬೇಕು. ಕೋಲಾರದಿಂದ ಸ್ಪರ್ಧಿಸಿದರೆ ಇಲ್ಲವೇ ವರುಣಾದಿಂದ ಸ್ಪರ್ಧಿಸಿದರೆ ಪ್ರಬಲರನ್ನೇ ಕಣಕ್ಕಿಳಿಸಬೇಕು ಎಂದು ಅಮಿತ್ ಷಾ ಬಯಸಿದ್ದಾರೆ. ಸದ್ಯದ ಮಾಹಿತಿಯ ಪ್ರಕಾರ, ಸಿದ್ಧರಾಮಯ್ಯ ಅವರು ಮೈಸೂರಿನ ವರುಣಾ ಕ್ಷೇತ್ರದಿಂದ ಸ್ಪರ್ಧಿಸಲಿದ್ದು ಒಂದು ವೇಳೆ ಇದು ಪಕ್ಕಾ ಆದರೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರದಲ್ಲಿರುವ ಪ್ರಭಾವಿ ಮಂತ್ರಿಯೊಬ್ಬರನ್ನು ಅವರ ವಿರುದ್ಧ ಕಣಕ್ಕಿಳಿಸಬೇಕು ಎಂಬುದು ಅವರ ಲೆಕ್ಕಾಚಾರ.



ವರುಣಾ ವಿಧಾನಸಭಾ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಸ್ಪರ್ಧಿಸಿದರೆ ಅವರ ವಿರುದ್ಧ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಪುತ್ರ ಬಿ.ವೈ.ವಿಜಯೇಂದ್ರ ಅವರನ್ನು ಕಣಕ್ಕಿಳಿಸುವ ಯೋಚನೆ ಬಿಜೆಪಿಯ ಒಂದು ಪಾಳೆಯದಲ್ಲಿತ್ತಾದರೂ, ವಿಜಯೇಂದ್ರ ಅವರು ವರುಣಾ ಕ್ಷೇತ್ರದಿಂದ ಸ್ಪರ್ಧಿಸಲು ಒಲವು ತೋರಿಸುತ್ತಿಲ್ಲ.

2018 ರಲ್ಲಿ ವರುಣಾ ಕ್ಷೇತ್ರದಿಂದ ನಾನು ಸ್ಪರ್ಧಿಸುವ ಒಲವು ತೋರಿದಾಗ ಬಲವಂತವಾಗಿ ನನ್ನನ್ನು ಹಿಂದೆ ಸರಿಸಲಾಯಿತು. ಹೀಗಾಗಿ ನಾನು ಕ್ಷೇತ್ರದ ಜತೆ ಹಳೆಯ ಒಡನಾಟಗಳನ್ನಿಟ್ಟುಕೊಂಡಿಲ್ಲ. ಆದ್ದರಿಂದ ಸಿದ್ಧರಾಮಯ್ಯ ಅವರ ವಿರುದ್ಧ ಸ್ಪರ್ಧಿಸಿದರೆ ತುಂಬ ಅನುಕೂಲವಾಗುತ್ತದೆ ಎಂಬ ನಂಬಿಕೆ ನನಗಿಲ್ಲ ಎಂದು ವಿಜಯೇಂದ್ರ ಹೇಳಿದ್ದಾರೆನ್ನಲಾಗಿದೆ. ಹೀಗಾಗಿ ಹಾಲಿ ಸರ್ಕಾರದಲ್ಲಿರುವ ಪ್ರಭಾವಿ ಸಚಿವರೊಬ್ಬರನ್ನು ಸಿದ್ದರಾಮಯ್ಯ ಅವರ ವಿರುದ್ಧ ಕಣಕ್ಕಿಳಿಸಿದರೆ ಅವರು ತಮಗಿರುವ ವರ್ಚಸ್ಸಿನಿಂದ, ರಣತಂತ್ರ ನೈಪುಣ್ಯದಿಂದ ಸಿದ್ಧರಾಮಯ್ಯ ಅವರನ್ನು ಪರಾಭವಗೊಳಿಸುತ್ತಾರೆ. ಈ ಕುರಿತು ಕೆಲ ದಿನಗಳಿಂದ ನಡೆದಿರುವ ಸರ್ವೇ ವರದಿ ಕೂಡ, ಬೊಮ್ಮಾಯಿ ಸಂಪುಟದಲ್ಲಿರುವ ಹಿರಿಯ ಸಚಿವರೊಬ್ಬರ ಹೆಸರನ್ನು ಮುಂದೆ ಮಾಡಿದ್ದು, ಇವರು ಕಣಕ್ಕಿಳಿದರೆ ಸಿದ್ದರಾಮಯ್ಯರಿಗೆ ವರುಣಾ ವಿಧಾನಸಭಾ ಕ್ಷೇತ್ರದಲ್ಲಿ ಬಲವಾದ ಪೈಪೋಟಿ ಎದುರಾಗುತ್ತದೆ ಎಂದಿದೆ. ಹೀಗಾಗಿ ಈ ಸಲ ಕರ್ನಾಟಕ ಭೇಟಿಯ ಸಂದರ್ಭದಲ್ಲಿ ಅಮಿತ್ ಷಾ ಅವರು ಈ ಅಂಶದ ಬಗ್ಗೆ ವಿಶೇಷ ಗಮನ ನೀಡಿದ್ದರು ಎಂದು ಬಿಜೆಪಿ ಮೂಲಗಳು ಹೇಳಿದ್ದು,ಇದು ಸಾಧ್ಯವಾದರೆ ಕೈ ಪಾಳೆಯ ದಿಕ್ಕಾಪಾಲಾಗುತ್ತದೆ ಎಂಬುದು ಅಮಿತ್ ಅವರಿಗಿರುವ ಮಾಹಿತಿ ಎಂದು ವಿವರಿಸಿದೆ.

ಇನ್ನು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಮಾಜಿ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಮಾಜಿ ಸಚಿವರಾದ ಹೆಚ್.ಕೆ.ಪಾಟೀಲ್, ಎಂ.ಬಿ.ಪಾಟೀಲ್, ಸತೀಶ್ ಜಾರಕಿಹೊಳಿ ಸೇರಿದಂತೆ ರಾಜ್ಯ ಕಾಂಗ್ರೆಸ್‌ನ ಮೂವತ್ತಕ್ಕೂ ಹೆಚ್ಚು ಮಂದಿ ನಾಯಕರನ್ನು ಪರಾಭವಗೊಳಿಸುವುದು ಬಿಜೆಪಿಯ ಶಕ್ತಿಯನ್ನು ಹಿಗ್ಗಿಸಲಿದೆ ಎಂದು ಅಮಿತ್ ಷಾ ಭಾವಿಸಿದ್ದಾರೆ ಎಂದಿವೆ.

ಇದೇ ಕಾರಣಕ್ಕಾಗಿ ರಾಜ್ಯ ಸಚಿವ ಸಂಪುಟದಲ್ಲಿರುವ ಪ್ರಭಾವಿ ಸಚಿವರು ಮತ್ತು ಘಟಾನುಘಟಿಗಳನ್ನು ಇಂತವರ ವಿರುದ್ಧ ಕಣಕ್ಕಿಳಿಸಬೇಕು ಎಂದು ಯೋಚಿಸಿರುವ ಅಮಿತ್ ಷಾ,ಈ ಅಭ್ಯರ್ಥಿಗಳಿಗೆ ಎಲ್ಲ ದೃಷ್ಟಿಗಳಿಂದಲೂ ಸೂಕ್ತ ಬಲ ತುಂಬುವ ಬಗ್ಗೆ ರಾಜ್ಯದ ಬಿಜೆಪಿ,ಆರೆಸ್ಸೆಸ್ ನಾಯಕರ ಜತೆ ಚರ್ಚಿಸಿದ್ದಾರೆ.